ಸಂಪುಟ: 05 ಸಂಚಿಕೆ: 183 ಪುಟಗಳು: 08 ಮಂಗಳವಾರ 16 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ನೀವು ನಿಮ್ಮ ಗುರಿ ತಲುಪಬೇಕಾದರೆ ನೀವು ಒಂದೇ ಮನಸ್ಥಿತಿಯಿಂದ ನಿರಂತರವಾಗಿ ಪ್ರಯತ್ನಿಸಬೇಕು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರಾಜಕೀಯವಾಗಿ ಬದುಕಿದ್ದೇನೆ ಎಂದು ತೋರಿಸಿಕೊಳ್ಳಲು ಪ್ರತಾಪ್ ಸಿಂಹ ಪ್ರಯತ್ನ: ಡಿಕೆಶಿ

• ಉದಯವಾಹಿನಿ, ಬೆಂಗಳೂರು



''ಪ್ರತಾಪ್ ಸಿಂಹರಿಗೆ ಅವರ ಪಕ್ಷದಲ್ಲಿ ಟಿಕೆಟ್ ಕೊಟ್ಟಿಲ್ಲ. ಹೀಗಾಗಿ ತಾನು ರಾಜಕೀಯವಾಗಿ ಬದುಕಿದ್ದೇನೆ ಎಂದು ತೋರಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ. ಅವರಿಗೆ ಒಳ್ಳೆಯದಾಗಲಿ'' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು. ನಾಡಹಬ್ಬ ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರಿಗೆ ಆಹ್ವಾನ ನೀಡಿರುವ ಸರ್ಕಾರ ನಿರ್ಧಾರದ ವಿರುದ್ಧ, ಬಿಜೆಪಿ ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಸಲ್ಲಿಸಿದ್ದ ಪಿಐಎಲ್ ಅನ್ನು ಹೈಕೋರ್ಟ್ ವಜಾಗೊಳಿಸಿರುವ ಬಗ್ಗೆ ಮಾಧ್ಯಮಗಳು ಕೇಳಿದಾಗ, ''ನ್ಯಾಯ ಪೀಠದಿಂದ ನ್ಯಾಯ ಸಿಕ್ಕಿದೆ. ನಮ್ಮ ನ್ಯಾಯಾಂಗ ವ್ಯವಸ್ಥೆಗೆ ನಾವು ತಲೆಬಾಗುತ್ತೇವೆ. ನಮ್ಮದು ಪ್ರಜಾಪ್ರಭುತ್ವದ ವ್ಯವಸ್ಥೆ. ನಾವಿಂದು ಪ್ರಜಾಪ್ರಭುತ್ವ ದಿನ ಆಚರಿಸುತ್ತಿದ್ದೇವೆ. ನಮ್ಮ ಮತ ನಮ್ಮ ಹಕ್ಕು. ಬ್ಯಾಲೆಟ್ (ಮತ) ಬುಲೆಟ್ ಗಿಂತ ಶಕ್ತಿಶಾಲಿ. ನಮ್ಮದು ಈ ಮತಗಳಿಂದ ಆರಿಸಲಾಗಿರುವ ಸರ್ಕಾರ. ಜನರ ಬಹುಮತದೊಂದಿಗೆ ಆರಿಸಿ ಬಂದಿರುವ ಸರ್ಕಾರದ ತೀರ್ಮಾನ ಇದು'' ಎಂದು ತಿಳಿಸಿದರು. ಚಾಮುಂಡಿ ಬೆಟ್ಟಕ್ಕೆ ಬರಬೇಡಿ ಎಂದು ಹೇಳಲು ಹೇಗೆ ಸಾಧ್ಯ ''ನಮ್ಮ ಸಂವಿಧಾನ ಸಮಾನತೆಯ ಸಂದೇಶ ಸಾರುತ್ತದೆ. ಎಲ್ಲಾ



ಧರ್ಮಗಳಿಗೂ ಧರ್ಮದಲ್ಲಿ ಅವಕಾಶ ಕಲ್ಪಿಸಲಾಗಿದೆ. ನಾವು ಎಲ್ಲಾ ಧರ್ಮಗಳನ್ನು ಗೌರವಿಸಬೇಕು. ಚಾಮುಂಡೇಶ್ವರಿ ದೇವಿಗೆ ಪ್ರಾರ್ಥಿಸಬೇಡಿ, ಚಾಮುಂಡಿ ಬೆಟ್ಟಕ್ಕೆ ಬರಬೇಡಿ ಎಂದು ಹೇಳಲು ಹೇಗೆ ಸಾಧ್ಯ, ನಾವು ಸಂವಿಧಾನ ಬದ್ಧವಾದ ನಿರ್ಧಾರ ತೆಗೆದುಕೊಂಡಿದ್ದು, ಪ್ರತಾಪ್ ಸಿಂಹ ಸೇರಿದಂತೆ ಬಿಜೆಪಿ ನಾಯಕರು ಸಂವಿಧಾನವನ್ನು ಸರಿಯಾಗಿ ಓದಲಿ. ಆಗ ನಿಮ್ಮ ಹಕ್ಕು ಏನಿದೆ ಎಂಬುದು ಅರ್ಥವಾಗುತ್ತದೆ. ಬಿಜೆಪಿಗರಿಗೆ ಸಂವಿಧಾನದ ಮೇಲೆ ಗೌರವವಿಲ್ಲ. ಸಂವಿಧಾನ ಹಾಗೂ ಎಲ್ಲಾ ವರ್ಗಗಳ ರಕ್ಷಣೆ ಮಾಡುವ ಕೆಲಸ ನಾವು ಮಾಡುತ್ತಿದ್ದೇವೆ'' ಎಂದು ಸ್ಪಷ್ಟಪಡಿಸಿದರು. ''ನ್ಯಾಯಾಲಯ ಕೂಡ ಸಂವಿಧಾನದ ಮೇಲೆ ನಡೆಯುತ್ತದೆ. ನಾವುಗಳು ಸಂವಿಧಾನದ ತತ್ವದ ಮೇಲೆ ನಡೆಯುತ್ತೇವೆ. ನಾವು ಪ್ರಮಾಣ ವಚನ ಸ್ವೀಕರಿಸುವುದು ಸಂವಿಧಾನದ ಹೆಸರಿನಲ್ಲಿ'' ಎಂದರು.

## ಹಿಂದಿ ದಬ್ಬಾಳಿಕೆಯ ಭಾಷೆಯಾದ್ರೆ ಧಿಕ್ಕಾರ ಎಂದ ಪ್ರಿಯಾಂಕ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ದ್ವಿಭಾಷಾ ಸೂತ್ರವನ್ನು ಜಾರಿಗೆ ತರುವ ನಿಟ್ಟಿನಲ್ಲಿ ಚರ್ಚೆಗಳು ನಡೆಯುತ್ತಿರುವ ಸಂದರ್ಭದಲ್ಲೇ ಹಿಂದಿ ಹೇರಿಕೆ ಸದ್ದು ಕೇಳಿಬರುತ್ತಿದೆ. ಕೇಂದ್ರ ಸಚಿವ ಅಮಿತ್ ಶಾ ನೀಡಿದ್ದ ಹೇಳಿಕೆಗೆ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯೆ ನೀಡಿದ್ದು, ಹಿಂದಿ ಯಜಮಾನಿಕೆಯ ಭಾಷೆಯಾದರೆ ಅದನ್ನು ಧಿಕ್ಕರಿಸುತ್ತೇನೆ ಎಂದಿದ್ದಾರೆ.

ನಾನು ಚೆನ್ನಾಗಿ ಹಿಂದಿಯನ್ನು ಮಾತನಾಡಬಲ್ಲೆ, ಅದು ಅಗತ್ಯಕ್ಕೆ ಮಾತ್ರ, ಸಂವಹನಕ್ಕೆ ಮಾತ್ರ. ಕನ್ನಡ ನಮ್ಮ ಆತ್ಮಭಾಷೆ. ಭಾಷೆಗಳು ಬಾಂಧವ್ಯ ಬೆಸೆಯುವುದಕ್ಕೆ ಕಾರಣವಾಗಬೇಕೆ ಹೊರತು ಹೇರಿಕೆಯ ಮೂಲಕ ಸಂಘರ್ಷಕ್ಕೆ ಕಾರಣವಾಗಬಾರದು ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಭಾರತದ ಭಾಷಾ ವೈವಿಧ್ಯತೆಯನ್ನು ಗೌರವಿಸಬೇಕು, ಇಲ್ಲದಿದ್ದಲ್ಲಿ ಭಾಷೆಗಳ ಕಾರಣಕ್ಕೆ ಸಂಘರ್ಷ ಉಲ್ಬಣಿಸುತ್ತವೆ. ಧರ್ಮ ರಾಜಕಾರಣದಿಂದ ಆಹಾರ ರಾಜಕಾರಣ, ಭಾಷಾ ರಾಜಕಾರಣದ ಕಡೆ ಹೊರಳಿರುವ ಕೇಂದ್ರ ಸರ್ಕಾರಕ್ಕೆ ಈ ಪ್ರಜ್ಞೆ ಇದ್ದರೆ ಕ್ಷೇಮ ಎಂಬ ಎಚ್ಚರಿಕೆಯನ್ನು ಅವರು ನೀಡಿದ್ದಾರೆ. ರಾಜ್ಯದಲ್ಲಿ ದ್ವಿಭಾಷಾ ಸೂತ್ರವನ್ನು ಜಾರಿಗೆ ತರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮುಂದಾಗಿದೆ. ಈ ನಿಟ್ಟಿನಲ್ಲಿ ಈಗಾಗಲೇ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರು ಸಿಎಂ ಸಿದ್ದರಾಮಯ್ಯ ಅವರ ಬಳಿಯೂ ಚರ್ಚೆಯನ್ನು ನಡೆಸಿದ್ದಾರೆ. ಇದೇ ವಿಚಾರವಾಗಿ ಈ ಹಿಂದೆ ಮಾತನಾಡಿದ್ದ ಅವರು, ''ದ್ವಿಭಾಷಾ ಸೂತ್ರ ಜಾರಿಗೆ ತರುವ ನಿಟ್ಟಿನಲ್ಲಿ ಚರ್ಚೆ ನಡೆದಿದೆ. ಸಿಎಂ ಸಿದ್ದರಾಮಯ್ಯ ಅವರ ಬಳಿಯೂ ಈ ಕುರಿತಾಗಿ ಮಾತನಾಡಿದ್ದೇನೆ. ನಮ್ಮ ಇಲಾಖೆಯಿಂದ ಮಾಡಬೇಕಾ ಅಥವಾ ಕಾನೂನು ಇಲಾಖೆಯಿಂದ ಮಾಡಬೇಕಾ ಎಂಬ ನಿಟ್ಟಿನಲ್ಲಿ ಚರ್ಚೆ ಆಗುತ್ತಿದೆ'' ಎಂದು ಮಾಹಿತಿಯನ್ನು ನೀಡಿದ್ದರು.

## ಕೆ.ಎನ್ ರಾಜಣ್ಣ ಬೆನ್ನಿಗೆ ಸೈಲೆಂಟಾಗಿ ನಿಂತ ಸಿದ್ದರಾಮಯ್ಯ!

• ಉದಯವಾಹಿನಿ, ಬೆಂಗಳೂರು

ಮತಕಳ್ಳತನದ ಕುರಿತಾಗಿ ಕಾಂಗ್ರೆಸ್ ಪಕ್ಷದ ನಿಲುವಿಗೆ ಭಿನ್ನವಾದ ಹೇಳಿಕೆಯನ್ನು ನೀಡುವ ಮೂಲಕ ಹೈಕಮಾಂಡಕೆಂಗಣ್ಣಿಗೆ ಗುರಿಯಾಗಿ ಸಂಪುಟದಿಂದ ವಜಾಗೊಂಡ ಕೆ ಎನ್ ರಾಜಣ್ಣ ಪರವಾಗಿ ಸಿದ್ದರಾಮಯ್ಯ ತೆರೆಮರೆಯಲ್ಲಿ ನಿಂತಿದ್ದಾರೆ.

ಆಪ್ತ ಬಳಗದ ರಾಜಣ್ಣ ಅವರನ್ನು ಸಂಪುಟದಿಂದ ವಜಾ ಮಾಡಿದಾಗಲೂ ಸಿದ್ದರಾಮಯ್ಯ ಯಾವುದೇ ಹೇಳಿಕೆಗಳನ್ನು ನೀಡದೆ ಇರುವುದು ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಆದರೆ ಇದೀಗ ಆಂತರಿಕವಾಗಿ ಕಸರತ್ತು ನಡೆಸಲಾಗುತ್ತಿದ್ದು, ವರಿಷ್ಠರ ಮನವೊಲಿಕೆಗೆ ಪ್ಲ್ಯಾನ್ ಮಾಡಲಾಗುತ್ತಿದೆ. ರಾಜಣ್ಣ ಪರ ಹೈಕಮಾಂಡ್ ಬಳಿ ಮಾತನಾಡಲು ಸಿಎಂ ಸಿದ್ದರಾಮಯ್ಯ ಅವರು ಮುಂದಾಗಿರುವ ಕುರಿತಾಗಿ ಮಾಹಿತಿಗಳು ಕಾಂಗ್ರೆಸ್ ಪಾಳಯದಲ್ಲಿ ಹರಿದಾಡುತ್ತಿದೆ. ಮತ್ತೆ ಸಂಪುಟಕ್ಕೆ ತೆಗೆದುಕೊಳ್ಳುವಂತೆ ಹೈಕಮಾಂಡ್ ನಾಯಕರ ಮನವೊಲಿಕೆಗೆ ಸಿಎಂ ತಯಾರಿ ನಡೆಸುತ್ತಿದ್ದಾರೆ. ಶೀಘ್ರದಲ್ಲೇ ದೆಹಲಿಗೆ ತೆರಳುವ ಸಿಎಂ ಸಿದ್ದರಾಮಯ್ಯ ಅವರು, ವರಿಷ್ಠರನ್ನು ಭೇಟಿ ಮಾಡಿ ವಾಸ್ತವವನ್ನು ವಿವರಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಗೊಂದಲ ಹೇಳಿಕೆ ನೀಡಿದ ಕಾರಣಕ್ಕೆ ಸಂಪುಟದಿಂದ ರಾಜಣ್ಣ ಅವರನ್ನು ವಜಾ ಮಾಡಲಾಗಿತ್ತು.

## ಸಿದ್ದರಾಮಯ್ಯ ಹೊಸ ಜಾತಿಗಳ ಜನಕ: ವಿಪಕ್ಷ ನಾಯಕ ಅಶೋಕ

• ಉದಯವಾಹಿನಿ, ಬೆಂಗಳೂರು

'ಮುಖ್ಯಮಂತ್ರಿ ಸಿದ್ದರಾಮಯ್ಯ ಮತಾಂತರದ ರಾಯಭಾರಿ. ಯಾರೂ ಯೋಚನೆ ಮಾಡದ ರೀತಿಯಲ್ಲಿ ಹೊಸ ಹೊಸ ಜಾತಿಗಳನ್ನು ಸೃಷ್ಟಿಸುತ್ತಿದ್ದಾರೆ' ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ ದೂರಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಈವರೆಗೆ ಅಧಿಕೃತ ಜಾತಿ ಪಟ್ಟಿಯಲ್ಲಿ ಇಲ್ಲದ ಜಾತಿಗಳಿಗೆ ಜನ್ಮ ನೀಡಿದ್ದಾರೆ. ಹೀಗಾಗಿ ಜಾತಿ ಸಮೀಕ್ಷೆ ರದ್ದಾಗುವ ಸಾಧ್ಯತೆ ಹೆಚ್ಚು' ಎಂದು ಹೇಳಿದರು. 'ಹಿಂದೂಗಳಲ್ಲಿ ತಪ್ಪು ಇದೆ ಎಂದಿದ್ದಾರೆ. ಹಾಗಿದ್ದರೆ ಇಸ್ಲಾಂ ಮತ್ತು ಕ್ರೈಸ್ತ ಧರ್ಮಗಳಲ್ಲಿ ತಪ್ಪು– ತಾರತಮ್ಯಗಳು ಇಲ್ಲವೇ? ಅವುಗಳ ಕುರಿತೂ ಮಾತನಾಡಲಿ. ಇವರಿಗೆ ಹಿಂದೂಗಳ ಮತ ಮಾತ್ರ ಬೇಕು. ಗೆದ್ದ ನಂತರ ಹಿಂದೂಗಳನ್ನು ತುಳಿಯುವ ಕೆಲಸ ಮಾಡುತ್ತಾರೆ' ಎಂದರು. 'ದಸರಾ ಹಬ್ಬವನ್ನು ನಾಡ ಹಬ್ಬ, ಹಿಂದೂಗಳ ಹಬ್ಬ ಎನ್ನುತ್ತಾರೆ. ಅದೇ ರೀತಿ ಮುಸ್ಲಿಂ ಹಬ್ಬಗಳನ್ನು ಕೂಡ ನಾಡ ಹಬ್ಬ ಎಂದು ಮಾಡಲಿ. ಮುಸ್ಲಿಂ ಹಬ್ಬಗಳನ್ನು ಹಿಂದೂಗಳ ಕೈಯಲ್ಲಿ ಉದ್ಘಾಟನೆ ಮಾಡಿಸಲಿ' ಎಂದು ಅವರು ವ್ಯಂಗ್ಯವಾಡಿದರು. ಮಸೀದಿ ಮುಂದೆ ಗಣೇಶ ಮೆರವಣಿಗೆ ಹೋಗಬಾರದು ಎಂಬಂತೆ ನಿಯಮ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರದಿಂದಾಗಿಯೇ ಹಿಂದೂ–ಮುಸ್ಲಿಮರ ನಡುವೆ ಒಡಕು ಮೂಡಿದೆ ಎಂದು ಅಶೋಕ ಟೀಕಿಸಿದರು.

# ವಕ್ಫ್ ಕಾಯ್ದೆಗೆ ತಡೆ ಸುಪ್ರೀಂ ನಡೆ




**ವಕ್ಫ್ ತಿದ್ದುಪಡಿ ಕಾಯ್ದೆಗೆ ತಡೆಯಾಜ್ಞೆ ನೀಡಲು ಸುಪ್ರೀಂ ನಕಾರ**

**ತೀರ್ಪಿನ ಪ್ರಮುಖ ಅಂಶಗಳು**

**ವಕ್ಫ್ ರಚಿಸಲು ಒಬ್ಬ ವ್ಯಕ್ತಿ 5 ವರ್ಷಗಳ ಕಾಲ ಇಸ್ಲಾಂ ಧರ್ಮದ ಅನುಯಾಯಿ ಆಗಿರಬೇಕು ಎಂದು ಹೇಳುವ ವಕ್ಫ್ ತಿದ್ದುಪಡಿ ಕಾಯ್ದೆ 2025ರ ನಿಬಂಧನೆಯನ್ನು ಸುಪ್ರೀಂ ಕೋರ್ಟ್ ತಡೆಹಿಡಿದಿದೆ. ಒಬ್ಬ ವ್ಯಕ್ತಿಯು ಇಸ್ಲಾಂ ಧರ್ಮದ ಅನುಯಾಯಿಯೇ ಅಥವಾ ಇಲ್ಲವೇ ಎಂಬುದನ್ನು ನಿರ್ಧರಿಸಲು ರಾಜ್ಯ ಸರ್ಕಾರಗಳು ನಿಯಮಗಳನ್ನು ರೂಪಿಸುವವರೆಗೆ ಈ ನಿಬಂಧನೆಯನ್ನು ಅಮಾನತ್ತಗೊಳಿಸಲಾಗಿದೆ.**

• ಉದಯವಾಹಿನಿ, ನವದೆಹಲಿ

ದೇಶಾದ್ಯಂತ ಭಾರೀ ವಿವಾದ ಸೃಷ್ಟಿಸಿದ್ದ ವಕ್ಫ್ ತಿದ್ದುಪಡಿ ಕಾಯ್ದೆ –2025ಕ್ಕೆ ಸಾಂವಿಧಾನಿಕ ಸಿಂಧುತ್ವ ನೀಡಿರುವುದಕ್ಕೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ವಕ್ಫ್ ತಿದ್ದುಪಡಿ ಕಾಯ್ದೆ ಕುರಿತು ಸುಪ್ರೀಂಕೋರ್ಟ್ ಮಹತ್ವದ ತೀರ್ಪು ಪ್ರಕಟಿಸಿದೆ. ಕಾನೂನಿಗೆ ತಡೆ ನೀಡುವ ಬೇಡಿಕೆಯನ್ನು ಪರಿಗಣಿಸಲು ನ್ಯಾಯಾಲಯ ನಿರಾಕರಿಸಿತು. ರಾಜ್ಯ ವಕ್ಫ್ ಮಂಡಳಿಗಳು ಮತ್ತು ಕೇಂದ್ರ ವಕ್ಫ್ ಮಂಡಳಿಗಳಲ್ಲಿ ಮುಸ್ಲಿಮೇತರರ ಸಂಖ್ಯೆ ಮೂರು ಮೀರಬಾರದು ಎಂದು ನ್ಯಾಯಾಲಯ ಹೇಳಿದೆ. ವಕ್ಫ್ ಮಂಡಳಿಯ ಸದಸ್ಯರಾಗಲು ಕನಿಷ್ಠ 5 ವರ್ಷಗಳ ಕಾಲ ಇಸ್ಲಾಂ ಧರ್ಮವನ್ನು ಅನುಸರಿಸುವ ಷರತ್ತನ್ನು ವಿಧಿಸಿದ ನಿಬಂಧನೆಯನ್ನು ನ್ಯಾಯಾಲಯವು ಪ್ರಸ್ತುತ ತಡೆಹಿಡಿದಿದೆ. ಈ ನಿಟ್ಟಿನಲ್ಲಿ ಸರಿಯಾದ ನಿಯಮಗಳನ್ನು ರೂಪಿಸುವವರೆಗೆ ಈ ನಿಬಂಧನೆಯನ್ನು ಜಾರಿಗೆ ತರಲಾಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ.

ಇದಲ್ಲದೆ, ಸೆಕ್ಷನ್ 3(74ಗೆ ಸಂಬಂಧಿಸಿದ ಕಂದಾಯ ದಾಖಲೆಗಳ ಒದಗಿಸುವಿಕೆಯನ್ನು ಸಹ ತಡೆಹಿಡಿಯಲಾಗಿದೆ. ವಕ್ಫ್ ಕಾನೂನಿಗೆ ಸಂಬಂಧಿಸಿದ ಕೆಲವು ವಿಭಾಗಗಳನ್ನು ಸುಪ್ರೀಂಕೋರ್ಟ್ ನಿಷೇಧಿಸಿದೆ. ವಕ್ಫ್ ಕಾನೂನಿನ ಸೆಕ್ಷನ್ 3 ಮತ್ತು ಸೆಕ್ಷನ್ 4 ಅನ್ನು ನ್ಯಾಯಾಲಯ ನಿಷೇಧಿಸಿದೆ. ವಿಚಾರಣೆಯ ನಂತರ, ಸಂಪೂರ್ಣ ಕಾನೂನನ್ನು ನಿಷೇಧಿಸುವ ಹಕ್ಕು ನಮಗಿಲ್ಲ ಎಂದು ನ್ಯಾಯಾಲಯ ಹೇಳಿದೆ. ವಕ್ಫ್ ಮಂಡಳಿಯ ಸಿಇಒ ಮುಸ್ಲಿಂ ಸಮುದಾಯದಿಂದ ಬಂದಿರಬೇಕು ಎಂದು ನ್ಯಾಯಾಲಯ ಹೇಳಿದೆ. ವಕ್ಫ್ ಮಂಡಳಿಯ 11 ಸದಸ್ಯರಲ್ಲಿ ಮೂರಕ್ಕಿಂತ ಹೆಚ್ಚು ಮುಸ್ಲಿಮೇತರರು ಇರಬಾರದು ಎಂದು ನ್ಯಾಯಾಲಯ ಹೇಳಿದೆ.ವಕ್ಫ್ ತಿದ್ದುಪಡಿ ಕಾಯ್ದೆ 2025ರ ನಿಬಂಧನೆಯನ್ನು ಸುಪ್ರೀಂ ಕೋರ್ಟ್ ತಡೆಹಿಡಿದಿದೆ, ಅದರ ಪ್ರಕಾರ ಒಬ್ಬ ವ್ಯಕ್ತಿಯು ವಕ್ಫ್ ರಚಿಸಲು ಕನಿಷ್ಠ 5 ವರ್ಷಗಳ ಕಾಲ ಇಸ್ಲಾಂ ಧರ್ಮದ ಅನುಯಾಯಿಯಾಗಿರಬೇಕು. ಒಬ್ಬ ವ್ಯಕ್ತಿಯು ಇಸ್ಲಾಂ ಧರ್ಮದ ಅನುಯಾಯಿಯೇ ಅಥವಾ ಇಲ್ಲವೇ ಎಂಬುದನ್ನು ನಿರ್ಧರಿಸಲು ರಾಜ್ಯ ಸರ್ಕಾರಗಳು ನಿಯಮಗಳನ್ನು ರೂಪಿಸುವವರೆಗೆ ಈ ನಿಷೇಧ ಜಾರಿಯಲ್ಲಿರುತ್ತದೆ ಎಂದು ನ್ಯಾಯಾಲಯ ಹೇಳಿದೆ. ವಕ್ಫ್ ತಿದ್ದುಪಡಿ ಕಾಯ್ದೆ, 2025 ರ ಕಾರ್ಯಾಚರಣೆಯನ್ನು ತಡೆಹಿಡಿಯಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ ಆದರೆ ವಕ್ಫ್ ಆಗಿ ಆಸ್ತಿಯನ್ನು ಅರ್ಪಿಸಲು 5 ವರ್ಷಗಳ ಕಾಲ ಇಸ್ಲಾಂ ಧರ್ಮವನ್ನು ಆಚರಿಸುವ ಷರತ್ತಿನ ಅನುಷ್ಠಾನವನ್ನು ತಡೆಹಿಡಿದಿದೆ.

**ಸೆಕ್ಷನ್ 3(ಆರ್):** ವಕ್ಫ್ ರಚಿಸಲು ಒಬ್ಬ ವ್ಯಕ್ತಿಯು ಕನಿಷ್ಠ ಐದು ವರ್ಷಗಳ ಕಾಲ ಇಸ್ಲಾಂ ಧರ್ಮದ ಅನುಯಾಯಿಯಾಗಿರಬೇಕು ಎಂಬ ಷರತ್ತು. ಈ ಷರತ್ತು ಅನಿಯಂತ್ರಿತವಾಗಿರಬಹುದು ಮತ್ತು ನಿಯಮಗಳನ್ನು ರಚಿಸುವವರೆಗೆ ಅಮಾನತುಗೊಳಿಸಲಾಗುತ್ತದೆ ಎಂದು ನ್ಯಾಯಾಲಯ ಹೇಳಿದೆ.

**ಸೆಕ್ಷನ್ 2(ಸಿ) ಯ ನಿಬಂಧನೆ:** ಗೊತ್ತುಪಡಿಸಿದ ಅಧಿಕಾರಿ ವರದಿಯನ್ನು ಸಲ್ಲಿಸುವವರೆಗೆ ಆಸ್ತಿಯನ್ನು ವಕ್ಫ್ ಆಸ್ತಿ ಎಂದು ಪರಿಗಣಿಸಬಾರದು ಈ ನಿಬಂಧನೆಯನ್ನು ಅಮಾನತುಗೊಳಿಸಲಾಗಿದೆ. ಈ ವಿಷಯದ ಕುರಿತು ಸುಪ್ರೀಂ ಕೋರ್ಟ್ ಮೇ 22 ರಂದು ಮಧ್ಯಂತರ ಆದೇಶವನ್ನು ಕಾಯ್ದಿರಿಸಿತ್ತು. ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಪೀಠವು ಸತತ ಮೂರು ದಿನಗಳ ಕಾಲ ಅರ್ಜಿದಾರರು ಮತ್ತು ಕೇಂದ್ರ ಸರ್ಕಾರದ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರ ವಾದಗಳನ್ನು ಆಲಿಸಿತ್ತು.

ಇದರ ನಂತರ, ಮಧ್ಯಂತರ ಆದೇಶವನ್ನು ಕಾಯ್ದಿರಿಸಲಾಯಿತು. ಕೇಂದ್ರ ಸರ್ಕಾರವು ವಕ್ಫ್ ಒಂದು ಜಾತ್ಯತೀತ ಪರಿಕಲ್ಪನೆಯಾಗಿದ್ದು, ತಿದ್ದುಪಡಿ ಮಾಡಿದ ಕಾನೂನನ್ನು ಸಂವಿಧಾನಕ್ಕೆ ಅನುಗುಣವಾಗಿ ಪರಿಗಣಿಸಬೇಕು, ಅಂದರೆ ಅದಕ್ಕೆ ಸಾಂವಿಧಾನಿಕ ಮಾನ್ಯತೆ ಇದೆ ಎಂದು ಹೇಳಿದೆ. ವಕ್ಫ್ ಇಸ್ಲಾಮಿಕ್ ಸಂಪ್ರದಾಯದಲ್ಲಿ ಬೇರೂರಿದ್ದರೂ, ಅದು ಧರ್ಮದ ಅತ್ಯಗತ್ಯ ಭಾಗವಲ್ಲ, ಧಾರ್ಮಿಕ ಹಕ್ಕಾಗಿ ನೋಡಬಾರದು ಎಂದು ಕೇಂದ್ರವು ಹೇಳಿದೆ. ವಕ್ಫ್ ಕಾಯ್ದೆ, 2025 ಅನ್ನು ಏಪ್ರಿಲ್ 8 ರಂದು ಸೂಚಿಸಲಾಯಿತು, ಇದಕ್ಕೂ ಮೊದಲು ರಾಷ್ಟ್ರಪತಿ ದ್ರೌಪದಿ ಮುರ್ಮು ಏಪ್ರಿಲ್ 5 ರಂದು ಅದನ್ನು ಅನುಮೋದಿಸಿದರು. ಲೋಕಸಭೆ ಏಪ್ರಿಲ್ 3 ರಂದು ಮತ್ತು ರಾಜ್ಯಸಭೆ ಏಪ್ರಿಲ್ 4 ರಂದು ಅದನ್ನು ಅನುಮೋದಿಸಿತು. ಸಂಸತ್ತು ಇದನ್ನು ಅನುಮೋದಿಸಿದ ತಕ್ಷಣ, ಅದರ ಬಗ್ಗೆ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಯಿತು.

**1** ಸುಪ್ರೀಂ ಕೋರ್ಟ್ 2025ರ ವಕ್ಫ್ ತಿದ್ದುಪಡಿ ಕಾಯ್ದೆಯ ಒಂದು ಅಂಶಕ್ಕೆ ತಡೆ ನೀಡಲು ಒಪ್ಪಿದೆ.

**2** ರಾಜ್ಯ ಸರ್ಕಾರಗಳು ಹೊಸ ನಿಯಮಗಳನ್ನು ರೂಪಿಸುವವರೆಗೂ ಈ ಕಾನೂನಿನ ಅಂಶಕ್ಕೆ ತಡೆ ನೀಡಬೇಕು ಎಂದು ಅಭಿಪ್ರಾಯಪಟ್ಟಿದೆ.

**3** ವಕ್ಫ್ ಆಸ್ತಿಯನ್ನು ಗುರುತಿಸುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ಅಥವಾ ಸರ್ಕಾರದಿಂದ ನಿಯೋಜಿಸಲಾಗಿರುವ ಅಧಿಕಾರಿಗೆ ನೀಡುವ ವಿಷಯಕ್ಕೂ ಸುಪ್ರೀಂ ಕೋರ್ಟ್ ತಡೆ ನೀಡಿದೆ.

## ಮಧ್ಯಂತರ ಆದೇಶ ಪ್ರಕಟಿಸಿದ ಸುಪ್ರೀಂ ಕೋರ್ಟ್



**ಡಿಸಿ ಅಧಿಕಾರ ಅಂತಿಮವಲ್ಲ**

**ಜಿಲ್ಲಾಧಿಕಾರಿಗಳು ಹಕ್ಕುಗಳ ಕುರಿತು ಸುಪ್ರೀಂ ಕೋರ್ಟ್ ತನ್ನ ನಿರ್ಧಾರ ಅಂತಿಮ ನಿರ್ಧಾರವಾಗುವುದಿಲ್ಲ ಎಂದು ಸುಪ್ರೀಂಕೋರ್ಟ್ ಹೇಳಿದೆ. ಈ ಪ್ರಕರಣದಲ್ಲಿ, ಸುಪ್ರೀಂ ಕೋರ್ಟ್ ಮುಸ್ಲಿಂ ಕಡೆಯ ವಾದವನ್ನು ಒಪ್ಪಿಕೊಂಡಿತು. ಈ ರೀತಿಯಾಗಿ, ಇದು ಮುಸ್ಲಿಂ ಕಡೆಯವರಿಗೆ ಸಮಾಧಾನಕರ ವಿಷಯವಾಗಿದೆ. ಯಾವುದೇ ಕಾನೂನಿನ ಸಾಂವಿಧಾನಿಕತೆಯ ಪರವಾಗಿ ಯಾವಾಗಲೂ ಊಹೆ ಇರುತ್ತದೆ ಮತ್ತು ಬಹಳ ಅಪರೂಪದ ಸಂದರ್ಭಗಳಲ್ಲಿ ಮಾತ್ರ ಹಸ್ತಕ್ಷೇಪ ಮಾಡಬಹುದು ಎಂಬುದನ್ನು ನಾವು ಒಪ್ಪಿಕೊಂಡಿದ್ದೇವೆ ಎಂದು ಮುಖ್ಯನ್ಯಾಯಮೂರ್ತಿ ಬಿ.ಆರ್ ಗವಾಯಿ ಅವರಿದ್ದ ಪೀಠ ಹೇಳಿದೆ. ಪ್ರತಿಯೊಂದು ವಿಭಾಗಕ್ಕೂ ಪ್ರಾಥಮಿಕ ಸವಾಲನ್ನು ನಾವು ಪರಿಗಣಿಸಿದ್ದೇವೆ. ಇಡೀ ಕಾಯ್ದೆಯ ನಿಬಂಧನೆಗಳನ್ನು ತಡೆಯಲು ಯಾವುದೇ ಆಧಾರವಿಲ್ಲ ಎಂದು ನಾವು ಕಂಡುಕೊಂಡಿದ್ದೇವೆ. ಕೆಲವು ವಿಭಾಗಗಳಿಗೆ ರಕ್ಷಣೆ ಬೇಕು ಎಂದಿದ್ದಾರೆ.**

**4 ಮಂದಿಗಿಂತ ಹೆಚ್ಚು ಮುಸ್ಲಿಂಯೇತರು ಇರಬಾರದು**

**ವಕ್ಸ್ ಬೋರ್ಡ್‌ನಲ್ಲಿ ಮುಸ್ಲಿಮೇತರರನ್ನು ಸದಸ್ಯರಾಗಿ ನೇಮಕ ಮಾಡುವುದಕ್ಕೆ ತಡೆ ನೀಡಲು ಕೋರ್ಟ್ ನಿರಾಕರಿಸಿದೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಸ್ಲಿಂ ಆಗಿರಬೇಕು ಎಂದು ಕೋರ್ಟ್ ಹೇಳಿದೆ. ಕೇಂದ್ರ ವಕ್ಫ್ ಕೌನ್ಸಿಲ್‌ನಲ್ಲಿ 4 ಮಂದಿಗಿಂತ ಹೆಚ್ಚು ಮುಸ್ಲಿಮೇತರರು ಇರಬಾರದು, ರಾಜ್ಯವಕ್ಫ್ ಬೋರ್ಡ್‌ಗಳಲ್ಲಿ ಈ ಸಂಖ್ಯೆ 3 ಮೀರಬಾರದು ಎಂದು ಹೇಳಿದೆ. ಮುಸ್ಲಿಮೇತರರನ್ನು ಸಿಇಒ ಆಗಿ ನೇಮಿಸುವ ಕುರಿತ ತಿದ್ದುಪಡಿಗೆ ತಡೆ ನೀಡಲು ನ್ಯಾಯಾಲಯ ನಿರಾಕರಿಸಿದೆ. ಅಂದರೆ, ವಕ್ಫ್ ಮಂಡಳಿಯ ಅಧ್ಯಕ್ಷರು ಮುಸ್ಲಿಂ ಅಥವಾ ಹಿಂದೂಗಳಲ್ಲದವರಾಗಬೇಕೆಂಬ ಬಗ್ಗೆ ಪರಿಸ್ಥಿತಿ ಇನ್ನೂ ಸಂಪೂರ್ಣವಾಗಿ ಸ್ಪಷ್ಟವಾಗಿಲ್ಲ. ಸಾಧ್ಯವಾದರೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಸ್ಲಿಮರಾಗಿರಬೇಕು ಎಂದು ಸುಪ್ರೀಂ ಕೋರ್ಟ್ ಸೂಚಿಸಿದೆ.**

# ರಾಜ್ಯದ ಹಲವೆಡೆ ರಾಜಾರೋಷವಾಗಿ ನಡೆಯುತ್ತಿದೆ ಡ್ರಗ್ಸ್ ದಂಧೆ

## ತುಷ್ಟೀಕರಣದಲ್ಲಿ ತೊಡಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಇದ್ಯಾವುದೂ ಕಣ್ಣಿಗೆ ಕಾಣುತ್ತಿಲ್ಲವೇ: ಜೋಶಿ ಪ್ರಶ್ನೆ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕ ಡ್ರಗ್ಸ್ ಮತ್ತು ಗಾಂಜಾ ಮಾಫಿಯಾದ ತಾಣವಾಗುತ್ತಿದೆ ಎಂದು ಕೇಂದ್ರ, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಕಿಡಿ ಕಾರಿದ್ದಾರೆ. ರಾಜ್ಯದಲ್ಲಿ ಇಂದು ಡ್ರಗ್ಸ್, ಗಾಂಜಾ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಲೇ ಇವೆ. ಇದರಿಂದ ಯುವ ಸಮೂಹದ ಅಮೂಲ್ಯ ಜೀವವೇ ಬಲಿಯಾಗುತ್ತಿದೆ.

ತುಷ್ಟೀಕರಣದಲ್ಲಿ ತೊಡಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಇದ್ಯಾವುದೂ ಕಣ್ಣಿಗೆ ಕಾಣುತ್ತಿಲ್ಲವೇ ಎಂದು ಜೋಶಿ ಖಾರವಾಗಿ ಪ್ರಶ್ನಿಸಿದ್ದಾರೆ. ರಾಜ್ಯದ ಹಲವೆಡೆ ಡ್ರಗ್ಸ್ ದಂಧೆ ರಾಜಾರೋಷವಾಗಿ ನಡೆಯುತ್ತಿರುವುದು ಅಲ್ಲಲ್ಲಿ ಬೆಳಕಿಗೆ ಬರುತ್ತಲೇ ಇದೆ. ಹಾಗಿದ್ದರೂ ಕಠಿಣ ಕ್ರಮ ಕೈಗೊಳ್ಳಬೇಕಾದ ರಾಜ್ಯ ಸರ್ಕಾರ ಮಾತ್ರ ಮೌನಕ್ಕೆ ಶರಣಾಗಿ ಬಿಟ್ಟಿದೆ ಎಂದು ಸಚಿವರು ತೀವ್ರವಾಗಿ ಖಂಡಿಸಿದ್ದಾರೆ. ಡ್ರಗ್ಸ್ ಪ್ರಕರಣಗಳಲ್ಲಿ ಪೊಲೀಸರು ಪೆಡ್ಲರ್‌ಗಳ ಜತೆ ಶಾಮೀಲಾಗಿರುವುದು ಕೇಳಿ ಬರುತ್ತಿದೆ. ಇದು ಕಾಂಗ್ರೆಸ್



**ಯುವ ಸಮೂಹದ ಅಮೂಲ್ಯ ಜೀವವೇ ಬಲಿ**

ಸರ್ಕಾರದ ನಿರ್ಲಕ್ಷ್ಯ ಮತ್ತು ಭ್ರಷ್ಟಾಚಾರಕ್ಕೆ ಸಾಕ್ಷಿಯಾಗಿದೆ ಎಂದ ಸಚಿವರು, ಯುವ ಸಮುದಾಯವನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದೆ ಎಂದರು ಪ್ರಲ್ಹಾದ ಜೋಶಿ ಆರೋಪಿಸಿದ್ದಾರೆ.

**ಡ್ರಗ್ಸ್ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮಕ್ಕೆ ಆಗ್ರಹ:** ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ದುರಾಡಳಿತದ ಪರಮಾವಧಿ ಎಲ್ಲೇ ಮೀರಿದೆ. ಒಂದು ಸುಸಂಸ್ಕೃತಿಯ ರಾಜ್ಯವಾಗಿರುವ ಕರ್ನಾಟಕವನ್ನು ಇದೀಗ ಅಪರಾಧಿಗಳ ಸ್ವರ್ಗವನ್ನಾಗಿಸುತ್ತಿದೆ ಎಂದು ಖಂಡಿಸಿದ್ದು, ಡ್ರಗ್ಸ್, ಗಾಂಜಾ ಮಾಫಿಯಾ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಸರ್ಕಾರದ ನಿರ್ಲಜ್ಜೆಯ ಆಡಳಿತದಲ್ಲಿ ಸಾರ್ವಜನಿಕರ ರಕ್ಷಣೆ–ಭದ್ರತೆ ಹಾಗೂ ಕಾನೂನು ಸುವ್ಯವಸ್ಥೆ ಸಂಪೂರ್ಣ ಶೂನ್ಯವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದ್ದಾರೆ.

**65,507 ಕಡತಗಳಿಗೆ ಮುಕ್ತಿ**

**2024ರ ಸೆಪ್ಟೆಂಬರ್‌ನಿಂದ 2025ರ ಆಗಸ್ಟ್‌ವರೆಗೆ ನಡೆದ ನಾಲ್ಕನೇ ಹಂತದ ಅಭಿಯಾನದಲ್ಲಿ ಒಟ್ಟು 65,507 ಕಡತಗಳನ್ನು ತೆಗೆದು ಹಾಕಲಾಗಿದೆ. 1,58,786 ಚದರ ಅಡಿ ಜಾಗವನ್ನು ಮುಕ್ತಗೊಳಿಸಿದ್ದು, ಈ ಮೂಲಕ ಒಟ್ಟು 45.12 ಲಕ್ಷ ಆದಾಯ ಸಹ ಗಳಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಹಳೆಯ ಫೈಲ್‌ಗಳನ್ನು ತೆರವು, ಗುಜರಿ ವಸ್ತುಗಳ ಹರಾಜು ಮಾಡಿದ್ದಲ್ಲದೆ, ಬಳಕೆಯಾಗದೇ ಇದ್ದ 52,324 ಚದರ ಅಡಿ ಸ್ಥಳವನ್ನು ಸ್ವಚ್ಛಗೊಳಿಸಲಾಯಿತು. ಸ್ಕ್ರ್ಯಾಪ್ ವಸ್ತುಗಳ ವಿಲೇವಾರಿ ಮೂಲಕ 31.29 ಲಕ್ಷ ಆದಾಯ ಸಹ ಗಳಿಸಲಾಯಿತು. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಹಾಗೂ ಸಂಸ್ಥೆ ಕಚೇರಿಗಳ ವಿವಿಧ ಸ್ಥಳಗಳಲ್ಲಿ 1827 ಸ್ವಚ್ಛತಾ ಅಭಿಯಾನಗಳನ್ನು ಸಹ ನಡೆಸಲಾಯಿತು. ಇದು ಸ್ವಚ್ಛ ಮತ್ತು ಪರಿಣಾಮಕಾರಿ ಕೆಲಸದ ಪರಿಸರ ನಿರ್ಮಿಸುವ ಬದ್ಧತೆಗೆ ಪೂರಕವಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.**

ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಕಡತ–ಸ್ಥಳಗಳ ನಿರ್ವಹಣೆ ಮತ್ತು ಸ್ವಚ್ಛತೆಗೆ ಪೂರಕವಾಗಿ ಅಕ್ಟೋಬರ್ ತಿಂಗಳಲ್ಲಿ ವಿಶೇಷ ಅಭಿಯಾನಕ್ಕೆ ಸಿದ್ಧತೆ ನಡೆಸಿದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಈಗಾಗಲೇ ನಾಲ್ಕು ಹಂತದ ವಿಶೇಷ ಅಭಿಯಾನವನ್ನು ಯಶಸ್ವಿಯಾಗಿ ನಡೆಸಲಾಗಿದ್ದು, ಇದೀಗ ಅಕ್ಟೋಬರ್ 2ರಿಂದ 31ರವರೆಗೆ 5ನೇ ಹಂತದ ಅಭಿಯಾನ ಕೈಗೊಳ್ಳಲಾಗುತ್ತಿದೆ. ಇದಕ್ಕಾಗಿ ಇಲಾಖೆ ವಿವಿಧ ಚಟುವಟಿಕೆಗಳನ್ನು ಯೋಜಿಸಿದೆ ಎಂದಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ವಿವಿಧ ಉಲ್ಲೇಖಗಳನ್ನು ಕೈಬಿಡುವುದು, ಉತ್ತಮ ದಾಖಲೆ ನಿರ್ವಹಣೆ, ಸ್ಥಳ ನಿರ್ವಹಣೆ, ಇ–ತ್ಯಾಜ್ಯ ಹಾಗೂ ಪ್ರಮುಖವಾಗಿ ಕಚೇರಿ ಆವರಣದ ಸ್ವಚ್ಛತೆ, ಸೌಂದರ್ಯೀಕರಣವನ್ನು ಗಮನದಲ್ಲಿಟ್ಟುಕೊಂಡು ವಿಶೇಷ ಅಭಿಯಾನ ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,106/Gram24ct ₹10,180/Gram22ct | ಬೆಳ್ಳಿ: ₹133.00/Gram

# ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಹೈಕೋರ್ಟ್ ವಿಭಾಗೀಯ ಪೀಠ ವಜಾ

• ಉದಯವಾಹಿನಿ, ಬೆಂಗಳೂರು

ಈ ಬಾರಿಯ ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಬಾನು ಮುಷ್ತಾಕ್ ಆಯ್ಕೆ ವಿರೋಧಿಸಿ ಮಾಜಿ ಸಂಸದ ಪ್ರತಾಪ್ ಸಿಂಹ ಸೇರಿದಂತೆ ಮೂವರು ಹೈಕೋರ್ಟ್‌ಗೆ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಹೈಕೋರ್ಟ್ ವಿಭಾಗೀಯ ಪೀಠ ಸೋಮವಾರ ವಜಾಗೊಳಿಸಿದೆ.

ಬಾನು ಮುಷ್ತಾಕ್ ಅವರಿಂದ ದಸರಾ ಉದ್ಘಾಟಿಸಬಾರದು ಎಂದು ಪ್ರತಾಪ್ ಸಿಂಹ, ಟಿ. ಗಿರೀಶ್ ಕುಮಾರ್ ಹಾಗೂ ಹೆಚ್. ಎಸ್. ಗೌರವ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಾಧೀಶರಾದ ಸಿ.ಎಂ. ಜೋಶಿ ಅವರಿದ್ದ ನ್ಯಾಯಪೀಠ, ಅರ್ಜಿಗಳನ್ನು ವಜಾಗೊಳಿಸಿ ಆದೇಶ ಪ್ರಕಟಿಸಿತು.

ವಿಭಿನ್ನ ನಂಬಿಕೆಯ ವ್ಯಕ್ತಿಯನ್ನು ದಸರಾ ಉದ್ಘಾಟನೆ ಆಹ್ವಾನಿಸಿರುವುದರಿಂದ ಸಾಂವಿಧಾನಿಕ ಅಥವಾ ಕಾನೂನು ಹಕ್ಕನ್ನು ಉಲ್ಲಂಘಿಸುತ್ತದೆ ಎಂಬ ವಾದಗಳನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ಹೇಳಿತು. ಇದರಿಂದ ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರ ಹೆಸರು ಆಯ್ಕೆಯಾದಾಗಿನಿಂದಲೂ ವಿರೋಧ ವ್ಯಕ್ತಪಡಿಸುತ್ತಾ ಬಂದಿರುವ ಪ್ರತಾಪ್ ಸಿಂಹ ಅವರಿಗೆ ತೀವ್ರ ಹಿನ್ನಡೆಯದಂತಾಗಿದೆ.

ಬಾನು ಮುಸ್ತಾಖ್ ಅವರಿಗೆ ಹಿಂದೂ ಧರ್ಮದಲ್ಲಿ ನಂಬಿಕೆಯಿಲ್ಲ. ಅವರು ಹಿಂದೂ ವಿರೋಧಿಯಾಗಿದ್ದು, ಭುವನೇಶ್ವರಿಯನ್ನು ಅಪಮಾನ ಮಾಡಿದ್ದಾರೆ. ಬಾನು ಮುಷ್ತಾಕ್ ಆ ಹೇಳಿಕೆಗಳನ್ನು ಹಿಂಪಡೆದು ಕ್ಷಮೆಯಾಚಿಸಿದರೆ, ಅವರು ಸೆಪ್ಟೆಂಬರ್ 22 ರಂದು




ದಸರಾ ಉದ್ಘಾಟನೆಗೆ ನಮ್ಮ ಅಭ್ಯಂತರವಿಲ್ಲ ಎಂದು ಅರ್ಜಿದಾರರ ಪರ ವಕೀಲರು ವಾದಿಸಿದರು. ಮತ್ತೊಂದೆಡೆ ಪ್ರತಿವಾದ ಮಂಡಿಸಿದ ರಾಜ್ಯ ಸರ್ಕಾರದ ಪರ ವಕೀಲರು, ಬಾನು ಮುಸ್ತಾಖ್ ಅವರನ್ನು ಆಹ್ವಾನಿಸುವ ನಿರ್ಧಾರವನ್ನು ಸಮರ್ಥಿಸಿಕೊಂಡರು. ಅವರನ್ನು ಆಹ್ವಾನಿಸಿದ ಆಕ್ಷೇಪಾರ್ಹ ಹೇಳಿಕೆಗಳ ಬಗ್ಗೆ ಸ್ಪಷ್ಟೀಕರಣ ನೀಡಿದ್ದಾರೆ. ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳನ್ನೊಳಗೊಂಡ ಸಮಿತಿಯಲ್ಲಿ ಸರ್ವಾನುಮತದಿಂದ ಅವರ ಆಯ್ಕೆ ನಿರ್ಣಯ ಕೈಗೊಳ್ಳಲಾಗಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು.



2017ರಲ್ಲಿ ಖ್ಯಾತ ಕವಿ ನಿಸ್ಸಾರ್ ಅಹಮದ್ ಅವರಿಂದ ದಸರಾ ಉದ್ಘಾಟನೆಗೆ ಮಾಜಿ ಸಂಸದ ಪ್ರತಾಪ್ ಸಿಂಹ ವಿರೋಧ ವ್ಯಕ್ತಪಡಿಸಿರಲಿಲ್ಲ ಎಂದು ಸರ್ಕಾರ ಹೇಳಿತು. ಆದರೆ, ಅಹ್ಮದ್ ಅವರು ಹಿಂದೂ ಧರ್ಮ ಮತ್ತು ಕನ್ನಡ ದೇವರ ವಿರುದ್ಧ ಯಾವುದೇ ಟೀಕೆ ಮಾಡಿಲ್ಲ ಎಂದು ಸಿಂಹ ಪರ ವಕೀಲರು ವಾದಿಸಿದರು.

ದಂಡ ವಿಧಿಸಬೇಕು ಎಂಬ ಎಜಿ ಶಶಿಕಿರಣ್ ಶೆಟ್ಟಿ ಮನವಿಯನ್ನು ನ್ಯಾಯಪೀಠ ನಿರಾಕರಿಸಿತು. ವಿಜಯದಶಮಿ ಎಂದರೆ ಕೆಟ್ಟದ್ದರ ವಿರುದ್ಧ ಗೆಲುವಿನ ಎಂಬ ಅರ್ಥದಲ್ಲಿ ದೇಶಾದ್ಯಂತ ಈ ಹಬ್ಬವನ್ನು ಆಚರಿಸಲಾಗುತ್ತದೆ. ಇದರಲ್ಲಿ ಧರ್ಮ ತೂರಿಸುವುದು ಸರಿಯಲ್ಲ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

## ಭಜನೆ-ಪ್ರವಚನ-ಹರಿಕಥೆ

• ಉದಯವಾಹಿನಿ, ಬೆಂಗಳೂರು

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಸೆಪ್ಟೆಂಬರ್ 16 ರಿಂದ 18ರವರೆಗೆ ಪ್ರತಿದಿನ ಸಂಜೆ 6-00 ರಿಂದ 7-00 ಡಾ|| ಸುರೇಶ್ ಎಸ್. ಕುಮಾರ್ ಮತ್ತು ಸಂಗಡಿಗರಿಂದ ಭಜನೆ ಮತ್ತು ಅದೇ ದಿನಗಳಂದು ಸಂಜೆ 7-00 ರಿಂದ 8-00 ಶ್ರೀ ಚಂದ್ರಶೇಖರ ಭಟ್ ಅವರಿಂದ ಧಾರ್ಮಿಕ ಪ್ರವಚನ. ಸೆಪ್ಟೆಂಬರ್ 19, ಶುಕ್ರವಾರ ಸಂಜೆ 6-30 ರಿಂದ 8-00 ಶ್ರೀ ಲೋಕೇಶ್ ದಾಸ್ ಮತ್ತು ಸಂಗಡಿಗರಿಂದ ಹರಿಕಥೆ ಏರ್ಪಡಿಸಿದೆ ಎಂದು ಟಿಟಿಡಿ ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ|| ಪಿ. ಭುಜಂಗರಾವ್ ತಿಳಿಸಿದ್ದಾರೆ. ಸ್ಥಳ : ಶ್ರೀ ವಾಸವಿ ಕನ್ನಿಕಾ ಪರಮೇಶ್ವರಿ ದೇವಸ್ಥಾನ, ಮಹಾಲಕ್ಷ್ಮಿ ಬಡಾವಣೆ, ಬೆಂಗಳೂರು-560086

## ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಜಯನಗರದ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಸೆ. 18, ಗುರುವಾರ ಸಂಜೆ 5-15ಕ್ಕೆ ವಿದುಷಿ ಲತಾ ಕೆ. ಶಂಕರ್ ಅವರ ನಿರ್ದೇಶನದಲ್ಲಿ ಕಲಾಮಾಯೆ ನೃತ್ಯ ಶಾಲೆಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು41

## ಬೆಂಗಳೂರಿನಲ್ಲಿ ಹೆಚ್ಚಿದ ಸರಗಳ್ಳರ ಅಟ್ಟಹಾಸ : ಕುತ್ತಿಗೆಗೆ ಲಾಂಗ್ ಇಟ್ಟು 55 ಗ್ರಾಂ ಚಿನ್ನ ಕಳ್ಳತನ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಸರಗಳ್ಳರ ಅಟ್ಟಹಾಸ ಜೋರಾಗಿದೆ. ಕುತ್ತಿಗೆಗೆ ಲಾಂಗ್ ಇಟ್ಟು, ಬೆರಳು ಕತ್ತರಿಸಿ 55 ಗ್ರಾಂ ಮೌಲ್ಯದ ಚಿನ್ನ ಕಳ್ಳತನ ಮಾಡಿರುವ ಘಟನೆ ಗಿರಿನಗರ ಪೊಲೀಸ್ ಠಾಣಾ ವ್ಯಾಪ್ತಿಯ ಈಶ್ವರಿ ನಗರದಲ್ಲಿ ನಡೆದಿದೆ. ಉಷಾ ಹಾಗೂ ವರಲಕ್ಷ್ಮಿ ಎಂಬುವವರ ಚಿನ್ನದ ಸರ ಕಳ್ಳತನವಾಗಿದೆ. ಘಟನೆ ನಡೆದ ದಿನ ಇಬ್ಬರು ಮಹಿಳೆಯರು ಗಣೇಶ ಹಬ್ಬದ ಆರ್ಕೆಸ್ಟ್ರಾ ನೋಡಿ ವಾಪಸ್ ಆಗುತ್ತಿದ್ದರು. ಈ ವೇಳೆ ಖದೀಮರು ಬೈಕ್‌ನಲ್ಲಿ ಹಿಂದಿನಿಂದ ಬಂದು ಕುತ್ತಿಗೆಗೆ ಲಾಂಗ್ ಬೀಸಿದ್ದಾರೆ. ಗಾಬರಿಗೊಂಡ ಓರ್ವ ಮಹಿಳೆ ಭಯದಲ್ಲಿ ಚಿನ್ನದ ಸರ ನೀಡಿದ್ದಾಳೆ. ಇನ್ನೋರ್ವ ಮಹಿಳೆ ಪ್ರತಿರೋಧ ಒಡ್ಡಿದಾಗ ಆಕೆಯ ಬೆರಳು ಕಟ್ ಆಗಿದ್ದು, ಆಕೆಯ ಚಿನ್ನವನ್ನು ಎಗರಿಸಿದ್ದಾರೆ. ಉಷಾ ಅವರ 10 ಗ್ರಾಂ ಹಾಗೂ ವರಲಕ್ಷ್ಮಿ ಅವರ 45 ಗ್ರಾಂ ಕಳ್ಳತನವಾಗಿದೆ. ಈ ಸಂಬಂಧ ಗಿರಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅದಲ್ಲದೇ ಗಿರಿನಗರ, ಇಂದಿರಾ ನಗರ, ಕೊತ್ತನೂರು, ಕೋಣನಕುಂಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲೂ ಆರೋಪಿಗಳು ಕೈಚಳಕ ತೋರಿಸಿ, ಮೊಬೈಲ್, ಚಿನ್ನದ ಸರಗಳನ್ನು ಎಗರಿಸಿ ಪರಾರಿಯಾಗಿದ್ದಾರೆ.

## ಆಟೋಗೆ ಕಸ ನೀಡದ ಮನೆಗಳಿಗೆ ನೋಟಿಸ್

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಕಸವನ್ನ ಆಟೋಗಳಿಗೆ ನೀಡಬೇಕು ಅಂತ ಘನತ್ಯಾಜ್ಯ ನಿರ್ವಹಣೆ ನಿಗಮ ಆದೇಶ ಮಾಡಿದೆ. ಜೊತೆಗೆ ಮನೆ ಮನೆಗೆ ತೆರಳೋ ಕಸದ ಆಟೋಗಳ ಸಮಯ ಕೂಡ ಬದಲಾವಣೆ ಮಾಡಿದೆ. ಮೊದಲೆಲ್ಲ ಬೆಳ್ಳಗ್ಗೆ 6.30ಕ್ಕೆ ಕಸದ ಆಟೋಗಳು ಕಸ ಸಂಗ್ರಹಕ್ಕೆ ಮನೆ ಮುಂದೆ ಬರುತ್ತಾ ಇದ್ದವು ಈಗ ಸಮಯವನ್ನ ಬದಲಾವಣೆ ಮಾಡಿ ಬೆಳ್ಳಗ್ಗೆ 5.30ಕ್ಕೆ ಮನೆ ಮನೆಗೆ ಆಟೋ ತೆರಳುವಂತೆ ಆದೇಶ ಮಾಡಿದೆ. ಆದರೂ ಕೂಡ ಕಸದ ಆಟೋಗೆ ಕಸ ನೀಡದೇ ನಿರ್ಲಕ್ಷ್ಯ ಮಾಡ್ತಾ ಇದ್ದಾರೆ ಬೆಂಗಳೂರಿಗರು ಕಸದ ಆಟೋಗಳಿಗೆ ಕಸ ನೀಡದ ಮನೆಗಳಿಗೆ ನೋಟಿಸ್ ನೀಡಲು ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ ನಿರ್ಧಾರ ಮಾಡಿದೆ.


ಉದಯವಾಹಿನಿ ಚಿತ್ರ

ಕಸ ನೀಡದ ಮನೆಗಳಿಗೆ ನೋಟಿಸ್ ನೀಡಲಿದೆ ಜೊತೆಗೆ ಕಟ್ಟಡ ನಿರ್ಮಾಣದ ಅವಶೇಷಗಳನ್ನು ಎಲ್ಲೆಂದರಲ್ಲೆ ಬಿಸಾಡುತ್ತಿದ್ದರು. ಈಗ ಕಟ್ಟಡದ ಆವಶೇಷಗಳನ್ನ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ ದಿಂದಲೇ ವಿಲೇವಾರಿ ಮಾಡಲು ಚಿಂತಿಸಿದೆ. ವಿಲೇವಾರಿ ವೆಚ್ಚವನ್ನ ಕಟ್ಟಡ ಮಾಲೀಕರು ಭರಿಸಬೇಕಿದೆ.

# ಬೆಂಗಳೂರು ಸಚಿವರಿಗೆ ಎದುರಾಗಲಿದೆ ಅಗ್ನಿ ಪರಿಕ್ಷೆ

## ಗ್ರೇಟರ್ ಬೆಂಗಳೂರು ರಚನೆಯ ವಿರುದ್ಧ ವಿಪಕ್ಷಗಳು ತೀವ್ರ ವಿರೋಧ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರವನ್ನು ಆಡಳಿತಾತ್ಮಕವಾಗಿ ಐದು ಪಾಲಿಕೆಗಳಾಗಿ ವಿಂಗಡನೆ ಮಾಡಲಾಗಿದೆ. ವಿರೋಧ ಪಕ್ಷಗಳ ವಿರೋಧದ ನಡುವೆಯೂ ಸರ್ಕಾರ ಈ ಮಹತ್ವದ ತೀರ್ಮಾನಕ್ಕೆ ಬಂದಿದೆ. ಈಗಾಗಲೇ ಗ್ರೇಟರ್ ಬೆಂಗಳೂರು ಜಾರಿಗೆ ಬಂದಿದ್ದು, ಪಾಲಿಕೆ ಆಯುಕ್ತರನ್ನು ನೇಮಕ ಮಾಡಲಾಗಿದೆ. ಇದರ ಬೆನ್ನಲ್ಲೇ ಚುನಾವಣೆಯ ಸಾಧ್ಯತೆಗಳು ದಟ್ಟವಾಗಿದ್ದು, ಪಾಲಿಕೆಗಳ ಜವಾಬ್ದಾರಿಯನ್ನು ಸಚಿವರ ಹೆಗಲಿಗೆ ಹಾಕಲಾಗಿದೆ.

**ಐದು ಪಾಲಿಕೆ, 6 ಮಂದಿಗೆ ಜವಾಬ್ದಾರಿ!:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಗ್ರೇಟರ್ ಬೆಂಗಳೂರು ಮಾಡಿ ಐದು ಪಾಲಿಕೆಗಳನ್ನು ರಚನೆ ಮಾಡಲಾಗಿದೆ. ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ, ಬೆಂಗಳೂರು ಪೂರ್ವ, ಬೆಂಗಳೂರು ಪಶ್ಚಿಮ ಹಾಗೂ ಬೆಂಗಳೂರು ಕೇಂದ್ರ ಪಾಲಿಕೆಗಳನ್ನಾಗಿ ರಚನೆ ಮಾಡಲಾಗಿದೆ. ಈ ಐದು ಪಾಲಿಕೆಗಳಲ್ಲಿ ಸಚಿವರಿಗೆ ಜವಾಬ್ದಾರಿ ನೀಡಲಾಗಿದೆ. ಚುನಾವಣೆ ಅಧಿಕೃತ ಘೋಷಣೆ


ಉದಯವಾಹಿನಿ ಚಿತ್ರ


ಆಗದೆ ಇದ್ದರೂ, ತಳಮಟ್ಟದಲ್ಲಿ ಸಿದ್ಧತೆಯನ್ನು ನಡೆಸಲು ಕಾಂಗ್ರೆಸ್ ಮುಂದಾಗಿದೆ. ಹೀಗಾಗಿ ಚುನಾವಣೆ ನಡೆದಲ್ಲಿ ಐದು ಪಾಲಿಕೆಗಳನ್ನು ಗೆಲ್ಲಿಸಿಕೊಂಡು ಬರುವ ಜವಾಬ್ದಾರಿಯನ್ನು ಸಚಿವರಿಗೆ ನೀಡಲಾಗಿದೆ.

**ಐದು ಪಾಲಿಕೆಗೆ ವಿರೋಧ:** ಗ್ರೇಟರ್ ಬೆಂಗಳೂರು ಸ್ಥಾಪನೆಗೆ ವಿಪಕ್ಷಗಳು ಭಾರೀ ವಿರೋಧ ವ್ಯಕ್ತಪಡಿಸಿದ್ದರು.

### ಆರು ಸಚಿವರಿಗೆ ಜವಾಬ್ದಾರಿ

**ಹಿರಿಯ ಸಚಿವ ರಾಮಲಿಂಗಾ ರೆಡ್ಡಿ, ಕೆ.ಜೆ ಜಾರ್ಜ್, ಕೃಷ್ಣ ಭೈರೇಗೌಡ, ದಿನೇಶ್ ಗುಂಡೂರಾವ್, ಜಮೀರ್ ಅಹಮ್ಮದ್ ಹಾಗೂ ಬೈರತಿ ಸುರೇಶ್‌ಗೆ ಪಾಲಿಕೆಗಳ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ. ತಮಗೆ ಹಂಚಿಕೆಯಾಗಿರುವ ಪಾಲಿಕೆಗಳನ್ನ ಗೆದ್ದು ತೋರಿಸಬೇಕಾಗಿರುವ ಸವಾಲು ಸಚಿವರ ಮುಂದಿದೆ. ಒಟ್ಟು ಆರು ಮಂದಿ ಸಚಿವರಿಗೂ ಐದು ಪಾಲಿಕೆಗಳವಾರು ಜವಾಬ್ದಾರಿ ಹಂಚುವ ಮೂಲಕ ಟಾಸ್ಕ್ ನೀಡಲಾಗಿದೆ. ಕನಿಷ್ಠ ಮೂರ್ನಾಲ್ಕು ಕ್ಷೇತ್ರಗಳನ್ನ ಗೆಲ್ಲಲೇಬೇಕಾದ ಅನಿವಾರ್ಯತೆ ಕಾಂಗ್ರೆಸ್ ಸರ್ಕಾರಕ್ಕೆ ಇದೆ. ಹಾಗಾಗಿ ಚುನಾವಣೆ ಘೋಷಣೆಗೂ ಮೊದಲೇ ಸಚಿವರಿಗೆ ಜವಾಬ್ದಾರಿ ಹಂಚುವ ಮೂಲಕ ಗೆಲುವಿನ ಟಾಸ್ಕ್ ನೀಡಿರುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.**

ಈ ನಿಟ್ಟಿನಲ್ಲಿ ಜಂಟಿ ಸದನ ಸಮಿತಿಯನ್ನು ರಚನೆ ಮಾಡಲಾಗಿತ್ತು. ಬಳಿಕ ವಿಧೇಯಕವನ್ನು ಸದನದಲ್ಲಿ ಮಂಡಿಸಿ ಅಂಗೀಕಾರ ಪಡೆದುಕೊಳ್ಳಲಾಗಿತ್ತು. ಕಳೆದ ಅಧಿವೇಶನದಲ್ಲೂ ಗ್ರೇಟರ್ ಬೆಂಗಳೂರು ತಿದ್ದುಪಡಿ ವಿಧೇಯಕವನ್ನು ಮಂಡಿಸಿ ಅಂಗೀಕಾರ ಪಡೆದುಕೊಳ್ಳಲಾಗಿತ್ತು.

ಗ್ರೇಟರ್ ಬೆಂಗಳೂರು ರಚನೆ ಮಾಡುವ ಮೂಲಕ ಬೆಂಗಳೂರನ್ನು ಅವೈಜ್ಞಾನಿಕವಾಗಿ ವಿಭಜನೆ ಮಾಡಲಾಗಿದೆ ಹಾಗೂ ಇದು ಚುನಾವಣೆಯನ್ನು ಮುಂದೂಡುವ ಪ್ರಯತ್ನ ಎಂಬ ಆರೋಪವನ್ನು ಬಿಜೆಪಿ ಮತ್ತು ಜೆಡಿಎಸ್ ನಾಯಕರು ಮಾಡಿದ್ದಾರೆ. ಆದರೆ ಈ ಆರೋಪಗಳ ನಡುವೆಯೂ ಕಾಂಗ್ರೆಸ್ ಸರ್ಕಾರ ಗ್ರೇಟರ್ ಬೆಂಗಳೂರಿಗೆ ಚುರುಕು ನೀಡುತ್ತಿದೆ. ಅಲ್ಲದೆ, ಸದ್ದಿಲ್ಲದೆ ಚುನಾವಣೆಗೂ ಸಿದ್ದತೆ ನಡೆಸುತ್ತಿದೆ.

## ಪರಿಶಿಷ್ಟ ಜಾತಿ ಪದಾಧಿಕಾರಿಗಳ ಆಯ್ಕೆ ಹಾಗೂ ಕಾರ್ಯಕರ್ತರ ಸಭೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆ.ಆರ್.ಪುರ

ಕಾಂಗ್ರೆಸ್ ಪಕ್ಷವನ್ನು ಮಹದೇವಪುರ ಕ್ಷೇತ್ರದಲ್ಲಿ ಅಧಿಕಾರಕ್ಕೆ ತರುವಂತೆ ಎಲ್ಲಾ ದಲಿತರು ಒಗಟಿನಿಂದ ಕಾರ್ಯ ಸಾಧನೆ ಮಾಡುವಂತೆ ಮಾಜಿ ಸಚಿವ ಎಚ್.ನಾಗೇಶ್ ತಿಳಿಸಿದರು. ಮಹದೇವಪುರ ಕ್ಷೇತ್ರದ ವೈಟ್ ಫೀಲ್ಡ್ ಸಮೀಪದ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ ಪರಿಶಿಷ್ಟ ಜಾತಿ ಪದಾಧಿಕಾರಿಗಳ ಆಯ್ಕೆ ಹಾಗೂ ಕಾರ್ಯಕರ್ತರ ಸಭೆಯನ್ನು ಉದ್ಘಾಟನೆ ಮಾಡಿ ಮಾತನಾಡಿ ಅವರು.

ದಿನದಲಿತರಿಗೆ ಧ್ವನಿಯಾಗಿದ ಕಾಂಗ್ರೆಸ್ ಸರ್ಕಾರವನ್ನು ಮಹದೇವಪುರ ಕ್ಷೇತ್ರದಲ್ಲಿನ ಪ್ರತಿಯೊಬ್ಬ ದಲಿತರು ಅರ್ಥೈಸಿಕೊಂಡಿದ್ದಾರೆ.

ಮೂರು ಬಾರಿಯೂ ಕಾಂಗ್ರೆಸ್ ಪಕ್ಷ ಗೆಲ್ಲಲಿಲ್ಲ ಅದಕ್ಕೆ ಕಾರಣ ಏನೆಂಬುದು ಅರಿತು ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಂತೆ ಮಾಡೋಣ ಎಂದರು.

ಮಹದೇವವಪುರ ಕ್ಷೇತ್ರದ ಬಹುತೇಕ ಪ್ರಮುಖ ಮುಖಂಡರು ಪಕ್ಷಕಟ್ಟುವ ಕಾರ್ಯಕ್ಕೆ ಮುಂದಾಗಿದ್ದಾರೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲವೆಂಬುದಕ್ಕೆ ಈ ಸಭೆ ಸಾಕ್ಷಿಯಾಗಿದೆ ಎಂದು ಒಗಟಿನ ಮೂಲಕ ಮಂತ್ರ ಪಠಿಸಿದರು.

ಇದೇ ವೇಳೆ ವಿವಿಧ ವಾರ್ಡ್ ಮತ್ತು ಬ್ಲಾಕ್ ಮಟ್ಟದ ಪದಾಧಿಕಾರಿಗಳನ್ನು ಸಹ ಆಯ್ದೆ ಮಾಡಿ ಆದೇಶ ಪತ್ರವನ್ನು ನೀಡಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಎಸ್ಸಿ ಘಟಕದ ರಾಜ್ಯ ಉಪಾಧ್ಯಕ್ಷ ನಲ್ಲೂರಹಳ್ಳಿ ಟಿ ನಾಗೇಶ್, ಬೆಂ.ಪೂರ್ವ ಅಧ್ಯಕ್ಷ ನಂದಕುಮಾರ್, ಜಿಲ್ಲಾ ಉಪಾಧ್ಯಕ್ಷರಾದ ಎಲ್. ಮುನಿರಾಜ್ (ಮೈಕಲ್), ಎಸ್ಸಿ ಬ್ಲಾಕ್ ಅಧ್ಯಕ್ಷರುಗಳಾದ ವರ್ತೂರು ನಾಗರಾಜಯ್ಯ, ಮಾರತ್ತಹಳ್ಳಿ ಬಸವರಾಜ್, ಬಿದರಹಳ್ಳಿ ಕೆ.ಕುಮಾರ್, ಹೂಡಿ ಗೋವಿಂದರಾಜ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## 75 ಪ್ರಯಾಣಿಕರಿದ್ದ ಬಿಎಂಟಿಸಿ ಬಸ್‌ನಲ್ಲಿ ಭಾರೀ ಬೆಂಕಿ

• ಉದಯವಾಹಿನಿ, ಬೆಂಗಳೂರು

ಎಂಜಿನ್‌ನಲ್ಲಿ ಕಾಣಿಸಿಕೊಂಡ ಬೆಂಕಿ ದಿಢೀರನೇ ವ್ಯಾಪಿಸಿ ಇಡೀ ಬಿಎಂಟಿಸಿ ಬಸ್ ಧಗಧಗನೆ ಹೊತ್ತಿ ಉರಿದ ಘಟನೆ ಬೆಂಗಳೂರಿನ ಹೆಚ್‌ಎಎಲ್ ಏರ್‌ಪೋರ್ಟ್ ಮುಖ್ಯ ಗೇಟ್ ಬಳಿ ಮುಂಜಾನೆ ಸಂಭವಿಸಿದೆ.

ಮೆಜೆಸ್ಟಿಕ್‌ನಿಂದ ಕಾಡುಗೋಡಿಗೆ ತೆರಳುತ್ತಿದ್ದ ಬಿಎಂಟಿಸಿ ಬಸ್‌ನ ಎಂಜಿನ್‌ನಲ್ಲಿ ಬೆಳಗ್ಗೆ 5.15ಕ್ಕೆ ಬೆಂಕಿ ಕಾಣಿಸಿದೆ. ತಕ್ಷಣವೇ ಎಚ್ಚೆತ್ತ ಚಾಲಕ ಬಸ್


ಉದಯವಾಹಿನಿ ಚಿತ್ರ

ನಿಲ್ಲಿಸಿ ಎಲ್ಲಾ ಪ್ರಯಾಣಿಕರನ್ನು ಕೆಳಗಿಳಿಸಿದ್ದಾರೆ.

ಕೂಡಲೇ ಬೆಂಕಿ ಇಡೀ ಬಸ್ ವ್ಯಾಪಿಸಿದ್ದು, ಹೊತ್ತಿ ಉರಿದಿದೆ. ಚಾಲಕನ ಸಮಯಪ್ರಜ್ಞೆಯಿಂದ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಹೆಚ್‌ಎಎಲ್ ಅಗ್ನಿಶಾಮಕ ದಳ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಿದರು.ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಬಿಎಂಟಿಸಿ ಬೆಂಕಿ ಕಾಣಿಸಿಕೊಳ್ಳಲು ಕಾರಣ ಪತ್ತೆ ಹಚ್ಚಲು ಮುಂದಾಗಿದೆ.

## ಮರಗಳ ಮೇಲ್ವಿಚಾರಣೆಗೆ ವೃಕ್ಷ ತಪಾಸಕರ ನೇಮಕ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಅಪಾಯಕಾರಿ ಸ್ಥಿತಿಯಲ್ಲಿರುವ ಮರಗಳನ್ನು ಗುರುತಿಸಿ ಅನಾಹುತಕ್ಕೂ ಮುನ್ನ ತೆರವುಗೊಳಿಸಲು ಮೊದಲ ಬಾರಿಗೆ ವೃಕ್ಷ ತಪಾಸಕರನ್ನು ನೇಮಕ ಮಾಡಲಾಗುತ್ತಿದೆ. ಮಳೆ- ಗಾಳಿಯಿಂದಾಗಿ ನಗರದಲ್ಲಿ ಆಗಾಗ ಮರ- ಕೊಂಬೆಗಳು ಉರುಳುವ ಸನ್ನಿವೇಶವನ್ನು ಕಾಣುತ್ತೇವೆ. ಇಂತಹ ಮರಗಳನ್ನು ವೈಜ್ಞಾನಿಕ ನೆಲೆಯಲ್ಲಿ ಗುರುತಿಸಿ ಪರ್ಯಾಯ ಕ್ರಮಗಳನ್ನು ಕೈಗೊಳ್ಳಲು ವೃಕ್ತ ತಪಾಸಕರು ನೆರವಾಗಲಿದ್ದಾರೆ.

ಜಿಬಿಎ ವ್ಯಾಪ್ತಿಯಲ್ಲಿ 55 ಮಂದಿ ಅರಣ್ಯ ಸಿಬ್ಬಂದಿ ಇರಬೇಕಿತ್ತು. ಸದ್ಯ ಇರುವುದು 18 ಮಂದಿ ಮಾತ್ರ. ಅವರಿಂದಲೇ ಇಡೀ ನಗರದಲ್ಲಿ ಮರಗಳ ಮಾಹಿತಿ ಸಂಗ್ರಹ ನಿರ್ವಹಣೆ ಕಷ್ಟ ಎನ್ನುವ ಕಾರಣದಿಂದ ಮಾಸಿಕ 30 ಸಾವಿರ ವೇತನದೊಂದಿಗೆ, 2 ತಿಂಗಳ ಅವಧಿಗೆ 10 ವೃಕ್ತ ತಪಾಸಕರ ನೇಮಕಕ್ಕೆ ಅನುಮತಿ ದೊರೆತಿದೆ. ಮುಂದೆ ಅಗತ್ಯ ನೋಡಿಕೊಂಡು ಅವಧಿ ವಿಸ್ತರಣೆ ಹಾಗೂ ಇನ್ನಷ್ಟು ವೃಕ್ಷ


ಉದಯವಾಹಿನಿ ಚಿತ್ರ

ತಪಾಸಕರನ್ನು ನೇಮಿಸಿಕೊಳ್ಳಲಾಗುತ್ತದೆ' ಎಂದು ಅರಣ್ಯ ಅಧಿಕಾರಿಗಳು ಹೇಳಿದರು.

ಬೆಂಗಳೂರಿನಲ್ಲಿ ಶತಮಾನದಷ್ಟು ಹಳೆಯ ಮರಗಳು ಇವೆ. ಕೆಲವು ಮರಗಳು ಗಟ್ಟಿಯಾಗಿದ್ದರೂ ಪೊಟರೆಗಳು, ಬಿರುಕು ಇರುವ ಮಾಹಿತಿಯನ್ನು ವೃಕ್ಷ ತಪಾಸಕರು ಸಂಗ್ರಹಿಸಲಿದ್ದಾರೆ. ಮರಗಳ ಜಾತಿ, ಅಂದಾಜು ವಯಸ್ಸಿನ ವಿವರಗಳನ್ನು ಪಡೆಯಲಿದ್ದಾರೆ. ಮರಗಳ ಮಾಹಿತಿಯನ್ನು ಸಂಗ್ರಹಿಸಲು ದೂರ ಸಂವೇದಿ ಅನ್ವಯಿಕ ಕೇಂದ್ರದ ಸಹಕಾರದೊಂದಿಗೆ ಪ್ರತ್ಯೇಕ ಆ್ಯಪ್ ಅನ್ನು ಅರಣ್ಯ ವಿಭಾಗವು ಅಣಿಗೊಳಿಸುತ್ತಿದೆ. ಒಂದೆರಡು ತಿಂಗಳಲ್ಲಿ ಇದು ಬಳಕೆಗೆ ಲಭ್ಯವಾಗಲಿದೆ. ತಮ್ಮ ನೆರೆಯ ಮರದ ಕುರಿತು ಮಾಹಿತಿಯನ್ನು ಇದರಲ್ಲಿ ನೀಡಲು ಜನರಿಗೆ ಅವಕಾಶ ಕಲ್ಪಿಸಲಾಗುತ್ತದೆ. ಅನಾಹುತಕಾರಿ ಮರದ ಮಾಹಿತಿ ಇದ್ದರೆ ವೃಕ್ತ ತಪಾಸಕರು ಪರೀಕ್ಷೆ ನಡೆಸಿದ ಬಳಿಕ ಪರ್ಯಾಯ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ.

ರಾಜ್ಯದ ನಗರ, ಪಟ್ಟಣಗಳಲ್ಲೂ ಸದ್ಯ ಅರಣ್ಯ ಇಲಾಖೆ ಇಲ್ಲವೇ ಸ್ಥಳೀಯ ಸಂಸ್ಥೆಗಳಿಗೆ ಬರುವ ದೂರು ಆಧರಿಸಿ ಅಪಾಯಕಾರಿ ಮರಗಳನ್ನು ನಿಗದಿತ ಕಾಲಮಿತಿ ಒಳಗೆ ತೆರವುಗೊಳಿಸಲಾಗುತ್ತಿದೆ. ರಾಜಧಾನಿಯಲ್ಲಿ ಮರಗಳ ಕುರಿತು ಶೈಕ್ಷಣಿಕ ಹಾಗೂ ನಿಖರ ಜ್ಞಾನ ಇರುವ ವೃಕ್ಷ ತಪಾಸಕರನ್ನು ನೇಮಿಸಿ ಮರಗಳ ರಕ್ಷಣೆಯಲ್ಲೂ ವೃತ್ತಿಪರತೆ ಕಂಡುಕೊಳ್ಳಲು ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯಿದೆ 1976ರ ಅಡಿಯಲ್ಲಿ ಈ ವ್ಯವಸ್ಥೆ ಮಾಡಲಾಗುತ್ತಿದೆ.

## ಕುರುಬ ಸಮುದಾಯವನ್ನ ಎಸ್‌ಟಿಗೆ ಸೇರಿಸುವ ಪ್ರಕ್ರಿಯೆ ಇನ್ನಷ್ಟು ತೀವ್ರ

• ಉದಯವಾಹಿನಿ, ಬೆಂಗಳೂರು

ಕುರುಬ ಸಮುದಾಯವನ್ನು ಎಸ್‌ಟಿಗೆ ಸೇರಿಸಬೇಕೆಂಬ ಹಲವು ವರ್ಷಗಳ ಬೇಡಿಕೆ ಶೀಘ್ರದಲ್ಲೇ ನೆರವೇರುವ ಸಾಧ್ಯತೆಗಳು ಕಂಡುಬಂದಿದೆ. ಎಸ್‌ಟಿ ಸಮುದಾಯಕ್ಕೆ ಸೇರಿಸುವ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ಮತ್ತಷ್ಟು ತೀವ್ರಗೊಳಿಸಿದೆ. ಸದ್ಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಿಎಂ ಬಳಿಯೇ ಇದೆ. ಹೀಗಾಗಿ ಸಿಎಂ ಸೂಚನೆ ಮೇರೆಗೆ ವಿವಿಧ ಇಲಾಖೆಗಳ ಅಧಿಕಾರಿಗಳ


ಉದಯವಾಹಿನಿ ಚಿತ್ರ

ಜೊತೆ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಭೆ ಕರೆದಿದೆ. ಇಲಾಖೆ ಕಾರ್ಯದರ್ಶಿ ನೇತೃತ್ವದಲ್ಲಿ ಎಂಎಸ್ ಬಿಲ್ಡಿಂಗ್‌ನಲ್ಲಿ ಮಹತ್ವದ ಸಭೆ ನಡೆಯಲಿದ್ದು, ಸಭೆಗೆ ಅಗತ್ಯ ದಾಖಲೆಗಳನ್ನ ತರುವಂತೆ ನಾಲ್ಕು ಇಲಾಖೆಗಳಿಗೆ ಪತ್ರದ ಮುಖೇನ ಸೂಚನೆ ನೀಡಲಾಗಿದೆ. ಸೂಚನಾ ಪತ್ರದಲ್ಲಿ 2 ವಿಚಾರಗಳ ಬಗ್ಗೆ ಚರ್ಚೆ ನಡೆದಿದೆ. ಮೊದಲಿಗೆ ಕುರುಬ ಸಮುದಾಯವನ್ನು ಎಸ್‌ಟಿಗೆ ಸೇರ್ಪಡೆಗೊಳಿಸುವ ವಿಚಾರ ಮತ್ತೊಂದು ಮೂರು ಜಿಲ್ಲೆಗಳಲ್ಲಿ ಮೂರು ಜಿಲ್ಲೆಗಳಲ್ಲಿ ಕುರುಬ ಸಮುದಾಯದ ಬೆಳವಣಿಗೆಗಳ ಬಗ್ಗೆಯೂ ಉಲ್ಲೇಖ ಮಾಡಲಾಗಿದೆ. ಈ ಮೂಲಕ ಮತ್ತೊಂದು ರಾಜಕೀಯ ಗುದ್ದಾಟಕ್ಕೆ ವೇದಿಕೆ ಸಿದ್ಧ ಮಾಡಿದ್ರಾ ಸಿಎಂ ಅನ್ನೋ ಪ್ರಶ್ನೆಯೂ ಹುಟ್ಟಿಕೊಂಡಿದೆ.

ಕುರುಬ ಸಮುದಾಯವನ್ನು ಎಸ್‌ಟಿಗೆ ಸೇರಿಸಬೇಕೆಂದು ಒತ್ತಾಯಿಸಿ ಹಲವು ವರ್ಷಗಳಿಂದ ಸಮುದಾಯದ ಮುಖಂಡರು ಹೋರಾಟ ನಡೆಸುತ್ತಿದ್ದಾರೆ. ತಮಿಳುನಾಡು, ಆಂಧ್ರಪ್ರದೇಶಗಳಲ್ಲೂ ಕುರುಬರನ್ನ ಎಸ್‌ಟಿ ವರ್ಗಕ್ಕೆ ಸೇರಿಸಲಾಗಿದೆ. ಸದ್ಯ ಕಾಡು ಕುರುಬರು ಮತ್ತು ಜೇನು ಕುರುಬರು ಮಾತ್ರ ಎಸ್‌ಟಿ ವರ್ಗದಲ್ಲಿದ್ದಾರೆ. ಉಳಿದ ಕುರುಬ ಸಮುದಾಯದ ಒಳ ಪಂಗಡಗಳನ್ನೂ ಎಸ್‌ಟಿಗೆ ಸೇರಿಸಬೇಕೆಂದು ಭಾರೀ ಒತ್ತಾಯ ಕೇಳಿಬರುತ್ತಲೇ ಇದೆ.

# ಇಂಜನಿಯರ್‌ಗಳು ದಿಟ್ಟವಾಗಿ ಕೆಲಸ ಮಾಡಬೇಕು

## ಜಿಬಿಎನಲ್ಲಿ ಸರ್.ಎಂ.ವಿ.ದಿನಾಚರಣೆ ಮತ್ತು ಸಾಧಕ ಅಭಿಯಂತರುಗಳಿಗೆ ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರಧಾನ

• ಉದಯವಾಹಿನಿ, ಬೆಂಗಳೂರು

ನೌಕರರ ಭವನದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸರ್.ಎಂ.ವಿಶ್ವೇಶ್ವರಯ್ಯ ಜಯಂತಿ ಪ್ರಯುಕ್ತ ಇಂಜನಿಯರ್ ದಿನಾಚರಣೆ, ಸಾಧಕ ಇಂಜನಿಯರ್‌ಗಳಿಗೆ ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಹಾಗೂ ಪಾಲಿಕೆಗಳ ಅಧಿಕಾರಿ ಮತ್ತು ನೌಕರರಿಗೆ ಆರೋಗ್ಯ ಶಿಬಿರ ಅಯೋಜನೆ.

ಮುಖ್ಯ ಆಯುಕ್ತರಾದ ಮಹೇಶ್ವರರಾವ್ ರವರು, ನಿಕಟಪೂರ್ವ ಅಪರ ಮುಖ್ಯ ಕಾರ್ಯದರ್ಶಿಗಳಾದ ಎನ್.ಮಂಜುನಾಥ್ ಪ್ರಸಾದ್, ಗ್ರೇಟರ್ ಬೆಂಗಳೂರು ಪ್ರಧಾನ ಅಭಿಯಂತರು, ನೀರ್ದೇಶಕರು ಡಾ.ಬಿ.ಎಸ್.ಪ್ರಹ್ಲಾದ್ ರವರು, ಉಪ ಆಯುಕ್ತರಾದ ಹೆಚ್.ಅಮರೇಶ್ ರವರು, ಉಪಮುಖ್ಯಮಂತ್ರಿಗಳ ತಾಂತ್ರಿಕ ಸಲಹೆಗಾರರರಾದ ಕೆ.ಟಿ.ನಾಗಾರಾಜ್ ರವರು, ಸಚಿವಾಲಯ ನೌಕರರ ಸಂಘದ ಅಧ್ಯಕ್ಷರಾದ ರಮೇಶ್ ಸಂಗಾ, ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಪಾಲಿಕೆಗಳ ಅಧಿಕಾರಿ-ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಸರ್.ಎಂ.ವಿ.ಪ್ರತ್ಥಳಿಗೆ ಪುಷ್ಪನಮನ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಖ್ಯ ಆಯುಕ್ತರಾದ ಮಹೇಶ್ವರರಾವ್ ರವರು ಮಾತನಾಡಿ ಇಂಜನಿಯರ್‌ಗಳು ದಿಟ್ಟವಾಗಿ ಕೆಲಸ ಮಾಡಬೇಕು, ಮಾತುಗಳು ಬರುತ್ತದೆ ಅದರ ಕಡೆ ಗಮನಹರಿಸಬಾರದು ನಮ್ಮ ಕೆಲಸ ಮಾತನಾಡುತ್ತದೆ. ಒತ್ತಡದಲ್ಲಿಯೂ ಸಹ ಇಂಜನಿಯರ್‌ಗಳು ಉತ್ತಮವಾಗಿ ಕೆಲಸ ಮಾಡುತ್ತಾರೆ. ಮುಂದಿನ ದಿನಗಳಲ್ಲಿ ಬೆಂಗಳೂರುನಗರದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ ಪ್ರಯತ್ನ ಮಾಡುವ ಯೋಜನೆ ಮಾಡಬೇಕು. ಉತ್ತಮ ನಗರ ನಿರ್ಮಾಣಕ್ಕೆ ಇಂಜನಿಯರ್‌ಗಳ ಶ್ರಮವಿದೆ ಅವರನ್ನ ಗರುತಿಸುವ ಕೆಲಸ ಈ ದಿವಸವಾಗಿದೆ. ನಾವು ಹೋಗುವ ದಾರಿ ಸರಿಯಿದ್ದರೆ ಸಾಕು, ಉತ್ತಮ ಕೆಲಸ ಮಾಡಬಹುದು ಎಂದು ಹೇಳಿದರು.

ಯೋಜನೆ ಅನುಷ್ಠಾನ ಮಾಡಬೇಕಾದರೆ ಸರ್.ಎಂ.ವಿ.ಎಲ್ಲರ ಜೊತೆಯಲ್ಲಿ


ಉದಯವಾಹಿನಿ ಚಿತ್ರ

ಚರ್ಚೆ ಮಾಡುತ್ತಿದ್ದರು. ಇಂಜನಿಯರ್‌ಗಳ ಸತತ ಪರಿಶ್ರಮ, ಬುದ್ದಿವಂತಿಕೆಯಿಂದ ಬೆಂಗಳೂರುನಗರ ಉತ್ತಮವಾಗಿ ಬೆಳೆದು ನಿಂತಿದೆ.

ಕೊವಿಡ್ ಸಂದರ್ಭದಲ್ಲಿ ಜನ ಜೀವ ರಕ್ಷಣೆ ಮಾಡಿದ ಕಾರ್ಯ ಸಂತೃಪ್ತಿ ತಂದಿದೆ ಸರ್.ಎಂ.ವಿ.ರವರ ಆದರ್ಶಗಳನ್ನು ಇಂಜನಿಯರ್‌ಗಳು ಆಳವಡಿಸಿಕೊಂಡು ಕೆಲಸ ಮಾಡಬೇಕು ಎಂದು ಹೇಳಿದರು. ಕೆ.ಟಿ.ನಾಗರಾಜ್ ರವರು ಮಾತನಾಡಿ ಸರ್.ಎಂ.ವಿ.ರವರ ಆದರ್ಶ,ತತ್ವಪಾಲನೆ ನಾವು ಪಾಲನೆ ಮಾಡಬೇಕು. ಜನರು ಸರ್.ಎಂ.ವಿ.ಅವರ ಹುಟ್ಟು ಬೆಳವಣಿಗೆ ಸಾಧನೆ ಕುರಿತು ಪುಸ್ತಕಗಳನ್ನು ಓದಬೇಕು. ಆಧುನಿಕ ಯುಗದ ಸೃಷ್ಟಿಕರ್ತರು ಎಂದು ಸರ್.ಎಂ.ವಿ.ಕರೆಯುತ್ತಾರೆ. ಮೈಸೂರು ಮಹಾರಾಜರ ಆಹ್ವಾನದಿಂದ ಮುಖ್ಯ ಅಭಿಯಂತರಾಗಿ ಸೇವೆ ಸಲ್ಲಿಸಿದ್ದರು.

ಕೆ.ಆರ್ ಎಸ್.ಡ್ಯಾಂ ಸುಣ್ಣ, ಮಣ್ಣಿನಿಂದ ಕಟ್ಟಿರುವುದು ಇಂದು ಸಹ ಗಟ್ಟಿಯಾಗಿದೆ. ಮೈಸೂರು ಮಹಾರಾಜರು ಚಿನ್ನ ಅಡವಿಟ್ಟು ಡ್ಯಾಂ ಕಟ್ಟಿಸಿದರು. ಪ್ರತಿಭ್ವಾನಿತ ಇಂಜನಿಯರ್ ದೇಶ ಕಟ್ಟಬಲ್ಲನು ಸರ್.ಎಂ.ವಿ.ರವರನ್ನು ನೋಡಿದರೆ ತಿಳಿಯುತ್ತದೆ ಎಂದು ಹೇಳಿದರು. ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪುರಸ್ಕೃತರಾದ ಇಂಜನಿಯರ್‌ಗಳಾದ ಎ.ಬಿ.ಡೊಡ್ಡಯ್ಯ, ಲೋಕೇಶ್ ಎಂ., ವಿಜಯಕುಮಾರ್ ಹರಿದಾಸ್, ಗಿರೀಶ್ ಬಿ.ಎನ್., ರಾಜೇಶ್ ಎಸ್.ವಿ, ರವಿ ಕೆ.ಜಿ, ರಂಗನಾಥ್ ಎಸ್.ಟಿ, ಸುಧಾಕರ್ ರೆಡ್ಡಿ, ಬಾಲಾಜಿ ಎಂ.ಪಿ ಶ್ರೀಮತಿ ನಿತ್ಯ ಜೆ, ರವಿಕುಮಾರ್, ತಿಪ್ಪೇಶ್ ಹೆಚ್.ಕೆ., ಶ್ರೀಮತಿ ಫರ್ಜಾನಾ ಎಂ, ಶ್ರೀಮತಿ ರೇಖಾ ಎಂ.ಎಸ್.ಮಂಜೇಗೌಡ ಕೆ, ರಾಕೇಶ್ ಯಾದವ್ ರವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಸಂಘದ ಪದಾಧಿಕಾರಿಗಳು, ಇಂಜನಿಯರ್‌ಗಳು ಭಾಗವಹಿಸಿದ್ದರು.

> **ಸರ್.ಎಂ.ವಿ.ಅವರ ಸಾಧನೆ, ಉಪಕಾರ, ಶಿಸ್ತು ಎಲ್ಲವನ್ನು ಇಂದು ನಾವು ನೆನಸಿಕೊಳ್ಳುತ್ತೇವೆ. ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಸಾಗಬೇಕು. ಗುಂಡಿಮುಕ್ತ, ಕಸ ಮುಕ್ತ ಮತ್ತು ಸಮರ್ಪಕ ಬೀದಿ ದೀಪ ವ್ಯವಸ್ಥೆಗಳು ಕುರಿತು ಸಾರ್ವಜನಿಕರು ಹೇಳುತ್ತಾರೆ. ಇಂಜನಿಯರ್‌ಗಳು ಪ್ರತಿದಿನ ತಮ್ಮ ಏರಿಯವನ್ನು ಪ್ರದಕ್ಷಿಣೆ ಹಾಕಿ ಯಾರನ್ನ ಕಾಯದೇ ಕೆಲಸದಲ್ಲಿ ಮಗ್ನನಾಗಿ ಸಮಸ್ಯೆ ಬಗೆಹರಿಸಬೇಕು. ಪ್ರತಿಯೊಬ್ಬ ಇಂಜನಿಯರ್ ಸರ್.ಎಂ.ವಿ.ಯಾಗಬೇಕು. ನಮ್ಮ ನಗರ, ನಮ್ಮ ದೇಶವನ್ನು ನಾವುಗಳು ಕಟ್ಟಿಕೊಳ್ಳಬೇಕು ಆಗ ವಿದೇಶಕ್ಕೆ ಹೋಗುವ ಬದಲು ದೇಶದಲ್ಲಿಯೆ ಜನರು ನೆಲಸುತ್ತಾರೆ**
>
> **ಡಾ.ಬಿ.ಎಸ್.ಪ್ರಹ್ಲಾದ್**

> **ಅಂದು ನಾನು ಆಯುಕ್ತರಾಗಿದ್ದ ಸಂದರ್ಭದಲ್ಲಿ ನಗರ ಮಳೆಯಿಂದ ಬೊಮ್ಮನಹಳ್ಳಿ ಸುರಿದ ಮಳೆಯಿಂದ ಬಾರಿ ಆನಾಹುತವಾಗಿತ್ತು ಕೊಳಚೆ ನೀರು ನಿಂತು ಸಾರ್ವಜನಿಕರು ಸಂಕಷ್ಟ ಆನುಭವಿಸುತ್ತಿದ್ದರು ಇಡಿ ರಾತ್ರಿ ಇಂಜನಿಯರ್ ಶ್ರಮಪಟ್ಟು ಕಾರ್ಯನಿರ್ವಹಿಸಿದರು. ಸರ್.ಎಂ.ವಿ.ರವರು 13ವರ್ಷದವಾಗಿದ್ದ ಸಂದರ್ಭದಲ್ಲಿ ಅವರ ತಂದೆ ಅಕಾಲಿಕ ಮೃತಪಟ್ಟರು ಅದರು ಧೃತಿಗೆಡದೆ ಶಿಕ್ಷಣ ಮುಂದುವರೆಸಿದರು. ಸರ್.ಎಂ.ವಿ.101ವರ್ಷ ಬದುಕಿದ್ದರು. ಅಷ್ಟು ವರ್ಷ ಶಿಸ್ತುಬದ್ಧ ಜೀವನ ನಡೆಸಿದರು.**
>
> **ಎನ್.ಮಂಜುನಾಥ್ ಪ್ರಸಾದ್**

ಉದಯ ವಾಹಿನಿ

ಪ್ರಾದೇಶಿಕ

ಮಂಗಳವಾರ 16 ಸೆಪ್ಟೆಂಬರ್ 2025 | 03

# ರಾಣಿ ಅಬ್ಬಕ್ಕ ದೇಶದ ಹೆಮ್ಮೆ: ಸಂಸದ ಡಾ. ಸಿ.ಎನ್. ಮಂಜುನಾಥ್

• ಉದಯವಾಹಿನಿ, ರಾಮನಗರ

ರಾಣಿ ಅಬ್ಬಕ್ಕ ಈ ದೇಶದ ಹೆಮ್ಮೆ, ಅವರ ಧೈರ್ಯ ಹಾಗೂ ಶೌರ್ಯವುಯುವಜನರಿಗೆ ಮಾರ್ಗದರ್ಶಿಯಾಗಿದೆ. ಅವರು ಕೇವಲ ತುಳುನಾಡಿಗೆ ಮಾತ್ರ ಸೀಮಿತವಲ್ಲ. 500 ವರ್ಷಗಳ ಹಿಂದೆ ತುಳುನಾಡಿನ ಮೇಲೆ ಆಕ್ರಮಣ ಮಾಡಿದ ಪೋರ್ಚುಗೀಸರ ಮೇಲೆ ಅಬ್ಬಕ್ಕ ಯುದ್ಧ ಮಾಡುವ ಮೂಲಕ ಅದಮ್ಯ ದೇಶಭಕ್ತಿ ತೋರಿದರು' ಎಂದು ಸಂಸದ ಡಾ. ಸಿ.ಎನ್. ಮಂಜುನಾಥ್ ಬಣ್ಣಿಸಿದರು. ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ರಾಮನಗರದ ಬಿಜಿಎಸ್ ಪದವಿ ಪೂರ್ವ ಕಾಲೇಜು ಆವರಣದಲ್ಲಿ ರಾಣಿ ಅಬ್ಬಕ್ಕ ದೇವಿ ರಥಯಾತ್ರೆಗೆ ಸ್ವಾಗತ ಕಾರ್ಯಕ್ರಮದಲ್ಲಿ


ಉದಯವಾಹಿನಿ ಚಿತ್ರ

ಪಾಲ್ಗೊಂಡು, ಅಬ್ಬಕ್ಕ ಮೂರ್ತಿಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

'ಮಹಿಳೆಯರು ಸಮಾಜದಲ್ಲಿ ನಾಯಕತ್ವ ಬೆಳೆಸಿಕೊಳ್ಳಲು ಅಬ್ಬಕ್ಕನ ಶಕ್ತಿ ಮತ್ತು ಧೈರ್ಯವೇ ಪ್ರೇರಣಾದಾಯಕ ದಾರಿದೀಪ. ಇಂದಿನ ಯುವಜನತೆ ಅಬ್ಬಕ್ಕನ ಕಥೆಗಳಿಂದ ರಾಷ್ಟ್ರನಿಷ್ಠೆ, ಸ್ವಾಭಿಮಾನ ಧೈರ್ಯಗಳನ್ನು ಕಲಿತುಕೊಳ್ಳಬೇಕಾಗಿದೆ. ಅಬ್ಬಕ್ಕನ ಶೌರ್ಯವನ್ನು ಶಾಲೆ-ಕಾಲೇಜು ಪಠ್ಯಕ್ರಮಗಳಲ್ಲಿ ಅಳವಡಿಸಿ ಯುವಜನರಲ್ಲಿ ದೇಶಭಕ್ತಿಯ ಕಿಚ್ಚು ಮೊಳಗಿಸಬೇಕು' ಎಂದರು.

'ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ದೇಶದ ಅತಿ ದೊಡ್ಡ ವಿದ್ಯಾರ್ಥಿ ಸಂಘಟನೆಯಾಗಿದೆ. ಸದಾ ರಾಷ್ಟ್ರಭಕ್ತಿ, ಶೌರ್ಯ ಮತ್ತು ಸಮಾಜ ಸೇವೆಯ ಮೌಲ್ಯಗಳನ್ನು ಯುವಜನರಲ್ಲಿ ಬೆಳೆಸುವ ಕಾರ್ಯ ಮಾಡುತ್ತಿದೆ. ರಾಣಿ ಅಬ್ಬಕ್ಕ ರಥಯಾತ್ರೆ ಮೂಲಕ ವಿದ್ಯಾರ್ಥಿಗಳಿಗೆ ಇತಿಹಾಸದ ಅರಿವು, ದೇಶದ ಗೌರವ ಮತ್ತು ರಾಷ್ಟ್ರೀಯ ಏಕತೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಆದಿಚುಂಚನಗಿರಿ ರಾಮನಗರ ಶಾಖಾ ಮಠದ ಅನ್ನದಾನೇಶ್ವರನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ರಾಮನಗರ ಜಿಲ್ಲಾ ಬಿಜೆಪಿ ಅಧ್ಯಕ್ಷ ಆನಂದಸ್ವಾಮಿ, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕರ್ನಾಟಕ ದಕ್ಷಿಣ ಪ್ರಾಂತ ಕಾರ್ಯದರ್ಶಿ ಪ್ರವೀಣ್ ಎಚ್.ಕೆ.. ರಥಯಾತ್ರೆ ಸಂಚಾಲಕ ಯಶವಂತ್, ಸಹ ಸಂಚಾಲಕ ಜ್ಞಾನ, ಮಂದಾರ, ಅಂಬಣ್ಣ, ಆಕಾಶ್, ಸುಹಾಸ್ ಹಾಗೂ ಇತರರು ಇದ್ದರು.

# ದಸರೆ ಸ್ತಬ್ಧಚಿತ್ರಗಳಲ್ಲಿ ಗಾಂಧಿ ಪಥ

## ಮೊದಲ ಬಾರಿಗೆ ಎಚ್‌ಎಎಲ್ ಭಾಗಿ, ರೈಲ್ವೆ ಇಲಾಖೆಯಿಂದ ಲಿಫ್ಟ್ ಸೇತುವೆ

• ಉದಯವಾಹಿನಿ, ಮೈಸೂರು

ವಿಜಯದಶಮಿ ದಿನ ಅರಮನೆಯಿಂದ ಹೊರಡುವ ಮೆರವಣಿಗೆಯಲ್ಲಿ ಈ ಬಾರಿ 50 ಸ್ತಬ್ಧಚಿತ್ರಗಳು ಭಾಗವಹಿಸಲಿದ್ದು, ಗಾಂಧಿ ಸ್ಮರಣೆ, ಭಾರತದ ಮೊದಲ ಲಿಫ್ಟ್ ಸೇತುವೆ , ಬ್ರ್ಯಾಂಡ್ ಬೆಂಗಳೂರು ಯೋಜನೆ ಹಾಗೂ ಬಸವಣ್ಣನವರ ಬಾಗೇವಾಡಿಯ ವೈಭವ ಸಾರುವ ಸ್ತಬ್ಧ ಚಿತ್ರಗಳು ಪ್ರಮುಖ ಆಕರ್ಷಣೆ ಆಗಲಿವೆ. ನಾಡಹಬ್ಬ ದಸರೆಯ ಅಂತಿಮ ದಿನ ಜಂಬೂಸವಾರಿ ಮೆರವಣಿಗೆಯಲ್ಲಿ ಜಾನಪದ ಕಲಾತಂಡಗಳು, ಅಶ್ವಾರೋಹಿ, ಪೊಲೀಸ್ ತಂಡ, ಎನ್‌ಸಿಸಿ, ಸ್ಕೌಟ್ಸ್ ಆ್ಯಂಡ್ ಗೈಡ್ಸ್ ತಂಡಗಳೂ ಭಾಗವಹಿಸಲಿವೆ. ಈ ಬಾರಿ ಮೈಸೂರು ಸೇರಿದಂತೆ ರಾಜ್ಯದ 31 ಜಿಲ್ಲಾ ಪಂಚಾಯಿತಿಗಳು ಮತ್ತು ವಿವಿಧ ಇಲಾಖೆ, ಕೇಂದ್ರ ಸರಕಾರದ್ದು ಸೇರಿದಂತೆ ಒಟ್ಟು 50 ಸ್ತಬ್ಧಚಿತ್ರಗಳು ಇರಲಿವೆ.

ಪ್ರತಿ ವರ್ಷದಂತೆ ಈ ಬಾರಿಯೂ ಸ್ತಬ್ಧಚಿತ್ರಗಳ ನಿರ್ಮಾಣಕ್ಕೆ ಮೈಸೂರಿನ ಬಂಡಿಪಾಳ್ಯದಲ್ಲಿರುವ ಎಪಿಎಂಸಿ ಆವರಣದಲ್ಲಿ ಅವಕಾಶ ಕಲ್ಪಿಸಲಾಗಿದೆ. ಜಿಪಂಗಳು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ, ಕೆಎಂಎಫ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ನೇತೃತ್ವದಲ್ಲಿಸ್ತಬ್ಧ ಚಿತ್ರಗಳು ನಿರ್ಮಾಣವಾಗಲಿದ್ದು, 10 ದಿನದೊಳಗೆ ನಿರ್ಮಾಣ ಕಾರ್ಯ ಪೂರ್ಣಗೊಳಿಸುವಂತೆ ಸೂಚನೆ ನೀಡಲಾಗಿದೆ.

ಪ್ರವಾಸಿಗರು, ಸಾರ್ವಜನಿಕರನ್ನು ಆಕರ್ಷಿಸಲು ಉತ್ತಮ ರೀತಿಯಲ್ಲಿಸ್ತಬ್ಧಚಿತ್ರ ತಯಾರಿಸಲಾಗುತ್ತಿದೆ. ಆಯಾ ಜಿಲ್ಲೆಯ ಪ್ರಾಕೃತಿಕ, ಭೌಗೋಳಿಕ, ಐತಿಹಾಸಿಕ ವಿಶೇಷತೆಯನ್ನೊಳಗೊಂಡ


ಉದಯವಾಹಿನಿ ಚಿತ್ರ

ಸ್ತಬ್ಧಚಿತ್ರವನ್ನು ಪ್ರದರ್ಶಿಸಲು ಸಮಿತಿ ತೀರ್ಮಾನಿಸಿದೆ.

**ಈ ಬಾರಿ ಗಾಂಧಿ ಸ್ಮರಣೆ:** ಈ ಬಾರಿ ಗಾಂಧಿ ಜಯಂತಿ ದಿನವೇ (ಅ. 2ರಂದು) ವಿಜಯದಶಮಿ ಬಂದಿದೆ. ಹೀಗಾಗಿ ಮಹಾತ್ಮ ಗಾಂಧೀಜಿ ಭೇಟಿ ನೀಡಿದ ಸ್ಥಳ, ಸಭೆ ಮಾಡಿರುವ ಘಟನಾವಳಿಗಳಿದ್ದರೆ ಅದಕ್ಕೆ ಪ್ರಾಮುಖ್ಯತೆ ನೀಡಲು ಸಮಿತಿ ಸೂಚನೆ ನೀಡಿದೆ. ಮೈಸೂರು ಜಿಲ್ಲೆಯ ನಂಜನಗೂಡಿನ ಬದನವಾಳು ಗ್ರಾಮಕ್ಕೆ ಗಾಂಧೀಜಿ 1927ರಲ್ಲಿಭೇಟಿ ನೀಡಿದ್ದರು. ಮೂರು ದಿನಗಳ ಇಲ್ಲಿ ವಾಸ್ತವ್ಯ ಹೂಡಿ ಸುತ್ತಲಿನ ಜನರಿಗೆ ಗುಡಿ ಕೈಗಾರಿಕೆ ಆರಂಭಿಸಲು ಪ್ರೇರಣೆ ನೀಡಿದ್ದರು. ಹಾಗಾಗಿ ಮೈಸೂರು, ಮಂಡ್ಯ ಜಿಲ್ಲೆಯ ಸ್ತಬ್ಧಚಿತ್ರ ಈ ಬಗ್ಗೆ ಬೆಳಕು ಚೆಲ್ಲಲಿವೆ.

**'ಶಕ್ತಿ' ಗಿನ್ನೆಸ್ ದಾಖಲೆ**

ರಾಜ್ಯ ಸರಕಾರದ ಶಕ್ತಿ ಯೋಜನೆಯಿಂದ 500 ಕೋಟಿ ಮಹಿಳೆಯರು ಉಚಿತವಾಗಿ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಪ್ರಯಾಣ ಬೆಳೆಸಿದ್ದಾರೆ. ಇದು ಗಿನ್ನೆಸ್ ದಾಖಲೆಯೂ ಆಗಿದೆ. ಹೀಗಾಗಿ ಈ ಬಾರಿ ಕೆಎಸ್‌ಆರ್‌ಟಿಸಿ ವತಿಯಿಂದ 'ಶಕ್ತಿ' ಯೋಜನೆ 500 ಕೋಟಿ ಟಿಕೆಟ್ ನೀಡಿರುವ ಬಗ್ಗೆ ಮಾಹಿತಿ ನೀಡುವ ಸ್ತಬ್ಧಚಿತ್ರ ಇರಲಿದೆ. ಇದರೊಂದಿಗೆ ಧಾರವಾಡದಿಂದ 'ರಾಷ್ಟ್ರಧ್ವಜ ತಯಾರಿಕೆ' ಬಗ್ಗೆ ತಿಳಿಸುವ ಹಾಗೂ ವೀರ ಮದಕರಿ ನಾಯಕನ ಸಾಹಸ ಸಾರಿರುವ ಸ್ತಬ್ಧಚಿತ್ರವೂ ಸಿದ್ಧವಾಗುತ್ತಿದೆ.

**ಶಿವಪುರ ಧ್ವಜ ಸತ್ಯಾಗ್ರಹ**

**ಇದೇ ಮೊದಲ ಬಾರಿಗೆ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್) ಸ್ತಬ್ಧಚಿತ್ರ ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿಸಾಗಿಬರಲಿದೆ. ಏರೋನಾಟಿಕ್‌ನ ನಾನಾ ಮಾಡೆಲ್‌ಗಳನ್ನು ಪರಿಚಯಿಸಲಾಗುತ್ತಿದೆ. ಇದರೊಂದಿಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿವಿ ಸ್ತಬ್ಧಚಿತ್ರವೂ ಇದೇ ಪ್ರಥಮ ಬಾರಿಗೆ ಪ್ರದರ್ಶನಗೊಳ್ಳಲಿದೆ. ರಾಮೇಶ್ವರಂನಲ್ಲಿಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದ ಭಾರತದ ಮೊದಲ ಲಿಫ್ಟ್ ಸೇತುವೆ, ಎಚ್‌ಎಂಟಿ, ಲಿಡ್ಕರ್, ರೈಲ್ವೆ, ಕೆಎಂಎಫ್, ಆರೋಗ್ಯ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಸೇರಿ ವಿವಿಧ ಇಲಾಖೆಗಳಿಂದ ತಲಾ ಒಂದು ಸ್ತಬ್ಧಚಿತ್ರ ಇರಲಿವೆ.**

# ಬೈಪಾಸ್ ಗಣೇಶನ ಅದ್ದೂರಿಯ ಗಂಗಾ ವಿಲೀನ

• ಉದಯವಾಹಿನಿ, ಗೌರಿಬಿದನೂರು

ನಗರದ ಬೈಪಾಸ್‌ನಲ್ಲಿ ಪ್ರತಿಷ್ಠಾಪಿಸಿದ್ದ ರುದ್ರ ಮಹಾಗಣಪತಿಯ ವಿಸರ್ಜನೆ ಗಂಗಾ ವಿಲೀನವು ಅಪಾರ ಭಕ್ತರ ನಡುವೆ ಅದ್ದೂರಿಯಾಗಿ ನಡೆಯಿತು. ಬೈಪಾಸ್ ಗಣೇಶ ಎಂದೇ ಪ್ರಸಿದ್ಧಿ ಪಡೆದಿರುವ ಈ ಗಣೇಶ ಮೂರ್ತಿಯನ್ನು ಕಳೆದ 22 ವರ್ಷದಿಂದ ಪ್ರತಿಷ್ಠಾಪಿಸಲಾಗುತ್ತಿದೆ. ಈ ಬಾರಿ 22ನೇ ವರ್ಷದ ಉತ್ಸವವಾದ ಕಾರಣ 22 ಅಡಿ ಎತ್ತರದ ಪ್ರಣವ ರುದ್ರ ಮಹಾ ಗಣಪತಿಯನ್ನು ಪ್ರತಿಷ್ಠಾಪಿಸಲಾಗಿತ್ತು. ನಗರದ ಪ್ರಮುಖ ಬೀದಿಗಳಲ್ಲಿ ವಿಸರ್ಜನಾ ಮೆರವಣಿಗೆ ಪ್ರಾರಂಭ



ಆಗುತ್ತಿದ್ದಂತೆ ಅಪಾರ ಸಂಖ್ಯೆಯ ಭಕ್ತರು ಹರಿದು ಬಂದರು. ಚಿಕ್ಕಬಳ್ಳಾಪುರ ರಸ್ತೆಯ ದರ್ಗಾ ಮುಂಭಾಗ, ಗಾಂಧಿ ವೃತ್ತ, ಬಿ.ಆರ್ ಅಂಬೇಡ್ಕರ್ ವೃತ್ತ, ಬಿ.ಎಚ್. ರಸ್ತೆ, ನಾಗಯ್ಯರೆಡ್ಡಿ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ನಾಗಪ್ಪ ಬ್ಲಾಕ್, ಬೈಪಾಸ್‌ನಲ್ಲಿ ಮೆರವಣಿಗೆ ಸಾಗಿತು. ಸಹಸ್ರಾರು ಜನರು ರಸ್ತೆಗಳಲ್ಲಿ ಕಿಕ್ಕಿರಿದು ಸೇರಿದ್ದರು. ಗಣೇಶನ ಘೋಷಣೆಗಳನ್ನು ಕೂಗುತ್ತಾ ಕುಣಿದು ಕುಪ್ಪಳಿಸಿದರು. ವಿಶೇಷವಾಗಿ ಕಾಲೇಜು ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದು ಅವರ ನೃತ್ಯ ನೋಡುಗರ ಕಣ್ಮನ ಸೆಳೆಯಿತು.

ವಿವಿಧ ಕಲಾ ತಂಡಗಳು ಮೆರವಣಿಗೆಗೆ ಮೆರುಗು ತುಂಬಿದವು. ದರ್ಗಾ, ಮಸೀದಿ ಮುಂಭಾಗ ಗಣೇಶನ ಮೆರವಣಿಗೆ ತಲುಪುತ್ತಿದ್ದಂತೆ ಮುಸ್ಲಿಮರು ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ದರು. ಮೆರವಣಿಗೆಯಲ್ಲಿ ಶಾಸಕ ಕೆ.ಎಚ್ ಪುಟ್ಟಸ್ವಾಮಿ ಗೌಡ, ಸಂಸದ ಡಾ.ಕೆ. ಸುಧಾಕರ್, ಬಿಜೆಪಿ ಮುಖಂಡ ರವಿನಾರಾಯಣ ರೆಡ್ಡಿ, ಜೆಡಿಎಸ್ ಮುಖಂಡ ನರಸಿಂಹ ಮೂರ್ತಿ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದರು.

# ಬುಡಕಟ್ಟು ಸಂಸ್ಕೃತಿ ಗೌರವಿಸಿ, ಕಂದಾಚಾರದಿಂದ ಹೊರಬನ್ನಿ: ಸತ್ಯಭಾಮ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಪಾವಗಡ

ಗೊಲ್ಲ ಸಮುದಾಯದ ಜನತೆ ತಮ್ಮ ಬುಡಕಟ್ಟು ಸಂಸ್ಕೃತಿಯನ್ನು ಗೌರವಿಸಬೇಕು. ಆದರೆ ಮೌಢ್ಯ, ಕಂದಾಚಾರ ಆಚರಣೆಗಳಿಂದ ಹೊರಬಂದು ಅಭಿವೃದ್ಧಿಯತ್ತ ಸಾಗಬೇಕು ಎಂದು ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಸತ್ಯಭಾಮ ತಿಳಿಸಿದರು.

ಪಟ್ಟಣದ ಎಸ್‌ಎಸ್ ಸಮುದಾಯ ಭವನದಲ್ಲಿ ನಡೆದ ಕಾಡುಗೊಲ್ಲ ಯುವಸೇನೆ ಸಂಘದ ಉದ್ಘಾಟನೆ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಆಧುನಿಕ ಕಾಲದಲ್ಲಿಯೂ ಸಮುದಾಯದ ಜನರು ಹಳೆಯ ಪದ್ಧತಿ, ಆಚರಣೆಗೆ ಜೋತು ಬಿದ್ದು ಹೆಣ್ಣು ಮಕ್ಕಳನ್ನು ಶಾಲಾ, ಕಾಲೇಜಿಗೆ ಕಳುಹಿಸದೆ ಮನೆಕೆಲಸಕ್ಕೆ ಸೀಮಿತಗೊಳಿಸುತ್ತಿರುವುದು ವಿಷಾದನೀಯ.

**ವನಕಲ್ಲು ಪೀಠಾಧ್ಯಕ್ಷ ಬಸವ ರಮಾನಂದ ಸ್ವಾಮೀಜಿ ಮಾತನಾಡಿ, ಗೊಲ್ಲ ಸಮುದಾಯದ ಜನತೆ ಶಿಕ್ಷಣ, ಸಂಘಟನೆ, ಹೋರಾಟದ ಅಸ್ತ್ರಗಳ ಮೂಲಕ ಅಭಿವೃದ್ಧಿಯತ್ತ ಹೆಜ್ಜೆ ಹಾಕಬೇಕು. ರಾಜ್ಯ ಸೇರಿದಂತೆ ದೇಶದಲ್ಲಿರುವ ಗೊಲ್ಲರಟ್ಟಿಗಳಲ್ಲಿ ಅಭಿವೃದ್ಧಿ ಇಂದಿಗೂ ಮರೀಚಿಕೆಯಾಗಿದೆ. ಸ್ವಾತಂತ್ರ ಬಂದು ದಶಕಗಳು ಕಳೆದರೂ ಇನ್ನೂ ಬಯಲು ಶೌಚವನ್ನು ಜನಾಂಗದವರು ಬಳಸುತ್ತಿದ್ದಾರೆ ಎಂದರು.**

ಸಮುದಾಯದ ಜನರಿಗೆ ಶಿಕ್ಷಣವೇ ಶಕ್ತಿ ಎಂಬುದನ್ನು ಅರಿತು ತಮ್ಮ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೋಷಕರು ಶ್ರಮಿಸಬೇಕು. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದಾಗ ಸಮುದಾಯಕ್ಕೆ ಸಾಮಾಜಿಕ, ಆರ್ಥಿಕ, ರಾಜಕೀಯ ಮನ್ನಣೆ ಸಿಗಲಿದೆ ಎಂದರು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ 80ಕ್ಕಿಂತ ಹೆಚ್ಚಿನ ಅಂಕ ಪಡೆದ 95ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸತ್ಕರಿಸಲಾಯಿತು.

# ಅರಸು ಜಯಂತಿ ಯಶಸ್ವಿಗೊಳಿಸಿ: ಶಿವಕುಮಾರ ಚೌಡಶೆಟ್ಟಿ ಮನವಿ

• ಉದಯವಾಹಿನಿ, ರಾಮನಗರ

ಜಿಲ್ಲಾ ದಲಿತ, ಜಿಲ್ಲಾ ಹಿಂದುಳಿದ ಜಾತಿಗಳ ಮಹಾ ಒಕ್ಕೂಟದ ವತಿಯಿಂದ ಸೆ. 19ರಂದು ರಾಮನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿರುವ ಮಾಜಿ ಮುಖ್ಯಮಂತ್ರಿ ಡಿ. ದೇವರಾಜು ಅರಸು ಅವರ 110ನೇ ವರ್ಷದ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಕುಂಬಾರ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ಸುಗೊಳಿಸಬೇಕು' ಎಂದು ಅಖಿಲ ಭಾರತ ಕುಂಬಾರ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಡಾ. ಶಿವಕುಮಾರ ಚೌಡಶೆಟ್ಟಿ ಮನವಿ ಮಾಡಿದರು.

ಈ ಸಲ ಅರಸು ಜಯಂತಿಯನ್ನು ಎಲ್ಲಾ ಹಿಂದುಳಿದ ಸಮುದಾಯಗಳನ್ನು ಒಳಗೊಂಡು ವಿಶೇಷವಾಗಿ ಮತ್ತು ಅದ್ದೂರಿಯಾಗಿ ಆಚರಿಸಲಾಗುತ್ತಿದೆ. ಅಂದು ಮಾಗಡಿ ರಸ್ತೆಯ ಕೆಂಪೇಗೌಡ ವೃತ್ತದಿಂದ ನಡೆಯುವ ಮೆರವಣಿಗೆಯಲ್ಲಿ ಕುಂಬಾರ ಸಮುದಾಯದ ಮಹಿಳೆಯರು ಕಳಸದ ಕುಂಭ ಹೊತ್ತು ಮೆರವಣಿಗೆಯಲ್ಲಿ ಸಾಗಲಿದ್ದಾರೆ' ಎಂದು ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

'ಜಿಲ್ಲೆಯಲ್ಲಿ ಕುಂಬಾರ ಸಮುದಾಯದ ಜನಸಂಖ್ಯೆ ಸುಮಾರು 22 ಸಾವಿರ ಇದೆ. ಕಾರ್ಯಕ್ರಮದಲ್ಲಿ ಕನಿಷ್ಠ ಐದು ಸಾವಿರ ಮಂದಿ ಭಾಗಿಯಾಗಲಿದ್ದಾರೆ.


ಉದಯವಾಹಿನಿ ಚಿತ್ರ

ಆ ಮೂಲಕ ದೇವರಾಜ ಅರಸು ಅವರ ಜಯಂತಿ ಕಾರ್ಯಕ್ರಮಕ್ಕೆ ವಿಶೇಷ ಮೆರಗು ತರಲಿದ್ದಾರೆ. ಆ ಮೂಲಕ, ಹಿಂದುಳಿದ ಸಮುದಾಯಗಳ ಒಗ್ಗಟ್ಟು ಪ್ರದರ್ಶನಕ್ಕೆ ಕಾರ್ಯಕ್ರಮ ವೇದಿಕೆಯಾಗಲಿದೆ' ಎಂದರು. ಮಹಾಸಭಾದ ರಾಜ್ಯಾಧ್ಯಕ್ಷ ನಿತ್ಯಾಭರಣ ಚೌಡಶೆಟ್ಟಿ ಮಾತನಾಡಿ, ಸುಮುದಾಯವು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕಕಾಗಿ, ರಾಜಕೀಯ ಹಾಗೂ ಔದ್ಯೋಗಿಕವಾಗಿ ಹಿಂದುಳಿದಿದೆ. ಅರಸು ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಉಪ ಮುಖ್ಯಮಂತ್ರಿ ಸೇರಿದಂತೆ ಸಚಿವರಿಗೆ ಸಮುದಾಯದ ಸಮಸ್ಯೆಗಳನ್ನು ಗಮನಕ್ಕೆ ತಂದು ಮನವಿ ಸಲ್ಲಿಸಲಾಗುವುದು' ಎಂದು ತಿಳಿಸಿದರು.

**ಹಿಂದುಳಿದ ಜಾತಿಗಳ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷ ರೈಡ್ ನಾಗರಾಜ್ ಮಾತನಾಡಿ, ನಮ್ಮ ಒಕ್ಕೂಟದ ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾಗಿ ಶಶಿಕಲಾ ಚೌಡಶೆಟ್ಟಿ ಅವರನ್ನು ಆಯ್ಕೆ ಮಾಡಲಾಗಿದೆ. ಅರಸು ಜಯಂತಿ ಕಾರ್ಯಕ್ರಮದ ದಿನವೇ ಪದಗ್ರಹಣ ಸಹ ನಡೆಯಲಿದೆ. ಕಾರ್ಯಕ್ರಮಕ್ಕೆ ಎಲ್ಲಾ ಸಮುದಾಯದ ಜನರು, ಮುಖಂಡರು ಬೆಂಬಲ ನೀಡಿ ಯಶಸ್ಸಿಗೆ ದುಡಿಯುತ್ತಿದ್ದಾರೆ' ಎಂದರು.**

# ಸೌಕರ್ಯ ವೃದ್ಧಿಸಿಕೊಂಡು ಸೇವೆ ವಿಸ್ತರಿಸಿ: ಡಾ.ಬಿ. ದಿನೇಶ್

• ಉದಯವಾಹಿನಿ, ಮೈಸೂರು

ಭವಿಷ್ಯದಲ್ಲಿ ಹೆಚ್ಚಾಗುವ ಜನಸಂಖ್ಯೆ ಗಮನದಲ್ಲಿಟ್ಟುಕೊಂಡು, ಎಲ್ಲರಿಗೂ ಚಿಕಿತ್ಸೆ ದೊರಕಿಸಿಕೊಡಲು ಜಿಲ್ಲೆಗಳಲ್ಲಿಯೂ ಸೆಟಲೈಟ್ ಹೃದ್ರೋಗ ಕೇಂದ್ರ ಆರಂಭಿಸಲಾಗುವುದು ಎಂದು ಜಯದೇವ ಹೃದ್ರೋಗ, ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಬಿ. ದಿನೇಶ್ ತಿಳಿಸಿದರು. ಇಲ್ಲಿನ ಸುತ್ತೂರು ಶಾಖಾ ಮಠದಲ್ಲಿ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿದರು.

2040ರ ವೇಳೆಗೆ ಜನಸಂಖ್ಯೆಯು ಶೇ 15ರಷ್ಟು ಹೆಚ್ಚಾಗುತ್ತದೆ. ಆ ನಿಟ್ಟಿನಲ್ಲಿ ಸಂಸ್ಥೆಯು ಅಗತ್ಯ ಮೂಲಸೌಕರ್ಯ ವೃದ್ಧಿಸಿಕೊಂಡು ಸೇವೆ ವಿಸ್ತರಿಸಿಕೊಳ್ಳಬೇಕಿದೆ. ಜೊತೆಗೆ, ಪ್ರತಿ ಜಿಲ್ಲೆಗೊಂದು ಸೆಟಲೈಟ್ ಸೆಂಟರ್ ಮಾಡಲು ಪ್ರಯತ್ನಿಸಲಾಗುತ್ತಿದೆ. ಈ ಬಗ್ಗೆ ಸರ್ಕಾರದಿಂದ ಅನುಮೋದನೆ ಪಡೆದು


ಉದಯವಾಹಿನಿ ಚಿತ್ರ

ಸದ್ಯದಲ್ಲಿ ಕಾರ್ಯರೂಪಕ್ಕೆ ತರಲಾಗುವುದು' ಎಂದರು. ರಾಜ್ಯದಾದ್ಯಂತ ಪುನೀತ್ ರಾಜ್ ಕುಮಾರ್ ಸ್ಮೈಮಿ ಯೋಜನೆ ಜಾರಿಯಲ್ಲಿದೆ. ಇದರಿಂದ ತಾಲ್ಲೂಕು ಹಂತದಲ್ಲಿಯೇ ಹೃದ್ರೋಗಕ್ಕೆ ಪ್ರಾಥಮಿಕ ಚಿಕಿತ್ಸೆ ನೀಡಲಾಗುತ್ತಿದೆ. ಇಲ್ಲಿ 'ಸ್ಟೆಪ್ರೊಕೈನಸ್ ಟೆನೆಕ್ಟಿವ್ ಪ್ಲಸ್ ಎಂಬ 2 ಚುಚ್ಚುಮದ್ದು ನೀಡುವ ಪ್ರಾಥಮಿಕ ಚಿಕಿತ್ಸೆ ಸಿಗುವಂತೆ ಮಾಡಲಾಗಿದೆ. ಇದರಿಂದ ತಾಲ್ಲೂಕು ಮಟ್ಟದಲ್ಲಿಯೇ ಗೋಲ್ಡನ್ ಅವರ್'ನಲ್ಲಿ ಚಿಕಿತ್ಸೆ ದೊರೆಯುತ್ತಿದೆ. ಇದರಿಂದ ಸಾವಿರಾರು ಹೃದ್ರೋಗಿಗಳ ಜೀವ ಉಳಿದಿದೆ.

**'ಮೈಸೂರಿನ ಜಯದೇವ ಆಸ್ಪತ್ರೆಗೆ ಐದು ಜಿಲ್ಲೆಗಳಿಂದ ಜನರು ಹೆಚ್ಚಾಗಿ ಬರುತ್ತಿದ್ದಾರೆ. ಅಲ್ಲದೇ ನೆರೆಯ ಕೇರಳ, ತಮಿಳುನಾಡಿನಿಂದಲೂ ರೋಗಿಗಳು ಬರುತ್ತಿದ್ದಾರೆ. ಆದರೆ ಇಲ್ಲಿ ಶೇ 20ರಷ್ಟು ವೈದ್ಯರು. ಶೇ 18ರಷ್ಟು ದಾದಿಯರು, ಶೇ. 15ರಷ್ಟು ಗ್ರೂಪ್ 'ಡಿ' ಸಿಬ್ಬಂದಿ ಕೊರತೆ ಇದೆ. ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲಾಗುವುದು. ಆಗ ಒಪಿಡಿ ಸೇವೆ ನೀಡುವಲ್ಲಿ ಆಗುತ್ತಿರುವ ವಿಳಂಬ ತಪ್ಪಲಿದೆ' ಎಂದು ತಿಳಿಸಿದರು.**

ಹಾಗಾಗಿ ಈ ಯೋಜನೆಯ ಮತ್ತಷ್ಟು ಬಲವರ್ಧನೆಗೆ ಕ್ರಮ ವಹಿಸಲಾಗುವುದು' ಎಂದು ಹೇಳಿದರು.

# ಕಾವೇರಿ ಆರತಿ ಕಾರ್ಯಕ್ರಮವನ್ನು ನಿಲ್ಲಿಸಲ್ಲ:ಡಿಸಿಎಂ

• ಉದಯವಾಹಿನಿ, ಮಳವಳ್ಳಿ

ಕೆಆರ್‌ಎಸ್ ಜಲಾಶಯದ ಬಳಿ ಕಾವೇರಿ ಆರತಿ ಕಾರ್ಯಕ್ರಮವನ್ನು ನಿಲ್ಲಿಸಲಾಗದು' ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ತಾಲ್ಲೂಕಿನ ಶಿವನಸಮುದ್ರ ಬಳಿ 'ಗಗನಚುಕ್ಕಿ ಜಲಪಾತೋತ್ಸವ'ದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. ಕಾವೇರಿ ಆರತಿಗೆ ವಿರೋಧ ವ್ಯಕ್ತಪಡಿಸಿ ರೈತ ಸಂಘದ ಕೆಲವರು ನ್ಯಾಯಾಲಯಕ್ಕೆ ಹೋಗಿದ್ದಾರೆ. ಆದರೆ ಪ್ರಕೃತಿ ಮಾತೆಗೆ ಪೂಜೆ, ಆರತಿ ಮಾಡುವುದನ್ನು ಯಾರಿಂದಲೂ ನಿಲ್ಲಿಸಲು ಸಾಧ್ಯವಿಲ್ಲ ಎಂದರು.

ಎರಡು ವರ್ಷಗಳಲ್ಲೇ ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ 2 ಸಾವಿರ ಕೋಟಿ ಅನುದಾನ ನೀಡಿದ್ದೇವೆ. ಇದುವರೆಗೆ 1,970 ಕೋಟಿ ಮೊತ್ತದ ಕಾಮಗಾರಿ ಮಂಜೂರಾಗಿವೆ. ಇದು ಸುಳ್ಳಾದರೆ ವಿರೋಧ ಪಕ್ಷದವರು ಬಂದು ಪರಿಶೀಲಿಸಲಿ ಎಂದು ಸವಾಲೆಸೆದರು. ಮಂಡ್ಯ, ಬೆಂಗಳೂರು ದಕ್ಷಿಣ



ಜಿಲ್ಲೆಗಳು ನನ್ನ ಕಣ್ಣುಗಳಿದ್ದಂತೆ. ರೈತರ ಬದುಕು ಸುಧಾರಣೆಗೆ ಹಾಗೂ ಅಭಿವೃದ್ಧಿಗೆ ಎಲ್ಲಾ ರೀತಿಯ ಕಾರ್ಯಕ್ರಮ ರೂಪಿಸಲು ಸರ್ಕಾರ ಬದ್ಧವಾಗಿದೆ' ಎಂದು ಹೇಳಿದರು.

# ಕೊಳ್ಳೇಗಾಲದಲ್ಲಿ ಜಿಲ್ಲಾ ಆಸ್ಪತ್ರೆಗೆ 5 ಎಕರೆ ಮಂಜೂರು

## ಶೀಘ್ರದಲ್ಲೇ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಭೂಮಿಯನ್ನು ಹಸ್ತಾಂತರಿಸುವ ಪ್ರಕ್ರಿಯೆ ನಡೆಯಲಿದೆ

• ಉದಯವಾಹಿನಿ, ಚಾಮರಾಜನಗರ

ಕೊಳ್ಳೇಗಾಲದಲ್ಲಿ ಸರಕಾರಿ ಜಿಲ್ಲಾ ಮಟ್ಟದ ಆಸ್ಪತ್ರೆ ನಿರ್ಮಾಣಕ್ಕಾಗಿ ಮುಡಿಗುಂಡದಲ್ಲಿನ ರೇಷ್ಮೆ ಇಲಾಖೆಯ 5 ಎಕರೆ ಭೂಮಿಯನ್ನು ಹಸ್ತಾಂತರಿಸಲು ಸರಕಾರದಿಂದ ಮಂಜೂರಾತಿ ದೊರೆತಿದೆ.

ಶೀಘ್ರದಲ್ಲೇ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಭೂಮಿಯನ್ನು ಹಸ್ತಾಂತರಿಸುವ ಪ್ರಕ್ರಿಯೆ ನಡೆಯಲಿದೆ. ಮುಡಿ ಗುಂಡದಲ್ಲಿರುವ ಒಟ್ಟು 16 ಎಕರೆ ರೇಷ್ಮೆ ಇಲಾಖೆ ಜಾಗದಲ್ಲಿ ಆಸ್ಪತ್ರೆ ನಿರ್ಮಾಣಕ್ಕೆ ಅಗತ್ಯವಿರುವ 5 ಎಕರೆಯನ್ನು ನೀಡಲು ಸೆ. 4ರಂದು ಮಂಜೂರಾತಿ ನೀಡಿರುವ ಕುರಿತು ರಾಜ್ಯಪಾಲರ ಆಜ್ಞಾನುಸಾರ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಸರಕಾರದ ಅಧೀನ ಕಾರ್ಯದರ್ಶಿ ಆದೇಶಿಸಿದ್ದಾರೆ.

**ಸಚಿವ ಸಂಪುಟ ಸಭೆ**

ಕೊಳ್ಳೇಗಾಲ ಪಟ್ಟಣಕ್ಕೆ ಜಿಲ್ಲಾ ಮಟ್ಟದ ಆಸ್ಪತ್ರೆ ಮಂಜೂರು ಮಾಡಿಸುವು ದರಿಂದ ಹಿಡಿದು, ಇದೀಗ ರೇಷ್ಮೆ ಇಲಾಖೆ ಜಾಗವನ್ನು ಆಸ್ಪತ್ರೆಗೆ ನೀಡುವುದರ


ಉದಯವಾಹಿನಿ ಚಿತ್ರ

ಹಿಂದೆ ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ಅವರ ಅವಿರತ ಪ್ರಯತ್ನ ಇದೆ. ಸದ್ಯ ಕೊಳ್ಳೇಗಾಲದಲ್ಲಿ ಉಪವಿಭಾಗ ಮಟ್ಟದ ಆಸ್ಪತ್ರೆ ಇದೆ. ಅಲ್ಲಿನ 150 ಹಾಸಿಗೆ ಸಾಮರ್ಥ್ಯ ಸಾಕಾಗುತ್ತಿಲ್ಲ. ಹಾಗಾಗಿ ಜಿಲ್ಲಾಮಟ್ಟದ ಆಸ್ಪತ್ರೆಯನ್ನು ಕೊಳ್ಳೇಗಾಲಕ್ಕೆ ಮಂಜೂರು ಮಾಡಿಕೊಡಬೇಕೆಂಬುದು ಶಾಸಕರ ಒತ್ತಾಯವಾಗಿತ್ತು.

ಹೀಗಾಗಿ ಶಾಸಕರ ಒತ್ತಡಕ್ಕೆ ಮಣಿದ ರಾಜ್ಯ ಸರಕಾರವು, ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಮಲೆ ಮಹದೇಶ್ವರಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೊಳ್ಳೇಗಾಲಕ್ಕೆ ಜಿಲ್ಲಾಮಟ್ಟದ ಆಸ್ಪತ್ರೆಯನ್ನು ನೀಡಿತ್ತು ಎಂಬುದು ಗಮನಾರ್ಹ. ಸದ್ಯ ತಹಶೀಲ್ದಾರ್ ನೇತೃತ್ವದಲ್ಲಿ ಭೂಮಿ ಪರಿಶೀಲಿಸಿ, ಮಂಜೂರಾಗಿರುವ ಭೂಮಿಯನ್ನು ಗುರುತಿಸಿಕೊಳ್ಳಬೇಕು. ಬಳಿಕ ಸ್ಥಳೀಯ ರೇಷ್ಮೆ ಇಲಾಖೆ ಮೂಲಕ ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆ ಹೆಸರಿಗೆ ಕ್ರಮಬದ್ಧವಾಗಿ ಹಸ್ತಾಂತರ ಪ್ರಕ್ರಿಯೆ ಪೂರ್ಣಗೊಳಿಸಿಕೊಳ್ಳಬೇಕು.

ಬಳಿಕ ಆರೋಗ್ಯ ಇಲಾಖೆ ಇಂಜಿನಿಯರಿಂಗ್ ವಿಭಾಗವೂ ಆಸ್ಪತ್ರೆ ನಿರ್ಮಾಣಕ್ಕೆ ಅಗತ್ಯವಾದ ಪ್ರಕ್ರಿಯೆ ಆರಂಭಿಸಬಹುದಾಗಿದೆ. ಈ ಎಲ್ಲಾ ಪ್ರಕ್ರಿಯೆಗಳು ಈ ವರ್ಷದೊಳಗೆ ಪೂರ್ಣಗೊಳ್ಳಲಿದೆ ಎಂಬುದು ಡಿಎಚ್‌ಒ ಡಾ. ಚಿದಂಬರ ಅವರ ವಿಶ್ವಾಸ.

**ಕೊಳ್ಳೇಗಾಲ ಕಸಬಾ ಹೋಬಳಿಯಾದ ಮುಡಿ ಗುಂಡದಲ್ಲಿ ರೇಷ್ಮೆ ಇಲಾಖೆಗೆ ಸೇರಿದ ಒಟ್ಟು 16 ಎಕರೆ ಭೂಮಿ ನಾನಾ ಸರ್ವೆ ನಂಬರ್‌ಗಳಲ್ಲಿಇದೆ. ಈ ಪೈಕಿ ರೇಷ್ಮೆ ಇಲಾಖೆ ಚಟುವಟಿಕೆಗಳು ಒಂದೆರಡು ಸರ್ವೆ ನಂಬರ್ ವ್ಯಾಪ್ತಿಯಲ್ಲಿ ನಡೆಯುತ್ತಿದೆ. ಹಾಗಾಗಿ ಯಾವುದೇ ಚಟುವಟಿಕೆ ನಡೆಯದೇ ನಿರುಪಯುಕ್ತ ವಾಗಿರುವ ಸರ್ವೆ ನಂ 52/ಎ, 52/ಬಿ, 52/ಸಿ, 52/ಡಿ ನಲ್ಲಿ 4.26 ಎಕರೆ ಹಾಗೂ ಸರ್ವೆ ನಂ 57 ರಲ್ಲಿ 0.14 ಎಕರೆ ಸೇರಿದಂತೆ ಒಟ್ಟು 5 ಎಕರೆ ಭೂಮಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ಜಿಲ್ಲಾಮಟ್ಟದ ಆಸ್ಪತ್ರೆ ನಿರ್ಮಾಣಕ್ಕಾಗಿ ಆರೋಗ್ಯ ಇಲಾಖೆಗೆ ಹಸ್ತಾಂತರಿಸಲು ಮಂಜೂರಾತಿ ನೀಡಿ ಸರಕಾರ ಆದೇಶಿಸಿದೆ.**

## ಮಿನಿ ನ್ಯೂಸ್

# ಈಶ್ವರನ ಮಾರ್ಗವೇ ಆತ್ಮ ಉನ್ನತಿಗೆ ದಾರಿ: ಬಿ .ಕೆ ಸರೋಜ

• ಉದಯವಾಹಿನಿ, ಚಿಂತಾಮಣಿ

ಜೀವಾತ್ಮದಲ್ಲಿ ಪರಮಾತ್ಮ ಇರುವಾಗ ಒಳ್ಳೆಯ ಮನಸ್ಸು, ಸಂಸ್ಕಾರ, ಬುದ್ಧಿ ಬೆಳೆಸಿಕೊಂಡು ಜೀವನದಲ್ಲಿ ಧರ್ಮ ಮಾರ್ಗದ ಮೂಲಕ ಸಾಧನೆ ಮಾಡಬೇಕು ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಸಂಚಾಲಕಿ ಬಿ .ಕೆ ಸರೋಜ ಹೇಳಿದರು.ಕೈವಾರದ ಯೋಗಿ ನಾರೇಯಣ ಮಠದಲ್ಲಿ ಆಯೋಜಿಸಿದ್ದ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಧರ್ಮಮಾರ್ಗ ಎಂದರೆ ಈಶ್ವರನ ಮಾರ್ಗದಲ್ಲಿ ನಡೆದಾಗ ನಮಗೆ ಆತ್ಮ ಉನ್ನತಿ ಮತ್ತು ಜೀವನ್ಮುಕ್ತಿ ದೊರಕುತ್ತದೆ. ಆತ್ಮ ತನ್ನ ಕರ್ಮವನ್ನು ಕಳೆದುಕೊಳ್ಳಲು ಬೇರೆ ಬೇರೆ ದೇಹದೊಳಗೆ ಸೇರಿಕೊಂಡು ತನ್ನ ಸಾಲ ಅಂದರೆ ಕರ್ಮವನ್ನು ತೀರಿಸುತ್ತದೆ. ನಮ್ಮ ಇಂದ್ರಿಯಗಳು ನಮ್ಮನ್ನೇ ಕಟ್ಟಿ ಹಾಕುತ್ತವೆ. ಯಾರು ಇಂದ್ರಿಯಗಳನ್ನು ತಮ್ಮ ಹಿಡಿತದಲ್ಲಿ ಇಟ್ಟುಕೊಳ್ಳುತ್ತಾರೋ ಅವರೇ ನಿಜವಾದ ಸಾಧಕರು ಎಂದರು. ಶಿಕ್ಷಕ ಶ್ರೀಧರ ಹಿರೇಮಠ್, ರಮಾದೇವಿ, ಆನಂದ ಬಾಬು, ಅಮೃತೇಶ್, ವಾಸವಿ ಮಹಿಳಾ ಸಮಾಜದ ಸದಸ್ಯರು ಭಾಗವಹಿಸಿದ್ದರು.

# ಜಾತಿಗಣತಿ ಜಾಗೃತಿ ಅಭಿಯಾನ

• ಉದಯವಾಹಿನಿ, ಗುಬ್ಬಿ

ಶೀಘ್ರದಲ್ಲಿಯೇ ಪ್ರಾರಂಭವಾಗುವ ಜಾತಿ ಗಣತಿಯಲ್ಲಿ ಕಾಡುಗೊಲ್ಲ ಸಮುದಾಯದವರು ಕಾಡುಗೊಲ್ಲ ಎಂದು ನಮೂದಿಸಬೇಕು ಎಂದು ಹೆಗ್ಗುಂದ ಮಠದ ಬಸವ ರಮಾನಂದ ಸ್ವಾಮೀಜಿ ತಿಳಿಸಿದರು.ಪಟ್ಟಣದಲ್ಲಿ ಜಾತಿಗಣತಿ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಕಾಡುಗೊಲ್ಲ ಸಮುದಾಯ ತನ್ನ ವಿಶಿಷ್ಟ ಆಚರಣೆಗಳಿಂದಾಗಿ ಪರಿಶಿಷ್ಟ ಪಂಗಡಕ್ಕೆ ಸೇರುವ ಎಲ್ಲಾ ಲಕ್ಷಣಗಳನ್ನು ಒಳಗೊಂಡಿದೆ. ಕಾಡುಗೊಲ್ಲರು ಅಲೆಮಾರಿಗಳಾಗಿ ಪಶುಪಾಲನೆ, ಮೇಕೆ, ಕುರಿ ಸಾಕಾಣಿಕೆಯನ್ನೇ ಕಾಯಕವನ್ನಾಗಿಸಿಕೊಂಡಿದ್ದಾರೆ. ಕಾಡುಗೊಲ್ಲ ಸಮುದಾಯಕ್ಕೆ ಪುರಾತನ ಇತಿಹಾಸವಿದ್ದು, ಒಗ್ಗಟ್ಟಿನ ಕೊರತೆಯಿಂದಾಗಿ ಸಮುದಾಯಕ್ಕೆ ಸಿಗಬೇಕಾಗಿರುವ ಮೀಸಲಾತಿ ಇಲ್ಲವಾಗುತ್ತಿದೆ. ಪರಿಸ್ಥಿತಿ ಅರಿತು ವೈಯಕ್ತಿಕ ಪ್ರತಿಷ್ಠೆ ಬದಿಗಿಟ್ಟು ಸಮುದಾಯದ ಹಿತದೃಷ್ಟಿಯಿಂದ ಒಗ್ಗೂಡಬೇಕಿದೆ. ಈಗ ಮೈಮರೆತಲ್ಲಿ ಮುಂದೆ ಸವಲತ್ತುಗಳನ್ನು ಪಡೆದುಕೊಳ್ಳಲು ಸಾಧ್ಯವಾಗುವುದಿಲ್ಲ ಎನ್ನುವುದನ್ನು ಸಮುದಾಯದವರು ಅರಿತು ಕೊಳ್ಳಬೇಕು ಎಂದು ತಿಳಿಸಿದರು. ಮುಖಂಡ ಬಿ.ದೊಡ್ಡಯ್ಯ ಮಾತನಾಡಿ, ಕಾಡುಗೊಲ್ಲ ಸಮುದಾಯವು ಸಾಮಾಜಿಕ ತುಳಿತಕ್ಕೆ ಒಳಗಾಗಿದ್ದು ಬುಡಕಟ್ಟು ಸಮುದಾಯದ ಲಕ್ಷಣಗಳನ್ನು ಹೊಂದಿರುವುದರಿಂದ ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕಿದೆ. ಸಮುದಾಯದವರಲ್ಲಿ ಅರಿವು ಮೂಡಿಸಲು ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದ್ದು ಎಲ್ಲರೂ ಕಡ್ಡಾಯವಾಗಿ ಕಾಡುಗೊಲ್ಲ ಎಂದೇ ನಮೂದಿಸುವಂತೆ ತಿಳಿಸಿದರು.

# ಆನೆಗಳ ಯೋಗಕ್ಷೇಮ ನೋಡಿ ಕೊಳ್ಳುವವರ ಆರೋಗ್ಯ ಮುಖ್ಯ

• ಉದಯವಾಹಿನಿ, ಮೈಸೂರು

ಅರಮನೆ ಅಂಗಳದ ಆನೆ ಬಿಡಾರದಲ್ಲಿ ಮಣಿಪಾಲ್ ಆಸ್ಪತ್ರೆಯಿಂದ ದಸರಾ ಜಂಬೂಸವಾರಿಯಲ್ಲಿ ಪಾಲ್ಗೊಳ್ಳುವ ಗಜಪಡೆಗಳ ಮಾವುತ, ಕಾವಾಡಿ ಮತ್ತು ಕುಟುಂಬದ ಸದಸ್ಯರ ಆರೋಗ್ಯದ ದೃಷ್ಟಿಯಿಂದ ಆರೋಗ್ಯ ಉಚಿತ ತಪಾಸಣೆ ನಡೆಸಲಾಯಿತು. ಆಸ್ಪತ್ರೆ ನಿರ್ದೇಶಕ ಪ್ರಮೋದ್ ಕುಂದರ್ ಮಾತನಾಡಿ, ಆನೆಗಳ ಯೋಗಕ್ಷೇಮ ನೋಡಿಕೊಳ್ಳುವವರ ಆರೋಗ್ಯ ಮುಖ್ಯ. ಕಾಡಿನಲ್ಲಿರುವವರು ನಗರಕ್ಕೆ ಬಂದಾಗ ಇಲ್ಲಿನ ವಾತಾವರಣಕ್ಕೆ ಹೊಂದಿಕೊಳ್ಳಲು ಕಷ್ಟವಾಗುತ್ತದೆ. ಅವರ ಆರೋಗ್ಯದಲ್ಲಿ ಏರುಪೇರಾಗುತ್ತದೆ. ಇದನ್ನು ಮನಗಂಡು ಶಿಬಿರದ ಮೂಲಕ ತಪಾಸಣೆ ನಡೆಸಲಾಗಿದೆ ಎಂದರು. ಡಿಸಿಎಫ್ ಪ್ರಭುಗೌಡ ಮಾತನಾಡಿ, ಆನೆಗಳಿಗೆ ನೀಡುವ ಆರೈಕೆಯಷ್ಟೇ ಮಾವುತರು ಮತ್ತು ಅವರ ಕುಟುಂಬಗಳ ಆರೋಗ್ಯವೂ ಮುಖ್ಯ. ಅವರು ತಮ್ಮ ಆರೋಗ್ಯಕ್ಕಿಂತ ಹೆಚ್ಚಾಗಿ ಆನೆಗಳ ಯೋಗಕ್ಷೇಮದ ಬಗ್ಗೆ ಹೆಚ್ಚಾಗಿ ಯೋಚಿಸುತ್ತಾರೆ. ಇದರಿಂದ ಅವರ ಆರೋಗ್ಯ ಹದಗೆಡುತ್ತದೆ. ಈ ಹಿನ್ನೆಲೆಯಲ್ಲಿ ಮಣಿಪಾಲ್ ಆಸ್ಪತ್ರೆಯಿಂದ ಶಿಬಿರ ಆಯೋಜಿಸಲಾಗಿದೆ' ಎಂದರು.

# ಶಿಕ್ಷಕಿ ಮೇಲೆ ಹಲ್ಲೆ: ಆರೋಪಿ ಬಂಧನಕ್ಕೆ ಒತ್ತಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಂಗಾರಪೇಟೆ

ಮಾಲೂರು ತಾಲ್ಲೂಕಿನ ಕ್ಷೇತ್ರನಹಳ್ಳಿ ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕಿ ಮಂಜುಳಾ ಅವರ ಮೇಲೆ ಹಲ್ಲೆ ಮಾಡಿರುವ ಆರೋಪಿಯನ್ನು ಕೂಡಲೇ ಬಂಧಿಸಬೇಕೆಂದು ರಾಜ್ಯ ಮಹಿಳಾ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷೆ ರೋಹಿಣಿ ಗೌಡ ಆಗ್ರಹಿಸಿದ್ದಾರೆ.ರೋಹಿಣಿ ಗೌಡ ಅವರು ಶಿಕ್ಷಕಿ ಮಂಜುಳಾ ಅವರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಶಿಕ್ಷಕಿ ಮೇಲೆ ಹಲ್ಲೆ ನಡೆದು ಎರಡು ದಿನ ಕಳೆದರೂ ಆರೋಪಿಯನ್ನು ಪೊಲೀಸರು ಬಂಧಿಸಿಲ್ಲ. ರಾಜ್ಯದಾದ್ಯಂತ ಸರ್ಕಾರಿ ಮಹಿಳಾ ನೌಕರರ ಮೇಲೆ ಹಲ್ಲೆ ಹೆಚ್ಚಾಗುತ್ತಿದೆ. ಈ ಬಗ್ಗೆ ಸರ್ಕಾರದ ಗಮನಕ್ಕೆ ತಂದು ಮಹಿಳಾ ನೌಕರರಿಗೆ ರಕ್ಷಣೆ ಕಲ್ಪಿಸಲು ಒತ್ತಾಯಿಸಲಾಗುವುದು ಎಂದರು. ಶಿಕ್ಷಕಿ ಮೇಲೆ ಹಲ್ಲೆ ಸಮಾಜದಲ್ಲಿ ತಲೆ ತಗ್ಗಿಸುವ ಕೃತ್ಯ. ಹಾಗಾಗಿ ಹಲ್ಲೆ ಮಾಡಿರುವ ಆರೋಪಿಗೆ ಕಠಿಣ ಶಿಕ್ಷೆ ನೀಡಬೇಕು. ಈ ಕೃತ್ಯವನ್ನು ನಮ್ಮ ಸಂಘದ ಮೂಲಕ ಶಿಕ್ಷಣ ಸಚಿವರ ಗಮನಕ್ಕೆ ತರಲಾಗುವುದು. ಮಹಿಳೆಯರ ಮೇಲೆ ಇಂತಹ ಘಟನೆಗಳು ನಡೆಯದಂತೆ ಎಲ್ಲರೂ ಹೋರಾಟ ನಡೆಸಬೇಕು ಎಂದರು. ಈ ಸಂದರ್ಭದಲ್ಲಿ ಸುಜಾತಮ್ಮ, ಶಿಕ್ಷಕಿ ರೋಷಿಣಿಗೌಡ ಹಾಗೂ ಶಿಕ್ಷಕರು ಹಾಜರಿದ್ದರು.

ತಾಲ್ಲೂಕಿನ ಕ್ಷೇತ್ರನಹಳ್ಳಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಮೇಲೆ ನಡೆದಿರುವ ಹಲ್ಲೆಯನ್ನು ಜಿಲ್ಲಾ ಸರ್ಕಾರಿ ನೌಕರರ ಸಂಘ ಖಂಡಿಸಿದ್ದು, ಕ್ರಮಕ್ಕೆ ಒತ್ತಾಯಿಸಿದೆ.

ಅಂತರಾಳದಿಂದ... EDITORIAL

# ಭಾರತ-ಪಾಕ್ ಕ್ರಿಕೆಟ್ ಪಂದ್ಯ: ಭಾರತೀಯರ ಬೆನ್ನಿಗೆ ಇರಿದ ಕೇಂದ್ರ ಸರಕಾರ

ಈ ದೇಶದ ಗೃಹ ಸಚಿವ, ಪ್ರಧಾನಿ ಮೋದಿಯ ಆಪ್ತ ಅಮಿತ್ ಶಾ ಅವರ ಪುತ್ರ ಜಯ್ ಶಾ ನೇತೃತ್ವದಲ್ಲಿ ಈ ಪಂದ್ಯ ನಡೆಯುತ್ತಿರುವುದರಿಂದ ಇದನ್ನು ಆಪರೇಷನ್ ಸಿಂಧೂರದ ಬಳಿಕ ಉಭಯ ದೇಶಗಳ ನಡುವಿನ ನಿಷೇಧಗಳ ನಡುವಿನ ಇನ್ನೊಂದು 'ಕದನ ವಿರಾಮವೆಂದು ಸ್ವೀಕರಿಸುವುದು ದೇಶಕ್ಕೆ ಅನಿವಾರ್ಯವಾಗಿದೆ. ಈ ಹಿಂದೆ ಉಭಯ ದೇಶಗಳ ನಡುವೆ ಉದ್ವಿಗ್ನ ಸ್ಥಿತಿ ನಿರ್ಮಾಣವಾದಾಗಲೆಲ್ಲ ಕ್ರೀಡಾಳುಗಳು ಮತ್ತು ಸಾಂಸ್ಕೃತಿಕ ವಕ್ತಾರರು ಸೇತುವೆ ಕಟ್ಟುವ ಕೆಲಸ ಮಾಡುತ್ತಾ ಬಂದಿದ್ದಾರೆ. ರಾಜಕೀಯ ಶಕ್ತಿಗಳು ಉಭಯ ದೇಶಗಳ ನಡುವಿನ ಸಂಬಂಧಕ್ಕೆ ಹುಳಿ ಹಿಂಡಿದಾಗಲೆಲ್ಲ ಕ್ರೀಡೆ ಆ ಸಂಬಂಧವನ್ನು ತಿಳಿಗೊಳಿಸುವ ಪ್ರಯತ್ನ ಮಾಡಿದೆ. ಇಷ್ಟಾದರೂ ಪಾಕಿಸ್ತಾನ-ಭಾರತದ ನಡುವೆ ಕ್ರಿಕೆಟ್ ನಡೆದಾಗಲೆಲ್ಲ ಭಾರತದೊಳಗಿರುವ ಕೆಲವು ರಾಜಕೀಯ ಸಂಘಟನೆಗಳು ಆ ಆಟಕ್ಕೆ ಧರ್ಮದ ಬಣ್ಣವನ್ನು ಹಚ್ಚಿ ದೇಶ ಒಡೆಯುವ ಕೆಲಸವನ್ನೂ ಯಾವ ನಾಚಿಕೆಯೂ ಇಲ್ಲದೆ ಮಾಡಿಕೊಂಡು ಬಂದಿವೆ. ರಾಜಕೀಯ ನಾಯಕರ ಎಲ್ಲಾ ಹುನ್ನಾರಗಳನ್ನು ಮೀರಿ ಇಂದು ಕ್ರಿಕೆಟ್ ವಿಶ್ವದ ಜನರ ಹೃದಯಗಳನ್ನು ಬೆಸೆಯುತ್ತಾ ಬಂದಿದೆ. ಪಾಕಿಸ್ತಾನದ ಕ್ರಿಕೆಟ್ ತಾರೆಯರನ್ನು ಪ್ರೀತಿಸುವ ದೊಡ್ಡ ಸಂಖ್ಯೆಯ ಜನರು ಭಾರತದಲ್ಲಿದ್ದರೆ, ಸಚಿನ್ ತೆಂಡೂಲ್ಕರ್ ನಂತಹ ಆಟಗಾರರನ್ನು ಹೃದಯದಲ್ಲಿಟ್ಟು ಮೆರೆಸುವ ಪಾಕಿಸ್ತಾನಿಗಳು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಆದರೆ ಪೆಹಲ್ಗಾಮ್ ದಾಳಿಯ ಬಳಿಕ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಬಂಧಕ್ಕೆ ಭಾರೀ ಏಟು ಬಿತ್ತು ಪೆಹಲ್ಗಾಮ್ ದಾಳಿಯಲ್ಲಿ 26 ಮಂದಿ ಭಾರತೀಯರು ಬರ್ಬರವಾಗಿ ಮೃತರಾದರು. ಈ ದಾಳಿಯಲ್ಲಿ ಪಾಕಿಸ್ತಾನದ ಕೈವಾಡವಿದೆ ಎಂಬ ಭಾರತದ ಆರೋಪ ಅಂತಿಮವಾಗಿ ಅಪರೇಷನ್ ಸಿಂಧೂರ ಕಾರ್ಯಾಚರಣೆಗೆ ಕಾರಣವಾಯಿತು. ಮೇಲ್ನೋಟಕ್ಕೆ ಪಾಕಿಸ್ತಾನದ ಉಗ್ರಗಾಮಿ ಶಿಬಿರಗಳ ಮೇಲೆ ನಡೆದ ದಾಳಿಯೇ ಆಗಿದ್ದರೂ ಕೊನೆಯಲ್ಲಿ ಅದು ಯುದ್ಧ ರೂಪವನ್ನು ಪಡೆಯಿತು. ಉಭಯ ದೇಶಗಳಿಗೂ ಅಪಾರ ನಷ್ಟಗಳುಂಟಾದವು. ಭಾರತದ ಸೇನಾ ವಿಮಾನಗಳನ್ನು ಹೊಡೆದುರುಳಿಸಿದ್ದೇನೆ ಎಂದು ಪಾಕಿಸ್ತಾನವೂ ಹೇಳಿಕೊಂಡಿತು. ಕೊನೆಯ ಕ್ಷಣದಲ್ಲಿ ಕದನ ವಿರಾಮ ಘೋಷಣೆಯಾಗಿ ಇನ್ನಷ್ಟು ನಾಶ. ನಷ್ಟವುಂಟಾಗುವುದು ತಪ್ಪಿತು. ಆದರೆ ಈ ಎಲ್ಲಾ ಬೆಳವಣಿಗೆಗಳು ಉಭಯ ದೇಶಗಳ ಸಂಬಂಧಗಳಿಗೆ ಸರಿಪಡಿಸಲಾಗದಷ್ಟು ಹಾನಿ ಮಾಡಿವೆ. ಭಾರತವು ಪಾಕಿಸ್ತಾನದ ಜೊತೆಗೆ ಮಾಡಿಕೊಂಡ ಹಲವು ಒಪ್ಪಂದಗಳಿಂದ ಹಿಂದೆ ಸರಿಯಿತು. ರಕ್ತ ಮತ್ತು ನೀರು ಒಟ್ಟಿಗೆ ಹರಿಯಲು ಸಾಧ್ಯವಿಲ್ಲ ಎಂಬ ಘೋಷಣೆಯನ್ನು ಮಾಡಿದ ಪ್ರಧಾನಿ ಮೋದಿಯವರು 'ಸಿಂಧೂ ನದಿ ನೀರು ಒಪ್ಪಂದವನ್ನು ರದ್ದುಗೊಳಿಸಿದರು. ಪಾಕಿಸ್ತಾನಕ್ಕೆ ನೀರು ಬಿಡುವುದಿಲ್ಲ ಎಂದು ಘೋಷಿಸಿದರು. ಪಾಕಿಸ್ತಾನದ ರೈತರು ಇದರಿಂದ ಭಾರೀ ಸಂಕಷ್ಟಕ್ಕೆ ಸಿಲುಕಿದರು. ಇದೇ ಸಂದರ್ಭದಲ್ಲಿ ಭಾರತದ ಮೇಲೆ ಪಾಕಿಸ್ತಾನವೂ ಕೆಲವು ನಿಷೇಧಗಳನ್ನು ಹೇರಿತು. ಈ ಬಿಕ್ಕಟ್ಟು ವಾಣಿಜ್ಯ ಕ್ಷೇತ್ರದ ಮೇಲೆ ತೀವ್ರವಾದ ದುಷ್ಪರಿಣಾಮಗಳನ್ನು ಉಂಟು ಮಾಡಿತು. ಅಂದರೆ ಪಹಲ್ಗಾಮ್ ದಾಳಿಯನ್ನುವುದು 26 ಪ್ರವಾಸಿಗರ ಬರ್ಬರ ಹತ್ಯೆಗಷ್ಟೇ ಸೀಮಿತವಾದ ಕೃತ್ಯವಲ್ಲ.

> ಏಷ್ಯ ಕಪ್ ಕ್ರಿಕೆಟ್‌ನಲ್ಲಿ ಭಾರತ-ಪಾಕಿಸ್ತಾನ ನಡುವಿನ ಪಂದ್ಯದಲ್ಲಿ ಯಾರೇ ಗೆಲ್ಲಲಿ, ಸೋಲುವುದು ಮಾತ್ರ ಅಪರೇಷನ್ ಸಿಂಧೂರ' ಕಾರ್ಯಾಚರಣೆಯಲ್ಲಿ ಈ ದೇಶದ ಸೈನಿಕರು ಮಾಡಿದ ತ್ಯಾಗ ಮತ್ತು ಬಲಿದಾನ ಎನ್ನುವುದರಲ್ಲಿ ಎರಡು ಮಾತಿಲ್ಲ. ಪೆಹಲ್ಲಾಮ್ ದಾಳಿಯಲ್ಲಿ ಮೃತಪಟ್ಟ ಅಮಾಯಕ ಭಾರತೀಯರು ಮತ್ತು ಅಪರೇಷನ್ ಸಿಂಧೂರದಲ್ಲಿ ಭಾಗವಹಿಸಿ ಪ್ರಾಣ ತೆತ್ತ ನಮ್ಮ ಸೈನಿಕರಿಗೆ ಮಾಡುತ್ತಿರುವ ಸ್ಪಷ್ಟ ಅಪಮಾನವಾಗಿದೆ ಈ ಪಂದ್ಯ ರಕ್ತ ಮತ್ತು ನೀರು ಒಟ್ಟಿಗೆ ಹರಿಯಲಾರದು ಎಂದು ಹೇಳಿದ ಪ್ರಧಾನಿಯೇ ಇದೀಗ ಪಹಲ್ಗಾಮ್ ರಕ್ತದ ಮಡುವಿನಲ್ಲಿ ಕ್ರಿಕೆಟನ್ನು ಹಮ್ಮಿಕೊಳ್ಳಲು ಅವಕಾಶ ನೀಡಿರುವುದು ಈ ದೇಶದ ದೌರ್ಭಾಗ್ಯವಾಗಿದೆ ನಮ್ಮವರ ರಕ್ತವನ್ನು ಸರಕಾರ ಕೊನೆಗೂ ಕ್ರಿಕೆಟ್ ತಂದುಕೊಡುವ ಹಣಕ್ಕೆ ಮಾರಾಟ ಮಾಡಿದೆ.

ಆದಾದ ಬಳಿಕ ನಡೆದ ಯುದ್ಧ ಕಾರ್ಯಾಚರಣೆ ಮತ್ತು ವ್ಯಾಪಾರ ಒಪ್ಪಂದ ನಿಷೇಧಗಳಿಂದ ಉಭಯ ದೇಶಗಳ ಸಾಮಾನ್ಯ ಜನರು ಇಂದಿಗೂ ಸಂಕಷ್ಟಗಳನ್ನು ಎದುರಿಸುತ್ತಲೇ ಇದ್ದಾರೆ.

ಭಾರತ-ಪಾಕಿಸ್ತಾನ ನಡುವಿನ ಸಂಬಂಧ ಬಿಗಡಾಯಿಸಿದಾಗಲೆಲ್ಲ ಅದು ಆಮದು ರಫ್ತಿನ ಮೇಲೆ ದುಷ್ಪರಿಣಾಮಗಳನ್ನು ಬೀರುತ್ತಾ ಬಂದಿದೆ. ಪುಲ್ವಾಮ ದಾಳಿಯ ಸಂದರ್ಭದಲ್ಲಿ ಭಾರತವೂ ಪಾಕಿಸ್ತಾನದ ಅತ್ಯಂತ ಆಪ್ತರಾಷ್ಟ್ರ ಸ್ಥಾನಮಾನವನ್ನು ರದ್ದುಗೊಳಿಸಿತು. ಪಾಕಿಸ್ತಾನಿ ಸರಕುಗಳ ಮೇಲೆ ಶೇ. 200 ಸುಂಕವನ್ನೂ ವಿಧಿಸಿತ್ತು. ಅಲ್ಲಿಂದ ಹಂತ ಹಂತವಾಗಿ ರಫ್ತು ಮತ್ತು ಆಮದು ಇಳಿಯುತ್ತಲೇ ಬಂದಿದೆ. ಇದು ಉಭಯ ದೇಶಗಳ ಉದ್ಯಮಿಗಳನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಸಿಂಧೂನದಿ ನೀರು ಒಪ್ಪಂದ ರದ್ದು ನಿರ್ಧಾರ ಅತ್ಯಂತ ನಿರ್ಣಾಯಕವಾಗಿದೆ. ಮಾನವೀಯ ನೆಲೆಯಲ್ಲಿ ಈ ನಿರ್ಧಾರ ಪ್ರಶ್ನಾರ್ಹವಾಯಿತು. ಪಹಲ್ಲಾಮ್ ರಕ್ತಕ್ಕಾಗಿ ನೀರನ್ನೇ ನಿಲ್ಲಿಸಿದ್ದ ಭಾರತ ಇದೀಗ ಪಾಕಿಸ್ತಾನದೊಂದಿಗೆ ಕ್ರಿಕೆಟ್‌ನ್ನು ಪುನರಾರಂಭಿಸಿರುವುದು ಎಷ್ಟು ಸರಿ ಎನ್ನುವ ಪ್ರಶ್ನೆ ಕೇಂದ್ರ ಸರಕಾರದ ವಿರುದ್ಧ ಕ್ಷಿಪಣಿಯ ರೂಪದಲ್ಲಿ ಎರಗಿದೆ. ವಿಷಾದನೀಯ ಸಂಗತಿಯೆಂದರೆ, ಕ್ರಿಕೆಟ್ ಪಂದ್ಯ ಮತ್ತು ಆಪರೇಷನ್ ಸಿಂಧೂರ ಎರಡು ಪ್ರತ್ಯೇಕ ವಿಷಯಗಳು ಎಂದು ಕೇಂದ್ರ ಸರಕಾರ ನುಣುಚಿಕೊಳ್ಳುತ್ತಿದೆ. ಕ್ರಿಕೆಟ್ ಎಂಬುದು ಒಂದು ಭಾವನಾತ್ಮಕತೆಯಾಗಿದೆ.

ಆಟಗಾರರು ಈ ಮಟ್ಟಕ್ಕೆ ಎರಲು ಬಹಳಷ್ಟು ಶ್ರಮ ಪಟ್ಟಿದ್ದಾರೆ. ಹೀಗಾಗಿ ಪಂದ್ಯವನ್ನು ವಿರೋಧಿಸುವುದು ನ್ಯಾಯಯುತವಲ್ಲ' ಎಂದು ಕೇಂದ್ರ ಸ್ಪಷ್ಟಿಕರಣ ನೀಡಿದೆ. ಕ್ರಿಕೆಟ್ ಆಟಗಾರರ ಪರಿಶ್ರಮದ ಮೇಲೆ ಅನುಕಂಪ ವ್ಯಕ್ತಪಡಿಸುವ ಕೇಂದ್ರ ಸರಕಾರ, ಉಭಯ ದೇಶಗಳ ರೈತರು ಮತ್ತು ಉದ್ಯಮಿಗಳ ಮೇಲೆ ಯಾಕೆ ನಿಷ್ಕರುಣಿಯಾಗಿದೆ. ಇವರ ವಿಷಯದಲ್ಲಿ ಯಾಕೆ ಅಪರೇಷನ್ ಸಿಂಧೂರ-ಪೆಹಲ್ಗಾಮ್ ದಾಳಿ ಅಡ್ಡ ಬರುತ್ತಿದೆ ಎಂದು ಕೇಳಿದರೆ ಕೇಂದ್ರ ಊಸರವಳ್ಳಿಯಂತೆ ಮಿಸುಕಾಡುತ್ತದೆ.



# ರಾಮಾಯಣ

## ಲಕ್ಷ್ಮಣನು ಶೂರ್ಪಣಖಿಯ ಕಿವಿಮೂಗುಗಳನ್ನು ಕತ್ತರಿಸಿದ್ದು

• ಹಿಂದಿನ ಸಂಚಿಕೆಯಿಂದ 119 ನೆಯ ಅಧ್ಯಾಯ

ಆಮೇಲೆ ಶ್ರೀರಾಮನು ಮದನಬಾಣಕ್ಕೊಳಗಾದ ಶೂರ್ಪಣಖಿಯನ್ನು ಕುರಿತು ಮುಗುಳುನಗೆಯಿಂದ ಎಲೇ ಶೂರ್ಪಣಖಿ ನನಗೆ ಒಬ್ಬ ಸ್ತ್ರೀ ಇದ್ದಾಳೆ. ನಿನ್ನಂಥ ಸ್ತ್ರೀಯರಿಗೆ ಸವತಿಯರಿರುವುದು ಯೋಗ್ಯವಲ್ಲ. ಆದ್ದರಿಂದ ನೀನು ನನ್ನ ತಮ್ಮನಾದ ಲಕ್ಷ್ಮಣನನ್ನು ವರಿಸು.

ಆತನು ಒಳ್ಳೆಯವನು; ಸುಂದರ, ಆತನಿಗೆ ಇಲ್ಲಿ ಸ್ತ್ರೀಯರಿಲ್ಲ. ಆತನು ನಿನ್ನ ಸೌಂದರ್ಯಕ್ಕೆ ಅನುರೂಪನಾಗಿದ್ದಾನೆ. ಲಕ್ಷ್ಮಣನನ್ನು ವಿವಾಹವಾಗಿ ಸೂರ್ಯಪ್ರಭೆಯು ಮಹಾಮೇರು ಪರ್ವತವನ್ನು ಸುತ್ತುವಂತೆ ಆತನನ್ನು ಕೂಡಿ ಸಂಚರಿಸಿಕೊಂಡಿರು ಎಂದು ಹೇಳಿದನು. ಆ ರಾಕ್ಷಸಿಯು ಕಾಮಮೋಹಿತಳಾಗಿ ಶ್ರೀರಾಮನನ್ನು ಬಿಟ್ಟು ಲಕ್ಷ್ಮಣನ ಸಮೀಪಕ್ಕೆ ಹೋಗಿ ಅವನನ್ನು ಕುರಿತು ಎಲೈ ಲಕ್ಷ್ಮಣ, ನಿನ್ನ ಲಾವಣ್ಯಕ್ಕೆ ಸಮಾನವಾದ ಲಾವಣ್ಯವೂ ಸೊಬಗೂ ಉಳ್ಳ ನಾನು ನಿನ್ನನ್ನು ಪತಿಯಾಗಿ ವರಿಸಬೇಕೆಂದು ಬಂದಿದ್ದೇನೆ. ನನ್ನನ್ನು ವರಿಸಿ ನನ್ನ ಸಂಗಡ ಕ್ರೀಡಿಸಿಕೊಂಡು ದಂಡಕಾರಣ್ಯದಲ್ಲಿ ಸುಖವಾಗಿರು ಎಂದು ನುಡಿದಳು. ಲಕ್ಷ್ಮಣನು ಮುಗುಳುನಗೆಯಿಂದ ಅವಳನ್ನು ಕುರಿತು ಎಲೇ ಶೂರ್ಪಣಖಿ ಒಬ್ಬರ ಊಳಿಗವನ್ನು ಮಾಡಿಕೊಂಡು ಪರಾಧೀನನಾಗಿರುವ ಸೇವಕನನ್ನು ವಿವಾಹವಾಗಿ ದಾಸಿಯಾಗಿರಲು ಏಕೆ ಯತ್ನ ಮಾಡುತ್ತೀಯೆ ನಾನು ಶ್ರೀರಾಮನ ಅಧೀನ. ಆದ್ದರಿಂದ ನೀನು ಐಶ್ವರ್ಯ ಸಂಪನ್ನನಾದ ಶ್ರೀರಾಮನನ್ನೇ ವಿವಾಹವಾಗಿ ಆತನ ಕಿರಿಯ ಹೆಂಡತಿಯಾಗಿ ಸುಖವಾಗಿರು. ಆತನು ವಿಕಟಾಂಗಿಯಾಗಿ ಕರಾಳಿಯಾಗಿ ಲಂಬೋದರಿಯಾದ ಸೀತಾದೇವಿಯನ್ನು ಬಿಟ್ಟು ಅವಶ್ಯವಾಗಿ ನಿನ್ನನ್ನು ವಿವಾಹವಾಗುವನು ಲೋಕದಲ್ಲಿರುವ ಮನುಷ್ಯರಲ್ಲಿ ವಿಚಕ್ಷಣನಾದವನು ನಿನ್ನ ಸೌಂದರ್ಯವನ್ನು ಕಂಡು ಅಂಗೀಕರಿಸದೆ ಬಿಡುವನೆ ಎಂದು ನುಡಿದನು. ಆ ರಾಕ್ಷಸಿಯು ಲಕ್ಷ್ಮಣನ ವಾಕ್ಯನನ್ನು ಸತ್ಯವೆಂದೆಣಿಸಿ ಕಾಮಾಂಧಕಾರವು ಕವಿಯಲು ಪರ್ಣಶಾಲೆಯಲ್ಲಿ ಸೀತಾಸಮೇತನಾಗಿ ಕುಳಿತಿದ್ದ ಶ್ರೀರಾಮನ ಬಳಿಗೆ ಹೋಗಿ ಹೀಗೆಂದಳು : ಶ್ರೀರಾಮ, ವಿಕಟಾಂಗಿಯಾಗಿ ವೃದ್ಧೆಯಾದ ಸೀತಾದೇವಿಯನ್ನು ಮೆಚ್ಚಿ ನನ್ನನ್ನು ಉಪೇಕ್ಷೆ ಮಾಡಬೇಡ. ನನಗೆ ಸವತಿಯಿಲ್ಲದಂತೆ ಸೀತಾದೇವಿಯನ್ನು ಭಕ್ಷಣಮಾಡುತ್ತೇನೆ. ನೀನು ನನ್ನನ್ನು ಕೂಡಿಕೊಂಡು ಸುಖವಾಗಿರು ಎಂದು ನುಡಿದು ಮಿಂಚಿನ ಹೊಳೆಯಂತೆ ಕಣ್ಣು ದೃಷ್ಟಿಯುಳ್ಳವಳಾಗಿ ಕೋಪಾಟೋಪದಿಂದ ಚಂದ್ರನ ಪತ್ನಿಯಾದ ರೋಹಿಣೀದೇವಿಗೆ ಎದುರಾಗಿ ಬೀಳುತ್ತಿರುವ ಉಲ್ಕಾಪಾತದಂತೆ, ಸೀತೆಯನ್ನು ನೋಡುತ್ತ ಅವಳೆಡೆಗೆ ನುಗ್ಗಿದಳು. ಆಗ ಶ್ರೀರಾಮನು ಅತ್ಯಂತ ಕೋಪಯುಕ್ತನಾಗಿ ಅವಳಿಗೆ ಅಡ್ಡಗಟ್ಟಿ ನಿಂತು ಲಕ್ಷ್ಮಣನನ್ನು ಕುರಿತು ಲಕ್ಷ್ಮಣ, ಕ್ರೂರಬುದ್ಧಿಯುಳ್ಳ ನೀಚರೊಡನೆ ಪರಿಹಾಸ್ಯ ಮಾಡುವುದು ನೀತಿಯಲ್ಲ.

ಮುಂದುವರಿಯುವುದು...

# ಒಣಗಿ ಹೋದ ನಿಂಬೆ ಹಣ್ಣಿನಲ್ಲೂ ಇದೆ ಉಪಯೋಗ





ಕತ್ತರಿಸಿಟ್ಟಿರುವ ನಿಂಬೆಹಣ್ಣು ಒಣಗಿ ಹೋಗಿದ್ಯಾ ಹಾಗಾದ್ರೆ, ಅದನ್ನು ಬಿಸಾಡುವ ಬದಲು ಈ ರೀತಿಯಾಗಿ ಬಳಸಬಹುದು. ಇವು ನಿಮ್ಮ ದಿನನಿತ್ಯದ ಕೆಲಸದಲ್ಲಿ ಸಹಕಾರಿಯಾಗಿದೆ.

ಸಾಮಾನ್ಯವಾಗಿ ಅರ್ಧ ಕತ್ತರಿಸಿದ ನಿಂಬೆಹಣ್ಣನ್ನು ಫ್ರಿಡ್ಜ್‌ನಲ್ಲಿಟ್ಟು ಆಮೇಲೆ ಉಪಯೋಗಿಸುವ ಎಂದು ಇಟ್ಟಿರುತ್ತೇವೆ. ಆದರೆ ಅದು ಮರೆತೇ ಹೋಗುತ್ತದೆ. ಸಾಮಾನ್ಯವಾಗಿ ಸಲಾಡ್‌ಗೆ ಅಥವಾ ಖಾದ್ಯದ ರುಚಿಯನ್ನು ಹೆಚ್ಚಿಸಲು, ಜನರು ನಿಂಬೆಯನ್ನು ಬಳಸುತ್ತಾರೆ.

'ಅರ್ಧ ನಿಂಬೆಹಣ್ಣು ಬಳಸಿದ ನಂತರ ಉಳಿದರೆ, ಅದನ್ನು ಫ್ರಿಡ್ಜ್‌ನಲ್ಲಿ ಇಡಲಾಗುತ್ತದೆ. ಉಳಿದ ನಿಂಬೆಹಣ್ಣು ನಂತರ ಉಪಯುಕ್ತವಾಗುತ್ತದೆ ಎಂದು ಭಾವಿಸಿ ಅವರು ಇಟ್ಟುಕೊಳ್ಳುತ್ತಾರೆ, ಆದರೆ ಅವರಿಗೆ ನೆನಪಿರುವುದಿಲ್ಲ. ಹಾಗಾಗಿ ಫ್ರಿಡ್ಜ್‌ನಲ್ಲಿಟ್ಟ ನಿಂಬೆಹಣ್ಣು ಒಣಗಿ ಹೋಗುತ್ತದೆ. ಕೆಲವು ದಿನಗಳ ನಂತರ, ಅವರು ಆ ನಿಂಬೆಹಣ್ಣನ್ನು ನೆನಪಿಸಿಕೊಳ್ಳುತ್ತಾರೆ, ಆದರೆ ಅದು ಆಗ ಯಾವುದೇ ಪ್ರಯೋಜನಕ್ಕೆ ಬರೋದಿಲ್ಲ. ನೀವೂ ಕೂಡಾ ಒಣಗಿದ ನಿಂಬೆಹಣ್ಣು ನಿಮಗೆ ಯಾವುದೇ ಪ್ರಯೋಜನಕ್ಕೆ ಬರೋದಿಲ್ಲ ಎಂದು ನೀವು ಭಾವಿಸಿದರೆ ಈ ಲೇಖನ ನಿಮಗಾಗಿ.

**ಟ್ಯಾಪ್ ಮತ್ತು ನೀರಿನ ಕಲೆಗಳನ್ನು ಸ್ವಚ್ಛಗೊಳಿಸಿ**

ನೀವು ಸಿಂಕ್, ಟ್ಯಾಪ್ ಮೇಲೆ ಸಂಗ್ರಹವಾದ ನೀರಿನ ಕಲೆಗಳನ್ನು ಒಣ ನಿಂಬೆಯಿಂದ ಸ್ವಚ್ಛಗೊಳಿಸಬಹುದು. ಇದಕ್ಕಾಗಿ ನೀವು ಯಾವುದೇ ತಂತ್ರವನ್ನು ಅಳವಡಿಸಿಕೊಳ್ಳುವ ಅಗತ್ಯವಿಲ್ಲ. ಅದನ್ನು ಸಿಪ್ಪೆಯೊಂದಿಗೆ ಟ್ಯಾಪ್ ಮತ್ತು ಸ್ಕವರ್ ಮೇಲೆ ಉಜ್ಜಿದರೆ ಕಲೆಗಳನ್ನು ತೆಗೆದುಹಾಕುತ್ತದೆ.

**ಬಾಟಲಿಯ ಮೇಲ್ಮೈ, ಪ್ಯಾನ್ ಅನ್ನು ನಿಂಬೆಯೊಂದಿಗೆ ಉಜ್ಜಿಕೊಳ್ಳಿ:** ಬಾಟಲ್ ಜಿಗುಟಾಗಿದ್ದರೆ ಅಥವಾ ಅದರ ಮೇಲೆ ತುಕ್ಕು ಇದ್ದರೆ, ನೀವು ನಿಂಬೆಯನ್ನು ಬಳಸಬಹುದು.

ಇದರ ಜೊತೆಗೆ, ನೀವು ಪ್ಯಾನ್‌ನ ಮೇಲ್ಮೈಯನ್ನು ಸ್ಕಬ್ ಮಾಡಲು ನಿಂಬೆಯನ್ನು ಸಹ ಬಳಸಬಹುದು.

ಮೊದಲು ಬಾಟಲಿ ಅಥವಾ ಪ್ಯಾನ್ ಮೇಲೆ ಅರ್ಧ ನಿಂಬೆಹಣ್ಣು, ಅಡಿಗೆ ಸೋಡಾ ಹಚ್ಚಿ. ಇದರ ನಂತರ, ಅದರ ಮೇಲೆ ನಿಂಬೆಹಣ್ಣನ್ನು ಉಜ್ಜಿಕೊಳ್ಳಿ. ತುಕ್ಕು ಸ್ವಚ್ಛಗೊಳಿಸಲು ಮತ್ತು ಜಿಗುಟುತನವನ್ನು ತೆಗೆದುಹಾಕಲು ಇದು ಉತ್ತಮ ಮಾರ್ಗವಾಗಿದೆ.

**ಅಡುಗೆ ಮನೆಯ ಸ್ಲ್ಯಾಬ್ ಮತ್ತು ಸ್ಟೌವ್ ಮೇಲೆ ಉಜ್ಜಿಕೊಳ್ಳಿ:** ಅಡುಗೆ ಮನೆಯ ಸ್ಲ್ಯಾಬ್, ಸ್ಟೌವ್ ಮೇಲೆ ಉಜ್ಜಿಕೊಳ್ಳಿ ಎಣ್ಣೆಯಿಂದಾಗಿ ಅಡುಗೆಮನೆಯ ಸ್ಲ್ಯಾಬ್ ಮತ್ತು ಸ್ಟೌವ್ ಜಿಗುಟಾಗುತ್ತದೆ. ಇದರಿಂದಾಗಿ ಅದನ್ನು ಸ್ವಚ್ಛಗೊಳಿಸುವುದು ಕಷ್ಟವಾಗುತ್ತದೆ. ಈಗ ನೀವು ಉಳಿದ ಒಣಗಿದ ನಿಂಬೆಯನ್ನು ಅದರ ಮೇಲೆ ಉಜ್ಜಿದರೆ, ಅದರ ಜಿಗುಟುತನವನ್ನು ತೆಗೆದುಹಾಕಬಹುದು.

ನೀವು ಅದನ್ನು ಒಲೆಯ ಬದಿಯಲ್ಲಿರುವ ಗೋಡೆಯ ಮೇಲೂ ಉಜ್ಜಬಹುದು. ಆಹಾರದ ಕಾರಣದಿಂದಾಗಿ ಗೋಡೆಯು ಹೆಚ್ಚಾಗಿ ಜಿಗುಟಾಗಿರುತ್ತದೆ ಮತ್ತು ಕೊಳಕಾಗುತ್ತದೆ, ಆದ್ದರಿಂದ ನೀವು ಅದನ್ನು ಈ ನಿಂಬೆಯಿಂದ ಸ್ವಚ್ಛಗೊಳಿಸಬಹುದು. ನಿಂಬೆಹಣ್ಣನ್ನು ಉಜ್ಜಿದ ನಂತರ, ಸ್ವಲ್ಪ ಬೆಚ್ಚಗಿನ ನೀರನ್ನು ತೆಗೆದುಕೊಂಡು ಬಟ್ಟೆಯಿಂದ ಸ್ವಚ್ಛಗೊಳಿಸಿ.

**ಬೇಸಿನ್ ಅನ್ನು ಸ್ವಚ್ಛಗೊಳಿಸಿ:** ಬೇಸಿನ್ ಅನ್ನು ಸ್ವಚ್ಛಗೊಳಿಸಿ ನಿಂಬೆಯನ್ನು ಎಸೆಯುವ ಬದಲು ನೀವು ಅದರಿಂದ ಬೇಸಿನ್ ಅನ್ನು ಸಹ ಸ್ವಚ್ಛಗೊಳಿಸಬಹುದು. ಇದಕ್ಕಾಗಿ, ನೀವು ಏನನ್ನೂ ಮಾಡಬೇಕಾಗಿಲ್ಲ, ಬೇಸಿನ್ ಮೇಲೆ ನಿಂಬೆಯನ್ನು ಉಜ್ಜಿದರೆ ಸಾಕು. ಒಣಗಿದ ನಿಂಬೆಹಣ್ಣಿನಲ್ಲಿ ರಸವೂ ಇರುತ್ತದೆ, ಅದನ್ನು ನೀವು ಬೇಸಿನ್ ಮೇಲೆ ಉಜ್ಜಿದಾಗ, ಕಲೆಗಳನ್ನು ಸ್ವಚ್ಛಗೊಳಿಸಲು ಸುಲಭವಾಗುತ್ತದೆ.

# ಪ್ರವಾಹ ಪೀಡಿತ ಹಿಮಾಚಲ ಪ್ರದೇಶಕ್ಕೆ 5 ಕೋಟಿ ರೂ ನೆರವು

• ಉದಯವಾಹಿನಿ, ಬೆಂಗಳೂರು

ನಿರಂತರ ಮಳೆ, ಹಠಾತ್ ಪ್ರವಾಹ, ಭೂಕುಸಿತದಿಂದ ನಲುಗಿರುವ ಹಿಮಾಚಲ ಪ್ರದೇಶದ ರಾಜ್ಯ ಪ್ರಕೃತಿ ವಿಕೋಪ ನಿಧಿಗೆ ಕರ್ನಾಟಕ ಸರ್ಕಾರ ರೂ. 5 ಕೋಟಿ ನೆರವು ನೀಡಿದೆ.



ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ರಾಜ್ಯ ಬಿಜೆಪಿ, ಇದು ನ್ಯಾಯವೇ ಸಿದ್ದರಾಮಯ್ಯ ಎಂದು ಪ್ರಶ್ನಿಸಿದೆ. ಹಿಮಾಚಲ ಪ್ರದೇಶದ ನೆರೆಗೆ ರೂ.5 ಕೋಟಿ, ಕೇರಳ ಆನೆ ದುರಂತಕ್ಕೆ ರೂ.15 ಲಕ್ಷ, ವಯನಾಡಿಗೆ ರೂ. 10 ಕೋಟಿ, ದೂರದ ಹಿಮಾಚಲ ಪ್ರದೇಶದ ನೆರೆಗೆ ಮಿಡಿದು ರೂ. 5 ಕೋಟಿ ಪರಿಹಾರ ಘೋಷಿಸುವ ಮೂಲಕ ನಾಡ ವಿರೋಧಿ ಕಾಂಗ್ರೆಸ್ ಸರ್ಕಾರ ರಾಜ್ಯದ ನೆರೆ ಸಂತ್ರಸ್ತರನ್ನು ನಡು ನೀರಲ್ಲಿ ಕೈಬಿಟ್ಟು ದ್ರೋಹ ಬಗೆದಿದೆ ಎಂದು ಕಿಡಿಕಾರಿದೆ. ತಮ್ಮ ಮಾನವೀಯತೆ ಹೈಕಮಾಂಡ್ ಮೆಚ್ಚಿಸಲಾ ಅಥವಾ ಕುರ್ಚಿ ಉಳಿಸಿಕೊಳ್ಳುವುದಕ್ಕಾ ಎಂದು ಟೀಕಾ ಪ್ರಹಾರ ನಡೆಸಿದ್ದು, ಕೂಡಲೇ ರಾಜ್ಯದ ನೆರೆ ಸಂತ್ರಸ್ತರಿಗೆ ಪರಿಹಾರ ವಿತರಿಸಿ ಹಾಗೇ ಹಾಸನದ ಅಮಾಯಕ ಮಕ್ಕಳ ಮೃತ ಕುಟುಂಬಗಳಿಗೆ ಹೆಚ್ಚಿನ ಪರಿಹಾರ ನೀಡಿ ಎಂದು ಒತ್ತಾಯಿಸಿದೆ.



# ರಾಗಿ, ಸಿಹಿ ಗೆಣಸಿನ ಪರೋಟ ಮಾಡಿ...

ಡಯಟ್ ಫ್ರೆಂಡ್ಲಿ ಬ್ರೇಕ್‌ಫಾಸ್ಟ್. ಮಕ್ಕಳಿಗೂ ದೊಡ್ಡವರಿಗೂ ಇಷ್ಟವಾಗುವ ಸಿಹಿ ಗೆಣಸು ಪರೋಟ ರೆಸಿಪಿ. ಈ ಬೆಳಗಿನ ತಿಂಡಿ ತೂಕ ಇಳಿಸುವವರಿಗೆ ಬೆಸ್ಟ್. ಹೌದು ಆರೋಗ್ಯಕರ ತಿಂಡಿಗಾಗಿ ಸಿಹಿ ಗೆಣಸಿನ ಪರಾಠ ಉತ್ತಮ ಆಯ್ಕೆಯಾಗಿದೆ.

ಇದನ್ನು ಮಧ್ಯಾಹ್ನದ ಊಟಕ್ಕೂ ತೆಗೆದುಕೊಂಡು ಹೋಗಬಹುದು. ಮೊಸರಿನೊಂದಿಗೆ ಸವಿಯಲು ಇದು ಇನ್ನೂ ರುಚಿಯಾಗಿರುತ್ತದೆ. ಸಿಹಿ ಗೆಣಸು ಪರೋಟ ತಯಾರಿಸುವ ಸಂಪೂರ್ಣ ವಿಧಾನ ಇಲ್ಲಿದೆ.

ಇತ್ತೀಚಿನ ದಿನಗಳಲ್ಲಿ ಜನರು ಆರೋಗ್ಯಕರ ಜೀವನಶೈಲಿಗೆ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ. ಸಾಮಾನ್ಯವಾಗಿ ಪ್ರತಿದಿನ ಬೇಳೆಕಾಳು, ಅನ್ನ, ರೊಟ್ಟಿ-ಪಲ್ಯ ತಿನ್ನುವ ಬದಲು ವಿಭಿನ್ನ ಹಾಗೂ ಆರೋಗ್ಯಕರವಾದದ್ದನ್ನು ಸೇವಿಸಲು ಬಯಸುತ್ತಾರೆ. ಗ್ಲುಟೆನ್ ಮುಕ್ತ ಆಹಾರಗಳ ಸೇವನೆಯೂ ಈಗ ಹೆಚ್ಚಾಗುತ್ತಿದೆ. ಗೋಧಿ ಹಿಟ್ಟಿನ ಬದಲು ರಾಗಿ, ಜೋಳ ಮತ್ತು ಭತ್ತದ ಹಿಟ್ಟಿಗೆ ಜನರು ಆದ್ಯತೆ ನೀಡುತ್ತಿದ್ದಾರೆ. ನೀವು ಗ್ಲುಟೆನ್ ಮುಕ್ತ ಮತ್ತು ರುಚಿಕರವಾದ ಆರೋಗ್ಯಕರ ತಿಂಡಿ ಹುಡುಕುತ್ತಿದ್ದರೆ, ರಾಗಿಯ ಸೇರ್ಪಡೆಯೊಂದಿಗೆ ಸಿಹಿ ಗೆಣಸಿನ ಸ್ಟಫಿಂಗ್ ಪರೋಟ ಒಮ್ಮೆ ಟ್ರೈ ಮಾಡಿ. ರಾಗಿ ಮತ್ತು ಸಿಹಿ ಗೆಣಸು ಎರಡೂ ನಮ್ಮ ಆರೋಗ್ಯಕ್ಕೆ ಬಹಳ ಪ್ರಯೋಜನಕಾರಿ. ಇದು ನಿಮ್ಮ ಬೆಳಗಿನ ಟಿಫನ್ ಅಥವಾ ಮಕ್ಕಳ ಮಧ್ಯಾಹ್ನದ ಲಂಚ್‌ಗೆ ಸೂಕ್ತವಾದ ಅಡುಗೆಯಾಗಿದೆ. ಸಿಹಿ ಗೆಣಸಿನ ಪರೋಟವನ್ನು ಸುಲಭವಾಗಿ ಮಾಡುವ ವಿಧಾನ ಇಲ್ಲಿದೆ.

**ಸಿಹಿ ಗೆಣಸಿನ ಪರೋಟ ತಯಾರಿಸಲು ಬೇಕಾಗುವ ಸಾಮಗ್ರಿಗಳು**

- ರಾಗಿ ಹಿಟ್ಟು
- ಸಿಹಿ ಗೆಣಸು (ಬೇಯಿಸಿ)
- ಗೋಧಿ ಹಿಟ್ಟು
- ಕೊತ್ತಂಬರಿ ಸೊಪ್ಪು
- ಈರುಳ್ಳಿ
- ಹಸಿಮೆಣಸು
- ಶುಂಠಿ ಪೇಸ್ಟ್
- ಜೀರಿಗೆ ಪುಡಿ
- ರುಚಿಗೆ ತಕ್ಕಷ್ಟು ಉಪ್ಪು
- ತುಪ್ಪ

**ಸಿಹಿ ಗೆಣಸಿನ ಪರೋಟ ಮಾಡುವ ವಿಧಾನ:** ಮೊದಲು ಸ್ವಲ್ಪ ಸಿಹಿ ಗೆಣಸುಗಳನ್ನು ತೆಗೆದುಕೊಂಡು ನೀರಿನಲ್ಲಿ ಚೆನ್ನಾಗಿ ತೊಳೆಯಿರಿ. ಈಗ ಕುಕ್ಕರ್‌ನಲ್ಲಿ 2 ಅಥವಾ 3 ವಿಸಿಲ್ ಬರುವವರೆಗೆ ಬೇಯಿಸಿ. ಬಳಿಕ ಒಂದು ಬಾಣಲೆಯಲ್ಲಿ 2 ಕಪ್ ನೀರನ್ನು ಬಿಸಿ ಮಾಡಿ. ಅದಕ್ಕೆ ತುಪ್ಪ ಹಾಕಿ. ನಂತರ ರಾಗಿ ಹಿಟ್ಟನ್ನು ಸೇರಿಸಿ ಮೃದುವಾದ ಹಿಟ್ಟನ್ನು ತಯಾರಿಸಿ. ಇದನ್ನು 10 ನಿಮಿಷಗಳ ಕಾಲ ಹಾಗೆಯೇ ಬಿಡಿ. ಈಗ ಬೇಯಿಸಿದ ಸಿಹಿ ಗೆಣಸನ್ನು ಸಿಪ್ಪೆ ತೆಗೆದು ಹಿಸುಕಿ. ಇದಕ್ಕೆ ಈರುಳ್ಳಿ, ಹಸಿಮೆಣಸು, ಶುಂಠಿ ಪೇಸ್ಟ್, ಸಣ್ಣಗೆ ಹೆಚ್ಚಿದ ಕೊತ್ತಂಬರಿ ಸೊಪ್ಪು, ಜೀರಿಗೆ ಪುಡಿ ಮತ್ತು ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ಬಳಿಕ ಹಿಟ್ಟಿನಿಂದ ಸಣ್ಣ ಸಣ್ಣ ಉಂಡೆಗಳನ್ನು ಮಾಡಿಟ್ಟುಕೊಳ್ಳಿ. ಅವುಗಳನ್ನು ಕೈಗಳಿಂದ ಚಪ್ಪಟೆ ಮಾಡಿ. ಸಿಹಿ ಗೆಣಸಿನ ಸ್ಟಫಿಂಗ್ ತುಂಬಿ ಚಪಾತಿ ರೀತಿ ಲಟ್ಟಿಸಿ. ಲಟ್ಟಿಸುವಾಗ ಸ್ವಲ್ಪ ಹಿಟ್ಟನ್ನು ಬಳಸಿ, ಇದರಿಂದ ಪರೋಟ ತವಾಗೆ (ಕಾವಲಿ) ಅಂಟಿಕೊಳ್ಳುವುದಿಲ್ಲ. ಈಗ ತವಾ ಬಿಸಿ ಮಾಡಿ, ಪರೋಟ ಹಾಕಿ ಎರಡೂ ಕಡೆ ಚೆನ್ನಾಗಿ ಬೇಯಿಸಿ. ಪರೋಟ ಇನ್ನೊಂದು ಬದಿಯಲ್ಲಿ ಬೆಂದ ನಂತರ ತುಪ್ಪ ಹಾಕಿ ಬೇಯಿಸಿ. ಇಷ್ಟು ಮಾಡಿದರೆ, ಈಗ ಆರೋಗ್ಯಕರ ಮತ್ತು ಗ್ಲುಟೆನ್ ಮುಕ್ತ ಸಿಹಿ ಗೆಣಸಿನ ಪರೋಟ ಸಿದ್ಧ. ಇದನ್ನು ಮೊಸರು, ಉಪ್ಪಿನಕಾಯಿ ಅಥವಾ ಚಟ್ನಿಯೊಂದಿಗೆ ಸವಿಯಬಹುದು. ಜಿಮ್ ಪ್ರಿಯರಿಗೆ ಉತ್ತಮ ಆಯ್ಕೆ ಈ ಸಿಹಿ ಗೆಣಸಿನ ಪರೋಟ ವರ್ಕ್‌ಔಟ್ ಮಾಡುವವರಿಗೆ ಅಥವಾ ಜಿಮ್ ಪ್ರಿಯರಿಗೆ ಸೂಕ್ತವಾಗಿದೆ. ಇದನ್ನು ವ್ಯಾಯಾಮದ ನಂತರ ಸೇವಿಸಬಹುದು. ಇದರಲ್ಲಿ ಅಧಿಕ ಫೈಬರ್, ಕ್ಯಾಲ್ಸಿಯಂ ಮತ್ತು ಕಬ್ಬಿಣಾಂಶ ಇರುವುದರಿಂದ ದೇಹಕ್ಕೆ ತಕ್ಷಣ ಶಕ್ತಿ ನೀಡುತ್ತದೆ. ಅಲ್ಲದೆ, ಇದು ಸುಲಭವಾಗಿ ಜೀರ್ಣವಾಗುತ್ತದೆ ಮತ್ತು ದೀರ್ಘಕಾಲದವರೆಗೆ ಹೊಟ್ಟೆ ತುಂಬಿದ ಭಾವನೆ ನೀಡುತ್ತದೆ.

# ಆರೋಗ್ಯ ಸಮಸ್ಯೆ ಇದ್ದವರು ಬೆಂಡೆಕಾಯಿ ತಿನ್ನುವಂತಿಲ್ಲ! ತಿಂದರೆ ಅಪಾಯ ಕಟ್ಟಿಟ್ಟಬುತ್ತಿ

ಬೆಂಡೆಕಾಯಿ ಪೋಷಕಾಂಶಗಳಿಂದ ಸಮೃದ್ಧವಾಗಿರುವ ತರಕಾರಿಯಾಗಿದ್ದರೂ, ಕೆಲವೊಂದು ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವವರು ಮಾತ್ರ ಈ ತರಕಾರಿಯಿಂದ ದೂರವಿರಬೇಕು. ಹಾಗಾದ್ರೆ ಯಾವೆಲ್ಲಾ ಆರೋಗ್ಯ ಸಮಸ್ಯೆಗಳು ಇರುವವರು ಈ ತರಕಾರಿಯಿಂದ ದೂರವಿರಬೇಕು ನೋಡೋಣ ಬನ್ನಿ ನೈಸರ್ಗಿಕವಾಗಿ ಸಿಗುವ ಪ್ರತಿಯೊಂದು ತರಕಾರಿಗಳು ಮನುಷ್ಯನ ಆರೋಗ್ಯಕ್ಕೆ ತುಂಬಾ ಒಳ್ಳೆಯದು ಎನ್ನುವುದು ನೂರಕ್ಕೆ ನೂರರಷ್ಟು ಸತ್ಯ. ಈ ವಿಚಾರದಲ್ಲಿ 2 ಮಾತಿಲ್ಲ. ಆದರೆ ದೀರ್ಘಕಾಲದ ಕಾಯಿಲೆಯಿಂದ ಬಳಲುತ್ತಿರುವವರು, ಕೆಲವೊಂದು ಬಗೆಯ ತರಕಾರಿಗಳಿಂದ ದೂರ ನಿಲ್ಲಬೇಕಾಗುತ್ತದೆ! ಇದಕ್ಕೆ ಬೆಂಡೆಕಾಯಿ ಕೂಡ ಹೊರತಲ್ಲ ಹಾಗಂತ ಬೆಂಡೆಕಾಯಿ ಆರೋಗ್ಯಕ್ಕೆ ಒಳ್ಳೆಯದಲ್ಲ ಎಂದರ್ಥವಲ್ಲ, ಇದರಲ್ಲಿ ಸಾಕಷ್ಟು ಆರೋಗ್ಯ ಪ್ರಯೋಜನಗಳು ಅಡಗಿದೆ, ಪ್ರಮುಖವಾಗಿ ಈ ತರಕಾರಿಯಲ್ಲಿ ಕಂಡು ಬರುವ ಮೆಗ್ನೀಷಿಯಂ, ವಿಟಮಿನ್ ಎ, ವಿಟಮಿನ್ ಕೆ, ನಾರಿನಾಂಶ ಹಾಗೂ ಆಂಟಿ ಆಕ್ಸಿಡೆಂಟ್ ಅಂಶಗಳು ಮನುಷ್ಯನ ಆರೋಗ್ಯದ ಮೇಲೆ ಧನಾತ್ಮಕ ಪ್ರಭಾವನ್ನೇ ಬೀರುತ್ತವೆ, ಆದರೆ ಈಗಾಗಲೇ ಹೇಳಿದ ಹಾಗೆ ಕೆಲವೊಂದು ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಈ ತರಕಾರಿಯಿಂದ ದೂರವಿದ್ದರೆ ಒಳ್ಳೆಯದು.

**ಈಗಾಗಲೇ ಕಿಡ್ನಿ ಸಮಸ್ಯೆಯಿಂದ ಬಳಲುತ್ತಿರುವವರು :** ಬೆಂಡೆಕಾಯಿಯಲ್ಲಿ ಆಕ್ಸಲೇಟ್ ಸಮೃದ್ಧವಾಗಿದೆ. ಆಕ್ಸಲೇಟ್ ದೇಹದಲ್ಲಿನ ಕ್ಯಾಲ್ಸಿಯಂನೊಂದಿಗೆ ಸೇರಿಕೊಂಡು ಕ್ಯಾಲ್ಸಿಯಂ ಆಕ್ಸಲೇಟ್ ಕಲ್ಲುಗಳನ್ನು ರೂಪಿಸುತ್ತದೆ, ಇದು ಮೂತ್ರಪಿಂಡದ ಕಲ್ಲುಗಳ ಸಾಮಾನ್ಯ ವಿಧ ವಾಗಿದೆ. ಈಗಾಗಲೇ ಮೂತ್ರಪಿಂಡದ ಕಲ್ಲುಗಳನ್ನು ಹೊಂದಿರುವವರು ಅಥವಾ ಕುಟುಂಬದ ಇತಿಹಾಸ ಹೊಂದಿರುವ ಜನರು ಬೆಂಡೆ ಕಾಯಿಯನ್ನು ತಿನ್ನುವುದರಿಂದ ದೂರವಿರಬೇಕು. ಒಂದು ವೇಳೆ ತಿನ್ನಲೇಬೇಕು ಎಂದರೆ ಈ ತರಕಾರಿಯನ್ನು ಸಣ್ಣ ಪ್ರಮಾಣದಲ್ಲಿ ತಿನ್ನಿರಿ ಮತ್ತು ಸಾಕಷ್ಟು ನೀರು ಕುಡಿಯಿರಿ.

**ಕೀಲು ನೋವಿನಿಂದ ಬಳಲುತ್ತಿರುವ ಜನರು:** ದೇಹದಲ್ಲಿ ಯೂರಿಕ್ ಆಮ್ಲದ ಹೆಚ್ಚಳದಿಂದ ಮೂಳೆಗಳಿಗೆ ಸಂಬಂಧಪಟ್ಟ ಸಮಸ್ಯೆಗಳು ಬಹಳ ಬೇಗನೇ ಕಾಣಿಸಿಕೊಳ್ಳುತ್ತದೆ. ಹೀಗಾಗಿ ಈ ತರಕಾರಿ ಯಲ್ಲಿರುವ ಆಕ್ಸಲೇಟ್‌ಗಳು ಯೂರಿಕ್ ಆಮ್ಲದ ಸ್ಫಟಿಕೀಕರಣವನ್ನು ಉತ್ತೇಜಿಸಬಹುದು, ಇದು ಕೀಲು ನೋವು ಮತ್ತು ಊತದ ಸಮಸ್ಯೆ ಯನ್ನು ಮತ್ತಷ್ಟು ಹೆಚ್ಚಿಸುತ್ತದೆ. ಆದ್ದರಿಂದ, ಈಗಾಗಲೇ ಮೂಳೆಗಳಿಗೆ ಸಂಬಂಧ ಪಟ್ಟ ರೋಗಿಗಳು ಲೇಡಿಫಿಂಗರ್ ಅಂದರೆ ಬೆಂಡೆಕಾಯಿಯಿಂದ ದೂರ ವಿದ್ದರೆ ಒಳ್ಳೆಯದು.

**ಜೀರ್ಣಕ್ರಿಯೆಯ ಸಮಸ್ಯೆಗಳಿರುವ ಜನರು:** ಬೆಂಡೆಕಾಯಿ ನಾರಿನ ಉತ್ತಮ ಮೂಲವಾಗಿದ್ದು, ಇದು ಸಾಮಾನ್ಯವಾಗಿ ಜೀರ್ಣಕ್ರಿಯೆಗೆ ಪ್ರಯೋಜನಕಾರಿಯಾಗಿದೆ. ಆದಾಗ್ಯೂ, ಈಗಾಗಲೇ ಉಬ್ಬುವುದು, ಗ್ಯಾಸ್ಟ್ರಿಕ್, ಇರಿಟೇಬಲ್ ಬೋವೆಲ್ ಸಿಂಡ್ರೋಮ್ ಅಥವಾ ಗ್ರಹಣಿ ರೋಗ, ಜೀರ್ಣಶಕ್ತಿಗೆ ಸಂಬಂಧಪಟ್ಟ ಸಮಸ್ಯೆಗಳನ್ನು ಹೊಂದಿರುವ ಜನರಿಗೆ, ಬೆಂಡೆಕಾಯಿ ಸಮಸ್ಯೆಯನ್ನು ಉಲ್ಬಣಗೊಳಿಸಬಹುದು. ಇದು ಹೊಟ್ಟೆ ಸೆಳೆತ ಮತ್ತು ಅಜೀರ್ಣಕ್ಕೆ ಕಾರಣವಾಗಬಹುದು.

**ರಕ್ತ ತೆಳುವಾಗಿಸುವ ಔಷಧಿಗಳನ್ನು ತೆಗೆದುಕೊಳ್ಳುವ ಜನರು:** ಈಗಾಗಲೇ ಹೇಳಿದ ಹಾಗೆ ಬೆಂಡೆಕಾಯಿ ವಿಟಮಿನ್ ಕೆ ಯ ಅತ್ಯುತ್ತಮ ಮೂಲವಾಗಿದೆ. ರಕ್ತ ಹೆಪ್ಪುಗಟ್ಟುವಿಕೆಯ ಪ್ರಕ್ರಿಯೆಗೆ ವಿಟಮಿನ್ ಕೆ ಅತ್ಯಗತ್ಯ.ರಕ್ತ ತೆಳುವಾಗಿಸುವ ಔಷಧಿಗಳನ್ನು ತೆಗೆದುಕೊಳ್ಳುತ್ತಿರುವ ಜನರು ತಮ್ಮ ಆಹಾರದಲ್ಲಿ ವಿಟಮಿನ್ ಕೆ ಪ್ರಮಾಣವನ್ನು ಮಿತಿಗೊಳಿಸಬೇಕು. ಹೀಗಾಗಿ ಈ ಸಮಯದಲ್ಲಿ ಈ ತರಕಾರಿಯನ್ನು ಆಹಾರಪದ್ಧತಿಯಲ್ಲಿ ಸೇರಿಸಿಕೊಂಡರೆ ಔಷಧದ ಪರಿಣಾಮ ಕಡಿಮೆಯಾಗುತ್ತದೆ, ಇದು ರೋಗಿಗೆ ಸಮಸ್ಯೆಗಳನ್ನು ಉಂಟುಮಾಡಬಹುದು.

**ಅಲರ್ಜಿ ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ :** ಇದು ಅಪರೂಪವಾದರೂ, ಕೆಲವೊಂದು ವರ್ಗದ ಜನರಿಗೆ, ಈ ತರಕಾರಿ ಸೇವನೆಯಿಂದ ಅಲರ್ಜಿಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ ಅಲರ್ಜಿಯ ಲಕ್ಷಣಗಳಲ್ಲಿ ಚರ್ಮದ ಮೇಲೆ ತುರಿಕೆ, ದದ್ದುಗಳು, ಊತ ಅಥವಾ ಉಸಿರಾಟದ ತೊಂದರೆ ಸೇರಿವೆ. ಒಂದು ವೇಳೆ ಬೆಂಡೆಕಾಯಿ ಸೇವಿಸಿದ ಬಳಿಕ ಇಂತಹ ಯಾವುದೇ ಲಕ್ಷಣಗಳು ಕಾಣಿಸಿಕೊಂಡರೆ, ತಕ್ಷಣ ವೈದ್ಯರನ್ನು ಸಂಪರ್ಕಿಸಿ.

**ಈ ತರಕಾರಿಯ ಬಗ್ಗೆ ಪೌಷ್ಟಿಕತಜ್ಞರು ಹೇಳುವ ಪ್ರಕಾರ** ಬೆಂಡೆಕಾಯಿ ಅನ್ನು ಸರಿಯಾದ ತರಕಾರಿಗಳೊಂದಿಗೆ, ಸಮತೋಲಿತ ರೀತಿಯಲ್ಲಿ ತಿನ್ನಬೇಕೆಂದು ಪೌಷ್ಟಿಕತಜ್ಞರು ಶಿಫಾರಸು ಮಾಡುತ್ತಾರೆ.



ಈರುಳ್ಳಿ, ಟೊಮೆಟೊ ಅಥವಾ ಆಲೂ ಗಡ್ಡೆಯೊಂದಿಗೆ ಬೇಯಿಸುವುದು ಸುರಕ್ಷಿತ ರುಚಿಕರವಾಗಿರುತ್ತದೆ.

ಕಚ್ಚಾ ಬೆಂಡೆಕಾಯಿಯಲ್ಲಿ ಹೆಚ್ಚಿನ ಕರಗುವ ನಾರು ಇರುವುದರಿಂದ ಯಾವಾಗಲೂ ಬೆಂಡೆಕಾಯಿಯನ್ನು ಚೆನ್ನಾಗಿ ಬೇಯಿಸಿ ತಿನ್ನಿರಿ, ಇದು ಕೆಲವು ಜನರಲ್ಲಿ ಅಜೀರ್ಣಕ್ಕೆ ಕಾರಣವಾಗಬಹುದು. ಇದನ್ನು ಲಘು ಮಸಾಲೆ, ಕಡಿಮೆ ಎಣ್ಣೆಯಲ್ಲಿ ಬೇಯಿಸಿ, ಇದರಿಂದ ಅದರ ಪೋಷಕಾಂಶಗಳು ಹಾಗೇ ಇರುತ್ತವೆ. ಮಧುಮೇಹ ಅಥವಾ ಜೀರ್ಣಕಾರಿ ಸಮಸ್ಯೆಗಳಿಂದ ಬಳಲುತ್ತಿರುವ ಜನರು ಇದನ್ನು ಹಗಲಿನಲ್ಲಿ ತಿನ್ನಬೇಕು, ಏಕೆಂದರೆ ರಾತ್ರಿಯಲ್ಲಿ ಇದರ ಭಾರವು ಜೀರ್ಣಕ್ರಿಯೆಯ ಮೇಲೆ ಪರಿಣಾಮ ಬೀರುತ್ತದೆ. ಅಲ್ಲದೆ, ಮೊಸರು ಅಥವಾ ಮಜ್ಜಿಗೆಯೊಂದಿಗೆ ತಿನ್ನುವುದರಿಂದ ಜೀರ್ಣ ಕ್ರಿಯೆಗೆ ಹೆಚ್ಚು ಪ್ರಯೋಜನಕಾರಿಯಾಗಿದೆ.

# ಗಂಟೆಗಟ್ಟಲೆ ಕುಳಿತುಕೊಂಡರೆ ನಿಮ್ಮ ಲಿವರ್‌ಗೆ ಅಪಾಯ

ಎಚ್ಚರ..! ಗಂಟೆಗಟ್ಟಲೆ ಕುಳಿತುಕೊಂಡರೆ ನಿಮ್ಮ ಲಿವರ್‌ಗೆ ಅಪಾಯ. ಕುರ್ಚಿಯಲ್ಲಿ ಕುಳಿತು ಕೆಲಸ ಮಾಡುವವರು ತಕ್ಷಣ ಎಚ್ಚೆತ್ತುಕೊಳ್ಳಿ. ಹೌದು, ಕಚೇರಿ ಕೆಲಸವನ್ನು ಒಂದು ನಿಮಿಷ ಪಕ್ಕಕ್ಕಿಟ್ಟು ಈ ವಿಷಯ ತಿಳಿದುಕೊಳ್ಳದಿದ್ದರೆ ನಿಮ್ಮ ಯಕೃತ್‌ಗೆ ಅಪಾಯ ಸಾಧ್ಯತೆ. ನಿರಂತರವಾಗಿ ಕುಳಿತುಕೊಳ್ಳುವ ಅಭ್ಯಾಸವು ನಮ್ಮ ದೇಹಕ್ಕೆ ದೊಡ್ಡ ಅಪಾಯ ತಂದೊಡ್ಡುತ್ತಿದೆ.

ವಿಶೇಷವಾಗಿ, ಲಿವರ್ ಎಂಬ ಪ್ರಮುಖ ಅಂಗವು ಈ ಮೌನ ಹಂತಕನ ಬಲಿಯಾಗುತ್ತಿದೆ.

ಪ್ರಸ್ತುತ ದಿನಗಳಲ್ಲಿ ನಮ್ಮ ಜೀವನಶೈಲಿ ಬಹಳಷ್ಟು ಬದಲಾಗಿದೆ. ಹೆಚ್ಚಿನವರಿಗೆ ಕುರ್ಚಿಯೇ ಪ್ರಪಂಚವಾಗಿದೆ. ಕಚೇರಿಯಲ್ಲಿ ಗಂಟೆಗಟ್ಟಲೆ ಕಂಪ್ಯೂಟರ್ ಮುಂದೆ, ಮನೆಯಲ್ಲಿ ಟಿವಿ ಅಥವಾ ಮೊಬೈಲ್ ಫೋನ್‌ಗೆ ಅಂಟಿಕೊಂಡು ಸಮಯ ಕಳೆಯುತ್ತೇವೆ. ಕುಳಿತುಕೊಳ್ಳುವುದು ಸಾಮಾನ್ಯ ವಿಷಯವಾದರೂ, ಈ ಅಭ್ಯಾಸ ನಮ್ಮ ಆರೋಗ್ಯಕ್ಕೆ, ವಿಶೇಷವಾಗಿ ನಮ್ಮ ದೇಹದ ಪ್ರಮುಖ ಅಂಗವಾದ ಯಕೃತ್‌ಗೆ ಮಾರಕವಾಗಬಹುದು. ನೀವು ಕೂಡ ಹೆಚ್ಚಾಗಿ ಕುರ್ಚಿಯಲ್ಲೇ ಕುಳಿತುಕೊಳ್ಳುವವರಾಗಿದ್ದರೆ,



ನಿಮ್ಮ ಆರೋಗ್ಯದ ಬಗ್ಗೆ ಕೂಡಲೇ ಗಮನ ಹರಿಸಬೇಕು.

**ಫ್ಯಾಟಿ ಲಿವರ್ ಅಂದರೆ ಏನು :** ಯಕೃತ್‌ನಲ್ಲಿ ಕೊಬ್ಬು ಅತಿಯಾಗಿ ಸಂಗ್ರಹವಾಗುವುದನ್ನೇ ಫ್ಯಾಟಿ ಲಿವರ್ ಕಾಯಿಲೆ ಎನ್ನುತ್ತಾರೆ. ಇದು ಯಕೃತ್‌ನಲ್ಲಿ ಉರಿಯೂತವನ್ನು ಉಂಟುಮಾಡಿ ಅದರ ಕಾರ್ಯಕ್ಷಮತೆಯನ್ನು ಕುಂಠಿತಗೊಳಿಸುತ್ತದೆ. ಆರಂಭದಲ್ಲಿ ಇದನ್ನು ಗುರುತಿಸಿ ಚಿಕಿತ್ಸೆ ನೀಡದಿದ್ದರೆ, ಭವಿಷ್ಯದಲ್ಲಿ ಸಿರ್ಹೋಸಿಸ್, ಯಕೃತ್ ಕ್ಯಾನ್ಸರ್‌ನಂತಹ ಮಾರಣಾಂತಿಕ ಕಾಯಿಲೆಗಳಿಗೆ ಕಾರಣವಾಗಬಹುದು. ಫ್ಯಾಟಿ ಲಿವರ್‌ನಲ್ಲಿ ಮುಖ್ಯವಾಗಿ ಎರಡು ವಿಧಗಳಿವೆ: ಆಲ್ಕೋಹಾಲ್ ಸೇವನೆಯಿಂದ ಬರುವ ಫ್ಯಾಟಿ ಲಿವರ್ ಮತ್ತು ನಾನ್ ಆಲ್ಕೊಹಾಲಿಕ್ ಫ್ಯಾಟಿ ಲಿವರ್ ಡಿಸೀಸ್ ಇದು ಹೆಚ್ಚಾಗಿ ನಮ್ಮ ಜೀವನಶೈಲಿಯ ದೋಷಗಳಿಂದ ಬರುತ್ತದೆ.

**ಯಾರಿಗೆ ಹೆಚ್ಚು ಅಪಾಯ**

- ಡೆಸ್ಕ್‌ಜಾಬ್ ಮಾಡುವ ನೌಕರರು
- ವಿದ್ಯಾರ್ಥಿಗಳು
- ಗಂಟೆಗಟ್ಟಲೆ ಸ್ಕ್ರೀನ್ ಎದುರುಗಿರುವವರು
- ಮೊಬೈಲ್ ಹಾಗೂ ಲ್ಯಾಪ್‌ಟಾಪ್ ಮೇಲೆ ಅವಲಂಬನೆ ಹೆಚ್ಚಿರುವ ಮಕ್ಕಳು ಮತ್ತು ಯುವಕರು

**ಲಿವರ್, ಕುಳಿತುಕೊಳ್ಳುವುದಕ್ಕೆ ಸಂಬಂಧ ಏನು:** ಗಂಟೆಗಟ್ಟಲೆ ಚಲನರಹಿತವಾಗಿ ಕುಳಿತಾಗ, ನಮ್ಮ ದೇಹದ ಸ್ನಾಯುಗಳು ಸ್ಲೀಪಿಂಗ್ ಮೋಡ್‌ಗೆ ಹೋಗುತ್ತವೆ. ಇದರಿಂದ ದೇಹದಲ್ಲಿ ಇನ್ಸುಲಿನ್ ಕಾರ್ಯನಿರ್ವಹಣೆ ಹದಗೆಡುತ್ತದೆ. ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸುವ ಇನ್ಸುಲಿನ್ ಸರಿಯಾಗಿ ಕೆಲಸ ಮಾಡದಿದ್ದಾಗ, ದೇಹವು ಕೊಬ್ಬನ್ನು ಸಂಗ್ರಹಿಸಲು ಪ್ರಾರಂಭಿಸುತ್ತದೆ.

ಈ ಕೊಬ್ಬಿನ ಮೊದಲ ತಾಣ ನಮ್ಮ ಯಕೃತ್. ಹೀಗೆ ಯಕೃತ್‌ನಲ್ಲಿ ಕೊಬ್ಬು ಸೇರುವುದರಿಂದ ಫ್ಯಾಟಿ ಲಿವರ್ ಸಮಸ್ಯೆ ಪ್ರಾರಂಭವಾಗುತ್ತದೆ.

ಕಚೇರಿಗಳಲ್ಲಿ ಅಥವಾ ಕಾರ್ಖಾನೆಗಳಲ್ಲಿ ಡೆಸ್ಕ್ ಕೆಲಸ ಮಾಡುವವರು, ವಿದ್ಯಾರ್ಥಿಗಳು, ಗಂಟೆಗಟ್ಟಲೆ ಸ್ಕ್ರೀನ್ ಮುಂದೆ ಕಳೆಯುವವರಿಗೆ ಈ ಸಮಸ್ಯೆಯ ಅಪಾಯ ಹೆಚ್ಚು. ಸ್ಮಾರ್ಟ್‌ಫೋನ್‌ಗಳು, ಕಂಪ್ಯೂಟರ್‌ಗಳ ಬಳಕೆಯ ಹೆಚ್ಚಳದಿಂದಾಗಿ ಮಕ್ಕಳಲ್ಲಿ ಮತ್ತು ಯುವಜನರಲ್ಲಿಯೂ ಈ ರೋಗ ವೇಗವಾಗಿ ಹರಡುತ್ತಿದೆ ಎಂಬುದು ದುರದೃಷ್ಟಕರ. ಬೊಜ್ಜು ಇರುವವರಿಗೆ ಮಾತ್ರ ಈ ಸಮಸ್ಯೆ ಬರುತ್ತದೆ ಎಂದು ಭಾವಿಸುವುದು ತಪ್ಪು. ತೆಳ್ಳಗಿರುವ ಅಥವಾ ಸಾಮಾನ್ಯ ತೂಕ ಇರುವವರೂ ಸಹ ಗಂಟೆಗಟ್ಟಲೆ ಕುಳಿತುಕೊಂಡರೆ ಫ್ಯಾಟಿ ಲಿವರ್ ಬರುವ ಅಪಾಯವಿದೆ. ಮುನ್ನೆಚ್ಚರಿಕೆಯೇ ಏಕೈಕ ಪರಿಹಾರ ನಿವಾರಣೆ ನಮ್ಮ ಕೈಯಲ್ಲೇ ಇದೆ. ನಮ್ಮ ಜೀವನಶೈಲಿಯಲ್ಲಿ ಕೆಲವು ಸಣ್ಣ ಬದಲಾವಣೆಗಳನ್ನು ಮಾಡಿಕೊಳ್ಳುವುದರಿಂದ ಫ್ಯಾಟಿ ಲಿವರ್ ಅನ್ನು ತಡೆಯಬಹುದು ಅಥವಾ ನಿಯಂತ್ರಿಸಬಹುದು.

# ನಾಮನಿರ್ದೇಶಿತ ಅಧ್ಯಕ್ಷರ, ವಿವಿಧ ಇಲಾಖೆಗಳ ಸದಸ್ಯರುಗಳ ಆಯ್ಕೆ

• ಉದಯ ವಾಹಿನಿ ಸುದ್ದಿ

**ಕಾರಟಗಿ:** ಕನಕಗಿರಿ ವಿಧಾನ ಸಭಾ ಕ್ಷೇತ್ರ, ಶಿಕ್ಷಣ ಸುಧಾರಣಾ ಸಮಿತಿಯ ವಿವಿಧ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಿತು. ತಾಲ್ಲೂಕ ಸಮಿತಿಯ ಅಧ್ಯಕ್ಷರನ್ನಾಗಿ ಶ್ರೀಬಿ, ಶರಣಯ್ಯ ಸ್ವಾಮಿ ಇವರನ್ನು ಆಯ್ಕೆ ಮಾಡಲಾಯಿತು, ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಕೊಪ್ಪಳ ಇವರಿಂದ ನಾಮನಿರ್ದೇಶಿತ ಸದಸ್ಯರುಗಳಾದ ಶ್ರೀ ವಿಶ್ವನಾಥ ಮುರಡಿ ತಹಶೀಲ್ದಾರರು, ಕನಕಗಿರಿ ಶ್ರೀಕುಮಾರಸ್ವಾಮಿ ತಹಶೀಲ್ದಾರರು, ಕಾರಟಗಿ ಶ್ರೀ ರಾಜಶೇಖರ್ಕಾ ರ್ಯನಿರ್ವಾಹಕ ಅಧಿಕಾರಿಗಳು, ತಾ.ಪಂ.ಕನಕಗಿರಿ, ಶ್ರೀಮತಿ ಲಕ್ಷ್ಮೀದೇವಿ ಕಾರ್ಯನಿರ್ವಾಹಕ ಅಧಿಕಾರಿಗಳು. ತಾ.ಪಂ. ಕಾರಟಗಿ, ಶ್ರೀಸಾಬಣ್ಣ ಕಟ್ಟಿಕಾರ್ ಮುಖ್ಯಾಧಿಕಾರಿಗಳು, ಪುರಸಭೆ ಕಾರಟಗಿ, ಶ್ರೀಎಚ್.ಬಿ. ನಟೇಶ್ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಗಂಗಾವತಿ ಶ್ರೀ ನಾಗರಾಜ್ ಸಹಾಯಕ ಕಾರ್ಯಪಾಲಕ ಅಭಿಯಂತರರು,


ಉದಯವಾಹಿನಿ ಚಿತ್ರ

ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ.ಗಂಗಾವತಿ ಶ್ರೀ ಶರಣಪ್ಪ, ಸೋಮಲಾಪುರ ಉಪ-ಪ್ರಾಂಶುಪಾಲರು, ಕೆ ಪಿ ಎಸ್ ಕಾರಟಗಿ,, ಶ್ರೀ ತುಳಜಾ ನಾಯ್ಕಮುಖ್ಯಗುರುಗಳು (ಪ್ರಭಾರಿ)ಸ ಬಾಲಕಿಯರ ಹಿ ಪ್ರಾ ಶಾಲೆ, ಕನಕಗಿರಿ, ಶ್ರೀ ಅಮರೇಶ ದೇವರಾಳ ಪ್ರಾಂಶುಪಾಲರು, ಕೆ ಪಿ ಎಸ್ ಕನಕಗಿರಿ ಶ್ರೀ ಬಿ ಎಮ್ ಸವದತ್ತಿ



ವಲಯ ನೋಡಲ್ ಅಧಿಕಾರಿ, ಉಪನ್ಯಾಸಕರು, ಡಯಟ್ ಮುನಿರಾಬಾದ್, ಮತ್ತು ಶ್ರೀ ತಿಪ್ಪಣ್ಣ ಬಾವಿ ಅಧ್ಯಕ್ಷರು, ಎಸ್ ಡಿ ಎಮ್ ಸಿ.ಸರಕಾರಿ ಮಾದರಿ ಹಿರಿಯರ ಪ್ರಾಥಮಿಕ, ಶಾಲೆ ಸಿದ್ದಾಪುರ ಡಾ.ಕಾರಟಗಿ, ಶ್ರೀ ಹೊನ್ನೂರಸಾಬ್ ಉಪ್ಪಿನ್,ಅಧ್ಯಕ್ಷರು,ಎಸ್ ಡಿ.ಎಮ್ ಸಿ.ಆದರ್ಶ ವಿದ್ಯಾಲಯ, ಕನಕಗಿರಿ ಇವರುಗಳನ್ನು ಆಯ್ಕೆ ಮಾಡಿ ಆದೇಶಿಸಲಾಯಿತು . ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕರಾದ ವಿಠಲ ಜೀರಾಗಾಳಿ, ಬಸವರಾಜ್ ಹಾಲ ಸಮುದ್ರ ಶಿಕ್ಷಣ ಸಂಯೋಜಕ ರಾಘವೇಂದ್ರ, ಶಿಕ್ಷಣಾಧಿಕಾರಿ ನಟೇಶ್ ಕುಮಾರ್ ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

ಈ ವೇಳೆ ಕನಕಗಿರಿ ವಿಧಾನಸಭಾ ಕ್ಷೇತ್ರದ ಶಿಕ್ಷಣಸುಧಾರಣ ಸಮಿತಿ ಅಧ್ಯಕ್ಷರಾದ ಶ್ರೀ ಶರಣಯ್ಯ ಸ್ವಾಮಿ ಹಾಗೂ ಶಿಕ್ಷಣ ಸುಧಾರಣಾ ಸಮಿತಿ ಸದಸ್ಯರಾದ ಶ್ರೀ ಬಸವರಾಜ ಹಾಲಸಮುದ್ರ ರವರಿಗೆ ಮಾನ್ಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಆತ್ಮೀಯ ಸನ್ಮಾನ ಮಾಡಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಶ್ರೀ ವಿಠ್ಠಲ ಜೀರಗಾಳಿ, ಈ ಸಿ ಒ ರಾಘವೇಂದ್ರ, ಸಿ ಆರ್ ಪಿ ತಿಮ್ಮಣ್ಣ ನಾಯಕ, ಕೆ ಮತ್ತು ಸಿ ಆರ್ ಪಿ ಪ್ರಭುದೇವ, ಮುಗು ಜಟಿಂಗರಾಯ ದಳವಾಯಿ ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದ ಜನರ ಅನುಕೂಲಕ್ಕಾಗಿ ಹಲ್ಲಿನ ಆಸ್ವತ್ರೆ ಪ್ರಾರಂಭ

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದ ಜನರ ಅನುಕೂಲಕ್ಕಾಗಿ ಹಲ್ಲಿನ ಆಸ್ವತ್ರೆ ಪ್ರಾರಂಭಿಸಿದ್ದು ಬಡವರು ಮಾಧ್ಯಮ ವರ್ಗದವರು ಆಸ್ವತ್ರೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಾಲ್ಲೂಕಾ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಲಕ್ಷ್ಮಿದೇವಿ ಮಂಜುನಾಥ ಕೊರವಿ ಹೇಳಿದರು. ಪಟ್ಟಣದ ಹಳೆಯ ಎಸ್ಬಿಐ ಬ್ಯಾಂಕ್ ಎದುರುಗಡೆ ಸೂಗೂರ್ ಕಾಂಪ್ಲೆಕ್ಸ್‌ನಲ್ಲಿ ಎ.ಎಸ್.ಎಮ್ ಡೆಂಟಲ್ ಕೇರ್ ನೂತನ ಆಸ್ವತ್ರೆಯು ಉಧ್ಘಾಟಿಸಿ ಮಾತನಾಡಿದ ಅವರು,ಪಟ್ಟಣದಲ್ಲಿ ಹಲ್ಲಿನ ಸಮಸ್ಯೆ ಇದ್ದರೆ ಕಲಬುರ್ಗಿ ಬೀದರ ಜಿಲ್ಲೆಗಳಿಗೆ ಹೋಗಬೇಕಾಗಿತ್ತು ಇದರಿಂದ ಬಡವರ ಮಾಧ್ಯಮ ವರ್ಗದವರು ಬಹಳಷ್ಟು ಕಷ್ಟಪಡುತ್ತಿದರು ಇದರಿಂದ ಮುಕ್ತಿ ಸಿಕ್ಕಿದಂತೆ ಆಗಿದೆ ಹಲ್ಲಿನ ಯಾವುದೇ ರೋಗವಿದ್ದರೂ ಪಟ್ಟಣದಲ್ಲಿಯೇ ಸಮಸ್ಯೆಗೆ ಪರಿಹಾರ ದೊರಕುವಂತೆ ಉತ್ತಮ ಚಿಕಿತ್ಸೆ ನೀಡಲು ಆಸ್ವತ್ರೆ ಪ್ರಾರಂಭಿಸಲಾಗಿದೆ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು.

ಹಲ್ಲಿನ ವೈದ್ಯರಾದ ಅಖೀಲ್ ಶೋಯೇಬ್ ಮಹಾರೂಫ್ ಗಾರಂಪಳ್ಳಿಯವರು ಒಳ್ಳೆಯ ಶಿಕ್ಷಣ ಪಡೆದು ಉತ್ತಮ ವೈದ್ಯರಾಗಿ ಸ್ವತಃ ತಾಲ್ಲೂಕಿನಲ್ಲಿ ಆಸ್ವತ್ರೆ ಪ್ರಾರಂಭಿಸಿ ಜನರ ಸೇವೆ ಮಾಡಲು ಬಂದಿದ್ದಾರೆ ಜನರು ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಹಲ್ಲಿನ ವೈದ್ಯರಾದ ಡಾ.ಅಖೀಲ್ ಶೋಯೇಬ್ ಮಹಾರೂಫ್ ಗಾರಂಪಳ್ಳಿ, ಡಾ.ಬಸವೇಶ ಪಾಟೀಲ, ಬಸವರಾಜ ಮಾಲಿ, ಡಾ.ಅಜಯ ಕಾಟಾಪುರ, ಡಾ.ಧನರಾಜ ಬೋಮ್ಮ, ಗೋಪಾಲರಾವ ಕಟ್ಟಿಮನಿ, ಕೆಎಂ ಬಾರಿ,ಅಬ್ದುಲ್ ಬಾಷೀದ್, ಶಾಮರಾವ ಕೊರವಿ, ಜಗನ್ನಾಥ ಕಟ್ಟಿ, ಮಸ್ತಾನ ಅಲಿ ಮಹಾರೂಫ್, ಡಾ.ಜ್ಯೋತಿರ್ಲಿಂಗ ಸೂಗೂರು, ಚಂದ್ರಶೇಖರ ಗುತ್ತೇದಾರ, ವಿಶ್ವನಾಥ ನಾಯನೋರ, ಅಮೀರ್ ಸೋಹೇಲ್, ಮಹೇಬೂಬ ಪಟೇಲ ಸಾಲೇಬೀರನಳ್ಳಿ, ತಾಜೋದ್ದೀನ್ ಪಟೆಲ, ಖಲೀಲ್ ಪಟೆಲ, ಆಶ್ರಫ್ ಪಟೇಲ, ಅನೇಕರಿದ್ದರು.

# ಇಂಜಿನಿಯರ್‌ಗಳ ಸೇವೆಯೇ ರಾಷ್ಟ್ರೋತ್ಥಾನದ ಬುನಾದಿ

## ಒಂದು ದೇಶದ ಅಭಿವೃದ್ಧಿಯಲ್ಲಿ ಇಂಜಿನಿಯರ್‌ಗಳ ಪಾತ್ರ ಅತ್ಯಂತ ಹಿರಿದು

• ಉದಯವಾಹಿನಿ, ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

ಒಂದು ದೇಶದ ಅಭಿವೃದ್ಧಿಯಲ್ಲಿ ಇಂಜಿನಿಯರ್‌ಗಳ ಪಾತ್ರ ಅತ್ಯಂತ ಹಿರಿದು. ದೇಶದ ಪ್ರಗತಿಯನ್ನು ವೇಗಗೊಳಿಸುವ ಶಕ್ತಿ ಇಂಜಿನಿಯರ್‌ಗಳ ಆವಿಷ್ಕಾರ ಮತ್ತು ಕೌಶಲ್ಯದಲ್ಲಿದೆ ಎಂದು ನಿವೃತ್ತ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್, ಜೆಡಿಎಸ್ ಪಕ್ಷದ ಮುಖಂಡ ಹಾಗೂ ಕರ್ನಾಟಕ ರಾಜ್ಯ ಹಸಿರುಸೇನೆಯ ತಾಲ್ಲೂಕ ಕಾರ್ಯಧ್ಯಕ್ಷ ಬಿ.ಬಿ. ಪಾಟೀಲ್ ಹಿರೇಮುರಾಳ ಅಭಿಪ್ರಾಯಪಟ್ಟರು.

ಸೋಮವಾರ ಮುದ್ದೇಬಿಹಾಳ ಪಟ್ಟಣದ ಇಂಜಿನಿಯರಿಂಗ್ ಸಂಘದ ಕಚೇರಿಯಲ್ಲಿ ಎಂ. ವಿಶ್ವೇಶ್ವರಯ್ಯ ಜನ್ಮದಿನದ ಅಂಗವಾಗಿ ಹಮ್ಮಿಕೊಂಡ ಇಂಜಿನಿಯರ್ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಸರ್ ಎಂ. ವಿಶ್ವೇಶ್ವರಯ್ಯನವರು 1885ರಲ್ಲಿ ಮುಂಬಯಿ ಪ್ರಾಂತದ ಲೋಕೋಪಯೋಗಿ ಇಲಾಖೆಯ ಇಂಜಿನಿಯರ್ ಆಗಿ ಸೇವೆ ಸಲ್ಲಿಸಿದಾಗಲೇ ಅನೇಕ ಹೊಸತನದ ವಿನ್ಯಾಸ ಮತ್ತು ಆವಿಷ್ಕಾರಗಳನ್ನು ಮಾಡಿದರು.

ಈ ಸಂದರ್ಭದಲ್ಲಿ ಕೆಬಿಕೆಎನ್‌ಎಲ್ ನಿವೃತ್ತ ಇಂಜಿನಿಯರ್ ಎಸ್.ಎ. ತೊಂಡಿಹಾಳ, ಇಂಜಿನಿಯರ್ ಸಂಘದ ಉಪಾಧ್ಯಕ್ಷ ಅನಿಲ್ ಕುಲಕರ್ಣಿ, ಕಾರ್ಯದರ್ಶಿ ಗುರುರಾಜ ನಾಗೂರ ಅವರು ಮಾತನಾಡಿ ಮೈಸೂರು ಸಾಮ್ರಾಜ್ಯದ ನಾಲ್ಕನೇ ಕೃಷ್ಣರಾಜ ಒಡೆಯರ್ ಆಳ್ವಿಕೆಯಲ್ಲಿ ದಿವಾನರಾಗಿದ್ದ ಎಂ. ವಿಶ್ವೇಶ್ವರಯ್ಯ ಕೃಷ್ಣರಾಜ ಸಾಗರ ಆಣೆಕಟ್ಟನ್ನು ಕಟ್ಟಿಸಿದ ದೂರದೃಷ್ಟಿಯುಳ್ಳವರು. ಮೈಸೂರು ಸ್ಯಾಂಡಲ್ ಸೋಪ್, ಜೋಗದ ಶರಾವತಿ ವಿದ್ಯುತ್ ಯೋಜನೆ, ಭದ್ರಾವತಿ

> **ನೀರು ಸರಬರಾಜು ಯೋಜನೆ, ನಗರಾಭಿವೃದ್ಧಿ, ಒಳಚರಂಡಿ, ರಸ್ತೆ, ವಿದ್ಯುತ್, ಸ್ವಯಂಚಾಲಿತ ಆಣೆಕಟ್ಟು ದ್ವಾರ ವಿನ್ಯಾಸಕ್ಕೆ ಬೌದ್ಧಿಕ ಹಕ್ಕು ಪಡೆದವರು. ಇವತ್ತಿನ ಇನೋವೇಷನ್ ಎಂದು ನಾವು ಹೇಳಿಕೊಳ್ಳುವ ಎಲ್ಲಾ ವಿಷಯಗಳನ್ನು ಅವರು ಶತಮಾನಕ್ಕೂ ಮೊದಲು ರೂಪಿಸಿದ್ದರು ಎಂದರು.**

ಉಕ್ಕಿನ ಕಾರ್ಖಾನೆ ಎಂಬ ಮಹತ್ವದ ಯೋಜನೆಗಳಿಗೂ ಚಾಲನೆ ನೀಡಿದವರು. ಅವರ ಸಾಧನೆಗಳಿಗೆ ಭಾರತ ರತ್ನ ಸೇರಿದಂತೆ ಅನೇಕ ಪ್ರತಿಷ್ಠಿತ ಪ್ರಶಸ್ತಿಗಳನ್ನು ಪಡೆದಿದ್ದಾರೆ'' ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ತಾಲ್ಲೂಕು ಇಂಜಿನಿಯರ್ ಸಂಘದ ವತಿಯಿಂದ ತಾಲ್ಲೂಕ ಸರ್ಕಾರಿ ಆಸ್ವತ್ರೆಯಲ್ಲಿ ಬಡರೋಗಿಗಳಿಗೆ ಹಣ್ಣು ಹಂಪಲು ವಿತರಿಸಲಾಯಿತು.

ಈ ವೇಳೆ ಸಂಘದ ಅಧ್ಯಕ್ಷ ಎಸ್.ಎಂ. ಚಳಗೇರಿ, ಕೆ.ಎಂ. ಢವಳಗಿ, ಆರ್.ಎಸ್. ಕಿತ್ತೂರ, ಎಸ್.ವೈ. ಮಾಲಗತ್ತಿ, ಎಂ.ಎಂ. ಮುದ್ದೇಬಿಹಾಳ, ಎಂ.ಎ. ಮಕಾನದಾರ, ಪಿ.ಎಂ. ದೂಟಿಹಾಳ, ಎಂ.ಎ. ಗುಡ್ನಾಳ, ಎಸ್.ಬಿ. ಹಿರೇಮಠ, ಎಂ.ಎಂ. ಮಿರ್ಜಾ, ಸಿ.ಎಸ್. ನಾಯ್ಕೋಡಿ, ಎಂ.ಎಚ್. ಗುಬಚಿ, ಉದಯ ಭೋವಿ, ಪ್ರಶಾಂತ ಅಂಬಿಗೇರ, ಗಿರೀಶ ಅಂಬಿಗೇರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಸ್ವಾಗತ ಉಮೇಶ ಬಡಿಗೇರ, ಅಭಿಷೇಕ ಸಾಲಿಮಠ ಹಾಗೂ ಸುಪ್ರಿತ್ ಚಳಗೇರಿ ಮಾಡಿದರು. ರಾಮಚಂದ್ರ ಗಜೇಂದ್ರಗಡ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಜೋಳ ನೊಂದಣಿ ಸರಿಯಾದ ಸಮಯಕ್ಕೆ ಖರೀದಿ ಮಾಡಿ

• ಉದಯವಾಹಿನಿ, ಸಿಂಧನೂರು


ಉದಯವಾಹಿನಿ ಚಿತ್ರ

ಬಸವರಾಜ ಗೋಡಿಹಾಳ ಆಗ್ರಹ

ತಾಲ್ಲೂಕಿನಲ್ಲಿ ಈ ವರ್ಷ ಮಳೆ ಹೆಚ್ಚಾಗುತ್ತಿದ್ದು ಬಿತ್ತಿದೆ ಜೋಳ ಮೊಳಕೆ ಬಾರದ ರೈತರು ನಷ್ಟ ಸಂಭವಿಸಿದ್ದು. ಅಂತಹ ರೈತರ ಸರ್ವೇ ಮಾಡಿ ನಷ್ಟದ ಪರಿಹಾರ ಒದಗಿಸಬೇಕೆಂದು. ತಾಲೂಕು ತಹಶೀಲ್ದಾರ್ ಮೂಲಕ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ ಸಂಘದ ವತಿಯಿಂದ ಸರಕಾದದ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿತು. ನಂತರ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಕ.ರಾ.ರೈ.ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಗೋಡಿಹಾಳ ಅವರು

ಅನೇಕ ರೈತರ ಜೋಳಗಳು ಹುಳು ಬಂದು ಖರೀದಿ ಕೇಂದ್ರಕ್ಕೆ ಹಾಕಲು ಬೀದಿಗಿಳಿದು ಹೋರಾಟ ಮಾಡಿದರು ಅಷ್ಟಕ್ಕೂ ಸಂಪೂರ್ಣ ರೈತರು ಒರಬರಲು ಸಾಧ್ಯವಾಗದೆ ಖರೀದಿ ಕೇಂದ್ರಕ್ಕೆ ಮುಂಗಾರು 10ಕ್ವಿಂಟಾಲ್, ಹಿಂಗಾರು 15 ಕ್ವಿಂಟಾಲ್ ಮಾತ್ರ ಕೊಟ್ಟು ಉಳಿದ ಜೋಳವನ್ನ ಮಾರುಕಟ್ಟೆಯಲ್ಲಿ ಬೇಕಾಬೇಟಿ ದರಕ್ಕೆ ಮಾರಿಕೊಂಡು ನಷ್ಟ ಅನುಭವಿಸಿದ ಉದಾಹರಣೆಗಳು ತಮ್ಮ ಕಣ್ಣಮುಂದೆ ಇರುವುದರಿಂದ ಮತ್ತೆ ಅದೆ ರೀತಿ ಮರುಕಳಿಸದೆ ಆಗ್ರಹಿಸಿದರು. ಸರ್ಕಾರ ಮತ್ತು ಅಧಿಕಾರಿಗಳು ಹೆಚ್ಚೆತ್ತು ಕೊಂಡು ಬಿತ್ತನೆ ಕಾರ್ಯ ಮುಗಿದ ತಕ್ಷಣ ಮುಂಗಾರು ಹಿಂಗಾರು ಎನ್ನದೆ ಎಲ್ಲಾ ರೈತರು ಒಂದೆ ಸಾರಿ ಬಿತ್ತನೆ ಮಾಡುವುದರಿಂದ ಜಿಲ್ಲೆಯ ಎಲ್ಲಾ ರೈತರನ್ನು ಮುಂಗಾರು ಎಂದು ಪರಿಗಣಿಸಿ ಸರ್ವೆ ಕಾರ್ಯ ಸಮಯದ ಒಳಗಡೆ ಮಾಡಿ ಏನಾದರು ತಪ್ಪುಗಳು ಕಂಡುಬಂದರೆ ತಕ್ಷಣ ಸರಿಪಡಿಸಿ ಜೋಳ ಕಟಾವು ಮಾಡುವ 20ದಿನಗಳ ಮುಂಚೆ ನೋಂದಣಿ ಸಂಪೂರ್ಣ ಮುಗಿಸಿ ಜೋಳ ಕಟಾವುಗಿನ ಮುಂಚೆ ನಿರಂತರ ಖರೀದಿ ಕೇಂದ್ರ ಪ್ರಾರಂಭೀಸಬೇಕು. ಆಯಾ ಹೋಬಳಿಯ ರೈತರ ಜೋಳ ಅಲ್ಲಿಯೆ ಖರೀದಿ ಮಾಡಬೇಕು ಬೇರೆಕಡೆಯಿಂದ ಬೇರೆ ಕೇಂದ್ರಕ್ಕೆ ಕಡ್ಡಾಯವಾಗಿ ನಿಲ್ಲಿಸಿ ರೈತರಿಗೆ ಸರಳಗೋಳ್ಳಿಸಬೇಕು. ಪ್ರತಿ ಎಕ್ಕರೆಗೆ 25 ಕ್ವಿಂಟಲ್‌ನಂತೆ ಪ್ರತಿಯೊಬ್ಬ ರೈತರಿಗೆ ನಿಗದಿಗೊಳಿಸಿ ಕಡ್ಡಾಯ ಎಲ್ಲಾ ರೈತರ ಜೋಳ ಖರೀದಿ ಮಾಡಬೇಕೆಂದು ಸರ್ಕಾರದಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಾಲೂಕಾಧ್ಯಕ್ಷ ನಾಗರಾಜ ಭಿಂಗಿ. ನಿರುಪಾದಿಪ್ಪ. ರವಿ ಬಸಾಪುರ ಇ ಜೆ. ಅಡಿಯವೆಪ್ಪ ಯಮನಪ್ಪ. ಶಿವರಾಜ ಸೇರಿದಂತೆ ಇತರರು ಪ್ರತಿಭಟನೆಯಲ್ಲಿ ಇದ್ದರು.

# ಪುರಸಭೆಯಲ್ಲಿ ಗೋಲ್ಮಾಲ್ 188 ನಕಲಿ ಖಾತೆಗಳು ಪತ್ತೆ

• ಉದಯವಾಹಿನಿ, ಕಲಬುರಗಿ

ಇತ್ತೀಚೆಗಷ್ಟೇ ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಇ-ಖಾತಾ ಗೋಲ್ಮಾಲ್ ಪ್ರಕರಣ ವರದಿಯಾದ ಬೆನ್ನಲ್ಲೆ ಮತ್ತೊಂದು ಪ್ರಕರಣ ಬಯಲಿಗೆ ಬಂದಿದೆ. ಇದೀಗ ಜೇವರ್ಗಿ ಪುರಸಭೆಯಲ್ಲಿ 3 ವರ್ಷದಲ್ಲಿ 188 ನಕಲಿ ಖಾತೆಗಳು ಪತ್ತೆಯಾಗಿದ್ದು, 100ಕ್ಕೂ ಹೆಚ್ಚು ಜನರ ಮೇಲೆ ಎಫ್‌ಐಆರ್ ದಾಖಲಾಗಿದೆ.

ಜಮೀನು, ನಿವೇಶನ ಹಾಗೂ ಕಮರ್ಷಿಯಲ್ ಅಂಗಡಿ ಗಳ ನಕಲಿ ಖಾತೆಗಳ ನೋಂದಣಿಯನ್ನು ತಡೆಯಲು ಸರ್ಕಾರ ಹಲವು ಕಠಿಣ ನಿಯಮ ಜಾರಿಗೆ ತರುತ್ತಿದೆ. ಆದ್ರೆ ಜೇವರ್ಗಿ ಪುರಸಭೆಯಲ್ಲಿ ಅಧಿಕಾರಿಗಳ ಲಂಚಗುಳಿತನಕ್ಕೆ ನಕಲಿ ಖಾತೆಗಳ ಪ್ರಕರಣ ಹೆಚ್ಚಾಗಿದೆ. ಜೇವರ್ಗಿ ಪಟ್ಟಣದ ಶಾಂತಿನಗರದ ಇಸ್ಮಾಯಿಲ್ ಎಂಬುವರರು ಜೇವರ್ಗಿ ಸಬ್ ರಿಜಿಸ್ಟಾರ್‌ಗೆ ನೋಂದಣಿಯಾದ ನಿವೇಶನದ ದಾಖಲೆಗಳನ್ನು ಆರ್ ಟಿಐ ಮೂಲಕ ಪಡೆದಾಗ 9 ನಕಲಿ ಖಾತೆಗಳ ದಾಖಲೆಗಳು ನೋಂದಣಿ ಆಗಿರುವುದು ಬೆಳಕಿಗೆ ಬಂದಿದೆ. ಜಿಡಿಎ ಹಾಗೂ ಟೌನ್ ಪ್ಲ್ಯಾನಿಂಗ್ ಅನುಮತಿ ಪಡೆಯದ ನಿವೇಶನಗಳಿಗೆ ಖಾತೆ ನೀಡದಂತೆ ಈಗಾಗಲೇ ರಾಜ್ಯ ಸರ್ಕಾರ ಸುತ್ತೋಲೆ ಹೊರಡಿಸಿದ್ದರೂ ಸಹ ಅಕ್ರಮವಾಗಿ ಖಾತೆಗಳಾಗಿರುವುದು ಆರ್‌ಟಿಐ ಮೂಲಕ ಕಂಡುಬಂದಿದೆ. ಹೀಗಾಗಿ ಜೇವರ್ಗಿ ಪಟ್ಟಣದ ಇಸ್ಮಾಯಿಲ್ ಎಂಬುವವರು ನಕಲಿ ಖಾತೆಯ ದಾಖಲೆಗಳ ಬಗ್ಗೆ ಕಲಬುರಗಿ ಜಿಲ್ಲಾಧಿಕಾರಿ ಫೌಜೀಯಾ ತರನ್ನುಂ ಅವರಿಗೆ ದಾಖಲೆ ಸಮೇತ ದೂರು ಸಲ್ಲಿಸಿದ್ದರು. ಈ ಬಗ್ಗೆ ತನಿಖೆ ಮಾಡುವುದಾಗಿ ಜಿಲ್ಲಾಧಿಕಾರಿಗಳು ಭರವಸೆ ನೀಡಿದ್ದರು. ಇನ್ನೂ ನಕಲಿ ಖಾತೆಗಳ ನೋಂದಣಿ ಆಗಿದೆ ಎಂದು ತಿಳಿಯುತ್ತಿದ್ದಂತೆ ಎಚ್ಚೆತ್ತುಕೊಂಡ ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಂ ಅವರು ಗಜಾನನ ಬಾಳೆ ನೇತೃತ್ವದಲ್ಲಿ ನಾಲ್ಕು ಜನರ ತನಿಖಾ ತಂಡವನ್ನು ರಚನೆ ಮಾಡಿ ವರದಿ ನೀಡುವಂತೆ ಸೂಚಿಸಿದ್ದರು. 2021 ರಿಂದ 2024ರ ವರೆಗೆ ಜೇವರ್ಗಿ ಪುರಸಭೆ ವ್ಯಾಪ್ತಿಯಲ್ಲಿಯೇ ಸುಮಾರು 188 ನಕಲಿ ಖಾತಾಗಳನ್ನು ಸೃಷ್ಟಿಸಿರುವುದು ತನಿಖೆ ವೇಳೆ ಪತ್ತೆಯಾಗಿದೆ. ಈ ವರದಿ ಆಧಾರದ ಮೇಲೆ ಜೇವರ್ಗಿ ಪುರಸಭೆ ಮುಖ್ಯಾಧಿಕಾರಿಯು ಜೇವರ್ಗಿ ಪೊಲೀಸ್ ಠಾಣೆಯಲ್ಲಿ ನಕಲಿ ಖಾತೆ ಪಡೆದ 132 ಜನರ ಮೇಲೆ ದೂರು ದಾಖಲಿಸಿದ್ದಾರೆ.

ಒಟ್ಟಾರೆ ಜೇವರ್ಗಿ ಪುರಸಭೆಯಲ್ಲಿ ಅಧಿಕಾರಿಗಳು ಬ್ರೋಕರ್‌ಗಳ ಜೊತೆ ಸೇರಿ ಹಣದ ಆಸೆಗೆ ಖಾತೆಗಳ ಗೋಲ್ಮಾಲ್‌ನಲ್ಲಿ ಶಾಮೀಲಾಗಿದ್ದಾರೆ ಎಂದು ತನಿಖೆಯಲ್ಲಿ ಗೊತ್ತಾಗಿದೆ. ಇನ್ನು ಈ ಬಗ್ಗೆ ಹೆಚ್ಚಿನ ತನಿಖೆ ನಡೆದ್ರೆ ಹಲವು ಅಧಿಕಾರಿಗಳು ಕೈ ಜೋಡಿಸಿರುವುದು ಬೆಳಕಿಗೆ ಬರಲಿದೆ.

# ಹಿಂದೂ ಧರ್ಮ ಒಡೆಯುವುದೇ ಸರ್ಕಾರದ ಅಜೆಂಡಾ

• ಉದಯವಾಹಿನಿ, ಬೆಳಗಾವಿ


ಉದಯವಾಹಿನಿ ಚಿತ್ರ

ಹಿಂದೂ ಧರ್ಮ ಒಡೆಯುವುದೇ ಕಾಂಗ್ರೆಸ್ ಸರ್ಕಾರದ ಅಜೆಂಡಾ. ಹಾಗಾಗಿ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸೆ.22ರಿಂದ ನಡೆಸಲಿರುವ ಜಾತಿ ಸಮೀಕ್ಷೆಯಲ್ಲಿ ಹಿಂದೂ ಧರ್ಮಕ್ಕೆ ಸೇರಿದ ಉಪಜಾತಿಗಳನ್ನು ಕ್ರೈಸ್ತ ಧರ್ಮದ ಪಟ್ಟಿಯಲ್ಲಿ ತೋರಿಸುವ ದುಸ್ಸಾಹಸಕ್ಕೆ ಕೈಹಾಕಿದೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಮಹಾಂತೇಶ ಕವಟಗಿ ಮಠ ದೂರಿದರು. ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮೀಕ್ಷೆಗಾಗಿ ಈಗ ಪ್ರಕಟಿಸಿದ ಪಟ್ಟಿಯಲ್ಲಿ ಹಿಂದೂ ಧರ್ಮದ 46 ಉಪಜಾತಿಗಳು ಕ್ರೈಸ್ತ ಧರ್ಮದ ಪಟ್ಟಿಯಲ್ಲಿವೆ. ಈ ಸಮೀಕ್ಷೆ ಮೂಲಕ ಹಿಂದೂ ಧರ್ಮದ ವಿಭಜನೆಗೆ ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ದೂರಿದರು. ಈ ಹಿಂದೆ ನಡೆಸಿದ್ದ ಸಮೀಕ್ಷೆಗಳಲ್ಲೂ ನಮ್ಮ ಮೇಲೆ ಅನ್ಯಾಯವಾಗಿತ್ತು.

ಈಗ ಮತ್ತೆ ಹಿಂದೂಗಳಿಗೆ ಕ್ರೈಸ್ತರ ಹಣೆಪಟ್ಟಿ ಕಟ್ಟುತ್ತಿರುವುದು ಸರಿಯಲ್ಲ. ಸರ್ಕಾರ ತಕ್ಷಣವೇ ಆದೇಶ ಹಿಂದಕ್ಕೆ ಪಡೆದು, ಈಗ ಆಗಿರುವ ತಪ್ಪು ಸರಿಪಡಿಸಬೇಕು ಎಂದು ಒತ್ತಾಯಿಸಿದರು. ಬಿಜೆಪಿ ವಕ್ತಾರ ಎಂ.ಬಿ.ಝಿರಲಿ, ಹಿಂದೂಗಳಲ್ಲಿ ನೂರಾರು ಉಪಜಾತಿಗಳಿವೆ. ಆದರೆ, ಕ್ರೈಸ್ತ ಧರ್ಮದ ಪಟ್ಟಿಯಲ್ಲಿ ಹಿಂದೂ ಧರ್ಮದ 46 ಉಪಜಾತಿಗಳನ್ನು ಸೇರಿಸಿದ್ದು ಅಂಸವಿಧಾನಿಕ ತೀರ್ಮಾನ. ಇದನ್ನು ಹಿಂದೂಗಳು ಒಪ್ಪಿಕೊಂಡರೆ ಅಧಿಕೃತವಾಗಿ ಮತಾಂತರವಾದಂತೆ. ಹಾಗಾಗಿ ಕ್ರೈಸ್ತ ಧರ್ಮದ ಪಟ್ಟಿಯಲ್ಲಿ ಹಿಂದೂ ಉಪಜಾತಿಗಳನ್ನು ಸೇರಿಸಿದ್ದನ್ನು ಸಮೀಕ್ಷೆಯಿಂದ ಕೈಬಿಡಬೇಕು ಎಂದು ಆಗ್ರಹಿಸಿದರು. ಸೆ.17ರಂದು ಗಾಂಧಿ ಭವನದಲ್ಲಿ ಸಭೆ ನಡೆಸಿ, ಆಯೋಗಕ್ಕೆ ಮನವಿ ಸಲ್ಲಿಸಲಾಗುವುದು ಎಂದರು.

# ಮಕ್ಕಳ ಭಾಗ್ಯವನ್ನು ಕರುಣಿಸುವ ಕಲ್ಲುಗ್ಗಂಡಿಯ ಶ್ರೀ ಗೌರಿ ಮಾತೆ

• ಉದಯವಾಹಿನಿ ಅರಸೀಕೆರೆ

• ಉಮೇಶ್ ಬಾಣಾವರ

ಅರಸೀಕೆರೆ ತಾಲ್ಲೂಕಿನ ಶ್ರೀ ಮಾಡಾಳು ಗೌರಮ್ಮ ತಾಯಿ ರಾಜ್ಯದಲ್ಲಿ ಹೆಸರುವಾಸಿಯಾಗಿದ್ದು ಇನ್ನುಳಿದಂತೆ ಇನ್ನೂ ಹಲವಾರು ಗ್ರಾಮಗಳಲ್ಲಿ ಗೌರಿ ಮಾತೆಯ



ಪವಾಡಗಳು ದಿನೇ ದಿನೇ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ ಹೀಗೆ ತಾಲ್ಲೂಕಿನ ಕಲ್ಲುಗ್ಗಂಡಿ ಗ್ರಾಮದಲ್ಲಿ ನೂರಾರು ವರ್ಷಗಳಿಂದಲೂ ಭೂತಾಳೆ ಮರದಿಂದ ಶ್ರೀ ಗೌರಿ ಮಾತೆಯ ಮೂರ್ತಿ ಗ್ರಾಮದ ಶ್ರೀ ವಸಂತಚಾರ್ ರವರ ಅಮೃತ ಹಸ್ತದಿಂದ ನಿರ್ಮಾಣಗೊಂಡು ರಾಜ್ಯದ ಮೂಲೆ ಮೂಲೆಗಳಿಂದಲೂ ಸಹ ಭಕ್ತರನ್ನು ತನ್ನತ್ತ ಸೆಳೆಯುತ್ತಿದೆ.


ಉದಯವಾಹಿನಿ ಚಿತ್ರ

ಭಕ್ತರ ಹಲವಾರು ಸಂಕಷ್ಟಗಳನ್ನು ನೆರವೇರಿಸುತ್ತಾ ಬರುತ್ತಿದ್ದು ವಿಶೇಷವಾಗಿ ಮಕ್ಕಳಿಲ್ಲದ ದಂಪತಿಗಳಿಗೆ ಮಕ್ಕಳ ಭಾಗ್ಯವನ್ನು ಕರುಣಿಸುತ್ತಾ ಶ್ರೀ ಗೌರಿ ಮಾತೆ ತನ್ನ ಪವಾಡವನ್ನು ಹೆಚ್ಚಿಸಿಕೊಳ್ಳುತ್ತಿದೆ. ಪ್ರತಿ ವರ್ಷ ಗೌರಿ ಹಬ್ಬದಂದು ಪ್ರತಿಷ್ಠಾಪನೆಗೊಳ್ಳುವ ಶ್ರೀ ಗೌರಿ ಮಾತೆ 21 ದಿನಗಳ ಕಾಲ ಪ್ರತಿದಿನ ಶ್ರೀಪಾರ್ವತಿ ದೇವಿಯ ಹಲವಾರು ಅವತಾರಗಳಲ್ಲಿ ಅಲಂಕೃತಗೊಂಡು ಗ್ರಾಮದ ಭಕ್ತಾದಿಗಳಿಗೆ ಮತ್ತು ಅಕ್ಕಪಕ್ಕದ ಜಿಲ್ಲೆಗಳಿಗೆ ಹಾಗೂ ಹೊರ ರಾಜ್ಯದ ಭಕ್ತರಿಗೂ ಸಹ ದರ್ಶನ ನೀಡುತ್ತದೆ ಅಲ್ಲದೇ ಭಕ್ತಾದಿಗಳ ಹಲವಾರು ಬಗೆಯ ಕಷ್ಟಕಾರ್ಪಣ್ಯಗಳ ಮತ್ತು ಸಮಸ್ಯೆಗಳನ್ನು ಮಂಜಿನಂತೆ ಕರಗಿಸುತ್ತದೆ ಎಂದು ಕಲ್ಲುಗ್ಗಂಡಿ ಗ್ರಾಮದವರೇ ಆದ ಖ್ಯಾತ ವಕೀಲರಾದ ಕಲ್ಲುಗ್ಗಂಡಿ ಹಿರಣ್ಣಯ್ಯ ತಿಳಿಸಿದರು.

ನಂತರ ಮಾತನಾಡಿದ ವಕೀಲರಾದ ಹಿರಣ್ಣಯ್ಯ ಕಲ್ಲುಗ್ಗಂಡಿ ಗ್ರಾಮಕ್ಕೆ ಪ್ರತಿ ವರ್ಷ ಶ್ರೀ ಗೌರಿ ಮಾತೆಯ ಜಾತ್ರಾ ಮಹೋತ್ಸವಕ್ಕೆ ಸಹಸ್ರಾರು ಮಂದಿ ಭಕ್ತಾದಿಗಳು ಆಗಮಿಸುವುದರಿಂದ ಭಕ್ತಾದಿಗಳಿಗೆ ಪ್ರಸಾದ ವ್ಯವಸ್ಥೆ ನಡೆಸಲು ಗ್ರಾಮಕ್ಕೆ ಸಮುದಾಯ ಭವನ, ಹೈಟೆಕ್ ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಿ ಕೊಡಬೇಕಾಗಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಗೃಹ ಮಂಡಳಿ ಅಧ್ಯಕ್ಷರಾದ ಕೆಎಂ ಶಿವಲಿಂಗೇಗೌಡರಲ್ಲಿ ಕಲ್ಲುಗ್ಗಂಡಿ ಗ್ರಾಮದ ಹಿರಿಯ ಮುಖಂಡರು ಗ್ರಾಮಸ್ಥರು ಭಕ್ತಾದಿಗಳು ಮನವಿ ಮಾಡಿದರು.

## ಯುಟ್ಯೂಬ್ ಚಾನಲ್ ಆರಂಭಕ್ಕೆ ಪರವಾನಗಿ ನಿಗದಿ ಮಾಡುವ ಬಗ್ಗೆ ಪರಿಶೀಲನೆ: ಸಿದ್ದರಾಮಯ್ಯ

# ಎಲೆಕ್ಟ್ರಾನಿಕ್ ಮೀಡಿಯಾದವರಿಗೆ ಸಿಎಂ ಕಿವಿಮಾತು

• ಉದಯವಾಹಿನಿ, ಹುಬ್ಬಳ್ಳಿ

ಮೊದಲು ನೀವೆಲ್ಲಾ ಊಹಾ ಪತ್ರಿಕೋದ್ಯಮವನ್ನು ನಿಲ್ಲಿಸಿ. ಇದು ಸಮಾಜಕ್ಕೆ ಹಾನಿಕರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಲೆಕ್ಟ್ರಾನಿಕ್ ಮೀಡಿಯಾ ಪತ್ರಕರ್ತರಿಗೆ ಕರೆ ನೀಡಿದರು. ಇದೇ ಸಂದರ್ಭದಲ್ಲಿ ಯುಟ್ಯೂಬ್ ಚಾನಲ್ ಆರಂಭಕ್ಕೆ ಪರವಾನಗಿ ನಿಗಧಿ ಮಾಡುವ ಬಗ್ಗೆ ಪರಿಶೀಲನೆ ಮಾಡುವುದಾಗಿ ತಿಳಿಸಿದರು.

> **ಕರ್ನಾಟಕ ಎಲೆಕ್ಟ್ರಾನಿಕ್ ಮೀಡಿಯಾ ಜರ್ನಲಿಸ್ಟ್ ಅಸೋಸಿಯೇಷನ್ ಉದ್ಘಾಟಿಸಿ, ಲೋಗೋ ಬಿಡುಗಡೆ ಮಾಡಿ ಮಾತನಾಡಿದರು. ನಾನು ರಾಜ ಕಾರಣಕ್ಕೆ ಬಂದು ಇಷ್ಟು ವರ್ಷದಲ್ಲಿ ಯಾವ ಮಾಧ್ಯಮಗಳಿಗೂ ನನ್ನ ಬಗ್ಗೆ ಹೀಗೇ ಬರೆಯಿರಿ, ಹಾಗೇ ಬರೆಯಿರಿ ಎಂದು ಯಾವತ್ತೂ ಹೇಳಿಲ್ಲ. ನನ್ನ ಬಗ್ಗೆ ಸುಳ್ಳುಗಳನ್ನು ಸತತವಾಗಿ ತೋರಿಸುವಾಗಲೂ ಯಾಕೆ ಹೀಗೆ ತೋರಿಸ್ತೀರಿ ಅಂತಲೂ ಯಾರಿಗೂ ಕೇಳಿಲ್ಲ. ನಿಮ್ಮಿಂದ ನನಗೆ ಏನೇನೂ ಅಪೇಕ್ಷೆ ಇಲ್ಲ. ಸಾಧ್ಯವಾದರೆ ಸತ್ಯ ತೋರಿಸಿ, ಸತ್ಯ ಬರೆಯಿರಿ ಎಂದರು.**



- ನೀವು ಕಳ್ಳರ ಜೊತೆಗಾದರೂ ಇರಿ. ಯಾರ ಜೊತೆಗಾದರೂ ಇರಿ. ಆದರೆ, ಸತ್ಯದ ಪರವಾಗಿ ಇರಿ ಎಂದ ಸಿದ್ದರಾಮಯ್ಯ.
- ಯುಟ್ಯೂಬ್ ಚಾನಲ್‌ಗಳ ಆರಂಭಕ್ಕೆ ಪರವಾನಗಿ ನಿಗಧಿ ಮಾಡುವ ಬಗ್ಗೆ ಪರಿಶೀಲನೆ ಎಂದ ಸಿಎಂ.

**ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ನಮ್ಮ ಸರ್ಕಾರ ಧಕ್ಕೆ ತರಲ್ಲ:** ನನ್ನ ಕಾರಿನ ಮೇಲೆ ಕಾಗೆ ಕುಳಿತದ್ದೇ ಏನ್ ದೊಡ್ಡ ದೊಡ್ಡ ಚರ್ಚೆ ನಡೆಸಿದರು. ಆ ಚರ್ಚೆಯಲ್ಲಿ ಜ್ಯೋತಿಷಿಗಳು, ಚಾನಲ್‌ಗಳು ತೋರಿಸಿದ್ದೆಲ್ಲಾ ಅಪ್ಪಟ ಸುಳ್ಳಾಯ್ತು. ನೀವು ಹೀಗೆಲ್ಲಾ ತೋರಿಸಿದರೆ ಜನ ಒಪ್ತಾರಾ ಯೋಚನೆ ಮಾಡಿ ಎಂದರು.

ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ನಮ್ಮ ಸರ್ಕಾರ ಸದಾ ಸಿದ್ಧ. ಯಾವತ್ತೂ ಇದಕ್ಕೆ ಧಕ್ಕೆ ತರುವ ಕೆಲಸವನ್ನು ನಾನೂ ಯಾವತ್ತೂ ಮಾಡಿಲ್ಲ, ನಮ್ಮ ಸರ್ಕಾರವೂ ಮಾಡುವುದಿಲ್ಲ ಎಂದರು.

**ಯುಟ್ಯೂಬ್‌ಗಳ ವಿರುದ್ಧ ಸಂಘದ ಬೇಡಿಕೆ:** ಬ್ಲಾಕ್ ಮೇಲ್ ಮತ್ತು ಕೀಳು ಮಟ್ಟದ ಪ್ರಾಕ್ಟೀಸ್ ಮಾಡುತ್ತಿರುವ ಯು ಟ್ಯೂಬ್ ಚಾನಲ್ ಗಳು ಸಮಾಜಕ್ಕೆ ಶಾಪ ಆಗಿದ್ದು, ಇಂಥವರಿಂದ ಪತ್ರಿಕೋದ್ಯಮದ ಘನತೆ ಹಾಳಾಗಿದೆ. ಹೀಗಾಗಿ ಯು ಟ್ಯೂಬ್ ಚಾನಲ್ ಗಳ ಹಾವಳಿ ತಡೆಯಲು ಇವರಿಗೂ ಲೈಸೆನ್ಸ್ ಕಡ್ಡಾಯಗೊಳಿಸಬೇಕು ಎಂದು ಸಂಘ ಮುಖ್ಯಮಂತ್ರಿಗಳಿಗೆ ಬೇಡಿಕೆ ಸಲ್ಲಿಸಿತು. ಈ ಬೇಡಿಕೆ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು.

### ಯುಟ್ಯೂಬ್ ಚಾನೆಲ್‌ಗಳ ಹಾವಳಿ ತಡೆಯಲು ಕ್ರಮ

**ಸಿಎಂ ಸಿದ್ದರಾಮಯ್ಯ ಅವರು ಪತ್ರಕರ್ತರಿಗೆ ಊಹಾ ಪತ್ರಿಕೋದ್ಯಮವನ್ನು ನಿಲ್ಲಿಸುವಂತೆ ಕರೆ ನೀಡಿದರು, ಏಕೆಂದರೆ ಇದು ಸಮಾಜಕ್ಕೆ ಹಾನಿಕರ. ಅಲ್ಲದೆ, ಯುಟ್ಯೂಬ್ ಚಾನೆಲ್‌ಗಳ ಆರಂಭಕ್ಕೆ ಪರವಾನಗಿ ನಿಗದಿಪಡಿಸುವ ಬಗ್ಗೆ ಪರಿಶೀಲನೆ ನಡೆಸುವುದಾಗಿ ತಿಳಿಸಿದರು. ಬ್ಲಾಕ್ ಮೇಲ್, ಕೀಳು ಮಟ್ಟದ ಪದ್ಧತಿಗಳನ್ನು ಅನುಸರಿಸುತ್ತಿರುವ ಯುಟ್ಯೂಬ್ ಚಾನೆಲ್‌ಗಳ ಹಾವಳಿ ತಡೆಯಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.**

# ಹಳೇ ಪಿಂಚಣಿ ಯೋಜನೆ ಜಾರಿಗೆ ಬದ್ಧ: ಸಚಿವ

• ಉದಯವಾಹಿನಿ, ರಾಣೆಬೆನ್ನೂರು


ಉದಯವಾಹಿನಿ ಚಿತ್ರ

ಚುನಾವಣಾ ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ಹಳೇ ಪಿಂಚಣಿ ಯೋಜನೆ ಜಾರಿಗೆ ಮಾಡಲು ರಾಜ್ಯ ಸರ್ಕಾರ ಸಿದ್ಧವಿದೆ. ಸಿಎಂ ಸಿದ್ದರಾಮಯ್ಯ ಅವರು ಈ ಜವಾಬ್ದಾರಿ ತೆಗೆದುಕೊಂಡಿದ್ದು, ಈಗಾಗಲೇ ಸಂಬಂಧಿಸಿದ ಇಲಾಖೆಗಳ ಜೊತೆಗೆ ಚರ್ಚೆ ನಡೆಸಿದ್ದಾರೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಹೇಳಿದರು. ಇಲ್ಲಿನ ಮೃತ್ಯುಂಯನಗರದ ಮೃತ್ಯುಂಜಯ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಏರ್ಪಡಿಸಿದ್ದ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯಮಟ್ಟದ ಶಿಕ್ಷಕ ಪ್ರಶಸ್ತಿ ಮತ್ತು ಪ್ರತಿಭಾ ವಿದ್ಯಾರ್ಥಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಮೂವತ್ತು ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು ನೇಮಿಸಲು ಕ್ರಮಕೈಗೊಳ್ಳಲಾಗುವುದು. ಶಿಕ್ಷಕರ ಕೊರತೆ ನೀಗಿಸಲು ಈಗಾಗಲೇ 13,500 ಶಿಕ್ಷಕರ ನೇಮಕಾತಿಗೆ ಆದೇಶ ನೀಡಲಾಗಿದೆ. ಇನ್ನೂ 50,000 ಶಿಕ್ಷಕರ ಹುದ್ದೆಗಳು ಖಾಲಿ ಇರಲಿದ್ದು, ಹಂತ-ಹಂತವಾಗಿ ನೇಕಮಾತಿಗೆ ಕ್ರಮ ವಹಿಸಲಾಗುತ್ತದೆ. ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು.

ಅನುದಾನಿತ ಶಾಲಾ ಶಿಕ್ಷಕರಿಗೆ ಅಗತ್ಯ ಸೌಕರ್ಯ, ಅಲ್ಲಿನ ಮಕ್ಕಳಿಗೂ ಸಮವಸ್ತ್ರ, ಶೂ-ಸಾಕ್ಸ್ ನೀಡುವ ಬಗ್ಗೆ ಆರ್ಥಿಕ ಇಲಾಖೆ ಜೊತೆಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು. ನೋಟ್ ಪುಸ್ತಕ ನೀಡಲು ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಲಾಗವುದು. ಸರ್ಕಾರಿ ಶಾಲೆಯಲ್ಲಿ ಸಿಗುವ ಎಲ್ಲಾ ಸೌಲಭ್ಯಗಳು ಅನುದಾನಿತ ಶಾಲೆಗಳಲ್ಲೂ ಸಿಗಲು ಶ್ರಮಿಸಲಾಗುವುದು ಎಂದರು. ವಿಧಾನ ಪರಿಷತ್ ಉಪಸಭಾಪತಿ ರುದ್ರಪ್ಪ ಲಮಾಣಿ ಮಾತನಾಡಿ, ನಮ್ಮ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲೂ ಅನೇಕ ಹುದ್ದೆಗಳು ಖಾಲಿ ಇವೆ. ಅನೇಕ ವರ್ಷಗಳಿಂದ ಸಮಸ್ಯೆಗಳು ಹಾಗೇ ಉಳಿದಿವೆ ಎಂದರು.

**ಬೇಡಿಕೆ ಈಡೇರಿಕೆಗೆ ಮನವಿ:** ಶಿಕ್ಷಕರ ನೇಮಕಾತಿಗೆ ಅವಕಾಶ ಕಲ್ಪಿಸಬೇಕು. ಕಾಲ್ಪನಿಕ ವೇತನ ಜಾರಿಗೊಳಿಸಬೇಕು. ಅನುದಾನಿತ ಶಿಕ್ಷಣ ಸಂಸ್ಥೆಗಳ ಪ್ರಾಥಮಿಕ ಶಾಲಾ ಶಿಕ್ಷಕರಿಗೂ ಜ್ಯೋತಿ ಸಂಜೀವಿನಿ ಯೋಜನೆ ಜಾರಿಗೊಳಿಸಬೇಕು. ಮಾನ್ಯತೆ ನವೀಕರಣ ಸರಳಗೊಳಿಸಬೇಕು. ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿರುವ ಹೆಚ್ಚುವರಿ ಶಿಕ್ಷಕರನ್ನು ಗುರುತಿಸಿ ಕೌನ್ಸಲಿಂಗ್ ಮೂಲಕ ಶಿಕ್ಷಕರಿಲ್ಲದ ಶಾಲೆಗಳಿಗೆ ವರ್ಗಾವಣೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳುಸಚಿವ ಮಧು ಬಂಗಾರಪ್ಪ ಹಾಗೂ ಉಪ ಸಭಾಪತಿ ರುದ್ರಪ್ಪ ಲಮಾಣಿ ಅವರಿಗೆ ಮನವಿ ಸಲ್ಲಿಸಿದರು.

## ಮಿನಿ ನ್ಯೂಸ್

### ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವಿರುದ್ಧ ಟೀಕೆ; ಕಾಲವೇ ಉತ್ತರ

• ಉದಯವಾಹಿನಿ, ಹಾವೇರಿ

ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಗಂಭೀರವಾಗಿ ಸಮೀಕ್ಷೆ ನಡೆಸುತ್ತಿಲ್ಲವೆಂದು ಕೆಲವರು ಆರೋಪ ಮಾಡುತ್ತಿದ್ದಾರೆ. ಅವರಿಗೆ ಕಾಲವೇ ಉತ್ತರ ನೀಡಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ತಿಳಿಸಿದರು. ನಗರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಸಚಿವ ಸಂಪುಟ ವಿಸ್ತರಣೆಗೆ ಆಕಾಂಕ್ಷಿಗಳು ಒತ್ತಾಯ ಮಾಡುವುದು ಸಹಜ. ಎಲ್ಲರಿಗೂ ಸಚಿವ ಆಗಬೇಕೆಂಬ ಆಸೆ ಇರುತ್ತದೆ. ನಮ್ಮ ಪಕ್ಷದಲ್ಲಿ ಹಿರಿಯರು ಹೆಚ್ಚಿದ್ದಾರೆ. ಅದರಲ್ಲಿ ಸಚಿವರು ಯಾರಾಗಬೇಕು ಎಂಬುದನ್ನು ವರಿಷ್ಠರು ನಿರ್ಧಾರ ಮಾಡುತ್ತಾರೆ ಎಂದು ತಿಳಿಸಿದರು.

'ಧರ್ಮಸ್ಥಳದಲ್ಲಿ ನಡೆದಿವೆ ಎನ್ನಲಾದ ಅಪರಾಧ ಪ್ರಕರಣಗಳ ಬಗ್ಗೆ ಎಸ್‌ಐಟಿ ತನಿಖೆ ನಡೆಸುತ್ತಿದೆ. ನ್ಯಾಯಾಲಯವೇ ಎಲ್ಲವನ್ನೂ ತೀರ್ಮಾನ ಮಾಡುತ್ತದೆ. ಇದರಲ್ಲಿ ರಾಜಕೀಯ ಮಾಡಬಾರದು ಎಂದು ಹೇಳಿದರು. ದಸರಾ ಉದ್ಘಾಟನೆಗೆ ಬಾನು ಮುಸ್ತಾಕ್ ಅವರನ್ನು ಆಯ್ಕೆ ಮಾಡಿರುವ ವಿಚಾರದಲ್ಲೂ ಬಿಜೆಪಿ ವಿರೋಧ ಮಾಡುತ್ತಿದೆ. ಬಿಜೆಪಿಯವರು ಮತ ಬ್ಯಾಂಕ್‌ಗಾಗಿ ಪ್ರತಿಯೊಂದನ್ನೂ ವಿರೋಧಿಸುತ್ತಾರೆ. ದಸರಾ ಉದ್ಘಾಟನೆ ಯಾರು ಮಾಡಬೇಕೆಂಬುದನ್ನು ಸರ್ಕಾರ ನಿರ್ಧಾರ ಮಾಡುತ್ತದೆ. ಸಂವಿಧಾನ ಬೇಡ ಎನ್ನುತ್ತಿರುವವರೇ ಇಂದು ದೊಡ್ಡ ಕುರ್ಚಿಯಲ್ಲಿ ಕುಳಿತಿದ್ದಾರೆ ಎಂದರು.

ಕಾಂಗ್ರೆಸ್ ಸರ್ಕಾರ, ಮುಸ್ಲಿಮರ ತುಷ್ಟೀಕರಣ ಮಾಡುತ್ತಿದೆ ಎಂಬುದಾಗಿ ಬಿಜೆಪಿ ಆರೋಪಿಸುತ್ತಿದೆ. ಆದರೆ, ಮುಸ್ಲಿಮರೂ ಗುಡಿಸಲಿನಲ್ಲಿ ಇದ್ದಾರೆ. ಅವರಿಗೂ ಕುಡಿಯಲು ನೀರಿಲ್ಲ. ಶೌಚಾಲಯವಿಲ್ಲ. ನಾವು ಅವರಿಗೆ ಬಹಳ ದೊಡ್ಡದಾಗಿ ಏನೂ ಮಾಡಿಲ್ಲ. ಪಾಕಿಸ್ತಾನ್ ಜಿಂದಾಬಾದ್ ಎಂದು ಕೂಗಿದವರನ್ನು ಬಂಧಿಸಲಾಗಿದೆ. ಯಾರನ್ನೂ ಹೆಚ್ಚು ಓಲೈಕೆ ಮಾಡಿಲ್ಲ ಎಂದು ತಿಳಿಸಿದರು.

### ಉಕ್ಕಡ ಮಗುಚಿ ಯುವಕ ಸಾವು

• ಉದಯವಾಹಿನಿ, ಹೊಸನಗರ

ತಾಲ್ಲೂಕಿನ ಬಂಟೋಡಿಯಲ್ಲಿ ಮಧ್ಯಾಹ್ನ ಹೊಳೆ ದಾಟುವಾಗ ಉಕ್ಕಡ ಮಗುಚಿ ನೀರು ಪಾಲಾಗಿದ್ದ ಯುವಕನ ಮೃತದೇಹ ಸಿಕ್ಕಿದೆ. ಸ್ಥಳೀಯ ಕಟ್ಟಿನ ಹೊಳೆ ಗ್ರಾಮದ ಪೂರ್ಣೇಶ (22) ಮೃತ ಯುವಕ. ಪೂರ್ಣೇಶ ನೀರಿನಲ್ಲಿ ಕೊಚ್ಚಿಕೊಂಡು ಹೋಗಿ ನಾಪತ್ತೆಯಾಗಿದ್ದ. ಆತನಿಗಾಗಿ ಪೊಲೀಸರು, ಅಗ್ನಿಶಾಮಕ ದಳದವರು ಶನಿವಾರ ಸಂಜೆಯವರೆಗೂ ಹುಡುಕಾಟ ನಡೆಸಿದ್ದರು. ಮುಂಜಾನೆಯಿಂದ ಮುಳುಗು ತಜ್ಞ ಈಶ್ವರ ಮಲ್ಪೆ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿತ್ತು. ಮಧ್ಯಾಹ್ನ ಮೃತದೇಹ ಸಿಕ್ಕಿದೆ. ಪೂರ್ಣೇಶ, ಶರತ್ ಹಾಗೂ ರಂಜನ್ ಅವರು ಉಕ್ಕಡದಲ್ಲಿ ತೆರಳುತ್ತಿದ್ದಾಗ ಅದು ಮಗುಚಿತ್ತು. ಪೂರ್ಣೇಶ ನೀರು ಪಾಲಾಗಿದ್ದು, ಶರತ್ ಮತ್ತು ರಂಜನ್ ಈಜಿ ದಡ ಸೇರಿದ್ದರು.

**ಗ್ರಾಮಸ್ಥರ ಆಕ್ರೋಶ:** ಮುಳುಗಡೆ ಪ್ರದೇಶವಾದ ಚಿಂಚನೂರು ಮತ್ತು ಬಂಟೋಡಿ ನಡುವೆ ಸಂಪರ್ಕ ರಸ್ತೆ ಇಲ್ಲವಾಗಿದೆ. ಕಾಲುಸಂಕ ನಿರ್ಮಿಸುವಂತೆ ಹಲವು ವರ್ಷಗಳಿಂದ ಗ್ರಾಮಸ್ಥರು ಬೇಡಿಕೆ ಇಟ್ಟಿದ್ದರು. ಪ್ರತಿ ಬಾರಿ ಹಿನ್ನೀರು ವ್ಯಾಪಿಸುವ ಸಂದರ್ಭದಲ್ಲಿ ಉಕ್ಕಡದ ಮೂಲಕವೇ ಓಡಾಡುವ ಪರಿಸ್ಥಿತಿ ಇದೆ. ದಶಕಗಳ ನಮ್ಮ ಬೇಡಿಕೆಗೆ ಸರ್ಕಾರ ಸ್ಪಂದಿಸದೆ ಇರುವುದರಿಂದ ಈ ದುರಂತ ಸಂಭವಿಸಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಗುಳ್ಳಾಪುರ-ಹೆಗ್ಗಾರ ಸೇತುವೆ ನಿರ್ಮಾಣಕ್ಕೆ 35 ಕೋಟಿ ಅನುದಾನ ಮಂಜೂರು

• ಉದಯವಾಹಿನಿ, ಯಲ್ಲಾಪುರ

ಯಲ್ಲಾಪುರ ಹಾಗೂ ಅಂಕೋಲಾ ತಾಲ್ಲೂಕುಗಳನ್ನು ಸಂಪರ್ಕಿಸುವ ಗುಳ್ಳಾಪುರ – ಹೆಗ್ಗಾರ ನೂತನ ಸೇತುವೆ ನಿರ್ಮಾಣಕ್ಕೆ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ 35 ಕೋಟಿ ಅನುದಾನ ಮಂಜೂರಾತಿ ದೊರೆತಿದೆ ಎಂದು ಶಾಸಕ ಶಿವರಾಮ ಹೆಬ್ಬಾರ ಮಾಹಿತಿ ನೀಡಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಸೇತುವೆಯ ನಿರ್ಮಾಣದಿಂದ ಸುತ್ತಮುತ್ತಲ ಗ್ರಾಮೀಣ ಭಾಗದ ಸಂಪರ್ಕ ಮತ್ತಷ್ಟು ಬಲಗೊಳ್ಳಲಿದೆ. ನೂತನ ಸೇತುವೆ ನಿರ್ಮಾಣದಿಂದ ವ್ಯಾಪಾರ ಹಾಗೂ ವಾಣಿಜ್ಯ ಚಟುವಟಿಕೆಗಳು ಚೈತನ್ಯಗೊಳ್ಳಲಿವೆ. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅನುಕೂಲವಾಗಲಿದೆ.



ಆರೋಗ್ಯ ಮತ್ತು ತುರ್ತು ಸೇವೆಗಳು ತ್ವರಿತವಾಗಿ ಲಭ್ಯವಾಗುವಂತಾಗುತ್ತದೆ. ರೈತರಿಗೆ ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆಗೆ ತಲುಪಿಸಲು ಅನುಕೂಲವಾಗುವಷ್ಟೇ ಅಲ್ಲದೆ ಪ್ರವಾಸೋದ್ಯಮಕ್ಕೂ ಹೊಸ ದಾರಿ ತೆರೆಯಲಿದೆ. ಒಟ್ಟಾರೆ ಯಲ್ಲಾಪುರ ಹಾಗೂ ಅಂಕೋಲಾ ತಾಲ್ಲೂಕುಗಳ ಅಭಿವೃದ್ಧಿಗೆ ಈ ಯೋಜನೆ ಒಂದು ಪ್ರಮುಖ ಮೈಲಿಗಲ್ಲಾಗಲಿದೆ ಎಂದಿದ್ದಾರೆ. ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ಸೇತುವೆ ನಿರ್ಮಾಣಕ್ಕೆ ಅನುದಾನವನ್ನು ಮಂಜೂರು ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಶಾಸಕ ಹೆಬ್ಬಾರ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಬೆಳಿಗ್ಗೆ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಇಂದು ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ. ಇಂದು ನೀವು ಹಣವನ್ನು ಉಳಿಸುವಲ್ಲಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗುತ್ತದೆ ನೀವು ಬಾಕಿಯಿರುವ ಎಲ್ಲಾ ಕುಟುಂಬದ ಸಾಲಗಳನ್ನು ತೀರಿಸಲು ಸಾಧ್ಯವಾಗುತ್ತದೆ.

**ವೃಷಭ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

**ಮಿಥುನ** ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು. ನೀವು ಹಣವನ್ನು ಸಂಗ್ರಹಿಸಲು ಬಯಸಿದರೆ ನಿಮ್ಮ ಸಂಗಾತಿಯೊಂದಿಗೆ, ಪೋಷಕರೊಂದಿಗೆ ಮಾತನಾಡಿ.

**ಕರ್ಕಾಟಕ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣ ಗಳಿಸುವಿರಿ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು.

**ಸಿಂಹ** ನಿಮ್ಮ ದಿಟ್ಟ, ನಿರ್ಭಯ ಅಭಿಪ್ರಾಯಗಳು ನಿಮ್ಮ ಸ್ನೇಹಿತನ ಆತ್ಮಗೌರವವನ್ನು ಹಾನಿ ಮಾಡಬಹುದು. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನಿಮ್ಮ ಬಿಡುವಿನ ವೇಳೆಯನ್ನು ನಿಮ್ಮ ಮನೆಯ ಸೌಂದರ್ಯ ಹೆಚ್ಚಿಸಲು ಬಳಸಿ. ನೀವು ಕುಟುಂಬಕ್ಕೆ ಇದರಿಂದ ಸಂತೋಷವಾಗುತ್ತದೆ. ಯಾರೂ ನಿಮ್ಮ ಪ್ರೀತಿಯನ್ನು ಬೇರ್ಪಡಿಸಲಾಗದು.

**ಕನ್ಯಾ** ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು.

**ತುಲಾ** ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷ ದಿನ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ, ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ . ಕೌಟುಂಬಿಕ ಅಗತ್ಯಗಳಿಗೆ ತಕ್ಷಣದ ಗಮನ ನೀಡಬೇಕು.

**ವೃಶ್ಚಿಕ** ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ, ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಇಂದಿನವರೆಗೂ ಅಗತ್ಯವಿಲ್ಲದೆ ಹಣ ಖರ್ಚುಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು, ಹಣಉಳಿಸಬೇಕು. ಅಂಚೆಯ ಮೂಲಕ ಬಂದ ಪತ್ರ ಸಂತೋಷದ ಸುದ್ದಿ ತರುತ್ತದೆ.

**ಧನಸ್ಸು** ಮಕ್ಕಳ ನಿಮ್ಮ ಇಚ್ಛೆಯಂತೆ ನಡೆದುಕೊಳ್ಳುವುದಿಲ್ಲ, ಇದು ನಿಮಗೆ ಕೋಪ ತರುತ್ತದೆ. ಅನಿಯಂತ್ರಿತ ಕೋಪ ಸಾಮಾನ್ಯವಾಗಿ ಎಲ್ಲರನ್ನೂ, ವಿಶೇಷವಾಗಿ ಕೋಪಗೊಂಡವರನ್ನು ಹೆಚ್ಚು ಘಾಸಿಗೊಳಿಸುತ್ತದೆ. ಏಕೆಂದರೆ ಇದು ಶಕ್ತಿಯನ್ನು ಕುಂಠಿತಗೊಳಿಸುತ್ತದೆ, ನಿರ್ಧಾರ ತೆಗೆದುಕೊಳ್ಳುವ ಶಕ್ತಿಯನ್ನು ಕಡಿಮೆಯಾಗಿಸುತ್ತದೆ.

**ಮಕರ** ಆರೋಗ್ಯದ ಬಗ್ಗೆ ಸ್ವಲ್ಪ ಕಾಳಜಿ ವಹಿಸಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ.

**ಕುಂಭ** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ.

**ಮೀನ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಬಯಸದೆ ಇರುವ ಯಾವುದೇ ಅತಿಥಿ ಇಂದು ನಿಮ್ಮ ಮನೆಗೆ ಬರಬಹುದು , ಅವರು ಬರುವುದರಿಂದಾಗಿ ನೀವು ಬರುವ ತಿಂಗಳಿಗೆ ಮುಂದೂಡಲಾಯಿಸಿರುವ ಮನೆಯ ಆ ವಸ್ತುಗಳ ಮೇಲು ಖರ್ಚು ಮಾಡಬಹುದು .

# ಉತ್ತರ ಕರ್ನಾಟಕದ ಭಾಗದಲ್ಲಿ ಸರ್ಕಾರದ ವಿರುದ್ಧ ದೊಡ್ಡ ಹೋರಾಟ

## ಸತತ ಮೂರು ದಶಕಗಳಿಂದ ಮಾಡಿದ ಹೋರಾಟ ಫಲವಾಗಿ ಒಳಮೀಸಲಾತಿ ಜಾರಿಗೆ: ಕಟ್ಟಿಮನಿ ಸ್ವಾಗತರ್ಹ

• **ಉದಯವಾಹಿನಿ, ಚಿಂಚೋಳಿ**


ಉದಯವಾಹಿನಿ ಚಿತ್ರ

ಸತತವಾಗಿ ಕಳೆದ ಮೂರು ದಶಕಗಳಿಂದ ಒಳಮೀಸಲಾತಿ ಜಾರಿಗೆ ಮಾಡುವಂತೆ ನಿರಂತರವಾಗಿ ಸರ್ಕಾರಗಳ ವಿರುದ್ಧ ಹೋರಾಟ ಮಾಡುತ್ತಾ ಅನೇಕ ಕಹಿ ಘಟನೆಗಳು ಅನುಭೋಗಿಸಿ ಬಹಳಷ್ಟು ಕಷ್ಟಪಟ್ಟು ನಾನು ಸೇರಿದಂತೆ ಮಾದಿಗ ಸಮಾಜದ ಹೋರಾಟಗಾರರ ಫಲವಾಗಿ ಈಗ ಸರ್ಕಾರ ಒಳಮೀಸಲಾತಿ ಜಾರಿಗೆ ತಂದಿದ್ದು ಸ್ವಾಗತರ್ಹವಾಗಿದೆ ಎಂದು ಮಾದಿಗ ಸಮಾಜದ ಒಳಮೀಸಲಾತಿ ಹೋರಾಟ ಸಮಿತಿಯ ರಾಜ್ಯ ಉಪಾಧ್ಯಕ್ಷ ಗೋಪಾಲರಾವ ಕಟ್ಟಿಮನಿ ಹೇಳಿದರು.

ತಾಲ್ಲೂಕಿನ ಕನಕಪುರ ಗ್ರಾಮದಲ್ಲಿ ಮಾದಿಗ ಸಮಾಜದಿಂದ ಒಳಮೀಸಲಾತಿ ಜಾರಿಗಾಗಿ ಹೋರಾಟ ಮಾಡಿರುವ ಹೋರಾಟ ಗಾರರಿಗೆ, ಶಾಧಿಪೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನೂತನವಾಗಿ ಗೆಲುವು ಸಾಧಿಸಿದ ನಿರ್ದೇಶಕರಿಗೆ ಹಮ್ಮಿಕೊಂಡ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನಿಸಿಕೊಂಡು ಮಾತನಾಡಿದರು. ರಾಜ್ಯ ಕಾಂಗ್ರೇಸ್ ಸರ್ಕಾರವು ಅವೈಜ್ಞಾನಿಕ ಒಳಮೀಸಲಾತಿ ಜಾರಿಗೆ ತಂದು ಕೈತೋಳೆದುಕೊಂಡಿದ್ದೆ ಆದರೆ ಮಾದಿಗ ಸಮಾಜದ ಜನಸಂಖ್ಯೆ ಅನುಗುಣವಾಗಿ ಸಿಗಬೇಕಾದ ಶೇಕಡಾವಾರು ಮೀಸಲಾತಿ ಸಿಗದೆ ಇರುವುದರಿಂದ ಬಹಳಷ್ಟು ನೋವುಯಿದೆ ಬರುವ ದಿನಗಳಲ್ಲಿ ಉತ್ತರ ಕರ್ನಾಟಕದ ಭಾಗದಲ್ಲಿ ಸರ್ಕಾರದ ವಿರುದ್ಧ ದೊಡ್ಡ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದರು. ಕಾಂಗ್ರೇಸ್ ಸರ್ಕಾರವು ಅಧಿಕಾರಕ್ಕೆ ಬಂದಾಗಲೆಲ್ಲ ಮಾದಿಗ ಸಮಾಜಕ್ಕೆ ತುಳಿಯುವ ಕೆಲಸ ಮಾಡುತ್ತಾ ಬಂದಿದೆ, ಒಳಮೀಸಲಾತಿ ಜಾರಿ ಮಾಡುವಲ್ಲಿಯು ಸಹ ಅನ್ಯಾಯವಾಗಿದೆ ಮಾದಿಗ ಸಮಾಜದ ಜನಸಂಖ್ಯೆ ಅನುಗುಣವಾಗಿ ನಮಗೆ ಶೇಕಡಾ 08 ಪ್ರತಿಶತಃ ದಷ್ಟು ಮೀಸಲಾತಿ ಸಿಗಬೇಕು ಆದರೆ ಹಾಲಿ ಸಿಎಂ ಸಿದ್ದರಾಮಯ್ಯನವರು ಕಾಂಗ್ರೇಸ್ ರಾಷ್ಟ್ರೀಯ ಅಧ್ಯಕ್ಷರ ಅಣತಿಯಂತೆ ಕೆಲಸ ಮಾಡುತ್ತಾ ಮಾದಿಗ ಸಮಾಜಕ್ಕೆ ದ್ರೋಹ ಮಾಡಿದ್ದಾರೆ. ನೂತನವಾಗಿ ಸಹಕಾರ ಸಂಘಕ್ಕೆ ನಿರ್ದೇಶಕರಾಗಿ ಆಯ್ಕೆಯಾದ ಗೌತಮ್ ವೈಜೀನಾಥ ಪಾಟೀಲ, ಚಿನ್ನಯ್ಯ ಶಾಧಿಪೂರ ಅವರ ಗೆಲುವು ಸಾಧಿಸಿದ್ದು ಅಭಿನಂದನೆಗಳು ನಿಮಗೆ ಸದಾ ಬೆಂಬಲವಾಗಿ ಮಾದಿಗ ಸಮಾಜ ನಿಲ್ಲುತ್ತದೆ ಎಂದರು.

**ಮೀಸಲಾತಿ ನೀಡದೆ ಅನ್ಯಾಯ**

ನೂತನವಾಗಿ ಶಾಧಿಪೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಿರ್ದೇಶಕರಾಗಿ ಆಯ್ಕೆಯಾದ ಗೌತಮ್ ವೈಜೀನಾಥ ಪಾಟೀಲ್, ಚಿನ್ನಯ್ಯ ಶಾಧಿಪೂರ, ಹಿರಿಯ ಮುಖಂಡ ಕೆಎಂ ಬಾರಿ, ಮಲ್ಲು ಕೊಡಂಬಲ್, ಮಾತನಾಡಿದರು.

> ಸುಪ್ರೀಂಕೋರ್ಟ್ ಆದೇಶ ಹೊರಡಿಸಿದರೂ ಸಹ ಕಾಂಗ್ರೇಸ್ ಸರ್ಕಾರ ಒಳಮೀಸಲಾತಿ ಜಾರಿಗೆ ಮಾಡದೆ ಆಯೋಗಗಳು ರಚಿಸಿ ಕುಂಟು ನೇಪ ಹೇಳುತ್ತಾ ಕಾಲಹರಣ ಮಾಡುತ್ತಾ ಬಂದು ಕೊನೆಯಲ್ಲಿ ಸರ್ಕಾರ ರಚನೆ ಮಾಡಿದ ನ್ಯಾಯಮೂರ್ತಿ ನಾಗಮೋಹನ್ ದಾಸ ಆಯೋಗವು ಕೊಟ್ಟ ವರದಿಯಂತೆ ಮೀಸಲಾತಿ ನೀಡದೆ ನಮ್ಮ ಸಮಾಜಕ್ಕೆ ಕಾಂಗ್ರೇಸ್ ಸರ್ಕಾರ ಅನ್ಯಾಯ ಮಾಡಿದೆ ಎಂದರು.

ಈ ಸಂದರ್ಭದಲ್ಲಿ ರವೀಂದ್ರ ಪಾಟೀಲ ಕನಕಪುರ, ವಿಜಯರಾಜ ಕೊಡಂಪಳ್ಳಿ, ಹಣಮಂತರಾವ, ಸುನೀಲ ಸಲಗಾರ, ಜಗನ್ನಾಥ ಹೊಸಮನಿ, ಗೋಪಾಲರೆಡ್ಡಿ ಕೊಳ್ಳೂರ, ಶಾಮರಾವ, ಸತೀಶ ಇಟಗಿ, ಚಂದ್ರರೆಡ್ಡಿ, ಅನೀಲ ಕ್ರಾಂತಿ, ದತ್ತು, ಈಶ್ವರ, ದೇವೀಂದ್ರ ಕಟ್ಟಿಮನಿ, ಶಿವಶರಣಪ್ಪ, ಶಿವಾನಂದ, ಶಂಕರ ದಂಡೀನ, ಸಾಯಬಣ್ಣ ಅನೇಕರಿದ್ದರು.

# ನಗರದ ರಾಷ್ಟ್ರೀಯ ಹೆದ್ದಾರಿ ಬ್ಯಾರಿಕೆಡ್‌ಗಳಿಗೆ ಕೆಂಪು ಹಳದಿ ಬಣ್ಣವನ್ನು ಹಚ್ಚಿಸಲು ಮನವಿ

• **ಉದಯವಾಹಿನಿ ಅರಸೀಕೆರೆ**


ಉದಯವಾಹಿನಿ ಚಿತ್ರ

ಅರಸೀಕೆರೆ ನಗರದ ರಾಷ್ಟ್ರೀಯ ಹೆದ್ದಾರಿ 206ರ ಮಧ್ಯಭಾಗದಲ್ಲಿ ನಿರ್ಮಾಣವಾಗುತ್ತಿರುವ ನೂತನ ಬ್ಯಾರಿಕೆ ಗೇಟ್‌ಗಳಿಗೆ ಕನ್ನಡ ನಾಡಿನ ಹೆಮ್ಮೆಯ ಬಣ್ಣವಾದ ಕೆಂಪು, ಹಳದಿ ಬಣ್ಣವನ್ನು ಬ್ಯಾರಿಗೇಟ್‌ಗಳಿಗೆ ಆ ಅಚ್ಚಿಸಿ ಕನ್ನಡ ನಾಡಿನ ಹಿರಿಮೆ, ನಗರ ಸೌಂದರ್ಯವನ್ನು ಹೆಚ್ಚಿಸಲು ಸಂಬಂಧ ಪಟ್ಟವರಿಗೆ ಸೂಚಿಸಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಅರಸೀಕೆರೆ ತಾಲ್ಲೂಕ್ ಅಧ್ಯಕ್ಷರಾದ ಎ ಜಿ ಕಿರಣ್ ಕುಮಾರ್ ನೇತೃತ್ವದಲ್ಲಿ ಅರಸೀಕೆರೆ ಕ್ಷೇತ್ರದ ಶಾಸಕ, ಕರ್ನಾಟಕ ಸರ್ಕಾರದ ಗೃಹ ಮಂಡಳಿ ಅಧ್ಯಕ್ಷರಾದ ಕೆ ಎಮ್ ಶಿವಲಿಂಗೇಗೌಡರಿಗೆ ಅರಸೀಕೆರೆ ತಾಲ್ಲೂಕ್ ಕಚೇರಿ ಆವರಣದಲ್ಲಿ ಮನವಿ ಸಲ್ಲಿಸಿದರು. ಕರವೇ ಹಾಸನ ಜಿಲ್ಲಾ ಉಪಾಧ್ಯಕ್ಷರಾದ ತುಳಸಿದಾಸ್ ಸಂತೋಷ್‌ಎ.ಬಿ ನಗರ ಖಜಾಂಚಿ ಸುನಿಲ್ ನಗರ ಕಾರ್ಮಿಕ ಘಟಕದ ಅಧ್ಯಕ್ಷರು ಶೇಖರ್ ಮೆಕಾನಿಕ್. ಆಪಲ್ ಮಂಜು.. ನಗರ ಸಂಘಟನಾ ಕಾರ್ಯದರ್ಶಿ ನಾಸಿರ್. ತಾಲ್ಲೂಕು ಯುವ ಘಟಕದ ಅಧ್ಯಕ್ಷ ರಕ್ಷಿತ್, ಉಪಾಧ್ಯಕ್ಷರು ನವೀನ್ ಕರಗುಂದ, ಸ್ವರೂಪ್,ಕಾಟಿಕೆರೆ ಸಿದ್ದೇಶ್ ಈ ಸಂದರ್ಭದಲ್ಲಿ ಅರಸೀಕೆರೆ ನಗರಸಭೆಯ ಸದಸ್ಯರು ವೆಂಕಟ್ ಮುನಿ ಮುಂತಾದವರು ಹಾಜರಿದ್ದರು

# ಎಸ್‌ಐಟಿ ತನಿಖೆಗೆ ಕಾಣದ ಕೈ ನಿಯಂತ್ರಣ

• **ಉದಯವಾಹಿನಿ, ಚಿಕ್ಕಮಗಳೂರು**



ದೇವರ ಮೇಲೆ ಕಲ್ಲು ತೂರಿದ್ರೆ, ಉಗಿದ್ರೆ, ಪೆಟ್ರೋಲ್ ಬಾಂಬ್ ಹಾಕಿ ಪಾಕಿಸ್ತಾನಕ್ಕೆ ಜಿಂದಾಬಾದ್ ಕೂಗಿದ್ರೆ ನೋಡಿಕೊಂಡು ಹೇಡಿಗಳು, ಬೆರಕೆಯವರು ಸುಮ್ಮನಿರಬಹುದು, ಶುದ್ಧ ರಕ್ತದವರು ಸುಮ್ಮನಿರಲ್ಲ ಎಂದು ಎಂಎಲ್‌ಸಿ ಸಿ.ಟಿ ರವಿ ಹೇಳಿದ್ದಾರೆ.

ಚಿಕ್ಕಮಗಳೂರಿನಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಈ ವೇಳೆ, ತಲೆ ಕಡೀರಿ, ತೊಡೆ ಮುರೀರಿ ಎಂದು ಸಿ.ಟಿ ರವಿ ತಮ್ಮ ಮಕ್ಕಳಿಗೆ ಹೇಳ್ತಾರಾ? ಎಂಬ ಸಚಿವ ಪ್ರಿಯಾಂಕ್ ಖರ್ಗೆಯವರ ಹೇಳಿಕೆ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದರು. ಶುದ್ಧ ರಕ್ತದವರು ನನ್ನ ಜೊತೆ ನಿಂತಿದ್ದಾರೆ. ಬೆರಕೆಯವರು ಬೆರಕೆ ರೀತಿ ಮಾತನಾಡ್ತಿದ್ದಾರೆ ಎಂದು ಕಿಡಿಕಾರಿದ್ದಾರೆ. ಧರ್ಮಸ್ಥಳದ ಬುರುಡೆ ಪ್ರಕರಣದ ವಿಚಾರವಾಗಿ, ಎಸ್‌ಐಟಿ ತನಿಖೆ ಬಗ್ಗೆ ಅವರು ಅಸಮಾಧಾನ ಹೊರಹಾಕಿದರು. ಒಬ್ಬ ಬುರುಡೆ ಮಾಸ್ಕ್ ಮ್ಯಾನ್ ಮಾತು ಕೇಳಿ ಸರ್ಕಾರ ಮರ್ಯಾದೆ ಕಳೆದುಕೊಂಡಿದೆ. ಧರ್ಮಾಧಿಕಾರಿ, ಧರ್ಮಸ್ಥಳದ ಬಗ್ಗೆ ಅಪನಂಬಿಕೆ ಬರುವಂತೆ ವರ್ತಿಸಿ ಇದ್ದ 3 ಕಾಸಿನ ಮರ್ಯಾದೆಯನ್ನೂ ಹರಾಜು ಹಾಕಿಕೊಂಡಿದೆ. ಈಗ ಮತ್ತೊಬ್ಬನ ಮಾತು ಕೇಳಿ ಲಂಗೋಟಿಯನ್ನೂ ಬಿಚ್ಕೊಂಡು ಬೆತ್ತಲಾಗಬೇಕೆಂದಿದ್ರೆ ಅವರ ಹಣೆಬರಹ ಎಂದಿದ್ದಾರೆ.

> ಎಸ್‌ಐಟಿ ತನಿಖೆಗೆ ಕಾಣದ ಕೈ ನಿಯಂತ್ರಣ ಹೇರುತ್ತಿರುವ ಅನುಮಾನ ಬರುತ್ತಿದೆ. ಅಪಪ್ರಚಾರ ಮಾಡಿದ ಯೂಟ್ಯೂಬರ್ಸ್, ಬುಲ್ಡೋಜರ್ ಇಟ್ಟು ಧರ್ಮಸ್ಥಳ ಉಡಾಯಿಸಬೇಕೆಂದೋರು ಬೀದಿಯಲ್ಲೇ ಓಡಾಡ್ತಿದ್ದಾರೆ. ಷಡ್ಯಂತ್ರ ಮಾಡ್ದೋರು ಯಾರೆಂದು ಇಂದಿಗೂ ಸ್ಪಷ್ಟಪಡಿಸಿಲ್ಲ. ತನಿಖೆಯನ್ನು ಹಳ್ಳ ಹಿಡಿಸುವ ಎಲ್ಲಾ ಪ್ರಯತ್ನಗಳು ನಡೆಯುತ್ತಿರೋ ಅನುಮಾನ ಬರುತ್ತಿದೆ ಎಂದಿದ್ದಾರೆ.

# ಬ್ರಹ್ಮಶ್ರೀ ನಾರಾಯಣ ಗುರುಗಳ 171ನೇ ಜಯಂತಿ ಕಾರ್ಯಕ್ರಮ

• **ಉದಯವಾಹಿನಿ ಅರಸೀಕೆರೆ**


ಉದಯವಾಹಿನಿ ಚಿತ್ರ

ಸೋಮವಾರ ಅರಸೀಕೆರೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಬ್ರಹ್ಮಶ್ರೀ ನಾರಾಯಣ ಗುರುಗಳ 171ನೇ ಜಯಂತಿ ಕಾರ್ಯಕ್ರಮದಲ್ಲಿ ಕರ್ನಾಟಕ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಅರಸೀಕೆರೆ ಕ್ಷೇತ್ರದ ಜನಪ್ರಿಯ ಶಾಸಕರಾದ ಕೆ ಎಂ ಶಿವಲಿಂಗೇಗೌಡರು ಭಾಗವಹಿಸಿ ಬ್ರಹ್ಮಶ್ರೀ ನಾರಾಯಣ ಗುರುಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಅರಸೀಕೆರೆ ತಹಶೀಲ್ದಾರ್ ಎಂ ಜಿ ಸಂತೋಷ್ ಕುಮಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾ ಅಧಿಕಾರಿ ಸತೀಶ್, ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿ ಮೋಹನ್ ಕುಮಾರ್, ಅರಸೀಕೆರೆ ತಾಲ್ಲೂಕು ಈಡಿಗರ ಸಮಾಜದ ಅಧ್ಯಕ್ಷರು, ಪುರಸಭಾ ಮಾಜಿ ಅಧ್ಯಕ್ಷರಾದ ಕೆ.ಸಿ. ಯೋಗೇಶ್ ನಗರಸಭಾ ಸದಸ್ಯರಾದ ವೆಂಕಟಮುನಿ, ಗಂಗಾಮತ ಸಮಾಜದ ಅಧ್ಯಕ್ಷರಾದ ಲಕ್ಷ್ಮಣ್ ಗ್ಯಾರಂಟಿ ಸಮಿತಿ ಸದಸ್ಯರಾದ ಜಾಜೂರು ಸಿದ್ದೇಶ್, ಇನ್ನಿತರ ಮುಖಂಡರುಗಳು ಸಮಾಜದ ಬಂಧುಗಳು ಕಂದಾಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಹಿಂದೂ ಮಹಾಗಣಪತಿ ಹುಂಡಿ ಎಣಿಕೆ 15 ಲಕ್ಷರೂ. ಸಂಗ್ರಹ

• **ಉದಯವಾಹಿನಿ, ಚಿತ್ರದುರ್ಗ**

ಏಷ್ಯಾದಲ್ಲೇ ಅತಿಹೆಚ್ಚು ಜನ ಸೇರುವ ಎರಡನೇ ಶೋಭಾಯಾತ್ರೆ ಖ್ಯಾತಿಯ ಚಿತ್ರದುರ್ಗದ ಹಿಂದೂ ಮಹಾಗಣಪತಿ ಕಾಣಿಕೆ ಹುಂಡಿಯಲ್ಲಿ 15 ಲಕ್ಷ ರೂ. ಸಂಗ್ರಹ ಆಗಿದೆ. ಚಿತ್ರದುರ್ಗದಲ್ಲಿ ವಿಶ್ವ ಹಿಂದೂ ಪರಿಷತ್, ಭಜರಂಗದಳದಿಂದ ಹಿಂದೂ ಮಹಾಗಣಪತಿ ಉತ್ಸವ ಹಿನ್ನೆಲೆ ಸತತ 18 ದಿನಗಳ ಕಾಲ ಜೈನಧಾಮದಲ್ಲಿ ಪ್ರತಿಷ್ಠಾಪನೆ ಮಾಡಿದ್ದ ಹಿಂದೂ ಮಹಾಗಣಪತಿ ಕಾಣಿಕೆ ಹುಂಡಿಯನ್ನು ಸೋಮವಾರ ವಿಶ್ವ ಹಿಂದೂ ಪರಿಷತ್ ಕಾರ್ಯಕರ್ತರು ಎಣಿಕೆ ಮಾಡಿದ್ದು, ಕಾಣಿಕೆ ಪೆಟ್ಟಿಗೆಯಲ್ಲಿ 12.50 ಲಕ್ಷ ರೂ. ನೋಟುಗಳು, 2.50 ಲಕ್ಷ ರೂ. ಚಿಲ್ಲರೆ ಹಣ ಸಂಗ್ರಹವಾಗಿದೆ.

ಸೋಮವಾರ ಹಿಂದೂ ಮಹಾಗಣಪತಿ ಸಮಿತಿಯಿಂದ ಕಾಣಿಕೆ ಹುಂಡಿಯ ಹಣ ಎಣಿಕೆ ಕಾರ್ಯ ನಡೆದಿದ್ದು, ಕಾಣಿಕೆ ಪೆಟ್ಟಿಗೆಯ ಹಣವನ್ನು ಭಕ್ತರು ಹರಾಜು ಕೂಗಿ ಪಡೆಯಲಿದ್ದಾರೆ. ಪ್ರತಿ ವರ್ಷದಂತೆ ಕಾಣಿಕೆ ಹುಂಡಿಯನ್ನು ಸಾಂಪ್ರದಾಯಿಕವಾಗಿ ಹರಾಜು ಹಾಕಲಿದ್ದು, ಅದನ್ನು ಹರಾಜಿನಲ್ಲಿನ ಭಕ್ತರಿಗೆ ನೀಡಲಾಗುವುದು. ಇನ್ನೂ ಸತತ 18 ದಿನಗಳ ಕಾಲವೂ ನಿರಂತರವಾಗಿ ನಡೆದ ಪೂಜಾ ಕೈಂಕಾರ್ಯದಲ್ಲಿ ಲಕ್ಷಾಂತರ ಜನ ಭಕ್ತರು ದರ್ಶನ ಪಡೆದಿದ್ದು, ಸೆ.13ರಂದು ನಡೆದ ಶೋಭಾಯಾತ್ರೆಯಲ್ಲಿ ಲಕ್ಷಾಂತರ ಜನ ಭಾಗಿಯಾಗಿದ್ದರು. ಹೀಗಾಗಿ ಗಣಪತಿ ಕಾಣಿಕೆ ಹುಂಡಿಯಲ್ಲಿ ಸಹ ಅಪಾರ ಹಣ ಸಂಗ್ರಹವಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ.

# ಬಾಗಲಕೋಟೆ ನಗರದಲ್ಲಿ ಹೆಚ್ಚಾಯ್ತು ಬೀದಿ ನಾಯಿಗಳ ಹಾವಳಿ ಒಂದೇ ದಿನ 15 ಮಂದಿ ಮೇಲೆ ದಾಳಿ

• **ಉದಯವಾಹಿನಿ, ಬಾಗಲಕೋಟೆ**


ಉದಯವಾಹಿನಿ ಚಿತ್ರ

ಕೈ, ಕಾಲುಗಳ ಮೇಲೆ ಜಿನುಗುತ್ತಿರುವ ರಕ್ತ, ಗಂಭೀರ ಗಾಯಗೊಂಡವರಿಗೆ ಚಿಕಿತ್ಸೆ ಕೊಡುತ್ತಿರುವ ವೈದ್ಯರು, ಏನೋ ದುರಂತ ನಡೆದಿದೆ ಎಂದು ಗಾಬರಿಯಿಂದ ಮುಗಿಬಿದ್ದಿರುವ ಜನತೆ. ಅಂದ ಹಾಗೆ ಈ ದೃಶ್ಯಗಳು ಕಂಡು ಬಂದಿದ್ದು ಬಾಗಲಕೋಟೆ ಜಿಲ್ಲಾಸ್ಪತ್ರೆಯಲ್ಲಿ. ಕಳೆದ ನಾಲ್ಕೈದು ದಿನಗಳ ಹಿಂದೆ ನವನಗರದ ಎಪಿಎಂಸಿ ಬಳಿ ಹುಚ್ಚು ನಾಯಿಯೊಂದು ಕೆಲಸಕ್ಕೆಂದು ಹೊರಟವರ, ಬಸ್‌ಗಾಗಿ ಕಾಯುತ್ತಿದ್ದವರ ಸುಮಾರು ಹತ್ತು ಜನರ ಮೇಲೆ ತೀವ್ರ ದಾಳಿ ನಡೆಸಿ ಗಾಯಗೊಳಿಸಿತ್ತು. ಸಾಲದು ಎಂಬಂತೆ ಪಕ್ಕದಲ್ಲೇ ಎಪಿಎಂಸಿ ಯಾರ್ಡ್‌ನಲ್ಲಿರುವ ಅಂಧ ಶಾಲಾ ಮಕ್ಕಳ ಮೇಲೂ ದಾಳಿ ನಡೆಸಿ ಕೈ, ಕಾಲು ಸೇರಿ ದೇಹದ ಬೇರೆ ಬೇರೆ ಭಾಗದಲ್ಲಿ ತೀವ್ರವಾಗಿ ಕಚ್ಚಿತ್ತು.

ಒಟ್ಟು 15 ಜನರಿಗೆ ಗಂಭೀರವಾದ ಗಾಯಗಳಾಗಿದ್ದು ಅವರೆಲ್ಲಾ ಜಿಲ್ಲಾಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಂಡಿದ್ದರು. ಈ ಘಟನೆಯಿಂದ ನಗರದ ಜನತೆ ಆತಂಕಕ್ಕೊಳಗಾಗಿತ್ತು. ಸಾಮಾನ್ಯ ನಾಯಿಗಳು ಬಳಿ ಬಂದರು ಸಹ ಭಯದಿಂದ ದೂರ ಸರಿಯುವ ರೀತಿಯಾಗಿತ್ತು. ಕಣ್ಣಿದ್ದವರು ಹೇಗೋ ವಾಸಿಯಾಗಿ ಬಿಡುತ್ತಾರೆ. ಆದರೆ ಜಗತ್ತೇ ಕತ್ತಲಾಗಿದ್ದವರ ಗತಿ ಏನು? ಹೀಗಾಗಿ ಹುಚ್ಚು ನಾಯಿ ಕಡಿತಕ್ಕೊಳಗಾದ ಅಂಧ ಶಾಲಾ ಶಿಕ್ಷಕಿ ಹೇಮಾವತಿ ಹಾಗೂ ಸ್ಥಳೀಯರು ಹುಚ್ಚು ನಾಯಿ, ಬೀದಿ ನಾಯಿಗಳ ಹಾವಳಿಯಿಂದ ನಮ್ಮನ್ನು ರಕ್ಷಿಸಿ, ಮೇಲಿಂದ ಮೇಲೆ ನಾಯಿ ದಾಳಿ ನಡೆಯುತ್ತಿದೆ. ಭಯದಲ್ಲೇ ಜೀವನ ಮಾಡಬೇಕಿದೆ. ಬೀದಿ ನಾಯಿಗಳಿಗೆ ಕಡಿವಾಣ ಹಾಕುವಂತೆ ಜಿಲ್ಲಾಡಳಿತ, ನಗರಸಭೆಗೆ ಮನವಿ ಮಾಡಿಕೊಂಡಿದ್ದಾರೆ. ಇತ್ತೀಚೆಗೆ ಬಾಗಲಕೋಟೆ ನಗರದಲ್ಲಿ ನಾಯಿ ಕಡಿತದ ಪ್ರಕರಣಗಳು ಹೆಚ್ಚಾಗಿವೆ ಎಂದು ಅಂಕಿ ಅಂಶಗಳೇ ಹೇಳುತ್ತಿವೆ. ಜಿಲ್ಲೆಯಲ್ಲಿ ಒಂದೇ ವರ್ಷದಲ್ಲಿ 1669 ಜನರಿಗೆ ನಾಯಿ ಕಡಿತವಾಗಿದೆ.

ಪ್ರತಿ ತಿಂಗಳು ಸರಾಸರಿ 200 ಜನ ನಾಯಿ ಕಡಿತಕ್ಕೆ ಒಳಗಾಗಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ. ಅದರಲ್ಲೂ ಇಬ್ಬರೂ ನಾಯಿ ಕಡಿತದಿಂದ ಸಾವನ್ನಪ್ಪಿದ್ದು ಭಯ ಮೂಡಿಸುತ್ತದೆ. ಒಂದೇ ತಿಂಗಳಲ್ಲಿ ಬಾಗಲಕೋಟೆ ನಗರದಲ್ಲಷ್ಟೇ 30ಕ್ಕೂ ಹೆಚ್ಚು ಜನರ ಮಾರಣಾಂತಿಕ ನಾಯಿ ದಾಳಿಗೆ ಒಳಗಾಗಿದ್ದಾರೆ.

ಬಾಗಲಕೋಟೆ, ಇಳಕಲ್ ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಾಯಿ ಕಡಿತದ ಪ್ರಕರಣ ಬೆಳಕಿಗೆ ಬಂದಿದೆ. ಹುಚ್ಚು ಹಿಡಿದ ಹಿನ್ನೆಲೆ ನಾಯಿಯನ್ನು ಯಾರೋ ಬೀದಿಗೆ ಬಿಟ್ಟಿರುವ ಶಂಕೆ ವ್ಯಕ್ತವಾಗಿದೆ ಎಂದು ಜಿಲ್ಲಾಸ್ಪತ್ರೆ ಸರ್ಜನ್ ಡಾ.ಮಹೇಶ್ ಕೋಣಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಜಿಲ್ಲಾಸ್ಪತ್ರೆಗೆ ಮೂರು ಕೆಟಗೆರಿಗೆಯಲ್ಲಿ ಪ್ರಕರಣ ದಾಖಲಾಗುತ್ತವೆ. ಕೆಟಗೆರಿ ಮೂರರ ಪ್ರಕರಣಗಳೇ ಜಿಲ್ಲಾಸ್ಪತ್ರೆಗೆ ಹೆಚ್ಚು ದಾಖಲಾಗಿವೆ. ಮೊದಲ ಕೆಟಗೆರಿಯಲ್ಲಿ ಕೇವಲ ಟಿಟಿ ಇಂಜೆಕ್ಷನ್ ಮಾತ್ರ, ಎರಡರಲ್ಲಿ ಟಿಟಿ+ಇಂಟ್ರಾ ಮಸಿಕ್ಯೂಲರ್ ಇಂಜೆಕ್ಷನ್ ಕೊಡಲಾಗುತ್ತೆ. ಕೆಟಗರಿ ಮೂರರ ವ್ಯಕ್ತಿಗಳಿಗೆ ಟಿಟಿ,ಇಂಟ್ರಾ ಮಸಿಕ್ಯೂಲರ್, ಎಆರ್ 5 ಡೋಸ್ ಇಂಜೆಕ್ಷನ್ ಕೊಡಲಾಗುತ್ತೆ ಎಂದು ನಾಯಿ ಕಡಿತಕ್ಕೆ ಒಳಗಾಗು ವ್ಯಕ್ತಿಗಳ ಚಿಕಿತ್ಸೆ ಬಗ್ಗೆ ಮಾಹಿತಿ ನೀಡಿದರು. ಸದ್ಯದಲ್ಲೇ ಸ್ಥಳೀಯ ಸಂಸ್ಥೆಗಳು, ಆರೋಗ್ಯ ಇಲಾಖೆ ಮತ್ತು ಪಸು ಸಂಗೋಪನೆ ಇಲಾಖೆಯಿಂದ ತಂಡ ರಚನೆ ಮಾಡಿ ಬೀದಿ ನಾಯಿಗಳ ಹಾವಳಿಗೆ ಕಡಿವಾಣ ಹಾಕುವುದಾಗಿ ಮಹೇಶ್ ಕೋಣಿ ತಿಳಿಸಿದರು.

# ನೇರ ರೈಲು ಯೋಜನೆ ವಿಳಂಬಕ್ಕೆ ರಾಜ್ಯ ಸರ್ಕಾರ, ಸಂತೋಷ್ ಲಾಡ್ ಕಾರಣ

• **ಉದಯವಾಹಿನಿ, ಬೆಳಗಾವಿ**


ಉದಯವಾಹಿನಿ ಚಿತ್ರ

ಧಾರವಾಡ-ಬೆಳಗಾವಿ ನೇರ ರೈಲು ಯೋಜನೆ ವಿಳಂಬಕ್ಕೆ ರಾಜ್ಯ ಸರ್ಕಾರ, ಸಂತೋಷ್ ಲಾಡ್ ಕಾರಣ ಎಂದು ರೈಲ್ವೇ ಖಾತೆಯ ರಾಜ್ಯ ಸಚಿವ ವಿ ಸೋಮಣ್ಣ ದೂರಿದ್ದಾರೆ. ವಿವಿಧ ರೈಲ್ವೆ ಕಾಮಗಾರಿ ಶಂಕು ಸ್ಥಾಪನೆ ಕಾರ್ಯಕ್ರಮ ನೆರವೇರಿಸಲು ಬೆಳಗಾವಿಗೆ ಆಗಮಿಸಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಸಹಕಾರ ಇಲ್ಲದ ಕಾರಣ ಬೆಳಗಾವಿ-ಧಾರವಾಡ ನೇರ ರೈಲು ಯೋಜನೆ ವಿಳಂಬವಾಗುತ್ತಿದೆ ಎಂದು ಹೇಳಿದರು.

ಹುಬ್ಬಳ್ಳಿಯಲ್ಲಿ ಇನ್ನೂ 45 ಎಕರೆ ಜಮೀನು ಸ್ವಾಧೀನ ಮಾಡಿಕೊಳ್ಳಬೇಕಿದೆ. ಈಗಾಗಲೇ ಎರಡು, ಮೂರು ಬಾರಿ ನಾನು ಮಾತಾಡಿದ್ದೇನೆ. ನಾನು ಎಷ್ಟು ಸಲ ಸಂಪರ್ಕ ಮಾಡಿದರೂ ಸಂತೋಷ್ ಲಾಡ್ ಸ್ಪಂದನೆ ಮಾಡುತ್ತಿಲ್ಲ. ನಾನು ಮಾತ್ರವಲ್ಲ ಪ್ರಹ್ಲಾದ್ ಜೋಶಿ, ಜಗದೀಶ್ ಶೆಟ್ಟರ್ ಅವರು ಕೂಡ ಮಾತಾಡಿದ್ದಾರೆ. ಇನ್ನೊಂದು ಬಾರಿ ನಾನೇ ಅವರ ಜೊತೆ ಮಾತನಾಡುತ್ತೇನೆ. ಬೆಳಗಾವಿಯಲ್ಲಿ ಈಗಾಗಲೇ ನೂರರಷ್ಟು ಭೂಸ್ವಾಧೀನವಾಗಿದೆ. ಸಂತೋಷ್ ಲಾಡ್ ಯಾಕೆ ಹಾಗೆ ಮಾಡುತ್ತಿದ್ದಾರೆ ಎನ್ನುವುದು ಗೊತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸ್ಪಂದನೆ ಮಾಡದೇ ಇದ್ದರೆ ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡುತ್ತೇವೆ. ಈ ಯೋಜನೆಗೆ ಈಗಾಗಲೇ 937ಕೋಟಿ ರೂ. ಹಣ ಮೀಸಲಿಡಲಾಗಿದೆ. ಸಂತೋಷ್ ಲಾಡ್ ಇನ್ನು ಬೆಳೆಯುತ್ತಿರುವ ವ್ಯಕ್ತಿ. ನಾನೇ ಅವರನ್ನು ಹುಡುಕಿಕೊಂಡು ಹೋಗುತ್ತೇನೆ. ಸಿದ್ದರಾಮಯ್ಯನವರ ಜೊತೆಗೆ ಮಾತಾಡಿದ್ದೇನೆ. ಧಾರವಾಡ ಜಿಲ್ಲಾಧಿಕಾರಿ ಜೊತೆ ಜೊತೆಗೆ ಹತ್ತಾರು ಬಾರಿ ಮಾತಾಡಿದ್ದೇನೆ. ಧಾರವಾಡ ಡಿಸಿ ಸಿಕ್ಕಾಗ ನನ್ನದೇ ಭಾಷೆಯಲ್ಲಿ ಮಾತಾಡಿದ್ದೇನೆ ಎಂದರು. ಯಾವುದೇ ಕಾರಣಕ್ಕೂ ಯೋಜನೆಯನ್ನ ನಿಲ್ಲಿಸುವುದಿಲ್ಲ. ಬೇರೆ ರಾಜ್ಯದಲ್ಲಿ ರೈಲ್ವೇ ಯೋಜನೆಗಳಿಗೆ ಉತ್ತಮ ಸಹಕಾರ ನೀಡುತ್ತಿದ್ದರೆ ನಮ್ಮಲ್ಲಿ ಸರ್ಕಾರ ಯಾಕೆ ಹೀಗೆ ಮಾಡುತ್ತಿದೆ ಎನ್ನುವುದನ್ನು ರಾಜ್ಯ ಸರ್ಕಾರ ತಿಳಿಸಬೇಕು. ಕರ್ನಾಟಕದಲ್ಲಿ ಸರ್ಕಾರ ಅಭಿವೃದ್ಧಿ ಕೆಲಸದ ಕಡೆ ನೋಡುತ್ತಿಲ್ಲ. ಬೇರೆ ಕೆಲಸದಲ್ಲಿ ತಲ್ಲೀನರಾಗಿದ್ದಾರೆ ಎಂದು ಸಿಟ್ಟು ಹೊರಹಾಕಿದರು.

ಸೋಮವಾರ ಬೆಳಗಾವಿ, ಖಾನಾಪುರ ಸೇರಿ ಹಲವು ಕಡೆ ಮೇಲ್ಸೆತುವೆ ಕಾಮಗಾರಿ ಶಂಕು ಸ್ಥಾಪನೆ ಮಾಡಿದ್ದೇವೆ. ದೇಶದಲ್ಲಿ ರೇಲ್ವೆ ನಿಲ್ದಾಣಗಳ ಚಿತ್ರಣ ಬದಲಾಗುತ್ತಿದೆ. ಪ್ರಧಾನಿ ಕನಸಿನಂತೆ 2047 ವಿಕಸಿತ ಭಾರತದ ಕಡೆ ಹೆಜ್ಜೆ ಇಡುತ್ತಿದ್ದೇವೆ ಎಂದರು.

> ಸವದತ್ತಿ ರಾಮದುರ್ಗ ನಡುವಿನ ಹೊಸ ರೈಲಿಗೆ ಬೇಡಿಕೆಯಿದ್ದು ಪರಿಶೀಲನೆ ಮಾಡುತ್ತೇವೆ. ರೈಲು ಸಂಪರ್ಕ ಇಲ್ಲದ ರಾಜ್ಯಗಳಿಗೆ ರೈಲು ಸಂಪರ್ಕ ಕಲ್ಪಿಸಲಾಗುತ್ತಿದೆ. ಇಡೀ ದೇಶ ಬದಲಾವಣೆ ಮಾಡುವ ನಿಟ್ಟಿನಲ್ಲಿ ಪ್ರಧಾನಿ ಕೆಲಸ ಮಾಡ್ತಿದ್ದಾರೆ.
> – ವಿ.ಸೋಮಣ್ಣ, ರಾಜ್ಯ ಸಚಿವ

# ಆನೆಹೊಸೂರು ಸೇತುವೆ ಮುಳುಗಡೆ

• **ಉದಯವಾಹಿನಿ, ರಾಯಚೂರು**

ಜಿಲ್ಲೆಯ ಹಲವೆಡೆ ರಾತ್ರಿ ಸುರಿದ ಜೋರು ಮಳೆಗೆ ಹಳ್ಳ, ಕೊಳ್ಳಗಳು ತುಂಬಿ ಹರಿಯುತ್ತಿವೆ. ಜೊತೆಗೆ ಲಿಂಗಸುಗೂರು ತಾಲ್ಲೂಕಿನ ಆನೆಹೊಸೂರು ಸೇತುವೆ ಮುಳುಗಡೆಯಾಗಿದೆ. ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿದ್ದು, ಆನೆಹೊಸೂರು, ಜಾಗೀರನಂದಿಹಾಳ ಗ್ರಾಮಗಳ ಮಧ್ಯದ ಸೇತುವೆ ಮುಳುಗಡೆಯಾಗಿದೆ.

ಪರಿಣಾಮ ಗ್ರಾಮಸ್ಥರು ಪರದಾಡುವಂತಾಗಿದೆ. ಶಾಲೆಗೆ ಹೋಗುವ ಮಕ್ಕಳನ್ನು ಪೋಷಕರು ಹೆಗಲ ಮೇಲೆ ಹೊತ್ತು ಹಳ್ಳ ದಾಟಿಸುತ್ತಿದ್ದಾರೆ. ಇನ್ನೂ ಮಧ್ಯಂತರ ಪರೀಕ್ಷೆಗಳು ನಡೆಯುತ್ತಿದ್ದು, ಶಾಲಾ ಕಾಲೇಜುಗಳಿಗೆ ತೆರಳಲು ವಿದ್ಯಾರ್ಥಿಗಳು ಪರದಾಡುತ್ತಿದ್ದಾರೆ. ಇಲ್ಲಿನ ನೀರಲಕೆರೆ, ಆನೆಹೊಸೂರು, ಜಾಗೀರನಂದಿ ಹಾಳ ಗ್ರಾಮಗಳ ಸಂಪರ್ಕ ಕಡಿತವಾಗಿದೆ. ಅಲ್ಲದೇ ಲಿಂಗಸುಗೂರು, ಮುದ್ದೇಬಿಹಾಳಗೆ ತೆರಳುವ ಮಾರ್ಗಗಳು ಬಂದ್ ಆಗಿವೆ. ಜೋರು ಮಳೆ ಬಂದಾಗಲೆಲ್ಲಾ ಹಳ್ಳದ ಸೇತುವೆ ಮುಳುಗಡೆಯಾಗುತ್ತಿದ್ದು, ಸೇತುವೆಯ ಎತ್ತರವನ್ನು ಹೆಚ್ಚಿಸುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ಬಳ್ಳಾರಿ ಬಿಜೆಪಿ ನಾಯಕನ ಮನೆ ಮೇಲೆ ಸಿಬಿಐ ದಾಳಿ

• **ಉದಯವಾಹಿನಿ, ಬಳ್ಳಾರಿ**


ಉದಯವಾಹಿನಿ ಚಿತ್ರ

ವಾಲ್ಮೀಕಿ ನಿಗಮದ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ಹುಟ್ಟುಹಬ್ಬದ ದಿನವೇ ಮಾಜಿ ಸಚಿವ ಬಿ ನಾಗೇಂದ್ರ ಅವರಿಗೆ ಸಿಬಿಐ ಅಧಿಕಾರಿಗಳು ಬಿಗ್ ಶಾಕ್ ನೀಡಿದ್ದಾರೆ. ವಾಲ್ಮೀಕಿ ಹಗಣ ಸಂಬಂಧವಾಗಿ ಬಳ್ಳಾರಿಯಲ್ಲಿ ಮೊಟ್ಟೆ ವ್ಯಾಪಾರಿ ಕುಮಾರಸ್ವಾಮಿ, ಅವರ ಮಗ ಬಿಜೆಪಿ ಕಾರ್ಪೊರೇಟರ್ ಗೋವಿಂದರಾಜು ಮನೆ ಮೇಲೆ 10ಕ್ಕೂ ಹೆಚ್ಚು ಸಿಬಿಐ ಅಧಿಕಾರಿಗಳು ದಾಳಿ ಮಾಡಿದ್ದಾರೆ. ವಾಲ್ಮೀಕಿ ನಿಗಮ ಪ್ರಕರಣದ ಪ್ರಮುಖ ಆರೋಪಿ ನೆಕ್ಕಂಟಿ ನಾಗರಾಜ್ ಖಾತೆಯಿಂದ ಗೋವಿದರಾಜು ಖಾತೆಗೆ 60 ಲಕ್ಷ ರೂ. ಹಣ ವರ್ಗಾಣೆಯಾಗಿತ್ತು. ಇದೇ ವಿಚಾರಕ್ಕೆ ಸಿಬಿಐ ಕಚೆರಿಯಲ್ಲಿ ಗೋವಿಂದರಾಜು ವಿಚಾರಣೆಯನ್ನೂ ಎದುರಿಸಿದ್ದರು. ನೆಕ್ಕಂಟಿ ನಾಗರಾಜ್ ನಿಂದ ನಾನು 60 ಲಕ್ಷ ರೂ. ಸಾಲ ಪಡೆದಿದ್ದೆ ಎಂದು ಹೇಳಿಕೆ ಕೊಟ್ಟಿದ್ದರು. ಅಲ್ಲದೇ ಡಿಸೆಂಬರ್ ವೇಳೆಗೆ ಸಾಲದ ಹಣವನ್ನು ವಾಪಸ್ ನೀಡುವುದಾಗಿಯೂ ಗೋವಿಂದರಾಜು ಹೇಳಿದ್ದರು.

ಈ ಬೆನ್ನಲ್ಲೇ ಸಿಬಿಐ ಗೋವಿಂದರಾಜು ಹಾಗೂ ಅವರ ತಂದೆ ಕುಮಾರಸ್ವಾಮಿ ಮನೆ ಮೇಲೆ ದಾಳಿ ಮಾಡಿದೆ. ದಾಳಿ ವೇಳೆ ಸಿಬಿಐ ಅಧಿಕಾರಿಗಳು ಬ್ಯಾಂಕ್ ವಹಿವಾಟಿನ ದಾಖಲೆ ಪರಿಶೀಲನೆ ನಡೆಸಿದ್ದಾರೆ. ಹಣ ವರ್ಗಾವಣೆಗೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಸಂಗ್ರಹಿಸಿ, ಬ್ಯಾಂಕ್ ವಹಿವಾಟಿನ ಕುರಿತು ದಾಖಲೆಗಳನ್ನ ಮುಂದಿಟ್ಟುಕೊಂಡು ತಂದೆ ಮಗ ಇಬ್ಬರಿಗೂ ಸಿಬಿಐ ಅಧಿಕಾರಿಗಳು ಡ್ರಿಲ್ ಮಾಡಿದ್ದಾರೆ.

# ಮತ್ತೆ ಬಂಗ್ಲೆಗುಡ್ಡೆಗೆ ಸ್ಥಳ ಮಹಜರು ಮಾಡುವ ಸಾಧ್ಯತೆ

## ವಿಠಲಗೌಡ ಹೇಳಿಕೆಯಿಂದ ಎಸ್ ಐಟಿ ತನಿಖೆಗೆ ಹೊಸ ತಿರುವು ಬಂಗ್ಲೆಗುಡ್ಡೆಯಲ್ಲಿ ಮತ್ತೆ ಶೋಧ

• **ಉದಯವಾಹಿನಿ, ಬೆಳ್ತಂಗಡಿ**



ಬಂಧಿತ ಚಿನ್ನಯ್ಯನ ಜಾಗಕ್ಕೆ ದಿಢೀರನೆ ಎಂಟ್ರಿಯಾಗಿರುವ ಸೌಜನ್ಯಾ ಮಾವ ವಿಠಲಗೌಡ, ಬಂಗ್ಲೆಗುಡ್ಡೆ ಸ್ಥಳ ಮಹಜರು ವೇಳೆ ರಾಶಿ ರಾಶಿ ಮೂಳೆಗಳು ಸಿಕ್ಕಿರುವುದಾಗಿ ಹೇಳಿದ್ದಾರೆ. ವಿಠಲಗೌಡ ಹೇಳಿಕೆ ಬಳಿಕ ಭಾನುವಾರ ಎಸ್ ಐಟಿ ತಂಡವು 8 ಗಂಟೆಗಳ ಕಾಲ ರಾತ್ರಿವರೆಗೂ ಮ್ಯಾರಥಾನ್ ಸಭೆಗಳನ್ನು ನಡೆಸಿದೆ. ಮತ್ತೆ ಪ್ರಣವ್ ಮೊಹಾಂತಿ ನೇತೃತ್ವದಲ್ಲಿ ಸಭೆ ನಡೆಸುವ ಸಾಧ್ಯತೆ ಇದೆ.

**ಮತ್ತೆ ಬಂಗ್ಲೆಗುಡ್ಡೆಯಲ್ಲಿ ಶೋಧಕಾರ್ಯ ಸಾಧ್ಯತೆ:** ಬಂಗ್ಲೆಗುಡ್ಡೆಯಲ್ಲಿ ರಾಶಿ ರಾಶಿ ಮೂಳೆಗಳು, ಮೂರ್ನಾಲ್ಕು ತಲೆಬುರುಡೆಯನ್ನು ಸ್ಥಳ ಮಹಜರು ವೇಳೆ ನೋಡಿದ್ದೆ ಎಂದು ವಿಡಿಯೋ ಮಾಡಿ ವಿಠಲಗೌಡ ಹರಿಬಿಟ್ಟಿದ್ದರು. ಎಸ್ ಐಟಿ ಅಧಿಕಾರಿಗಳ ಸಮ್ಮುಖದಲ್ಲೇ ನೋಡಿದ್ದಾಗಿಯೂ ಹೇಳಿರುವುದರಿಂದ ಇಂದು ಮತ್ತೆ ಬಂಗ್ಲೆಗುಡ್ಡೆಗೆ ಸ್ಥಳ ಮಹಜರು ಮಾಡುವ ಸಾಧ್ಯತೆ ಇದೆ. ಉತ್ಖನನ ಮಾಡುವ ಸಾಧ್ಯತೆಯೂ ಇದೆ. ಚಿನ್ನಯ್ಯ ತಂದುಕೊಟ್ಟಿದ್ದ ಬುರುಡೆ ಕೂಡಾ ವಿಠಲಗೌಡನೇ ತಂದುಕೊಟ್ಟಿರುವ ಹಿನ್ನೆಲೆ ಪ್ರಮುಖವಾಗಿ ಈಗ ವಿಠಲಗೌಡ ಅವರ ವಿಚಾರಣೆಯೇ ನಡೆಯುತ್ತಿದೆ. ಬಂಗ್ಲೆಗುಡ್ಡಯ ಅಸ್ಥಿಪಂಜರಗಳನ್ನು ವಶಕ್ಕೆ ಪಡೆಯಬೇಕೆಂದು ಒತ್ತಡ ಒಂದೆಡೆ ಕೇಳಿಬರುತ್ತಿದ್ದರೆ, ಇನ್ನೊಂದೆಡೆ ಬಿಜೆಪಿ ನಾಯಕರು, ಎಸ್‌ಐಟಿ ತನಿಖೆ ಹಾದಿತಪ್ಪುತ್ತಿದೆ ಎಂದು ವಿರೋಧಿಸುತ್ತಿದ್ದಾರೆ.

ಒಂದು ವೇಳೆ ಶೋಧಕಾರ್ಯ ನಡೆಯದಿದ್ದರೂ, ನಾಳೆ ನಡೆಯುವ ಸಾಧ್ಯತೆ ಇದೆ. ಒಟ್ಟಿನಲ್ಲಿ ಎಸ್ ಐಟಿ ಅಧಿಕಾರಿಗಳ ಮುಂದಿನ ನಡೆ ಭಾರೀ ಕುತೂಹಲ ಮೂಡಿಸಿದೆ.

> **ಎಸ್‌ಐಟಿ ಅಧಿಕಾರಿಗಳು ಸಭೆ**
> ಧರ್ಮಸ್ಥಳ ಪ್ರಕರಣ ಮತ್ತೊಂದು ಹಂತಕ್ಕೆ ತಲುಪಿದ್ದು, ಮತ್ತೆ ಬಂಗ್ಲೆಗುಡ್ಡೆಯಲ್ಲಿ ಶವಗಳ ಕಳೇಬರ, ಬುರುಡೆ ಸಿಕ್ಕಿರುವ ಬಗ್ಗೆ ವಿಠಲಗೌಡ ಸ್ಫೋಟಕ ಹೇಳಿಕೆ ಕೊಟ್ಟ ಬೆನ್ನಲ್ಲೇ ಈ ಬಗ್ಗೆ ಎಸ್‌ಐಟಿ ಅಧಿಕಾರಿಗಳು ಸಭೆ ನಡೆಸಿದ್ದಾರೆ. ಮತ್ತೆ ಉತ್ಖನನ ಕಾರ್ಯ ಆರಂಭ ಆಗುವ ಸಾಧ್ಯತೆ ಇದೆ.

**ವಿಡಿಯೋದಲ್ಲಿ ವಿಠಲಗೌಡ ಹೇಳಿದ್ದೇನು?:** ಸ್ಥಳ ಮಹಜರಿಗೆ ಕರೆದುಕೊಂಡು ಹೋಗುವ ವೇಳೆಯಲ್ಲಿ ಅಲ್ಲೆ, 3 ಮನುಷ್ಯರ ಕಳೆಬರ ಹತ್ತು ಹತ್ತು ಫೀಟ್‌ನಲ್ಲೇ ಸಿಗುತ್ತದೆ. ಎರಡನೇ ಬಾರಿ ಸ್ಥಳ ಮಹಜರಿಗೆ ಹೋಗುವಾಗ ಕೆಳಗಡೆ ಹೆಣಗಳ ರಾಶಿ. ನಮಗೆ ಕಣ್ಣಿಗೆ ಕಾಣುವುದು ಐದು ಇದ್ದವು, ಇದರಲ್ಲಿ ಒಂದು ಮಗುವಿನ ಎಲುಬುಗಳು ಎಂಬುದು ಗೋಚರ ಆಗ್ತಿತ್ತು, ಪಕ್ಕದಲ್ಲೇ ವಾಮಾಚಾರಕ್ಕೆ ಬಳಸುವ ಸಣ್ಣಸಣ್ಣ ಕಲಶಗಳು ಐದಾರು ಇದ್ದವು, ಇದನ್ನು ನಾನೂ ನೋಡಿದ್ದೇನೆ, ಅಧಿಕಾರಿಗಳಿಗೂ ತೋರಿಸಿದ್ದೇನೆ. ಮತ್ತೆ ಹೆಣ ಮುಚ್ಚಿಹಾಕಲು ಗುಡ್ಡ ಜರಿದ ರೀತಿ, ಮಣ್ಣು ಎಳೆದು ಹಾಕಿದ ರೀತಿ ಕಾಣುತ್ತದೆ. ಐದಾರು ಫೀಟ್ ದೂರದಲ್ಲಿ ಬುರುಡೆಗಳ ರಾಶಿ ಇದೆ, ಎಂದು ವಿಠಲಗೌಡ ಹೇಳಿದ್ದಾರೆ.

> **100ಕ್ಕೆ ನೂರು ಸತ್ಯ**
> ಎಲುಬುಗಳು ಅಲ್ಲಲ್ಲಿ ಚದುರಿವೆ. ಕಳೇಬರವು ಮಣ್ಣಿನ ಒಳಗಡೆ ಇದೆ ಕಾಣ್ತವೆ. ಬುರುಡೆ ಎಲ್ಲ ಮೇಲೆ ಕಾಣ್ತದೆ. ಮೊನ್ನೆ ನೋಡಿದ್ದೆಲ್ಲ ಹಾಗೇ ಇವೆ, ಮುಟ್ಟಿಲ್ಲ. ನೀವು ಎಷ್ಟು ಹೊತ್ತಿಗೆ ಕರೆದರೂ ತನಿಖೆಗೆ ಸಿದ್ಧ ಇದೇವೆ ಎಂದು ಅಧಿಕಾರಿಗಳಿಗೆ ತಿಳಿಸಿದ್ದೇನೆ. ಎಸ್‌ಐಟಿ ನಮ್ಮನ್ನು ಕರೆಯಲಿ, ನಾವು ಎಲ್ಲಾ ಪ್ರದೇಶವನ್ನು ತೋರಿಸುತ್ತೇವೆ. ಅದೇ ಊರಲ್ಲಿದ್ದು, ಅಷ್ಟು ಹೆಣ ರಾಶಿ ಹಾಕಿರೋದು ಆಶ್ಚರ್ಯ ಆಗುತ್ತದೆ. ಚಿನ್ನಯ್ಯ, ತೆನಾಸಿ, ರಂಗ, ಸುಬ್ರಹ್ಮಣ್ಯ ಅವರ ಮಾಹಿತಿ ಪ್ರಕಾರ ನಾನು ಜಾಗ ತೋರಿಸಲು ಸಿದ್ಧ ಇದೇನೆ. ಚಿನ್ನಯ್ಯ ಹೇಳಿದ್ದು ಕೂಡಾ 100ಕ್ಕೆ ನೂರು ಸತ್ಯ, ಅದರಲ್ಲಿ ಯಾವುದೇ ಡೌಟಿಲ್ಲ. ಎಂದು ವಿಡಿಯೋದಲ್ಲಿ ಹೇಳಿಕೆ ನೀಡಿದ್ದರು.

# ಸಂತ್ರಸ್ತರ ಕುಟುಂಬಕ್ಕೆ ಸಾಂತ್ವನ ಹೇಳಿದ ನಿಶ್ಚಲಾನಂದನಾಥ ಶ್ರೀ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಹಾಸನ**

ಮೊಸಳೆಹೊಸಳ್ಳಿಯಲ್ಲಿ ಟ್ರಕ್ ಹರಿದು ಸಾವನ್ನಪ್ಪಿದ ಸಂತ್ರಸ್ತರ ಮನೆಗಳಿಗೆ ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಭೇಟಿ ನೀಡಿ ಸಾಂತ್ವನ ಹೇಳಿದರು. ಕಬ್ಬಿನಹಳ್ಳಿ ಗ್ರಾಮದ ಪ್ರವೀಣ್, ಕುಮಾರ್ ಮನೆಗೆ ಶ್ರೀಗಳು ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಇದೇ ವೇಳೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಹೆಚ್ಚಿನ ಪರಿಹಾರ ನೀಡುವಂತೆ ಒತ್ತಾಯಿಸಿದರು.

**ವಿದ್ಯಾರ್ಥಿ ಮೈಸೂರಿಗೆ ಶಿಫ್ಟ್:** ಗಾಯಗೊಂಡು ಚಿಕಿತ್ಸೆ ಪಡೆಯುತ್ತಿದ್ದ ಮತ್ತೊಬ್ಬ ಇಂಜಿನಿಯರಿಂಗ್ ವಿದ್ಯಾರ್ಥಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ನಗರದ ಹಿಮ್ಸ್ ಆಸ್ಪತ್ರೆಯಿಂದ ಮೈಸೂರಿಗೆ ಶಿಫ್ಟ್ ಮಾಡಲಾಗಿದೆ. ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಗೆ ಶಿಫ್ಟ್ ಮಾಡಲಾಯಿತು.

ಉದಯ ವಾಹಿನಿ
ಪ್ರಾದೇಶಿಕ
ಮಂಗಳವಾರ 16 ಸೆಪ್ಟೆಂಬರ್ 2025
07

### ಕರ್ನಾಟಕ ಮೂಲದ ಗೌರವಾನ್ವಿತ ವ್ಯಕ್ತಿ ಚಂದ್ರ ನಾಗಮಲ್ಲಯ್ಯ ಹತ್ಯೆ ಖಂಡನೀಯ; ಅಮೆರಿಕ ಅಧ್ಯಕ್ಷ ಕಂಬನಿ

# ಅಕ್ರಮ ವಲಸೆಯನ್ನು ತಡೆಗಟ್ಟುವುದಾಗಿ ಶಪಥ ಮಾಡಿದ ಟ್ರಂಪ್

**ವಾಷಿಂಗ್ಟನ್:** ಕಳೆದ ವಾರ ಟೆಕ್ಸಾಸ್‌ನ ಡಲ್ಲಾಸ್‌ನಲ್ಲಿ ದಾಖಲೆರಹಿತ ಕ್ಯೂಬನ್ ವಲಸಿಗನಿಂದ ಶಿರಚ್ಛೇದನಗೊಂಡ ಕರ್ನಾಟಕ ಮೂಲದ ವ್ಯಕ್ತಿ ಚಂದ್ರ ನಾಗಮಲ್ಲಯ್ಯ ಅವರ ಭೀಕರ ಹತ್ಯೆ ಪ್ರಕರಣಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಕ್ರಿಯೆ ನೀಡಿದ್ದಾರೆ. ಅಕ್ರಮ ವಲಸಿಗರ ಬಗ್ಗೆ ತಮ್ಮ ಆಡಳಿತ ಮೃದುವಾಗಿರುವುದಿಲ್ಲ ಎಂದು ಟ್ರಂಪ್ ಘೋಷಿಸಿದ್ದಾರೆ. ಟೆಕ್ಸಾಸ್‌ನ ಡಲ್ಲಾಸ್‌ನಲ್ಲಿ ಗೌರವಾನ್ವಿತ ವ್ಯಕ್ತಿಯಾಗಿದ್ದ ಚಂದ್ರ ನಾಗಮಲ್ಲಯ್ಯ ಅವರ ಭಯಾನಕ ಹತ್ಯೆಯ ಬಗ್ಗೆ ನನಗೆ ತಿಳಿದಿದೆ. ಚಂದ್ರ ನಾಗಮಲ್ಲಯ್ಯ ಅವರನ್ನು ಕ್ಯೂಬಾದ ಅಕ್ರಮ ವಲಸಿಗನೊರ್ವ ಕೊಲೆ ಮಾಡಿದ್ದಾನೆ. ಆತ ಈ ದೇಶದಲ್ಲಿ ಇರಬಾರದಿತ್ತು. ಹೀಗಾಗಿ ನಮ್ಮ ಆಡಳಿತ ಅಕ್ರಮ ವಲಸೆ ವಿರುದ್ಧ ಮೃದು ಧೋರಣೆ ಅನುಸರಿಸುವುದಿಲ್ಲ ಎಂದು ಡೊನಾಲ್ಡ್ ಟ್ರಂಪ್ ತಮ್ಮ ಟ್ರೂತ್ ಸೋಶಿಯಲ್ ಮಿಡಿಯಾದಲ್ಲಿ ಪೋಸ್ಟ್ ಮಾಡಿದ್ದಾರೆ. ಹತ್ಯೆಗೀಡಾದ ಚಂದ್ರ ನಾಗಮಲ್ಲಯ್ಯ ಅವರನ್ನು ಗೌರವಾನ್ವಿತ ವ್ಯಕ್ತಿ ಎಂದು ಕರೆದಿರುವ ಡೊನಾಲ್ಡ್ ಟ್ರಂಪ್, ಈ ಹತ್ಯೆಯನ್ನು ಖಂಡಿಸಿದ್ದಾರೆ. ಅಲ್ಲದೇ ಕೊಲೆಗಾರನ ವಿರುದ್ಧ ಕಠಿಣ ಕಾನೂನು ಕ್ರಮದ ಭರವಸೆ ನೀಡಿದ್ದಾರೆ. ಟ್ರಂಪ್ ಅವರ ಈ ಹೇಳಿಕೆ ಭಾರತೀಯ ಸಮುದಾಯದಲ್ಲಿ ಚಂದ್ರ ನಾಗಮಲ್ಲಯ್ಯ ಕುಟುಂಬಕ್ಕೆ ನ್ಯಾಯ ದೊರಕಲಿದೆ ಎಂಬ ಹೊಸ ಆಶಾವಾದವನ್ನು ಬಿತ್ತಿದೆ.





**ಏನಿದು ಘಟನೆ?:** ಕಳೆದ ಸೆ.10ರಂದು, ಡಲ್ಲಾಸ್‌ನ ಸ್ಯಾಮ್ಯುಯೆಲ್ ಬೌಲೆವಾರ್ಡ್‌ನಲ್ಲಿರುವ ಡೌನ್‌ಟೌನ್ ಸೂಟ್ಸ್ ಮೋಟೆಲ್‌ನಲ್ಲಿ, ಕೆಟ್ಟಿರುವ ವಾಷಿಂಗ್ ಮಷಿನ್ ಬಳಸಬೇಡ ಎಂದು ಹೇಳಿದ್ದಕ್ಕೆ, ಮೋಟೆಲ್ ಮ್ಯಾನೇಜರ್ ಆಗಿದ್ದ ಕರ್ನಾಟಕ ಮೂಲದ ವ್ಯಕ್ತಿ ಚಂದ್ರ ನಾಗಮಲ್ಲಯ್ಯ ಅವರನ್ನು ಯೋರ್ಡಾನಿಸ್ ಕೊಬೋಸ್-ಮಾರ್ಟಿನೆಜ್ ಎಂಬ ವ್ಯಕ್ತಿ ಮಚ್ಚಿನಿಂದ ಶಿರಚ್ಛೇದ ಮಾಡಿ ಕೊಲೆ ಮಾಡಿದ್ದ. ಚಂದ್ರ ನಾಗಮಲ್ಲಯ್ಯ ಅವರ ಪತ್ನಿ ನಿಷಾ ಮತ್ತುಪುತ್ರ ಗೌರವ್ ಮುಂದೆಯೇ ಶಿರಚ್ಛೇದ ಮಾಡಿದ ದುರುಳ ಮಾರ್ಟಿನೆಜ್, ಚಂದ್ರ ನಾಗಮಲ್ಲಯ ಅವರ ಶಿರವನ್ನು ಚೆಂಡಿನಂತೆ ಒದ್ದು ಕಸದ ಬುಟ್ಟಿಗೆ ಎಸೆದಿದ್ದ. ಕೊಲೆಗಾರ ಮಾರ್ಟಿನೆಜ್ ಅವರನ್ನು ಪೊಲೀಸರು ಬಂಧಿಸಿದ್ದು, ಸ್ಥಳೀಯ ನ್ಯಾಯಾಲಯ ಆತನಿಗೆ ಮರಣ ದಂಡನೆ ಶಿಕ್ಷೆ ವಿಧಿಸಿದೆ.

ಡಲ್ಲಾಸ್ ಅನಿವಾಸಿ ಭಾರತೀಯರು ಭೀಕರವಾಗಿ ಹತ್ಯೆಗೀಡಾದ ಕರ್ನಾಟಕ ಮೂಲದ ಚಂದ್ರ ನಾಗಮಲ್ಲಯ್ಯ ಕುಟುಂಬಕ್ಕೆ ಆರ್ಥಿಕವಾಗಿ ನೆರವಾಗಲು ಆನ್‌ಲೈನ್ ಅಭಿಯಾನ ಆರಂಭಿಸಿದೆ. ಇದಕ್ಕೆ ಸಾಕಷ್ಟು ಸಂಖ್ಯೆಯಲ್ಲಿ ದೇಣಿಗೆ ಹರಿದುಬಂದಿದೆ. ಕೊಲೆಗಾರ ಮಾರ್ಟಿನೆಜ್ ಮೇಲೆ ಈ ಹಿಂದೆಯೂ ಅಪಹರಣ, ದರೋಡೆಯಂತಹ ಅಪರಾಧ ಪ್ರಕರಣಗಳು ದಾಖಲಾಗಿದ್ದವು.

ಅಲ್ಲದೇ ಆತ ಅಕ್ರಮ ವಲಸಿಗನಾಗಿದ್ದು, ದಾಖಲೆಗಳಿಲ್ಲದೇ ಅಮೆರಿಕದಲ್ಲಿ ವಾಸವಾಗಿದ್ದ. ಇಷ್ಟಾದರೂ ಆತನ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳದಿರುವುದಕ್ಕೆ ಭಾರೀ ಆಕ್ರೋಶ ವ್ಯಕ್ತವಾಗಿದೆ. ಚಂದ್ರ ನಾಗಮಲ್ಲಯ್ಯ ಅವರ ಶಿರಚ್ಛೇದ ಮಾಡುತ್ತಿರುವ ಸಿಸಿಟಿವಿ ದೃಶ್ಯಗಳು ಡಲ್ಲಾಸ್‌ನ ಜನರನ್ನು ಬೆಚ್ಚಿ ಬೀಳಿಸಿದ್ದು, ಇಂತಹ ಕ್ರೂರ ಅಪರಾಧ ಘಟನೆ ನಡೆದಿರುವುದಕ್ಕೆ ಆಘಾತ ವ್ಯಕ್ತಪಡಿಸುತ್ತಿದ್ದಾರೆ. ಇದೀಗ ಟ್ರಂಪ್ ಕೂಡ ಘಟನೆಗೆ ಪ್ರತಿಕ್ರಿಯೆ ನೀಡಿದ್ದು, ಅಪರಾಧಿಗೆ ಕಠಿಣ ಶಿಕ್ಷೆಯ ಭರವಸೆ ನೀಡಿದ್ದಾರೆ.

**ಆತನ ವಿರುದ್ಧ ಕಠಿಣ ಕಾನೂನು ಕ್ರಮ**

**ಅಮೆರಿಕದ ಡಲ್ಲಾಸ್‌ನಲ್ಲಿ ನಡೆದ ಕರ್ನಾಟಕ ಮೂಲದ ಚಂದ್ರ ನಾಗಮಲ್ಲಯ ಭೀಕರ ಹತ್ಯೆಯನ್ನು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತೀವ್ರವಾಗಿ ಟೀಕಿಸಿದ್ದಾರೆ. ಚಂದ್ರ ನಾಗಮಲ್ಲಯ್ಯ ಅವರ ಶಿರಚ್ಛೇದ ಮಾಡಿದ ವ್ಯಕ್ತಿ ಮಾರ್ಟಿನೆಜ್ ಕ್ಯೂಬಾದ ಅಕ್ರಮ ವಲಸಿಗನಾಗಿದ್ದು, ಆತನ ವಿರುದ್ಧ ಕಠಿಣ ಕಾನೂನು ಕ್ರಮ ತೆಗೆದು ಕೊಳ್ಳಲಾಗುವುದು ಎಂದು ಟ್ರಂಪ್ ಭರವಸೆ ನೀಡಿದ್ದಾರೆ. ಅಲ್ಲದೇ ತಮ್ಮ ಆಡಳಿತ ಅಕ್ರಮ ವಲಸೆಯನ್ನು ಸಂಪೂರ್ಣವಾಗಿ ತಡೆಗಟ್ಟಲಿದೆ ಎಂದು ಅಮೆರಿಕ ಅಧ್ಯಕ್ಷರು ಘೋಷಿಸಿದ್ದಾರೆ.**

## ಅಪಾಯದಲ್ಲಿದ್ದಾರೆ ಆಸ್ಟ್ರೇಲಿಯ ಕರಾವಳಿ 1.5 ಮಿಲಿಯನ್ ಜನ

**ಪರ್ತ್:** ದೇಶದ ಕರಾವಳಿ ಪ್ರದೇಶಗಳಲ್ಲಿ ವಾಸಿಸುವ ಒಂದೂವರೆ ಕೋಟಿಗೂ ಹೆಚ್ಚು ಆಸ್ಟ್ರೇಲಿಯನ್ನರು 2050ರ ವೇಳೆಗೆ ಸಮುದ್ರ ಮಟ್ಟ ಏರಿಕೆಯಿಂದ ಅಪಾಯದಲ್ಲಿದ್ದಾರೆ ಎಂದು ಹವಾಮಾನ ಸಂಸ್ಥೆ ವರದಿಯೊಂದು ಎಚ್ಚರಿಸಿದೆ.

ಆಸ್ಟ್ರೇಲಿಯಾದ ಮೊದಲ ರಾಷ್ಟ್ರೀಯ ಹವಾಮಾನ ಅಪಾಯದ ಮೌಲ್ಯಮಾಪನವು ಪ್ರವಾಹಗಳು, ಚಂಡಮಾರುತಗಳು, ಶಾಖೋತ್ಪನ್ನಗಳು, ಬರ ಮತ್ತು ಕಾಡ್ಗಿಚ್ಚುಗಳಂತಹ ಘಟನೆ ಆಗಾಗ್ಗೆ ಮತ್ತು ತೀವ್ರ ಹವಾಮಾನ ಅಪಾಯಗಳನ್ನು ಮುನ್ಸೂಚಿಸಿದೆ. ಆಸ್ಟ್ರೇಲಿಯನ್ನರು ಹವಾಮಾನ ಬದಲಾವಣೆಯ ಪರಿಣಾಮಗಳೊಂದಿಗೆ ಬದುಕುತ್ತಿದ್ದಾರೆ ಎಂದು ಹವಾಮಾನ ಬದಲಾವಣೆ ಸಚಿವ ಕ್ರಿಸ್ ಬೋವೆನ್ ಹೇಳಿದರು, ಆದರೆ ನಾವು ಈಗ ತಾಪಮಾನ ಏರಿಕೆ ಆಗದಂತೆ, ಭವಿಷ್ಯದ ಪೀಳಿಗೆಗೆ ಪರಿಸರ ಕಾಪಾಡಲು ಪ್ರಯತ್ನ ಸಾಗಿದೆ ಎಂದು ಹೇಳಿದರು. ವಿಶ್ವದ ಅತಿ ದೊಡ್ಡ ತಲಾ ಮಾಲಿನ್ಯಕಾರಕ ರಾಷ್ಟ್ರಗಳಲ್ಲಿ ಒಂದಾದ ಆಸ್ಟ್ರೇಲಿಯಾ ಈಗಾಗಲೇ 1.5 ಡಿಗ್ರಿ



**ಸಮುದ್ರ ಮಟ್ಟ ಏರಿಕೆ**

ಗಿಂತ ಹೆಚ್ಚಿನ ತಾಪಮಾನವನ್ನು ತಲುಪಿದೆ ಎಂದು ವರದಿ ಹೇಳಿದೆ, ಸಿಡ್ನಿಯಲ್ಲಿ ಶಾಖ-ಸಂಬಂಧಿತ ಸಾವುಗಳು 400% ಕ್ಕಿಂತ ಹೆಚ್ಚು, ಮೆಲ್ಬೋರ್ನ್‌ನಲ್ಲಿ ಬಹುತೇಕ ಮೂರು ಪಟ್ಟು ಹೆಚ್ಚಾಗಬಹುದು ಎಂದು ವರದಿ ಉಲ್ಲೇಖಿಸಿದೆ. 2035 ಕ್ಕೆ ಸರ್ಕಾರ ತನ್ನ ಹೊರಸೂಸುವಿಕೆ ಕಡಿತ ಗುರಿಗಳನ್ನು ಘೋಷಿಸುವ ಕೆಲವು ದಿನಗಳ ಮೊದಲು ಬಿಡುಗಡೆಯಾದ 72 ಪುಟಗಳ ವರದಿಯು, ಯಾವುದೇ ಆಸ್ಟ್ರೇಲಿಯಾದ ಸಮುದಾಯವು ಅಪಾಯಗಳಿಂದ ಮುಕ್ತವಾಗಿರುವುದಿಲ್ಲ ಎಂದು ಕಂಡುಹಿಡಿದಿದೆ. ಹೆಚ್ಚಿನ ಶಾಖದ ಅಲೆ-ಸಂಬಂಧಿತ ಸಾವುಗಳು, ತೀವ್ರ ಪ್ರವಾಹ ಮತ್ತು ಕಾಡು ಬೆಂಕಿ ಅಪಾಯ ಹೆಚ್ಚಿಸಿದೆ. ಕಳಪೆ ನೀರಿನ ಗುಣಮಟ್ಟ, ಆಸ್ತಿ ಮೌಲ್ಯಗಳು ಕೂಡ ಕಡಿಮೆಯಾಗುವ ಬಗ್ಗೆ ಅದು ಎಚ್ಚರಿಸಿದೆ.

2050ರ ವೇಳೆಗೆ, ಆಸ್ಟ್ರೇಲಿಯಾದಲ್ಲಿ ಅತಿ ಹೆಚ್ಚಿನ ಅಪಾಯದ ಪ್ರದೇಶಗಳಲ್ಲಿ ನೆಲೆಗೊಂಡಿರುವ ಕರಾವಳಿ ಸಮುದಾಯಗಳ ಸಂಖ್ಯೆ ಹೆಚ್ಚಾಗುತ್ತದೆ, ಜನಸಂಖ್ಯಾ ಮಟ್ಟಗಳು ಪ್ರಸ್ತುತ ಮಟ್ಟದಲ್ಲಿಯೇ ಇದ್ದರೆ, ಇದರರ್ಥ 1.5 ಮಿಲಿಯನ್‌ಗಿಂತಲೂ ಹೆಚ್ಚು ಜನರು ಅಪಾಯದಲ್ಲಿರುತ್ತಾರೆ. ಆರೋಗ್ಯ, ಮೂಲಸೌಕರ್ಯ, ನೈಸರ್ಗಿಕ ಪ್ರಭೇದಗಳು ಮತ್ತು ಪರಿಸರ ವ್ಯವಸ್ಥೆಗಳು, ಪ್ರಾಥಮಿಕ ಕೈಗಾರಿಕೆಗಳ ಮೇಲೆ ಒತ್ತಡ ಹೇರುತ್ತದೆ ಎಂದು ವರದಿ ಎಚ್ಚರಿಸಿದೆ, ಜೊತೆಗೆ ತುರ್ತು ಪ್ರತಿಕ್ರಿಯೆ ನೀಡುವವರಿಗೆ ಹೆಚ್ಚುವರಿ ಸವಾಲುಗಳನ್ನು ಒಡ್ಡುತ್ತಿದೆ.

## 1 ಕೋಟಿ ರೂ. ಬಹುಮಾನ ಘೋಷಿಸಿದ್ದ ಮೂವರ ಹತ್ಯೆ

**ರಾಂಚಿ:** ಜಾರ್ಖಂಡ್‌ನ ಹಜಾರಿಬಾಗ್ ಜಿಲ್ಲೆಯಲ್ಲಿ ಬೆಳಗ್ಗೆ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ 1 ಕೋಟಿ ರೂಪಾಯಿ ಬಹುಮಾನವನ್ನು ಹೊತ್ತಿದ್ದ ಓರ್ವ ಸೇರಿದಂತೆ ಮೂವರು ಮಾವೋವಾದಿಗಳು ಹತರಾಗಿದ್ದಾರೆ.

ಗೋರ್ಹರ್ ಪೊಲೀಸ್ ಠಾಣಾ ವ್ಯಾಪ್ತಿಯ ಪಂಟಿತ್ರಿ ಅರಣ್ಯದಲ್ಲಿ ನಿಷೇಧಿತ ಸಿಪಿಐ ಸಹದೇವ್ ಸೊರೆನ್ ಪಡೆ ಮತ್ತು ಭದ್ರತಾ ಪಡೆಗಳ ನಡುವೆ ಬೆಳಿಗ್ಗೆ ಸುಮಾರು 6 ಗಂಟೆಯಲ್ಲಿ ಎನ್‌ಕೌಂಟರ್ ನಡೆದಿದೆ. ಶೋಧನಾ ಕಾರ್ಯಾಚರಣೆಯಲ್ಲಿ 1 ಕೋಟಿ ರೂ. ಬಹುಮಾನವನ್ನು ಹೊತ್ತಿದ್ದ ಸಹದೇವ್ ಸೊರೆನ್ ಮತ್ತು ಇತರ ಇಬ್ಬರು ಮಾವೋವಾದಿಗಳ ಮೃತದೇಹಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹತ್ಯೆಗೀಡಾದ ಕಮಾಂಡರ್‌ನನ್ನು ಸಹ್ದಿಯೋ ಸೊರೆನ್ ಎಂದು ಗುರುತಿಸಲಾಗಿದ್ದು, ಅವರು ಕಮ್ಯೂನಿಸ್ಟ್ ಪಾರ್ಟಿ ಆಫ್ ಇಂಡಿಯಾ ಕೇಂದ್ರ ಸಮಿತಿ ಸದಸ್ಯರಾಗಿದ್ದರು. ಅವರು ಪೂರ್ವ ಭಾರತದಲ್ಲಿ ಅತ್ಯಂತವಾಗಿ ಬೇಕಾಗಿದ್ದ ಪ್ರಮುಖ ಮಾವೋವಾದಿ ನಾಯಕರಲ್ಲಿ ಒಬ್ಬರಾಗಿದ್ದರು.

ನಿರ್ದಿಷ್ಟ ಗುಪ್ತಚರ ಮಾಹಿತಿಯ ಆಧಾರದ ಮೇಲೆ ಕೋಬ್ರಾ, ಬೆಟಾಲಿಯನ್, ಗಿರಿದಿಹ್ ಪೊಲೀಸರು ಮತ್ತು ಹಜಾರಿಬಾಗ್ ಪೊಲೀಸರು ಜಂಟಿ ಕಾರ್ಯಾಚರಣೆಯನ್ನು



ನಡೆಸಿದ್ದಾರೆ. ಗಿರಿದಿಹ್-ಬೊಕಾರೊ ಗಡಿಯ ಬಳಿಯ ತತಿಜಾರಿಯಾ ಪೊಲೀಸ್ ಠಾಣೆ ವ್ಯಾಪ್ತಿಯ ಕರಂಡಿ ಗ್ರಾಮದಲ್ಲಿ ಬೆಳಿಗ್ಗೆ 6 ಗಂಟೆ ಸುಮಾರಿಗೆ ಗುಂಡಿನ ಚಕಮಕಿ ನಡೆದಿದೆ.

ಇನ್ನಿಬ್ಬರು ಮಾವೋವಾದಿ ನಾಯಕರಿಗೆ 25 ಲಕ್ಷ ರೂ. ಬಹುಮಾನ ಘೋಷಣೆ ಮಾಡಲಾಗಿದ್ದ ಬಿಹಾರ-ಜಾರ್ಖಂಡ್ ವಿಶೇಷ ಪ್ರದೇಶ ಸಮಿತಿ ಸದಸ್ಯ ರಘುನಾಥ್ ಹೆಂಬ್ರಾಮ್ ಅಲಿಯಾಸ್ ಚಂಚಲ್ ಮತ್ತು 10 ಲಕ್ಷ ರೂ. ಬಹುಮಾನ ಘೋಷಿಸಿದ್ದ ವಲಯ ಸಮಿತಿ ಸದಸ್ಯ ಬಿರ್ಸೆನ್ ಗಂಜು ಅಲಿಯಾಸ್ ರಾಮ್ಖೇಲವಾನ್ ಕೂಡ ಎನ್‌ಕೌಂಟರ್‌ನಲ್ಲಿ ಹತರಾಗಿದ್ದಾರೆ. ಎನ್‌ಕೌಂಟರ್ ನಂತರ ಭದ್ರತಾ ಪಡೆಗಳು 3 ದಂಗೆಕೋರರ ಶವಗಳನ್ನು ವಶಪಡಿಸಿಕೊಂಡರು. ಅರಣ್ಯ ಪ್ರದೇಶದಲ್ಲಿ ಇನ್ನೂ ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಪ್ರೀತಿ ಬಯಸಿ 600 ಕಿಮೀ ಕಾರು ಚಲಾಯಿಸಿಕೊಂಡು ಬಂದ ಪ್ರೇಯಸಿ ಪ್ರಿಯಕರನಿಂದಲೇ ಬರ್ಬರ ಹತ್ಯೆ

**ಜೈಪುರ್:** ಪ್ರೀತಿ ಬಯಸಿ ಸುಮಾರು 600 ಕಿಮೀ ಕಾರು ಚಲಾಯಿಸಿಕೊಂಡು ಬಂದಿದ್ದ ಪ್ರಿಯತಮೆಯನ್ನು ಆಕೆಯ ಪ್ರಿಯಕರನೇ ಹತ್ಯೆಗೈದ ಪ್ರಕರಣ ರಾಜಸ್ಥಾನದಲ್ಲಿ ನಡೆದಿದೆ. ಹತ್ಯೆಯಾದ ಮಹಿಳೆಯನ್ನು ಜುನ್ಜುನುವಿನ ಅಂಗನವಾಡಿ ಶಿಕ್ಷಕಿ ಮುಖೇಶ್ ಕುಮಾರಿ (37) ಎಂದು ಗುರುತಿಸಲಾಗಿದೆ. ಅವರು ಸುಮಾರು 10 ವರ್ಷಗಳ ಹಿಂದೆ ಪತಿಯಿಂದ ಬೇರಾಗಿದ್ದರು. ಬಳಿಕ ಅವರಿಗೆ ಫೇಸ್ ಬುಕ್‌ನಲ್ಲಿ ಬಾರ್ಮರ್‌ನ ಶಾಲಾ ಶಿಕ್ಷಕ ಮನರಾಮ್ ಪರಿಚಯವಾಗಿದ್ದ. ಆಗಾಗ ಇಬ್ಬರು ಭೇಟಿಯಾಗುತ್ತಿದ್ದರು.

ಅದೇ ರೀತಿ ಸೆ.10 ರಂದು ಸಹ ಆತನ ಭೇಟಿಗೆ ಆಕೆ ಬಂದಿದ್ದಳು. ಆದರೆ ಈ ಬಾರಿ ಆಕೆಯ ಮೇಲೆ ರಾಡ್‌ನಿಂದ ಹಲ್ಲೆ ಮಾಡಿ ಹತ್ಯೆ ಮಾಡಿದ್ದಾನೆ. ಮುಖೇಶ್ ತನ್ನ ಪತಿಗೆ ವಿಚ್ಛೇದನ ನೀಡಿದ್ದರೂ. ಇನ್ನೂ ಮನರಾಮ್ ವಿಚ್ಛೇದನದ ಪ್ರಕರಣ ನ್ಯಾಯಾಲಯದಲ್ಲಿ ಬಾಕಿ ಇತ್ತು. ಇದರ ನಡುವೆಯೇ ಮಹಿಳೆ ತನ್ನನ್ನು ಮದುವೆಯಾಗುವಂತೆ ಆತನಿಗೆ ಒತ್ತಾಯಿಸುತ್ತಿದ್ದಳು ಎಂದು ತಿಳಿದುಬಂದಿದೆ. ಸೆ.10 ರಂದು, ಮುಖೇಶ್ ಕುಮಾರಿ ತನ್ನ ಆಲ್ಟೋ ಕಾರಿನಲ್ಲಿ ಜುನ್ಜುನುವಿನಿಂದ ಬಾರ್ಮರ್‌ನಲ್ಲಿರುವ ಮನರಾಮ್‌ನ ಗ್ರಾಮಕ್ಕೆ ಬಂದು, ಜನರ ಸಹಾಯದಿಂದ ಆತನ ಮನೆಯನ್ನು ಪತ್ತೆಹಚ್ಚಿದ್ದಳು. ಬಳಿಕ ಕುಟುಂಬದ ಸದಸ್ಯರಿಗೆ ಇಬ್ಬರ ನಡುವಿನ ಸಂಬಂಧದ ಬಗ್ಗೆ ಹೇಳಿದ್ದಳು. ಇದು ಮನರಾಮ್‌ನನ್ನು ಕೆರಳಿಸಿತ್ತು. ಬಳಿಕ ಸ್ಥಳೀಯ ಪೊಲೀಸರನ್ನು ಅಲ್ಲಿಗೆ ಕರೆಸಲಾಗಿತ್ತು.

ಈ ವೇಳೆ ಪೊಲೀಸರು ಮಾತಾಡಿ ಸಮಸ್ಯೆ ಬಗೆಹರಿಸಿಕೊಳ್ಳುವಂತೆ ಸೂಚಿಸಿದ್ದರು. ಈ ಸಲಹೆಗೆ ಮನರಾಮ್ ಒಪ್ಪಿಕೊಂಡಿದ್ದ. ಅದೇ ದಿನ ಸಂಜೆ ಇಬ್ಬರೂ ಒಟ್ಟಿಗೆ ಆತ ಮಹಿಳೆಯ ತಲೆಗೆ ಕಬ್ಬಿಣದ ರಾಡ್‌ನಿಂದ ಹೊಡೆದು ಹತ್ಯೆ ಮಾಡಿದ್ದ. ಆಕೆಯ ಮೃತದೇಹವನ್ನು ಅವಳ ಕಾರಿನ ಡ್ರೈವರ್ ಸೀಟಿನಲ್ಲಿ ಇರಿಸಿ ಅಪಘಾತ ಎಂಬಂತೆ ಬಿಂಬಿಸಿದ್ದ. ವಳಿಕ ಮನೆಗೆ ಹಿಂತಿರುಗಿ ಮಲಗಿದ್ದ. ಮರುದಿನ ಬೆಳಿಗ್ಗೆ, ಮಹಿಳೆಯ ಸಾವನ್ನಪ್ಪಿರುವ ಬಗ್ಗೆ ಪೊಲೀಸರಿಗೆ ತಿಳಿಸಲು ತನ್ನ ವಕೀಲರಿಗೆ ಹೇಳಿದ್ದ.

ಪೊಲೀಸರು ಪರಿಶೀಲನೆ ನಡೆಸಿದಾಗ ಆಕೆಯ ಸಾವಿನ ಸಮಯದಲ್ಲಿ ಮನರಾಮ್ ಮತ್ತು ಮಹಿಳೆಯ ಫೋನ್ ಲೋಕೇಷನ್ ಒಂದೇ ಸ್ಥಳದಲ್ಲಿದ್ದವು ಎಂಬುದು ಗೊತ್ತಾಗಿದೆ. ಆತನನ್ನು ಬಂಧಿಸಿ ವಿಚಾರಣೆ ನಡೆಸಿದಾಗ ಸತ್ಯ ಬಯಲಾಗಿದೆ.

## ಭವಿಷ್ಯವಾಣಿಗಳನ್ನು ಮೀರಿಸಿ ಭಾರತ ಅಭಿವೃದ್ಧಿ ಹಾದಿಯಲ್ಲಿ ಮುನ್ನಡೆ

**ಇಂದೋರ್:** ಭಾರತವು ಎಲ್ಲರ ಭವಿಷ್ಯವಾಣಿಗಳನ್ನು ತಪ್ಪಾಗಿ ಸಾಬೀತುಪಡಿಸುವ ಮೂಲಕ ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಯುತ್ತಿದೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ, ಏಕೆಂದರೆ ಇದು ಜ್ಞಾನ, ಕ್ರಿಯೆ ಮತ್ತು ಭಕ್ತಿಯ ಸಾಂಪ್ರದಾಯಿಕ ತತ್ವಶಾಸ್ತ್ರದಲ್ಲಿ ನಂಬಿಕೆಯಿಂದ ನಡೆಸಲ್ಪಡುತ್ತದೆ ಎಂದಿದ್ದಾರೆ. ಭಾರತದ ಆರ್ಥಿಕತೆಯು ಪ್ರಸ್ತುತ ಹಣಕಾಸು ವರ್ಷದ ಏಪ್ರಿಲ್-ಜೂನ್ ತ್ರೈಮಾಸಿಕದಲ್ಲಿ ನಿರೀಕ್ಷೆಗಿಂತ ಉತ್ತಮವಾದ ಶೇ. 7.80 ರಷ್ಟು ಬೆಳವಣಿಗೆ ದರವನ್ನು ದಾಖಲಿಸಿದೆ, ಇದು ಅಮೆರಿಕ ಸುಂಕಗಳನ್ನು ವಿಧಿಸುವ ಮೊದಲು ಕಳೆದ ಐದು ತ್ರೈಮಾಸಿಕಗಳಲ್ಲಿ ಅತ್ಯಧಿಕವಾಗಿದೆ. ಮಧ್ಯಪ್ರದೇಶದ ಸಚಿವ ಪ್ರಹ್ಲಾದ್ ಸಿಂಗ್ ಪಟೇಲ್ ಅವರ ಪರಿಕ್ರಮ ಕೃಪಾ ಸಾರ್ ಪುಸ್ತಕವನ್ನು ಇಂದೋರ್‌ನಲ್ಲಿ ಬಿಡುಗಡೆ ಮಾಡಿದ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಭಾಗವತ್, ಭಾರತವು 3,000 ವರ್ಷಗಳ ಕಾಲ ವಿಶ್ವ ನಾಯಕನಾಗಿದ್ದಾಗ ಯಾವುದೇ ಜಾಗತಿಕ ಕಲಹ ಇರಲಿಲ್ಲ ಎಂದು ಹೇಳಿದರು. ಆ ಸಮಯದಲ್ಲಿ, ಪರಿಸರ ಎಂದಿಗೂ ಹದಗೆಟ್ಟಿರಲಿಲ್ಲ, ತಾಂತ್ರಿಕ ಪ್ರಗತಿ ಉನ್ನತ ಮಟ್ಟದಲ್ಲಿತ್ತು ಮತ್ತು ಮಾನವ ಜೀವನವು ಸಂತೋಷ ಮತ್ತು ಸುಸಂಸ್ಕೃತವಾಗಿತ್ತು ಎಂದು ಅವರು ಹೇಳಿದರು. ಆ ಯುಗದಲ್ಲಿ, ನಾವು ಜಗತ್ತನ್ನು ಮುನ್ನಡೆಸಿದೆವು, ಆದರೆ



ಯಾವುದೇ ದೇಶವನ್ನು ವಶಪಡಿಸಿಕೊಳ್ಳಲಿಲ್ಲ ಮತ್ತು ಯಾವುದೇ ದೇಶದ ವ್ಯಾಪಾರವನ್ನು ನಿಗ್ರಹಿಸಲಿಲ್ಲ.

ನಾವು ಯಾರ ಧರ್ಮವನ್ನೂ ಪರಿವರ್ತಿಸಲಿಲ್ಲ. ನಾವು ಎಲ್ಲಿಗೆ ಹೋದರೂ, ನಾವು ನಮ್ಮ ನಾಗರಿಕತೆಯನ್ನು ಹರಡಿದೆವು ಮತ್ತು ಜ್ಞಾನ ಮತ್ತು ಧರ್ಮಗ್ರಂಥಗಳನ್ನು ನೀಡುವ ಮೂಲಕ ಜನರ ಜೀವನವನ್ನು ಸುಧಾರಿಸಿದೆವು. ನಂತರ ಎಲ್ಲಾ ದೇಶಗಳು ತಮ್ಮದೇ ಆದ ಗುರುತನ್ನು ಹೊಂದಿದ್ದವು, ಆದರೆ ಅವುಗಳ ನಡುವೆ ಉತ್ತಮ ಸಂಭಾಷಣೆ ಇತ್ತು. ಈ ಇಂದು ಇಲ್ಲ, ಅವರು ಹೇಳಿದರು. ವೈಯಕ್ತಿಕ ಹಿತಾಸಕ್ತಿಗಳು ಜಗತ್ತಿನಲ್ಲಿ ಘರ್ಷಣೆಗಳಿಗೆ ಕಾರಣವಾಗಿವೆ, ಅದು ಎಲ್ಲಾ ಸಮಸ್ಯೆಗಳನ್ನು ಸೃಷ್ಟಿಸಿದೆ. ಭಾರತೀಯ ಜನರ ಪೂರ್ವಜರು ವಿವಿಧ ಪಂಥಗಳು ಮತ್ತು ಸಂಪ್ರದಾಯಗಳ ಮೂಲಕ ಹಲವಾರು ಮಾರ್ಗಗಳನ್ನು ತೋರಿಸಿದ್ದಾರೆ, ಜೀವನದಲ್ಲಿ ಜ್ಞಾನ, ಕ್ರಿಯೆ ಮತ್ತು ಭಕ್ತಿಯ ಸಮತೋಲಿತ ಹರಿವನ್ನು ಹೇಗೆ ಕಾಪಾಡಿಕೊಳ್ಳಬೇಕೆಂದು ಕಲಿಸಿದ್ದಾರೆ ಎಂದು ಭಾಗವತ್ ಹೇಳಿದರು. ಜ್ಞಾನ, ಕ್ರಿಯೆ ಮತ್ತು ಭಕ್ತಿಯ ಸಮತೋಲಿತ ತ್ರಿಮೂರ್ತಿಗಳ ಸಾಂಪ್ರದಾಯಿಕ ತತ್ವಶಾಸ್ತ್ರದಲ್ಲಿ ನಂಬಿಕೆ ಇರುವುದರಿಂದ, ಭಾರತವು ಎಲ್ಲರ ಭವಿಷ್ಯವಾಣಿಗಳನ್ನು ತಪ್ಪೆಂದು ಸಾಬೀತುಪಡಿಸುವ ಮೂಲಕ ಅಭಿವೃದ್ಧಿಯ ಹಾದಿಯಲ್ಲಿ ನಿರಂತರವಾಗಿ ಮುಂದುವರಿಯುತ್ತಿದೆ ಎಂದು ಅವರು ಹೇಳಿದರು. ಮಾಜಿ ಬ್ರಿಟಿಷ್ ಪ್ರಧಾನಿ ವಿನ್ಸ್ಟನ್ ಚರ್ಚಿಲ್ ಅವರನ್ನು ಉಲ್ಲೇಖಿಸಿ, ಬ್ರಿಟಿಷ್ ಆಳ್ವಿಕೆ ಕೊನೆಗೊಂಡ ನಂತರವೂ ಒಗ್ಗಟ್ಟಿನಿಂದ ಉಳಿಯುವ ಮೂಲಕ ಭಾರತವು ತನ್ನನ್ನು ತಪ್ಪು ಎಂದು ಸಾಬೀತುಪಡಿಸಿದೆ ಎಂದು ಭಾಗವತ್ ಸೂಚಿಸಿದರು. ಸ್ವಾತಂತ್ರ್ಯದ ನಂತರ, ನೀವು ಬದುಕಲು ಸಾಧ್ಯವಾಗುವುದಿಲ್ಲ ಮತ್ತು ವಿಭಜನೆಯಾಗುತ್ತೀರಿ ಎಂದು ವಿನ್ಸ್ಟನ್ ಚರ್ಚಿಲ್ ಒಮ್ಮೆ ಹೇಳಿದ್ದರು, ಆದರೆ ಇದು ಸಂಭವಿಸಲಿಲ್ಲ. ಈಗ ಇಂಗ್ಲೆಂಡ್ ಸ್ವತಃ ವಿಭಜನೆಯ ಹಂತಕ್ಕೆ ಬರುತ್ತಿದೆ, ಆದರೆ ನಾವು ವಿಭಜನೆಯಾಗುವುದಿಲ್ಲ. ನಾವು ಮುಂದುವರಿಯುತ್ತೇವೆ. ನಾವು ಒಮ್ಮೆ ವಿಭಜನೆಯಾಗಿದ್ದೆವು, ಆದರೆ ನಾವು ಅದನ್ನು ಮತ್ತೆ ಒಂದುಗೂಡಿಸುತ್ತೇವೆ ಎಂದು ಅವರು ಹೇಳಿದರು.

## ವನತಾರಾಗೆ ಸುಪ್ರೀಂನಿಂದ ಕ್ಲೀನ್ ಚಿಟ್

**ನವದೆಹಲಿ:** ರಿಲಯನ್ಸ್ ಫೌಂಡೇಶನ್ ನಡೆಸುತ್ತಿರುವ ಪ್ರಾಣಿಗಳ ಸಂರಕ್ಷಣೆ, ಪುನರ್ವಸತಿ ಕೇಂದ್ರ ವನತಾರಾ ಮೇಲಿನ ಆರೋಪಗಳ ಬಗ್ಗೆ ಎಸ್‌ಐಟಿ ಸಲ್ಲಿಸಿದ್ದ ವರದಿಯನ್ನು ಸುಪ್ರೀಂ ಕೋರ್ಟ್ ಅಂಗೀಕರಿಸಿ ಕ್ಲೀನ್ ಚಿಟ್ ನೀಡಿದೆ.

ವನತಾರಾದಲ್ಲಿ ಕಾಡು ಪ್ರಾಣಿಗಳ ಸ್ವಾಧೀನ ಪ್ರಕ್ರಿಯೆಯಲ್ಲಿ ಯಾವುದೇ ಅಕ್ರಮ ನಡೆದಿಲ್ಲ. ಆನೆಗಳು ಸೇರಿದಂತೆ ಪ್ರಾಣಿಗಳ ಸ್ವಾಧೀನ ಕಾನೂನು ಪ್ರಕ್ರಿಯೆಗಳ ಅನುಗುಣವಾಗಿಯೇ ನಡೆದಿದೆ ಎಂದು ಎಸ್‌ಐಟಿ ವರದಿ ಸಲ್ಲಿಸಿತ್ತು. ಈ ವರದಿಯನ್ನು ಸುಪ್ರೀಂ ಕೋರ್ಟ್ ಅಂಗೀಕರಿಸುವ ಮೂಲಕ ಪ್ರಾಣಿ ರಕ್ಷಣಾ, ಪುನರ್ವಸತಿ ಕೇಂದ್ರಕ್ಕೆ ಕ್ಲೀನ್ ಚಿಟ್ ನೀಡಿದೆ. ಆನೆಗಳನ್ನು ದೇವಾಲಯಗಳಿಗೆ ಹಿಂತಿರುಗಿಸಬೇಕು ಎಂದು ಕೋರಿ ಸಲ್ಲಿಸಲಾದ ಅರ್ಜಿಗಳನ್ನು ಸಹ ನ್ಯಾಯಾಲಯವು ತಿರಸ್ಕರಿಸಿತು. ಎಸ್‌ಐಟಿಯ ವರದಿ ಅಂಗೀಕರಿಸಲ್ಪಟ್ಟಿರುವುದರಿಂದ, ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪೀಠ ಹೇಳಿದೆ. ಸುಪ್ರೀಂ ಕೋರ್ಟ್ ಆದೇಶದಂತೆ ಎಸ್‌ಐಟಿ ತನ್ನ ವರದಿಯನ್ನು



ಸಲ್ಲಿಸಿದೆ. ಈ ವರದಿಯನ್ನು ನ್ಯಾಯಾಲಯ ಒಪ್ಪಿಕೊಂಡಿದೆ. ಅಲ್ಲದೇ ಶೀಘ್ರವಾಗಿ ತನಿಖಾ ವರದಿಯನ್ನು ಸಲ್ಲಿಸಿದ್ದಕ್ಕೆ ಎಸ್‌ಐಟಿಗೆ ಪೀಠ ಮೆಚ್ಚುಗೆ ವ್ಯಕ್ತಪಡಿಸಿದೆ. ವನತಾರಾ ಪ್ರಾಣಿಗಳನ್ನು ತರಿಸುವಾಗ ವನ್ಯಜೀವಿ ಸಂರಕ್ಷಣಾ ಕಾಯ್ದೆ ಮತ್ತು ಇತರ ಸಂಬಂಧಿತ ಕಾನೂನುಗಳನ್ನು ಗಾಳಿಗೆ ತೂರಿದೆ ಎಂದು ವಕೀಲ ಸಿಆರ್ ಜಯಾ ಸುಕಿನ್ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ನ್ಯಾಯಮೂರ್ತಿ ಪಂಕಜ್ ಮಿಥಲ್ ಮತ್ತು ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ ನೇತೃತ್ವದ ದ್ವಿಸದಸ್ಯ ಪೀಠ ಆ.25 ರಂದು ವಿಚಾರಣೆ ನಡೆಸಿತ್ತು. ಬಳಿಕ ಸುಪ್ರೀಂ ಕೋರ್ಟ್ ಮಾಜಿ ನ್ಯಾಯಮೂರ್ತಿ ಚೆಲಮೇಶ್ವರ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಿತ್ತು. ಈ ತಂಡದಲ್ಲಿ ಉತ್ತರಾಖಂಡ ಮತ್ತು ತೆಲಂಗಾಣ ಹೈಕೋರ್ಟ್ ಮಾಜಿ ಮುಖ್ಯ ನ್ಯಾಯಾಧೀಶ ರಾಘವೇಂದ್ರ ಚೌಹಾಣ್, ಮುಂಬೈನ ಮಾಜಿ ಪೊಲೀಸ್ ಆಯುಕ್ತ ಹೇಮಂತ್ ನಾಗ್ರಾಲೆ ಹಾಗೂ ಭಾರತೀಯ ಕಂದಾಯ ಸೇವೆ ಅಧಿಕಾರಿ ಅನಿಶ್ ಗುಪ್ತಾ ಇದ್ದರು. ತನಿಖಾ ವರದಿಯನ್ನು ಸೆ.12ರ ಒಳಗೆ ಸಲ್ಲಿಸುವಂತೆ ಸೂಚಿಸಿತ್ತು. ಎಸ್‌ಐಟಿ ರಚನೆಯನ್ನು ಸ್ವಾಗತಿಸಿದ್ದ ವನ್‌ತಾರಾ, ಸುಪ್ರೀಂ ಕೋರ್ಟ್ ಆದೇಶವನ್ನು ನಾವು ಅತ್ಯಂತ ಗೌರವದಿಂದ ಸ್ವೀಕರಿಸುತ್ತೇವೆ ಎಂದಿತ್ತು.

ಗುಜರಾತ್‌ನ ಜಾಮ್‌ನಗರದಲ್ಲಿರುವ ರಿಲಯನ್ಸ್‌ನ ವನತಾರ 3500 ಎಕರೆಗಳಷ್ಟು ವಿಸ್ತಾರವಾಗಿರುವ ವನ್‌ತಾರಾ, ವಿಶ್ವದ ಅತಿದೊಡ್ಡ ಖಾಸಗಿ ಸಂರಕ್ಷಣೆ ಮತ್ತು ಪುನರ್ವಸತಿ ಕೇಂದ್ರಗಳಲ್ಲಿ ಒಂದಾಗಿದೆ. ಇಲ್ಲಿ ರಕ್ಷಿಸಲ್ಪಟ್ಟ ಆನೆಗಳಿಗೆ ಆಶ್ರಯ, ಆಧುನಿಕ ಪಶುವೈದ್ಯಕೀಯ ಸೌಲಭ್ಯಗಳು ಇದೆ.

## ಭಾರೀ ಮಳೆ ಸಾಧ್ಯತೆ ರೆಡ್ ಅಲರ್ಟ್ ಘೋಷಣೆ

**ಮುಂಬೈ:** ಮುಂಬೈ ಸೇರಿದಂತೆ ಮಹಾರಾಷ್ಟ್ರದ ಕರಾವಳಿ ಜಿಲ್ಲೆಗಳಲ್ಲಿ ಸೋಮವಾರ ಸಂಜೆ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ನವಿ ಮುಂಬೈ, ಥಾಣೆ ಮತ್ತು ರಾಯಗಢ ಜಿಲ್ಲೆಯ ಹಲವಾರು ತಾಲ್ಲೂಕುಗಳು ಸೇರಿದಂತೆ ಮುಂಬೈ ಮಹಾನಗರ ಪ್ರದೇಶದಲ್ಲಿ ಕಳೆದ 24 ಗಂಟೆಗಳಲ್ಲಿ ಭಾರೀ ಮಳೆಯಾಗಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಭಾರೀ ಮಳೆ ಹಿನ್ನೆಲೆ ತಗ್ಗು ಪ್ರದೇಶಗಳು ಮತ್ತು ಘಾಟ್ ವಿಭಾಗಗಳ ನಿವಾಸಿಗಳಿಗೆ ಪ್ರವಾಹ ಮತ್ತು ಭೂಕುಸಿತದ ಬಗ್ಗೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಸೋಮವಾರ ಮುಂಬೈ ಮತ್ತು ಹತ್ತಿರದ ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದ್ದು, ಮಧ್ಯಮದಿಂದ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಮುಂಬೈ, ಥಾಣೆ, ಪಾಲ್ಘರ್ ಮತ್ತು ರಾಯ್ಗಡ್ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಗಂಟೆಗೆ 40 ಕಿ.ಮೀ ವೇಗದಲ್ಲಿ ಗಾಳಿ ಬೀಸಲಿದೆ ಎಂದು ಐಎಂಡಿ ತಿಳಿಸಿದೆ. ಮುಂಬೈ ಮತ್ತು ಹತ್ತಿರದ ಜಿಲ್ಲೆಗಳಲ್ಲಿ ಹೆಚ್ಚು ಮಳೆಯಾಗುತ್ತಿರುವ ಪರಿಣಾಮ ರಸ್ತೆಗಳು ಜಲಾವೃತಗೊಂಡು



ಸಂಚಾರ ಅಸ್ತವ್ಯಸ್ತಗೊಂಡಿದೆ. ಈ ಪ್ರದೇಶಗಳಲ್ಲಿ ಇನ್ನೂ ಮಳೆಯಾಗುವ ಸಾಧ್ಯತೆಯಿರುವುದರಿಂದ ನಿವಾಸಿಗಳು ಈ ವಾರ ಹೆಚ್ಚಿನ ಅನಾನುಕೂಲತೆ ಮತ್ತು ಅಡಚಣೆಯನ್ನು ಎದುರಿಸಬೇಕಾಗುತ್ತದೆ ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ. ಮಂಗಳವಾರ ಮುಂಬೈ, ಥಾಣೆ, ಪಾಲ್ಘರ್ ಮತ್ತು ರತ್ನಗಿರಿಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಮಂಗಳವಾರ ರಾಯ್ಗಢಕ್ಕೆ ಆರೆಂಜ್ ಅಲರ್ಟ್ ನೀಡಿದ್ದು, ಗುಡುಗು ಮಿಂಚು ಸಹಿತ ಭಾರೀ ಮಳೆಯಾಗುವ ನಿರೀಕ್ಷೆ ಇದೆ. ಇನ್ನು ದಕ್ಷಿಣ ಮಹಾರಾಷ್ಟ್ರದ ಸಿಂಧುದುರ್ಗ ಮತ್ತು ಕೊಲ್ಹಾಪುರ ಜಿಲ್ಲೆಗಳಲ್ಲಿ ಮಂಗಳವಾರ ಹಗುರ ಮಳೆಯಾಗುವ ನಿರೀಕ್ಷೆಯಿದೆ.

# ವಲಸೆ ವಿರುದ್ಧ ಮಾಡು ಇಲ್ಲವೇ ಮಡಿ ಹೋರಾಟಕ್ಕೆ ಕರೆ

### ಲಂಡನ್‌ನಲ್ಲಿ ಹಿಂಸಾತ್ಮಕ ವಲಸೆ ನೀತಿ ವಿರೋಧಿ ಪ್ರತಿಭಟನೆ, ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದ ಎಲಾನ್ ಮಸ್ಕ್

**ಹೋರಾಟ ಇಲ್ಲವೇ ಸಾವು**

**ಲಂಡನ್:** ಬ್ರಿಟನ್‌ನಲ್ಲಿ ವಲಸೆ ವಿರೋಧಿ ಹೋರಾಟ ಭುಗಿಲೆದ್ದಿದ್ದು, ಲಂಡನ್‌ನಲ್ಲಿ ನಡೆದ ಪ್ರತಿಭಟನೆಗಳು ಹಿಂಸಾಚಾರಕ್ಕೆ ಸಾಕ್ಷಿಯಾಗಿವೆ. ಬಲಪಂಥೀಯ ಕಾರ್ಯಕರ್ತ ಟಾಮಿ ರಾಬಿನ್ಸನ್ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ವಲಸಿಗರ ವಿರುದ್ಧ ಭಾರೀ ಆಕ್ರೋಶ ವ್ಯಕ್ತವಾಗಿದೆ. ಸ್ಪೇಸ್ ಎಕ್ಸ್ ಮಾಲೀಕ ಎಲಾನ್ ಮಸ್ಕ್ ಈ ಹೋರಾಟವನ್ನು ಬೆಂಬಲಿಸಿದ್ದಾರೆ. ಹೌದು, ಲಂಡನ್‌ನಲ್ಲಿ ಭಾರೀ ವಲಸೆ ವಿರೋಧಿ ಪ್ರದರ್ಶನ ನಡೆದಿದ್ದು, ಟಾಮಿ ರಾಬಿನ್ಸನ್ ಆಯೋಜಿಸಿದ್ದ ಪ್ರತಿಭಟನೆಗೆ ಅಮೆರಿಕದ ಖ್ಯಾತ ಉದ್ಯಮಿ ಎಲಾನ್ ಮಸ್ಕ್ ಬೆಂಬಲ ಸೂಚಿಸಿದ್ದಾರೆ. ಈ ಕುರಿತು ಲಂಡನ್ ಪ್ರತಿಭಟನಾಕಾರರಿಗೆ ವಿಡಿಯೋ ಸಂದೇಶ ಕಳುಹಿಸಿರುವ ಎಲಾನ್ ಮಸ್ಕ್, ಹೋರಾಟ ಇಲ್ಲವೇ ಸಾವು ಎಂದು ಕರೆ ನೀಡಿದ್ದಾರೆ. ನೀವು ವಲಸೆಯ ಮೂಲಭೂತ ಸಮಸ್ಯೆಗಳನ್ನು ಎದುರಿಸುತ್ತಿದ್ದೀರಿ. ಎಡಪಂಥೀಯರು ವಲಸೆಯನ್ನು ಬೆಂಬಲಿಸುವ ಮೂಲಕ ನಿಮ್ಮ ಜೀವನವನ್ನು ಸಂಕಷ್ಟಕ್ಕೆ ತಳ್ಳಿದ್ದಾರೆ. ನೀವು ಹಿಂಸೆಯನ್ನು ಆಯ್ಕೆ ಮಾಡಿಕೊಳ್ಳದಿದ್ದರೆ, ಹಿಂಸೆ ನಿಮ್ಮ ಮನೆಯ ಬಾಗಿಲಿಗೆ ಬರುತ್ತದೆ ಎಂದು ಎಲಾನ್ ಮಸ್ಕ್ ಬ್ರಿಟನ್ ನಾಗರಿಕರನ್ನು ಎಚ್ಚರಿಸಿದ್ದಾರೆ. ನಿಮ್ಮ ಜೀವನಕ್ಕಾಗಿ ನೀವು ಹೋರಾಡಲೇಬೇಕು. ನಿಮ್ಮ ಭವಿಷ್ಯಕ್ಕಾಗಿ ನೀವು ಬೀದಿಗಿಳಿಯಲೇಬೇಕು. ಹೋರಾಟ ಇಲ್ಲವೇ ಸಾವು ನಿಮ್ಮ ಘೋಷವಾಕ್ಯ ಆಗಲಿ ಎಂದು ಎಲಾನ್ ಮಸ್ಕ್ ಇಂಗ್ಲೆಂಡ್‌ಪ್ರತಿಭಟನಾಕಾರರಿಗೆ ಕಳುಹಿಸಿದ ವಿಡಿಯೋ ಸಂದೇಶದಲ್ಲಿ ಗುಡುಗಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇತ್ತೀಚೆಗೆ ವಲಸೆ ನಿಮ್ಮನ್ನು ಹೊಸಕಿ ಹಾಕಲಿದೆ ಎಂದು ಯುರೋಪ್‌ಗೆ ಎಚ್ಚರಿಕೆ ನೀಡಿದ್ದರು.



ಲಂಡನ್‌ನಲ್ಲಿ ನಡೆದ ವಲಸೆ ವಿರೋಧಿ ಹೋರಾಟದಲ್ಲಿ ಸುಮಾರು 1,50,000ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಈ ವೇಳೆ ನಡೆದ ಹಿಂಸಾಚಾರದಲ್ಲಿ ಪೊಲೀಸರು, ಪ್ರತಿಭಟನಕಾರರ ನಡುವೆ ಘರ್ಷಣೆ ಸಂಭವಿಸಿದ್ದು, ಪೊಲೀಸರು ಇದುವರೆಗೂ 25ಕ್ಕೂ ಹೆಚ್ಚು ಜನರನ್ನು ಬಂಧಿಸಿದ್ದಾರೆ.

ಬ್ರಿಟನ್‌ನ ಬಲಪಂಥೀಯ ಕಾರ್ಯಕರ್ತ ಟಾಮಿ ರಾಬಿನ್ಸನ್ ಆಯೋಜಿಸಿದ್ದ ಯುನೈಟ್ ದಿ ಕಿಂಗ್‌ಡಮ್ ಕಾರ್ಯಕ್ರಮದಲ್ಲಿ, ವಲಸೆ ವಿರೋಧಿ ಪ್ರತಿಭಟನಾಕಾರರು ವೆಸ್ಟ್‌ಮಿನಿಸ್ಟರ್ ಸೇತುವೆಯ ಮೇಲೆ ಮೆರವಣಿಗೆ ನಡೆಸಿದರು. ಇಲ್ಲಿನ ಡೌನಿಂಗ್ ಸ್ಟ್ರೀಟ್ ಬಳಿ ಯುರೋಪ್ ಮತ್ತು ಉತ್ತರ ಅಮೆರಿಕದ ತೀವ್ರ ಬಲಪಂಥೀಯ ನಾಯಕರ ಭಾಷಣಗಳನ್ನು ಆಯೋಜಿಸಲಾಗಿತ್ತು.

ಈ ಪ್ರತಿಭಟನಾ ಮೆರವಣಿಗೆಯನ್ನು ಉದ್ದೇಶಿಸಿ, ಫ್ರೆಂಚ್ ಬಲಪಂಥೀಯ ರಾಜಕಾರಣಿ ಎರಿಕ್ ಜೆಮ್ಮೌರ್ ಮತ್ತು ವಲಸೆ ವಿರೋಧಿ ಆಲ್ಟರ್ನೇಟಿವ್ ಫಾರ್ ಜರ್ಮನಿ ಪಕ್ಷದ ಪೆಟ್ರ್ ಬೈಸ್ಟ್ರಾನ್ ಭಾಷಣ ಮಾಡಿದರು. ಯುರೋಪ್ ಗ್ರೇಟ್ ರಿಪ್ಲೇಸ್‌ಮೆಂಟ್ ಪಿತೂರಿಯನ್ನು ಅರ್ಥ ಮಾಡಿಕೊಳ್ಳದಿದ್ದರೆ ಭಾರೀ ಅಪಾಯ ಕಾದಿದೆ ಎಂದು ಎರಿಕ್ ಜೆಮ್ಮೌರ್ ಈ ವೇಳೆ ಎಚ್ಚರಿಸಿದರು. ಅಮೆರಿಕದಲ್ಲಿ ಈಗಾಗಲೇ ವಲಸೆ ವಿರೋಧಿ ಭಾವನೆ ಹೆಚ್ಚುತ್ತಿದ್ದು, ಈ ಅಸಹನೀಯತೆ ಯುರೋಪ್‌ನಾದ್ಯಂತ ಹರಡುತ್ತಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತ ಕಠಿಣ ವಲಸೆ ವಿರೋಧಿ ನೀತಿ ಜಾರಿಗೆ ತಂದಿದ್ದು, ಯುರೋಪ್ ಕೂಡ ಇಂತದ್ದೇ ನೀತಿಯನ್ನು ಜಾರಿಗೊಳಿಸಬೇಕು ಎಂಬ ಒತ್ತಾಯ ಕೇಳಿಬರುತ್ತಿದೆ.

ಯುರೋಪ್‌ನಲ್ಲಿ ಭುಗಿಲೆದ್ದಿರುವ ಈ ಜನಾಂಗೀಯವಾದ ಬಿಳಿಯರಲ್ಲದ ಜನರ ವಿರುದ್ಧ ತೀವ್ರ ಅಸಹನೀಯತೆಗೆ ಕಾರಣವಾಗುತ್ತಿದೆ. ಇದು ವಲಸಿಗ ಭಾರತೀಯರ ಮೇಲೂ ಪರಿಣಾಮ ಬೀರುವ ಆತಂಕವಿದೆ. ಇತ್ತೀಚಿಗೆ ಲಂಡನ್‌ನಲ್ಲಿ ಸಿಖ್ ಮಹಿಳೆಯ ಮೇಲೆ ಅತ್ಯಾಚಾರವೆಸಗಿರುವ ಇಬ್ಬರು ದುರುಳರು, ಭಾರತಕ್ಕೆ ಮರಳಿ ಹೋಗುವಂತೆ ಎಚ್ಚರಿಕೆ ನೀಡಿರುವುದು, ಇಂಗ್ಲೆಂಡ್‌ನಲ್ಲಿ ವಲಸೆ ವಿರೋಧಿ ಭಾವನೆ ಹೆಚ್ಚುತ್ತಿರುವುದಕ್ಕೆ ಸಾಕ್ಷಿಯಾಗಿದೆ.

**ವಲಸೆ ನೀತಿಗಳ ವಿರುದ್ಧ ಲಂಡನ್‌ನಲ್ಲಿ ಬೃಹತ್ ಪ್ರತಿಭಟನೆ ನಡೆದಿದ್ದು, ಬಲಪಂಥೀಯ ಕಾರ್ಯಕರ್ತ ಟಾಮಿ ರಾಬಿನ್ಸನ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಗಳು ಹಿಂಸಾರೂಪಕ್ಕೆ ತಿರುಗಿವೆ. ಈ ಮಧ್ಯೆ ಅಮೆರಿಕದ ಖ್ಯಾತ ಉದ್ಯಮಿ ಎಲಾನ್ ಮಸ್ಕ್ ಅವರು ಲಂಡನ್ ಪ್ರತಿಭಟನೆಗಳನ್ನು ಬೆಂಬಲಿಸಿದ್ದು, ಪ್ರತಿಭಟನಾಕಾರರಿಗೆ ಹೋರಾಟ ಇಲ್ಲವೇ ಸಾವು ಕರೆ ನೀಡಿದ್ದಾರೆ. ವಲಸೆಯನ್ನು ತಡೆಯದಿದ್ದರೆ, ಒಂದು ದಿನ ಅದು ಯುರೋಪ್‌ನ್ನು ಕೊಲ್ಲಲಿದೆ.**

**ಎಲಾನ್ ಮಸ್ಕ್, ಸ್ಪೇಸ್ ಎಕ್ಸ್ ಮಾಲೀಕ**

## ಮಿನಿ ನ್ಯೂಸ್

### ತಲಾಖ್ ಹೇಳಿದ ಪತಿಗೆ ಕೋರ್ಟ್ ಆವರಣದಲ್ಲಿ ಚಪ್ಪಲಿ ಸೇವೆ ಮಾಡಿದ ಪತ್ನಿ

**ರಾಂಪುರ:** ಕೋರ್ಟ್ ಆವರಣದಲ್ಲೇ ಮೂರು ಬಾರಿ ತಲಾಖ್ ಹೇಳಿದ ಗಂಡನಿಗೆ ಮುಸ್ಲಿಂ ಮಹಿಳೆಯೊಬ್ಬರು ಚಪ್ಪಲಿ ಸೇವೆ ಮಾಡಿರುವ ಘಟನೆ ಉತ್ತರ ಪ್ರದೇಶದ ರಾಂಪುರದಲ್ಲಿ ನಡೆದಿದೆ. ಕೋರ್ಟ್ ಆವರಣದಲ್ಲಿ ಮುಸ್ಲಿಂ ಮಹಿಳೆಯೊಬ್ಬರು ಗಂಡನಿಗೆ ಚಪ್ಪಲಿಯಿಂದ ಹಿಗ್ಗಾಮುಗ್ಗ ಥಳಿಸಿರುವ ವಿಡಿಯೋ ಇದೀಗ ಎಲ್ಲೆಡೆ ಭಾರಿ ವೈರಲ್ ಆಗಿದೆ. ಪತಿ ನನ್ನ ಮೇಲೆ ಮತ್ತೆ ಹಲ್ಲೆ ನಡೆಸಿ, ನ್ಯಾಯಾಲಯದ ಹೊರಗೆ ಮೂರು ಬಾರಿ ತಲಾಖ್ ಎಂದು ಉಚ್ಚರಿಸಿದ್ದಾನೆ. ಅದಕ್ಕಾಗಿ ಕೋಪಬಂದು ಥಳಿಸಿದ್ದಾಗಿ ಮಹಿಳೆ ತಿಳಿಸಿದ್ದಾರೆ. ತಾನು 2018 ರಲ್ಲಿ ಮದುವೆಯಾಗಿದ್ದು, ಮದುವೆಯಾಗಿ ಸ್ವಲ್ಪ ದಿನದಲ್ಲೇ ಗಂಡ ತನ್ನ ಮೇಲೆ ಹಲ್ಲೆ ನಡೆಸಲು ಶುರು ಮಾಡಿದ್ದ. ವರದಕ್ಷಿಣೆಗಾಗಿ ಬೇಡಿಕೆ ಇಟ್ಟಿದ್ದ.

ಇಬ್ಬರು ಹೆಣ್ಣು ಮಕ್ಕಳಿಗೆ ಜನ್ಮ ನೀಡಿದ ನಂತರ ಮನೆಯಿಂದ ಹೊರಗೆ ಹಾಕಿದ್ದ. ನಂತರ ಜೀವನಾಂಶಕ್ಕಾಗಿ ಮೊಕದ್ದಮೆ ಹೂಡಿದಾಗ ಮಕ್ಕಳನ್ನು ಕರೆದುಕೊಂಡು ಹೋಗಿದ್ದ ಎಂದು ಆಕೆ ಹೇಳಿಕೊಂಡಿದ್ದಾರೆ. ನ್ಯಾಯಾಲಯದಿಂದ ಸಹಾಯ ಪಡೆಯುವುದನ್ನು ಬಿಟ್ಟು ಬೇರೆ ದಾರಿಯಿಲ್ಲ ಎಂದು ಅವರು ಹೇಳಿದರು, ಆರ್ಥಿಕ ಸಹಾಯಕ್ಕಾಗಿ ಮೊಕದ್ದಮೆ ಹೂಡಿದ್ದಾಗಿ ತಿಳಿಸಿದ್ದಾರೆ. ಆಕೆ ನ್ಯಾಯಾಲಯದಿಂದ ಹೊರಬರುತ್ತಿದ್ದಂತೆ, ಆಕೆಯ ಪತಿ ಮತ್ತು ಮಾವ ಆಕೆಯನ್ನು ಹಿಂಬಾಲಿಸಿದ್ದರು. ನಿಂದಿಸಿದ್ದರು. ಮತ್ತು ಪ್ರಕರಣವನ್ನು ಹಿಂತೆಗೆದುಕೊಳ್ಳುವಂತೆ ಒತ್ತಡ ಹೇರಿದ್ದರು. ಬಳಿಕ ಮೂರು ಬಾರಿ ತಲಾಖ್ ಎಂದು ಹೇಳಿದ್ದಾನೆ. ಅದಕ್ಕೆ ಕೋಪಗೊಂಡ ಮಹಿಳೆ ತಾನು ಧರಿಸಿದ್ದ ಚಪ್ಪಲಿ ತೆಗೆದು ಪತಿರಾಯನ ಮೇಲೆ ಮನಬಂದಂತೆ ಹಲ್ಲೆ ನಡೆಸಿದ್ದಾರೆ.

### ಎಂಜಿನಿಯರ್‌ಗಳ ದಿನ : ಸರ್‌ಎಂವಿಗೆ ವಂದಿಸಿದ ಪ್ರಧಾನಿ ಮೋದಿ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಎಂಜಿನಿಯರ್‌ಗಳ ದಿನದಂದು ತಂತ್ರಜ್ಞರಿಗೆ ಶುಭಾಶಯ ಕೋರಿದರು, ವಿಕಸಿತ್ ಭಾರತವನ್ನು ನಿರ್ಮಿಸುವ ಸಾಮೂಹಿಕ ಪ್ರಯತ್ನಗಳಲ್ಲಿ ಅವರು ನಿರ್ಣಾಯಕ ಪಾತ್ರ ವಹಿಸುವುದನ್ನು ಮುಂದುವರಿಸುತ್ತಾರೆ ಎಂದು ಹೇಳಿದರು. ಈ ದಿನವನ್ನು ಎಂಜಿನಿಯರ್‌ಗಳ ಕೊಡುಗೆಗೆ ಗೌರವವಾಗಿ ಮತ್ತು ಪ್ರಸಿದ್ಧ ಸಿವಿಲ್ ಎಂಜಿನಿಯರ್, ಆಡಳಿತಾಧಿಕಾರಿ ಎಂ. ವಿಶ್ವೇಶ್ವರಯ್ಯ ಅವರ ಜನ್ಮ ವಾರ್ಷಿಕೋತ್ಸವವನ್ನು ಸ್ಮರಿಸಲು ಆಚರಿಸಲಾಗುತ್ತದೆ.

ಎಂಜಿನಿಯರ್‌ಗಳ ದಿನದಂದು, ಭಾರತದ ಎಂಜಿನಿಯರಿಂಗ್ ಭೂದೃಶ್ಯದಲ್ಲಿ ಅಳಿಸಲಾಗದ ಗುರುತು ಬಿಟ್ಟಿದ್ದ ಸರ್ ಎಂ. ವಿಶ್ವೇಶ್ವರಯ್ಯ ಅವರಿಗೆ ಗೌರವ ಸಲ್ಲಿಸುತ್ತೇನೆ. ತಮ್ಮ ಸೃಜನಶೀಲತೆ ಮತ್ತು ದೃಢಸಂಕಲ್ಪದ ಮೂಲಕ, ನಾವೀನ್ಯತೆಯನ್ನು ಮುನ್ನಡೆಸುವುದನ್ನು ಮತ್ತು ವಲಯಗಳಾದ್ಯಂತ ಕಠಿಣ ಸವಾಲುಗಳನ್ನು ಎದುರಿಸುವುದನ್ನು ಮುಂದುವರಿಸುವ ಎಲ್ಲಾ ಎಂಜಿನಿಯರ್‌ಗಳಿಗೆ ನಾನು ಹೃತ್ಪೂರ್ವಕ ಶುಭಾಶಯಗಳನ್ನು ಸಲ್ಲಿಸುತ್ತೇನೆ ಎಂದು ಮೋದಿ ಎಕ್ಸ್ ಮಾಡಿದ್ದಾರೆ. ವಿಕಸಿತ್ ಭಾರತವನ್ನು ನಿರ್ಮಿಸುವ ಸಾಮೂಹಿಕ ಪ್ರಯತ್ನಗಳಲ್ಲಿ ನಮ್ಮ ಎಂಜಿನಿಯರ್‌ಗಳು ನಿರ್ಣಾಯಕ ಪಾತ್ರವನ್ನು ವಹಿಸುವುದನ್ನು ಮುಂದುವರಿಸುತ್ತಾರೆ ಎಂದರು.

### ಪಂಜಾಬ್‌ನ ಪ್ರವಾಹ ಪೀಡಿತ ಪ್ರದೇಶಗಳಿಗೆ ರಾಹುಲ್ ಗಾಂಧಿ ಭೇಟಿ

**ಚಂಡೀಗಢ:** ಪಂಜಾಬ್‌ನ ಪ್ರವಾಹ ಪೀಡಿತ ಪ್ರದೇಶಗಳಿಗೆ ಸೋಮವಾರ ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಭೇಟಿ ನೀಡಿದರು. ಕಳೆದ ಒಂದೂವರೆ ತಿಂಗಳ ಅವಧಿಯಲ್ಲಿ ನಿರಂತರ ಮಳೆಯಿಂದಾಗಿ ಪಂಜಾಬ್‌ನ ಹಲವು ಪ್ರದೇಶಗಳು ತೀವ್ರ ಹಾನಿಗೊಳಗಾಗಿವೆ. ಅಮೃತಸರಕ್ಕೆ ಆಗಮಿಸಿದ ಅವರು, ಮೊದಲು ಘೋನೆವಾಲ್ ಗ್ರಾಮಕ್ಕೆ ತೆರಳಿ, ಪ್ರವಾಹ ಪೀಡಿತ ಪ್ರದೇಶಗಳ ಪರಿಶೀಲನೆ ನಡೆಸಿದರು. ಇದೇ ವೇಳೆ ಅಲ್ಲಿನ ಸ್ಥಳೀಯರನ್ನು ಭೇಟಿ ಮಾಡಿ, ಮಾತುಕತೆ ನಡೆಸಿದರು.

ಇನ್ನೂ ರಾಹುಲ್ ಗಾಂಧಿ ಅವರು ಅಮೃತಸರದ ರಾಮದಾಸ್ ನಲ್ಲಿರುವ ಐತಿಹಾಸಿಕ ಗುರುದ್ವಾರ ಬಾಬಾ ಬುದ್ಧ ಸಾಹಿಬ್‌ನಲ್ಲಿ ಪೂಜೆ ಸಲ್ಲಿಸಲಿದ್ದಾರೆ. ಬಳಿಕ ಗುರುದಾಸ್ಪುರ ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಲಿದ್ದಾರೆ. ಇದೇ ವೇಳೆ ಅಮೃತಸರದ ಪಂಜಾಬ್ ಕಾಂಗ್ರೆಸ್ ಮುಖ್ಯಸ್ಥ ಅಮರಿಂದರ್ ಸಿಂಗ್ ರಾಜಾ ವಾರಿಂಗ್, ಪಂಜಾಬ್ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಪ್ರತಾಪ್ ಸಿಂಗ್ ಬಜ್ವಾ, ಅಮೃತಸರ ಸಂಸದ ಗುರ್ಜೀತ್ ಸಿಂಗ್ ಔಜ್ಲಾ ಮತ್ತು ಪಕ್ಷದ ಇತರ ನಾಯಕರಿದ್ದರು. ಇತ್ತೀಚಿಗೆ ಸೆ.9ರಂದು ಪ್ರಧಾನಿ ನರೇಂದ್ರ ಮೋದಿ ಅವರು ಪ್ರವಾಹ ಪೀಡಿತ ಪಂಜಾಬ್‌ಗೆ ಭೇಟಿ ನೀಡಿದ್ದರು. ಈ ವೇಳೆ 1,600 ಕೋಟಿ ರೂ. ಆರ್ಥಿಕ ಸಹಾಯವನ್ನು ಘೋಷಿಸಿದ್ದರು.

ಧಾರಾಕಾರ ಮಳೆಯಿಂದಾಗಿ ಪಂಜಾಬ್ ಭೀಕರ ಪ್ರವಾಹವನ್ನು ಎದುರಿಸಿದ್ದು, ಪಂಜಾಬ್‌ನ 14 ಜಿಲ್ಲೆಗಳಲ್ಲಿ ತೀವ್ರ ಹಾನಿಯನ್ನುಂಟು ಮಾಡಿದೆ. ಈವರೆಗೂ 45ಕ್ಕೂ ಅಧಿಕ ಜನರು ಸಾವನ್ನಪ್ಪಿದ್ದು, ಸುಮಾರು 2,000 ಗ್ರಾಮಗಳು ಮುಳುಗಡೆಯಾಗಿವೆ. ಇನ್ನೂ ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡ ರಾಜ್ಯದಲ್ಲಿ ನಿರಂತರ ಮಳೆಯಿಂದ ಉಂಟಾದ ಹಠಾತ್ ಪ್ರವಾಹ, ಭೂಕುಸಿತದಿಂದಾಗಿ ಅಪಾರ ಪ್ರಮಾಣದ ಹಾನಿಯುಂಟಾಗಿದೆ.

### ಐಷಾರಾಮಿ ಸ್ಲೀಪರ್ ಬಸ್ ಡಿಕ್ಕಿ- ನಾಲ್ವರು ದುರ್ಮರಣ



**ಲಕ್ನೋ:** ಐಷಾರಾಮಿ ಸ್ಲೀಪರ್ ಬಸ್ಸೊಂದು ಟ್ರಕ್‌ಗೆ ಡಿಕ್ಕಿಯಾದ ಪರಿಣಾಮ ನಾಲ್ವರು ಪ್ರಯಾಣಿಕರು ಮೃತಪಟ್ಟಿದ್ದು, 9 ಮಂದಿ ಗಂಭೀರ ಗಾಯಗೊಂಡಿರುವ ಘಟನೆ ವಾರಣಾಸಿ ಬಳಿಯ ಜಾನ್‌ಪುರದಲ್ಲಿ ನಡೆದಿದೆ. ಪ್ರಯಾಣಿಕರನ್ನು ಛತ್ತೀಸ್‌ಗಢದಿಂದ ಅಯೋಧ್ಯೆ ಮತ್ತು ವಾರಣಾಸಿಯ ಧಾರ್ಮಿಕ ಸ್ಥಳಗಳಿಗೆ ಕರೆದೊಯ್ಯುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ. 50 ಪ್ರಯಾಣಿಕರಿದ್ದ ಬಸ್ ಜಾನ್‌ಪುರದ ಬಳಿ ಓವರ್ ಟೇಕ್ ಮಾಡುವ ಭರದಲ್ಲಿ ಟ್ರಕ್‌ಗೆ ಡಿಕ್ಕಿಯಾಗಿದೆ. ಪರಿಣಾಮ ಬಸ್‌ನ ಒಂದು ಭಾಗ ಸಂಪೂರ್ಣ ನಜ್ಜುಗುಜ್ಜಾಗಿದ್ದು, ನಾಲ್ವರು ಪ್ರಯಾಣಿಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಒಂಭತ್ತು ಮಂದಿ ಗಂಭೀರ ಗಾಯಗೊಂಡಿದ್ದು, ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ನೀಡಲಾಗುತ್ತಿದೆ. ಘಟನೆ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಡಾಮಿನೇಟ್ ಮಾಡಿದ ಮಿರಾಯಿ; ಅಬ್ಬರದ ಕಲೆಕ್ಷನ್

ತೇಜ್ ಸಜ್ಜಾ ಅಭಿನಯದ 'ಮಿರಾಯಿ' ಚಿತ್ರವು ಬಾಕ್ಸ್ ಆಫೀಸ್‌ನಲ್ಲಿ ಅಭೂತಪೂರ್ವ ಯಶಸ್ಸನ್ನು ಕಂಡಿದೆ. ಮೂರು ದಿನಗಳಲ್ಲಿ 44.75 ಕೋಟಿ ರೂಪಾಯಿಗಳನ್ನು ಗಳಿಸಿದೆ.



ಕಾರ್ತಿಕ್ ಘಟ್ಟಮನೇನಿ ನಿರ್ದೇಶನದ ಈ ಫ್ಯಾಂಟಸಿ ಆಕ್ಷನ್ ಅಡ್ವೆಂಚರ್ ಚಿತ್ರವು ತೆಲುಗು, ಕನ್ನಡ ಮತ್ತು ತಮಿಳು ಭಾಷೆಗಳಲ್ಲಿ ಬಿಡುಗಡೆಯಾಗಿದೆ.

2025ರ ಮೊದಲಾರ್ಧ ಸಿನಿಮಾ ರಂಗಕ್ಕೆ ಅಷ್ಟು ಆಶಾದಾಯಕವಾಗಿ ಇರಲಿಲ್ಲ. ಯಾವುದೇ ದೊಡ್ಡ ಸಿನಿಮಾಗಳು ಬಿಡುಗಡೆ ಕಂಡಿರಲಿಲ್ಲ. ಈ ರೀತಿ ರಿಲೀಸ್ ಆದ ಚಿತ್ರಗಳು ಸೋಲು ಕಂಡಿದ್ದವು. ಆದರೆ, ಈಗ ಪರಿಸ್ಥಿತಿ ಬದಲಾಗಿದೆ. ಜೂನ್ ಬಳಿಕ ಬರುತ್ತಿರೋ ಸಿನಿಮಾಗಳು ಯಶಸ್ಸು ಕಾಣುತ್ತಿವೆ. ಈಗ ಟಾಲಿವುಡ್‌ನಲ್ಲಿ 'ಮಿರಾಯಿ' ಹೆಸರಿನ ಸಿನಿಮಾ ಬಂದಿದೆ. ಈ ಚಿತ್ರ ಬಾಕ್ಸ್ ಆಫೀಸ್ ಡಾಮಿನೇಟ್ ಮಾಡಿದೆ. ಕೇವಲ ಮೂರು ದಿನಕ್ಕೆ ಭರ್ಜರಿ ಕಲೆಕ್ಷನ್ ಮಾಡಿ ಮುನ್ನುಗ್ಗುತ್ತಿದೆ. 'ಹನುಮಾನ್' ಹೆಸರಿನ ಸಿನಿಮಾ ಮಾಡಿ ಫೇಮಸ್ ಆದವರು ತೇಜ್ ಸಜ್ಜ. ಆ ಬಳಿಕ ಅವರನ್ನು ಅದೇ ರೀತಿಯ ಪಾತ್ರಗಳು ಅರಸಿ ಬರುತ್ತಿವೆ. ಈಗ ಅವರು 'ಮಿರಾಯಿ' ಹೆಸರಿನ ಸಿನಿಮಾದಲ್ಲಿ ನಟಿಸಿದ್ದಾರೆ. ಇದು ಫ್ಯಾಂಟಸಿ ಆಯಕ್ಷನ್ ಅಡ್ವೆಂಚರ್ ಸಿನಿಮಾ. ಈ ಚಿತ್ರ, 60 ಕೋಟಿ ರೂಪಾಯಿ ಬಜೆಟ್‌ನಲ್ಲಿ ಸಿದ್ಧವಾಗಿದ್ದು, ಮೂರೇ ದಿನಕ್ಕೆ ಉತ್ತಮ ಗಳಿಕೆ ಮಾಡಿದೆ. 'ಮಿರಾಯಿ' ಚಿತ್ರ ಮೂರು ದಿನದಲ್ಲಿ ಬಾಚಿಕೊಂಡಿದ್ದು ಬರೋಬ್ಬರಿ 44.75 ಕೋಟಿ ರೂಪಾಯಿ. ಶುಕ್ರವಾರ 13 ಕೋಟಿ ರೂಪಾಯಿ, ಶನಿವಾರ 15 ಕೋಟಿ ರೂಪಾಯಿ ಹಾಗೂ ಭಾನುವಾರ 16 ಕೋಟಿ ರೂಪಾಯಿ ಗಳಿಕೆ ಮಾಡಿದೆ.

# ಉಪೇಂದ್ರ ಮೊಬೈಲ್ ಹ್ಯಾಕ್; ಹಣಕ್ಕೆ ಬೇಡಿಕೆ ಇಟ್ಟ ಹ್ಯಾಕರ್

ಪ್ರಿಯಾಂಕಾ ಉಪೇಂದ್ರ, ಅವರ ಮೊಬೈಲ್ ಫೋನ್ ಹ್ಯಾಕ್ ಆಗಿದೆ. ಅವರ ಹೆಸರಿನಲ್ಲಿ ವಾಟ್ಸಪ್ ಮೂಲಕ ಹಣಕ್ಕಾಗಿ ಬೇಡಿಕೆ ಇಡಲಾಗುತ್ತಿದೆ. ಹ್ಯಾಕರ್ ಪಾರ್ಸಲ್ ಸಂಬಂಧಿತ ಸಂದೇಶ ಕಳುಹಿಸಿ ಮೊಬೈಲ್ ಅನ್ನು ಹ್ಯಾಕ್ ಮಾಡಿದ್ದಾನೆ. ಉಪೇಂದ್ರ, ಅವರು ಈ ಬಗ್ಗೆ ಪೋಲೀಸ್ ದೂರು ದಾಖಲಿಸಿದ್ದು, ಜನರಿಗೆ ಎಚ್ಚರಿಕೆ ನೀಡಿದ್ದಾರೆ.

ತಂತ್ರಜ್ಞಾನ ಮುಂದುವರಿದಂತೆ ಅದರಿಂದ ಎಷ್ಟು ಲಾಭ ಆಗುತ್ತಿದೆಯೋ ಅಷ್ಟೇ ನಷ್ಟವನ್ನು ಕೂಡ ಆಗುತ್ತಿದೆ. ಸಾಮಾನ್ಯರಿಂದ ಹಿಡಿದು ಸೆಲೆಬ್ರಿಟಿಗಳವರೆಗೆ ಎಲ್ಲರೂ ಇದರಿಂದ ನಷ್ಟ ಅನುಭವಿಸುತ್ತಿದ್ದಾರೆ. ಈಗ ಪ್ರಿಯಾಂಕಾ ಉಪೇಂದ್ರ, ಇದಕ್ಕೆ ಹೊಸ ಉದಾಹರಣೆ. ಅವರ ಮೊಬೈಲ್ ಅನ್ನು ಹ್ಯಾಕ್ ಮಾಡಿದ ವ್ಯಕ್ತಿ, ಬೇರೆ ಬೇರೆ ವ್ಯಕ್ತಿಗಳಿಗೆ ವಾಟ್ಸಾಪ್ ಮಾಡಿ ಹಣಕ್ಕೆ ಬೇಡಿಕೆ ಇಡುತ್ತಿದ್ದಾನೆ.

ಈ ವಿಚಾರ ಅವರ ಗಮನಕ್ಕೆ ಬಂದಿದ್ದು ವಿಡಿಯೋ ಮಾಡಿ ಪೋಸ್ಟ್ ಮಾಡಿದ್ದಾರೆ. ಅಲ್ಲದೆ, ಠಾಣೆಯಲ್ಲಿ ದೂರು ಕೂಡ ದಾಖಲು ಮಾಡಲಾಗುತ್ತಿದೆ.

**ಹ್ಯಾಕ್ ಆಗಿದ್ದು ಹೇಗೆ:** ಮೊಬೈಲ್ ಹ್ಯಾಕ್ ಆದ ಬಗ್ಗೆ ಉಪೇಂದ್ರ ವಿಡಿಯೋ ಮಾಡಿ ಪೋಸ್ಟ್ ಮಾಡಿದ್ದಾರೆ. ಸಿನಿಮಾಗಳಲ್ಲಿ ಮೊಬೈಲ್‌ಗಳನ್ನು ಹ್ಯಾಕ್ ಮಾಡುವಂತೆ ಇಲ್ಲಿಯೂ ಆಗಿದೆ. 'ಪ್ರಿಯಾಂಕಾಗೆ ಬೆಳಿಗ್ಗೆ ಒಂದು ಮೆಸೇಜ್ ಬಂತು. ಪ್ರಿಯಾಂಕಾ ಆರ್ಡರ್ ಮಾಡಿದ ಪಾರ್ಸಲ್ ಒಂದು ಬರೋದಿತ್ತು. ಪಾರ್ಸಲ್ ಸಂಬಂಧದ್ದೇ ಮೆಸೇಜ್ ಇದು ಎಂದು ಅವಳು ಭಾವಿಸಿದಳು. ಹ್ಯಾಶ್ ಟ್ಯಾಗ್ ಒತ್ತಿ ಆ ನಂಬರ್ ಡಯಲ್ ಮಾಡಿ, ಈ ನಂಬರ್ ಡಯಲ್ ಮಾಡಿ ಎಂದು ಮೆಸೇಜ್ ಮಾಡಿದಾತ ಹೇಳಿದ್ದಾನೆ. ಅವಳು ಹಾಗೆ ಮಾಡಿದಳು. ಅಲ್ಲಿ ಆಗುತ್ತಿಲ್ಲ ಎಂದು ನನ್ನ ಮೊಬೈಲ್‌ನಿಂದಲೂ ಪ್ರಯತ್ನಿಸಿದ್ದಾಳೆ. ಹೀಗಾಗಿ, ನನ್ನ ಮೊಬೈಲ್ ಕೂಡ ಹ್ಯಾಕ್ ಆಗಿದೆ ಎನಿಸುತ್ತಿದೆ' ಎಂದು ಉಪೇಂದ್ರ, ಹೇಳಿದ್ದಾರೆ.

'ನನ್ನ ಮೊಬೈಲ್‌ನಿಂದ ಅಥವಾ ಪ್ರಿಯಾಂಕಾ ಮೊಬೈಲ್‌ನಿಂದ ಹಣ ಕೊಡಿ ಎಂದು ಮೆಸೇಜ್ ಬಂದರೆ ಇಗ್ನೋರ್ ಮಾಡಿ' ಎಂದು ಉಪೇಂದ್ರ, ಕೇಳಿಕೊಂಡಿದ್ದಾರೆ.

ಈಗಾಗಲೇ ಪ್ರಿಯಾಂಕಾ ವಾಟ್ಸಾಪ್‌ನಿಂದ ಕೆಲವರಿಗೆ ಮೆಸೇಜ್ ಹೋಗಿದೆ. 'ನನ್ನ ಮೊಬೈಲ್ ಯುಪಿಐ ವರ್ಕ್ ಆಗುತ್ತಿಲ್ಲ. ನೀವು ಹಣ ಕಳುಹಿಸಿ. 2 ಗಂಟೆಯಲ್ಲಿ ಕಳುಹಿಸುತ್ತೇವೆ' ಎಂದು ಹ್ಯಾಕರ್ ಪ್ರಿಯಾಂಕಾ ಕಾಂಟ್ಯಾಕ್ಟ್‌ನಲ್ಲಿರೋ ವ್ಯಕ್ತಿಗಳಿಗೆ ಮೆಸೇಜ್ ಮಾಡುತ್ತಿದ್ದಾನೆ.



# 200 ರೂಪಾಯಿಗೆ ಸಿನಿಮಾ ಟಿಕೆಟ್




ಬಿಗ್ ಬಜೆಟ್ ಮೂವಿಗಳಿಗೆ ನಷ್ಟ..

ಗರಿಷ್ಠ ಟಿಕೆಟ್ ದರ 200 ರೂಪಾಯಿಗೆ ನಿಗದಿ ಪಡಿಸಿದೆ. ಇದು ಒಂದೆಡೆ ಖುಷಿಯ ವಿಚಾರವಾದ್ರೆ, ಮತ್ತೊಂದೆಡೆ ಬಿಗ್ ಬಜೆಟ್ ಸಿನಿಮಾಗಳಿಗೆ ತೊಂದರೆ ಬಿಗಡಾಯಿಸೋ ಸೂಚನೆ ಕೊಟ್ಟಿದೆ. ಹೀಗಾಗಿ ಇಂಡಸ್ಟ್ರಿಯ ಒಳಗೆಯೇ ಪರ- ವಿರೋಧದ ಚರ್ಚೆ ಜೋರಾಗಿ ನಡೆಯುತ್ತಿದೆ.

ಪರಭಾಷಾ ಸಿನಿಮಾಗಳ ಹಾವಳಿ, ಮಿತಿ ಮೀರಿದ ಟಿಕೆಟ್ ದರದ ವಿರುದ್ಧ ಇಡೀ ಇಂಡಸ್ಟ್ರಿ ಏಕರೂಪ ಟಿಕೆಟ್ ದರ ನಿಗದಿ ಮಾಡಬೇಕು ಎಂದು ದಶಕಗಳಿಂದ ಹೋರಾಟ ನಡೆಸಿತ್ತು. ಹತ್ತಾರು ಬಾರಿ ಈ ವಿಚಾರವಾಗಿ ಚರ್ಚೆ, ವಾದ- ಪ್ರತಿವಾದಗಳು ನಡೆದಿದ್ದವು. ಇದೀಗ ರಾಜ್ಯ ಸರ್ಕಾರ ಏಕರೂಪದ ಟಿಕೆಟ್ ದರ ನಿಗದಿ ಮಾಡಿದ್ದು, ಗರಿಷ್ಠ ಟಿಕೆಟ್ ದರ 200 ರೂಪಾಯಿಗೆ ನಿಗದಿ ಪಡಿಸಿದೆ.

ಇದು ಒಂದೆಡೆ ಖುಷಿಯ ವಿಚಾರವಾದ್ರೆ, ಮತ್ತೊಂದೆಡೆ ಬಿಗ್ ಬಜೆಟ್ ಸಿನಿಮಾಗಳಿಗೆ ತೊಂದರೆ ಬಿಗಡಾಯಿಸೋ ಸೂಚನೆ ಕೊಟ್ಟಿದೆ. ಹೀಗಾಗಿ ಇಂಡಸ್ಟ್ರಿಯ ಒಳಗೆಯೇ ಪರ- ವಿರೋಧದ ಚರ್ಚೆ ಜೋರಾಗಿ ನಡೆಯುತ್ತಿದೆ.

**'ಬಿಗ್ ಬಜೆಟ್' ಸಿನಿಮಾಗೆ ನಷ್ಟ ಯಾಕೆ..**

ಏಕರೂಪದ ಟಿಕೆಟ್ ದರದಿಂದ ಬಿಗ್ ಬಜೆಟ್ ಸಿನಿಮಾಗಳಿಗೆ ನಷ್ಟವಾಗೋ ಭಯ ಕಾಡುತ್ತಿದೆ. ಸ್ಯಾಂಡಲ್‌ವುಡ್‌ನಲ್ಲೀಗ ಬ್ಯಾಕ್ ಟು ಬ್ಯಾಕ್ ದೊಡ್ಡ ಬಜೆಟ್ ಸಿನಿಮಾಗಳು ನಿರ್ಮಾಣ ಆಗುತ್ತಿವೆ. ಇಡೀ ದೇಶವೇ ಸ್ಯಾಂಡಲ್‌ವುಡ್ ಕಡೆ ನೋಡುವಂತಹ, ಹೈ ಬಜೆಟ್, ಹೈ ಕ್ವಾಲಿಟಿ ಸಿನಿಮಾಗಳು ನಿರ್ಮಾಣ ಆಗುತ್ತಿವೆ. ಈ ಪಟ್ಟಿಯಲ್ಲಿ ಕಾಂತಾರ ಚಾಪ್ಟರ್ 1, ಟಾಕ್ಸಿಕ್, ಕೆಡಿ, 45, ದಿ ಡೆವಿಲ್, ಮಾರ್ಕ್.. ಹೀಗೆ ಸಾಲು ಸಾಲು ಸಿನಿಮಾಗಳಿವೆ. ಈ ಚಿತ್ರಗಳಿಗೆ ಕೋಟ್ಯಾಂತರ ರೂಪಾಯಿ ಬಂಡವಾಳ ಹೂಡಲಾಗಿದ್ದು, ಈಗ ಏಕರೂಪದ ಬೆಲೆ ನಿಗದಿಯಿಂದ ನಿರ್ಮಾಪಕರಿಗೆ ನಷ್ಟವಾಗೋ ಭಯ ಕಾಡುತ್ತಿದೆ. ಇದಕ್ಕೆ ನಾನಾ ಕಾರಣಗಳೂ ಇವೆ. ಮೊದಲಿಗೆ ಕನ್ನಡ ಚಿತ್ರಗಳಿಗೆ ಪ್ರೇಕ್ಷಕರ ಕೊರತೆ ಕಾಡುತ್ತಿದೆ. ಮತ್ತೊಂದೆಡೆ ವ್ಯಾವಹಾರಿಕ ಹಿನ್ನೆಲೆಯಲ್ಲಿ ನೋಡೋದಾದ್ರೆ, ಬಂಡವಾಳ ರಿಕವರ್ ಮಾಡೋದೇ ದೊಡ್ಡ ತಲೆ ನೋವಾಗಿದೆ. ಒಂದೆಡೆ ಸ್ಯಾಟಲೈಟ್ ರೈಟ್ಸ್ ಖರೀದಿಸೋದು ಕಮ್ಮಿಯಾಗ್ತಿದ್ರೆ, ಮತ್ತೊಂದೆಡೆ ಓಟಿಟಿ ವೇದಿಕೆಗಳು ಕನ್ನಡ ಸಿನಿಮಾಗಳಂದ್ರೆ, ದೂರ ಹೋಗುತ್ತಿವೆ. ಹೀಗಾಗಿ ಥಿಯೇಟರ್‌ನಿಂದ ಕಲೆಕ್ಟ್ ಹಣವನ್ನೇ, ನಿರ್ಮಾಪಕರು ನಂಬಿದ್ದಾರೆ. ಹೀಗಾಗಿ ಏಕರೂಪದ ಟಿಕೆಟ್ ದರ ನಿಗದಿ ವಿಚಾರವಾಗಿ ಅಪಸ್ವರ ಕೇಳಿ ಬಂದಿದ್ದು, ಒಂದಷ್ಟು ದೊಡ್ಡ ಪ್ರೊಡಕ್ಷನ್ ಹೌಸ್‌ಗಳು ಈ ವಿಚಾರವಾಗಿ ಫಿಲ್ಮ್ ಚೇಂಬರ್ ಮೆಟ್ಟಿಲೇರುವ ಸಾಧ್ಯತೆಯಿದೆ.

**ತೆಲುಗು ಫಾರ್ಮುಲಾ ತರೋ ಪ್ಲಾನ್..!**

ಪರಭಾಷಾ ಸಿನಿಮಾಗಳಿಗೆ ಹೋಲಿಸಿದ್ರೆ, ಕರ್ನಾಟಕದಲ್ಲಿ ಟಿಕೆಟ್ ದರ ಅಧಿಕವಾಗಿತ್ತು. ಅದರಲ್ಲೂ ತಮಿಳುನಾಡು, ಆಂಧ್ರ- ತೆಲಂಗಾಣದ ಟಿಕೆಟ್ ರೇಟ್‌ಗೆ ಹೋಲಿಸೋದಾದ್ರೆ ಕರ್ನಾಟಕದಲ್ಲಿ ಟಿಕೆಟ್ ದರ ಶೇ. 50 ರಿಂದ ಶೇ. 100ರಷ್ಟು ಹೆಚ್ಚಿತ್ತು. ಕೆಲ ಪರಭಾಷಾ ಸಿನಿಮಾಗಳಿಗಂತೂ ಬೇಕಾಬಿಟ್ಟಿ ಟಿಕೆಟ್ ರೇಟ್ ಜಾಸ್ತಿ ಮಾಡಲಾಗ್ತಿತ್ತು. ಆದ್ರೀಗ ಸಿದ್ದರಾಮಯ್ಯ ಸರ್ಕಾರ ಏಕರೂಪದ ಟಿಕೆಟ್ ನಿಗದಿ ಮಾಡಿದೆ. ಈ ಆದೇಶದ ಪ್ರಕಾರ ಮಲ್ಟಿಪ್ಲೆಕ್ಸ್ ಆಗಲಿ, ಸಿಂಗಲ್ ಸ್ಕ್ರೀನ್ ಥಿಯೇಟರ್ಸ್ ಆಗಲಿ, ವೀಕೆಂಡ್ ಅಥವಾ ವಾರದ ಇನ್ಯಾವುದೇ ದಿನವಾಗಲಿ, ಫಸ್ಟ್ ಡೇ ಶೋ ದಿನವಾಗಲಿ, ಪ್ಯಾನ್ ಇಂಡಿಯಾ ಸ್ಟಾರ್ ನಟನ ಸಿನಿಮಾ ಆಗಿರಲಿ.. ಇದ್ಯಾವುದನ್ನೂ ಲೆಕ್ಕಿಸದೇ ಎಲ್ಲಾ ಸಿನಿಮಾಗಳು 200 ರೂಪಾಯಿಗೆ ಮೀರದಂತೆ ಟಿಕೆಟ್ ದರ ನಿಗದಿ ಪಡಿಸಲಾಗಿದೆ.



# ರೆಟ್ರೋ ಲುಕ್‌ನಲ್ಲಿ ಮಿಂಚಿದ ಶಿವಣ್ಣ, ಡಾಲಿ

ಬಹುನಿರೀಕ್ಷಿತ ಸಿನಿಮಾಗಳಲ್ಲೊಂದು 666 ಆಪರೇಷನ್ ಡ್ರೀಮ್ ಥಿಯೇಟರ್ . ಹೇಮಂತ್ ರಾವ್ ಸಾರಥ್ಯದಲ್ಲಿ ಮೂಡಿಬರುತ್ತಿರುವ ಈ ಚಿತ್ರದ ಮೇಲೆ ನಿರೀಕ್ಷೆ ದುಪ್ಪಟ್ಟಿದೆ. ಒಂದು ಹೇಮಂತ್ ಡೈರೆಕ್ಷನ್ ಹಾಗೂ ಶಿವಣ್ಣ-ಧನಂಜಯ್ ಮತ್ತೆ ಒಂದಾಗಿರುವುದು. ಟಗರು ಜೋಡಿಯ ಹೊಸ ಪ್ರಾಜೆಕ್ಟ್ 666 ಆಪರೇಷನ್ ಡ್ರೀಮ್ ಥಿಯೇಟರ್ ಸಿನಿಮಾ ಪೋಸ್ಟರ್ ಮೂಲಕವೇ ಪ್ರೇಕ್ಷಕರ ವಲಯದಲ್ಲಿ ಕುತೂಹಲ ಹೆಚ್ಚಿಸಿದೆ. ರೆಟ್ರೋ ಲುಕ್‌ನಲ್ಲಿ ಶಿವಣ್ಣ ಹಾಗೂ ಧನಂಜಯ್ ಕಾಣಿಸಿಕೊಂಡಿದ್ದು, ಈ ಲುಕ್ ನೋಡುತ್ತಿದ್ದರೆ ಡಾ. ರಾಜಕುಮಾರ್ ಅವರ ಸ್ಪೈ ಸಿನಿಮಾಗಳು ನೆನಪಾಗುತ್ತವೆ. ಸದ್ಯ ಚಿತ್ರತಂಡ ಮೊದಲ ಹಂತದ ಚಿತ್ರೀಕರಣ ಮುಗಿಸಿ, 2ನೇ ಹಂತಕ್ಕೆ ಸಜ್ಜಾಗುತ್ತಿದೆ.

ಫಸ್ಟ್ ಶೆಡ್ಯೂಲ್ಡ್ ಶೂಟಿಂಗ್‌ನಲ್ಲಿ ಶಿವಣ್ಣ ಹಾಗೂ ಧನಂಜಯ್ ಭಾಗಿಯಾಗಿದ್ದರು. ಇದೀಗ ಇದೇ ತಿಂಗಳಲ್ಲಿ ಎರಡನೇ ಹಂತದ ಚಿತ್ರೀಕರಣ ಆರಂಭಿಸಲು ಚಿತ್ರತಂಡ ಸಜ್ಜಾಗಿದೆ. ಅದಕ್ಕಾಗಿ ಬೆಂಗಳೂರಿನ ಕಂಠೀರವ ಸ್ಟುಡಿಯೋದಲ್ಲಿ ಅದ್ದೂರಿ ಸೆಟ್ ಹಾಕಲಾಗಿದೆ. ಕಂಠೀರವ ಸ್ಟುಡಿಯೋದಲ್ಲಿ ಹಾಕಲಾಗಿರುವ ಬೃಹತ್ ಆಕಾರದ ಸೆಟ್ ನಲ್ಲಿ ಬರೋಬ್ಬರಿ 100 ದಿನಗಳ ಕಾಲ ಶೂಟಿಂಗ್ ನಡೆಸಲಾಗುವುದು.

# ಕೋರ್ಟ್ ಆದೇಶಿಸಿದ್ರೂ ಹಾಸಿಗೆ, ದಿಂಬು ಒದಗಿಸಿಲ್ಲ

ಸುಪ್ರೀಂ ಆದೇಶದ ನಂತರ ಮತ್ತೆ ಜೈಲುಪಾಲಾಗಿರುವ ನಟ ದರ್ಶನ್ ಪರದಾಡುವಂತಾಗಿದೆ. ಇತ್ತೀಚಿಗಷ್ಟೇ ಕೋರ್ಟ್ ಹಾಸಿಗೆ, ದಿಂಬು ನೀಡುವಂತೆ ಆದೇಶಿಸಿದ್ದರೂ ಕೂಡ ಜೈಲಧಿಕಾರಿಗಳು ಯಾವುದೇ ಸೌಕರ್ಯ ನೀಡಿಲ್ಲ ಎಂದು ದರ್ಶನ್ ಪರ ವಕೀಲರು 57ನೇ ಸಿಸಿಎಚ್ ಕೋರ್ಟ್‌ನಲ್ಲಿ ಮತ್ತೆ ಅರ್ಜಿ ಸಲ್ಲಿಸಿದ್ದಾರೆ.

ಇತ್ತೀಚಿಗೆ ದರ್ಶನ್ ಪರ ವಕೀಲ ಸುನೀಲ್ ಅವರು, ತುಂಬಾ ಚಳಿಯಿದೆ, ಹೀಗಾಗಿ ಪರಪ್ಪನ ಅಗ್ರಹಾರ ಜೈಲಿನಲ್ಲಿ ದರ್ಶನ್‌ಗೆ ಕಷ್ಟವಾಗುತ್ತಿದೆ. ಹೀಗಾಗಿ ದಿಂಬು, ಹಾಸಿಗೆ ಕೊಡಿಸಬೇಕು ಎಂದು ಮನವಿ ಮಾಡಿ, ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಾದ-ಪ್ರತಿವಾದ ಆಲಿಸಿದ್ದ ನ್ಯಾಯಾಲಯ ದಿಂಬು, ಹಾಸಿಗೆ ಹಾಗೂ ಕನಿಷ್ಠ ಸೌಲಭ್ಯಗಳನ್ನಾದರೂ ನೀಡಬೇಕು ಎಂದು ಆದೇಶಿಸಿತ್ತು. ಆದರೆ ಇದೀಗ ದರ್ಶನ್ ಪರ ವಕೀಲರು, ಕೋರ್ಟ್ ಆದೇಶ ಮಾಡಿದ್ರೂ, ಯಾವುದೇ ಸೌಕರ್ಯ ನೀಡಿಲ್ಲ. ಹಾಸಿಗೆ, ದಿಂಬು ಒದಗಿಸಿಲ್ಲ ಎಂದು ಅರ್ಜಿ ಸಲ್ಲಿಕೆ ಮಾಡಿದ್ದಾರೆ.

ಜೈಲಧಿಕಾರಿಗಳ ವಿರುದ್ಧ ನ್ಯಾಯಾಂಗ ನಿಂದನೆ ಅರ್ಜಿ ಹಾಗೂ ಕೋರ್ಟ್ ಆದೇಶ ಮಾಡಿದ್ರೂ, ಯಾವುದೇ ಸೌಕರ್ಯ ನೀಡಿಲ್ಲ. ಕೋರ್ಟ್ ಆದೇಶದ ಪ್ರತಿಯನ್ನು ಇ-ಮೇಲ್ ಮಾಡಲಾಗಿದೆ. ಆದರೂ ದರ್ಶನ್‌ಗೆ ಅದೇ ನರಕ ಮುಂದುವರಿದಿದೆ. ಎರಡು-ಮೂರು ಬಾರಿ ಜೈಲಿಗೆ ಹೋಗಿ ವಿಚಾರಿಸಿದ್ದೀವಿ. ಆದರೂ ಕೂಡ ಯಾವುದೇ ಸೌಲಭ್ಯ ನೀಡಿಲ್ಲ ಎಂದು ಅರ್ಜಿಯಲ್ಲಿ ಉಲ್ಲೇಖಿಸಿದ್ದಾರೆ. ದರ್ಶನ್ ಜೈಲು ಸೇರಿ ಒಂದು ತಿಂಗಳು ಕಳೆದು ಹೋಗಿದೆ.



# ಪಂದ್ಯ ಮುಗಿದ ಬಳಿಕ ಪತ್ರಿಕಾಗೋಷ್ಠಿಗೆ ಬಂದ ಪಾಕಿಸ್ತಾನ ಕೋಚ್

ಏಷ್ಯಾಕಪ್‌ನಲ್ಲಿ ಭಾರತ ಪಾಕಿಸ್ತಾನವನ್ನು 7-0 ಅಂತರದಿಂದ ಸೋಲಿಸಿತು. ಟೀಮ್ ಇಂಡಿಯಾದ ಈ ಗೆಲುವಿನ ನಂತರ, ಹ್ಯಾಂಡ್‌ಶೇಕ್ ವಿವಾದ ಈಗ ಸುದ್ದಿಯಲ್ಲಿದೆ. ಪಾಕಿಸ್ತಾನ ನಾಯಕ ಏಕೆ ಪೋಸ್ಟ್ ಮ್ಯಾಚ್ ಪ್ರೆಸೆಂಟೇಷನ್ಗೆ ಕೂಡ ಬರಲಿಲ್ಲ. ಇದೀಗ ಪಾಕಿಸ್ತಾನ ತಂಡದ ಕೋಚ್ ಮೈಕ್ ಹೆಸ್ಸನ್ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. 2025 ರ ಏಷ್ಯಾ ಕಪ್‌ನಲ್ಲಿ ಪಾಕಿಸ್ತಾನ ತಂಡ ಭಾರತ ವಿರುದ್ಧ ಸೋತ ನಂತರ, ಇಡೀ ಪಾಕಿಸ್ತಾನದಲ್ಲಿ ಶೋಕ ಮೊಳಗಿದೆ. ಪಂದ್ಯ ಮುಗಿದ ನಂತರ ಟೀಮ್ ಇಂಡಿಯಾ ನಾಯಕ ಸೂರ್ಯಕುಮಾರ್ ಯಾದವ್ ಅವರು ಶಿವಂ ದುಬೆ ಅವರೊಂದಿಗೆ ಡ್ರೆಸ್ಸಿಂಗ್ ರೂಮ್ ಕಡೆಗೆ ಹೋದಾಗ ದುಬೈ ಕ್ರಿಕೆಟ್ ಕ್ರೀಡಾಂಗಣದಿಂದ ಈ ಶೋಕ ಆರಂಭವಾಯಿತು. ಭಾರತೀಯ ತಂಡದ ನಾಯಕ ಪಾಕಿಸ್ತಾನಿಗಳೊಂದಿಗೆ ಹಸ್ತಲಾಘವ ಮಾಡಲಿಲ್ಲ.. ಇದು ಪಂದ್ಯ ಆರಂಭಕ್ಕು ಮುನ್ನ ಹಾಗೂ ಪಂದ್ಯ ಮುಗಿದ ಬಳಿಕ ಕೂಡ. ಈ ಘಟನೆಯ ನಂತರ, ಪಾಕಿಸ್ತಾನಿ ಆಟಗಾರರು ಕೋಪಗೊಂಡಿದ್ದಾರೆ.



ನಾವು ಆಡಿದ ರೀತಿಯಿಂದ ಬೇಸರ

ಇದರ ನಂತರ, ಸಂದರ್ಶನದ ಸಮಯ ಬಂದಾಗ, ಪಾಕಿಸ್ತಾನ ನಾಯಕ ಸಲ್ಮಾನ್ ಅಲಿ ಆಘಾ ಬರಲಿಲ್ಲ. ಪಾಕ್ ನಾಯಕ ಬರದಿದ್ದಕ್ಕೆ ಅನೇಕ ಹೇಳಿಕೆ ವೈರಲ್ ಆಗುತ್ತಿದೆ. ಪಾಕಿಸ್ತಾನ ಆಟಗಾರರ ಜೊತೆ ಭಾರತೀಯರು ಕೈಕುಲುಕದಿದ್ದಕ್ಕೆ ಇದು ಪ್ರತಿಭಟನೆ ಎಂದು ಕೆಲವರು ಹೇಳಿದರೆ ಇನ್ನೂ ಕೆಲವರು ಅವರಿಗೆ ಮುಜುಗರವಾಗಿರಬಹುದು ಎಂದಿದ್ದಾರೆ. ಆದರೆ ತಂಡದ ಮುಖ್ಯ ತರಬೇತುದಾರ ಮೈಕ್ ಹೆಸ್ಸನ್ ಈ ಬಗ್ಗೆ ಸ್ಪಷ್ಟೀಕರಣ ನೀಡಿದರು. ಪಂದ್ಯದ ನಂತರದ ಸುದ್ದಿಗೋಷ್ಠಿಯಲ್ಲಿ ಪಾಕಿಸ್ತಾನದ ಪರವಾಗಿ ಮಾತನಾಡಲು ಮೈಕ್ ಹೆಸ್ಸನ್ ಬಂದಿದ್ದರು.

ಭಾರತ-ಪಾಕ್ ಪಂದ್ಯದಲ್ಲಿ ಪಂದ್ಯ ಮುಗಿದ ನಂತರ, ಪತ್ರಿಕಾಗೋಷ್ಠಿ ಇರುತ್ತದೆ. ಎರಡೂ ತಂಡಗಳ ನಾಯಕರು ಪಂದ್ಯದ ನಂತರದ ಸಂದರ್ಶನಕ್ಕೆ ಹೋಗುತ್ತಾರೆ. ಗೆದ್ದ ಮತ್ತು ಸೋತ ನಾಯಕರು ತಮ್ಮ ಅಭಿಪ್ರಾಯಗಳನ್ನು ಮಂಡಿಸುತ್ತಾರೆ. ಮೈದಾನದಲ್ಲಿ ಎಲ್ಲವೂ ಮುಗಿದ ನಂತರ, ಮಾಧ್ಯಮಗಳಿಗಾಗಿ ಪತ್ರಿಕಾಗೋಷ್ಠಿ ಇರುತ್ತದೆ. ಸಾಮಾನ್ಯವಾಗಿ ನಾಯಕ ಮಾತ್ರ ಇದಕ್ಕೆ ಬರುತ್ತಾರೆ. ಕೆಲವೊಮ್ಮೆ ಪಂದ್ಯದಲ್ಲಿ ಉತ್ತಮ ಪ್ರದರ್ಶನ ನೀಡಿದ ಆಟಗಾರರು ಸಹ ಬರುತ್ತಾರೆ, ಆದರೆ ಏಷ್ಯಾಕಪ್‌ನಲ್ಲಿ ಭಾರತದ ವಿರುದ್ಧದ ಸೋಲಿನ ನಂತರ, ಪಾಕಿಸ್ತಾನದ ನಾಯಕ ಪಂದ್ಯದ ನಂತರದ ಸಂದರ್ಶನಕ್ಕೂ ಬರಲಿಲ್ಲ ಅಥವಾ ಪತ್ರಿಕಾಗೋಷ್ಠಿಗೂ ಬರಲಿಲ್ಲ. ಇಂತಹ ಪರಿಸ್ಥಿತಿಯಲ್ಲಿ, ತಂಡದ ಕೋಚ್ ಮೈಕ್ ಹೆಸ್ಸನ್ ಪತ್ರಿಕಾಗೋಷ್ಠಿಗೆ ಬರಬೇಕಾಯಿತು. ಮೈಕ್ ಹೆಸ್ಸನ್ ಪತ್ರಿಕಾಗೋಷ್ಠಿಯಲ್ಲಿ, 'ಸ್ಪಷ್ಟವಾಗಿ, ನಾವು ಪಂದ್ಯದ ಕೊನೆಯಲ್ಲಿ ಕೈಕುಲುಕಲು ಸಿದ್ಧರಿದ್ದೆವು. ಭಾರತೀಯ ತಂಡ ಹಾಗೆ ಮಾಡದಿದ್ದಕ್ಕೆ ನಮಗೆ ಬೇಸರವಾಯಿತು. ನಾವು ಕೈಕುಲುಕಲು ಅಲ್ಲಿಗೆ ಹೋಗಿದ್ದೆವು, ಆದರೆ ಅವರು ಅದಕ್ಕು ಮೊದಲೇ ಡ್ರೆಸ್ಸಿಂಗ್ ರೂಮ್‌ಗೆ ಹೋಗಿದ್ದರು. ಪಂದ್ಯವನ್ನು ಈ ರೀತಿ ಕೊನೆಗೊಳಿಸಿದ್ದು ನಮಗೆ ನಿರಾಸೆ ಮೂಡಿಸಿದೆ. ನಾವು ಆಡಿದ ರೀತಿಯಿಂದ ಬೇಸರಗೊಂಡಿದ್ದೆವು. ಹೀಗಿದ್ದರೂ ನಾವು ಭಾರತೀಯ ಆಟಗಾರರೊಂದಿಗೆ ಕೈಕುಲುಕಲು ಸಿದ್ಧರಿದ್ದೆವು' ಎಂದು ಹೇಳಿದ್ದಾರೆ. ಗೆಲುವಿನ ಸಿಕ್ಸ್ ಬಾರಿಸಿದ ನಂತರ ಸೂರ್ಯಕುಮಾರ್ ತಮ್ಮ ಸಹ ಆಟಗಾರ ಶಿವಂ ದುಬೆ ಅವರೊಂದಿಗೆ ಕೈಕುಲುಕಿ ನೇರವಾಗಿ ಮೈದಾನದಿಂದ ಹೊರನಡೆದರು. ಈ ಮಧ್ಯೆ, ಪಾಕಿಸ್ತಾನಿ ಆಟಗಾರರು ಕೈಕುಲುಕಲು ಕಾಯುತ್ತಿದ್ದರು. ಟಾಸ್ ಸಮಯದಲ್ಲಿಯೂ ಸಹ, ಸೂರ್ಯಕುಮಾರ್ ಯಾದವ್ ಪಾಕಿಸ್ತಾನ ನಾಯಕ ಸಲ್ಮಾನ್ ಅಲಿ ಅಘಾ ಅವರೊಂದಿಗೆ ಕೈಕುಲುಕಲಿಲ್ಲ. ಸದ್ಯ ಈ ಎಲ್ಲಾ ಘಟನೆ ಕ್ರಿಕೆಟ್ ವಲಯದಲ್ಲಿ ಸಾಕಷ್ಟು ಚರ್ಚೆ ಆಗುತ್ತಿದೆ.

# ಪಾಕ್ ವಿರುದ್ಧ ಆಡಲು ಟೀಂ ಇಂಡಿಯಾಗೆ ಒತ್ತಡ

ಏಷ್ಯಾಕಪ್‌ನಲ್ಲಿ ಪಾಕಿಸ್ತಾನದ ವಿರುದ್ಧದ ಪಂದ್ಯದ ಬಗ್ಗೆ ಮಾಜಿ ಕ್ರಿಕೆಟಿಗ ಸುರೇಶ್ ರೈನಾ ಅವರು ಆಘಾತಕಾರಿ ಹೇಳಿಕೆ ನೀಡಿದ್ದಾರೆ. ಭಾರತೀಯ ಆಟಗಾರರಿಗೆ ಪಾಕಿಸ್ತಾನದ ವಿರುದ್ಧ ಆಡಲು ಇಷ್ಟವಿಲ್ಲ ಎಂದು ಅವರು ಹೇಳಿದ್ದಾರೆ. ಆದಾಗ್ಯೂ, ಇದು ಬಹುರಾಷ್ಟ್ರೀಯ ಪಂದ್ಯಾವಳಿಯಾಗಿರುವುದರಿಂದ ಆಟಗಾರರು ಪಂದ್ಯ ಆಡಬೇಕಾಯಿತು ಎಂದು ರೈನಾ ಹೇಳಿದ್ದಾರೆ. ಭಾರತ ಹಾಗೂ ಪಾಕಿಸ್ತಾನ ನಡುವಿನ ಏಷ್ಯಾಕಪ್ ಪಂದ್ಯ ನಿರೀಕ್ಷಿತ ಪ್ರದರ್ಶನದೊಂದಿಗೆ ಅಂತ್ಯವಾಗಿದೆ. ಆದಾಗ್ಯೂ, ಕುತಂತ್ರಿ ಪಾಕಿಸ್ತಾನ ತಂಡದ ವಿರುದ್ಧ ಪಂದ್ಯವನ್ನಾಡಿದ್ದು, ಕೋಟ್ಯಾಂತರ ಭಾರತೀಯರು ಕೆರಳುವಂತೆ ಮಾಡಿದೆ.

ಹೇರಿತಾ ಬಿಸಿಸಿಐ ಸುರೇಶ್ ರೈನಾ ಸ್ಫೋಟಕ ಹೇಳಿಕೆ

ವಾಸ್ತವವಾಗಿ ಏಷ್ಯಾಕಪ್ ವೇಳಾಪಟ್ಟಿ ಪ್ರಕಟವಾದಗಲೇ ಟೀಂ ಇಂಡಿಯಾ, ಪಾಕಿಸ್ತಾನ ವಿರುದ್ಧದ ಪಂದ್ಯವನ್ನು ಬಹಿಷ್ಕರಿಸಬೇಕು ಎಂದು ಭಾರತೀಯರು ಆಗ್ರಹಿಸಿದ್ದರು. ಆದರೆ ಇದು ಬಹುರಾಷ್ಟ್ರೀಯ ಪಂದ್ಯಾವಳಿಯಾಗಿದ್ದ ಕಾರಣ ಟೀಂ ಇಂಡಿಯಾ ಈ ಪಂದ್ಯವನ್ನು ಆಡಲೇಬೇಕಾಯಿತು. ಇದೀಗ ಟೀಂ ಇಂಡಿಯಾದ ಮಾಜಿ ಆಟಗಾರ ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದು, ಪಾಕಿಸ್ತಾನದ ವಿರುದ್ಧ ಪಂದ್ಯವನ್ನು ಆಡಲು ಟೀಂ ಇಂಡಿಯಾ ಆಟಗಾರರಿಗೆ ಇಷ್ಟವಿಲ್ಲ ಎಂದಿದ್ದಾರೆ. ರೈನಾ ಅವರ ಹೇಳಿಕೆ ನಿಜವಾದರೆ, ಪಾಕಿಸ್ತಾನದ ವಿರುದ್ಧ ಪಂದ್ಯವನ್ನಾಡಲು ಟೀಂ ಇಂಡಿಯಾ ಆಟಗಾರರಿಗೆ ಬಿಸಿಸಿಐ ಒತ್ತಡ ಹೇರಿತೆ ಎಂಬ ಪ್ರಶ್ನೆ ಇಲ್ಲಿ ಉದ್ಭವಿಸಿದೆ.

**ಪಂದ್ಯಾವಳಿಯಿಂದ ಹಿಂದೆ ಸರಿದಿತ್ತು**

ವಾಸ್ತವವಾಗಿ ಏಷ್ಯಾಕಪ್ ಆರಂಭಕ್ಕೂ ಮುನ್ನ ಕೆಲವೇ ದಿನಗಳ ಹಿಂದೆ ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಲೀಗ್ ನಡೆದಿತ್ತು. ಆ ಪಂದ್ಯಾವಳಿಯಲ್ಲಿ ಭಾರತ ತಂಡವನ್ನು ಭಾಗವಹಿಸಿತ್ತು. ಆದರೆ ಪಾಕಿಸ್ತಾನ ವಿರುದ್ಧ ಪಂದ್ಯವನ್ನಾಡಲು ನಿರಾಕರಿಸಿ ಭಾರತ ತಂಡ ಪಂದ್ಯಾವಳಿಯಿಂದ ತನ್ನ ಹೆಸರನ್ನು ಹಿಂಪಡೆದುಕೊಂಡಿತ್ತು. ಆ ಸಂದರ್ಭದಲ್ಲಿ ಭಾರತ ತಂಡದ ನಡೆಗೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗಿತ್ತು. ಅದರಂತೆ ಏಷ್ಯಾಕಪ್‌ನಲ್ಲೂ ಟೀಂ ಇಂಡಿಯಾ, ಪಾಕಿಸ್ತಾನ ವಿರುದ್ಧದ ಪಂದ್ಯವನ್ನು ಬಹಿಷ್ಕರಿಸಬೇಕು ಎಂಬುದು ಭಾರತೀಯರ ಆಗ್ರಹವಾಗಿತ್ತು. ಆದರೆ ಅದು ಸಾಧ್ಯವಾಗಲಿಲ್ಲ.

**ಪಂದ್ಯಾವಳಿ ಖಾಸಗಿ ಸರಣಿ ಆಗಿತ್ತು**

ಇದೀಗ ಈ ಪಂದ್ಯದ ಬಗ್ಗೆ ಅಚ್ಚರಿಯ ಹೇಳಿಕೆ ನೀಡಿರುವ ಟೀಂ ಇಂಡಿಯಾದ ಮಾಜಿ ಆಟಗಾರ ಸುರೇಶ್ ರೈನಾ, ಏಷ್ಯಾಕಪ್‌ನಲ್ಲಿ ಪಾಕಿಸ್ತಾನದ ವಿರುದ್ಧ ಟೀಂ ಇಂಡಿಯ ಆಡಲು ಭಾರತ ಸರ್ಕಾರದಿಂದ ಅನುಮೋದನೆ ದೊರೆತಿದೆ. ಆದಾಗ್ಯೂ, ಪಾಕಿಸ್ತಾನದೊಂದಿಗೆ ಯಾವುದೇ ದ್ವಿಪಕ್ಷೀಯ ಸರಣಿಯನ್ನು ಆಡಲಾಗುವುದಿಲ್ಲ ಎಂದು ಬಿಸಿಸಿಐ ಕೂಡ ಹೇಳಿದೆ. ಆದರೆ ನಾವು ಆಡಿದ ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಪಂದ್ಯಾವಳಿ ಖಾಸಗಿ ಸರಣಿ ಆಗಿತ್ತು. ಆ ಸರಣಿ ಬಿಸಿಸಿಐ ಅಡಿಯಲ್ಲಿ ಬರುವುದಿಲ್ಲ.




# ಪತ್ರಕರ್ತನಿಗೆ ಮುಖಕ್ಕೆ ಹೊಡೆದಂತೆ ತಿರುಗೇಟು

ಅತ್ಯಧಿಕ ಮೊತ್ತಕ್ಕೆ ಹರಾಜು



ಪಾಕಿಸ್ತಾನ ವಿರುದ್ಧದ ಏಷ್ಯಾಕಪ್ ಪಂದ್ಯದ ನಂತರ ಟೀಮ್ ಇಂಡಿಯಾ ಪಾಕಿಸ್ತಾನಿ ಆಟಗಾರರೊಂದಿಗೆ ಕೈಕುಲುಕದಿದ್ದಾಗ, ನೆರೆಯ ದೇಶದಲ್ಲಿ ಇದು ದೊಡ್ಡ ಸುದ್ದಿಯಾಗಿದೆ. ಕ್ರೀಡಾ ಮನೋಭಾವವನ್ನು ಉಲ್ಲೇಖಿಸಿ, ಪಾಕಿಸ್ತಾನಿಗಳು ಸೂರ್ಯಕುಮಾರ್ ಅವರನ್ನು ಪ್ರಶ್ನಿಸಲು ಶುರುಮಾಡಿದ್ದಾರೆ. ಆದರೆ, ಇಂಥವರಿಗೆ ಸೂರ್ಯ ಸರಿಯಾಗಿ ತಿರುಗೇಟು ನೀಡಿದ್ದಾರೆ. ಪಂದ್ಯ ಮುಗಿದ ನಂತರ, ಭಾರತ ತಂಡವು ಯಾವುದೇ ಆಟಗಾರರು ಪಾಕಿಸ್ತಾನಿ ಆಟಗಾರನೊಂದಿಗೆ ಹಸ್ತಲಾಘವ ಮಾಡಲಿಲ್ಲ ಮತ್ತು ಪಾಕಿಸ್ತಾನ ತಂಡ ಇದಕ್ಕಾಗಿ ಕಾಯುತ್ತ ನಿಂತರೂ ಯಾವುದೇ ಟೀಮ್ ಇಂಡಿಯಾ ಪ್ಲೇಯರ್ಸ್ ಬರಲಿಲ್ಲ. ಭಾರತೀಯ ನಾಯಕ ಸೂರ್ಯಕುಮಾರ್ ಯಾದವ್ ವಿನ್ನಿಂಗ್ ಶಾಟ್ ಹೊಡೆದ ತಕ್ಷಣ, ಅವರು ತಮ್ಮ ಸಹ ಆಟಗಾರ ಶಿವಂ ದುಬೆ ಅವರೊಂದಿಗೆ ಮೈದಾನದಿಂದ ಹೊರನಡೆದರು. ಪಾಕಿಸ್ತಾನಿಗಳಿಗೆ ತಕ್ಕ ಉತ್ತರ ನೀಡಿದ ಸೂರ್ಯಕುಮಾರ್ ಯಾದವ್ ಟೀಮ್ ಇಂಡಿಯಾ ಮತ್ತು ಸೂರ್ಯಕುಮಾರ್ ಯಾದವ್ ಅವರ ಈ ನಿರ್ಧಾರದ ನಂತರ, ಒಂದೆಡೆ ಭಾರತೀಯ ಅಭಿಮಾನಿಗಳು ಸಂಪೂರ್ಣವಾಗಿ ಸಂತೋಷಗೊಂಡಿದ್ದಾರೆ. ಅದೇ ಸಮಯದಲ್ಲಿ, ಈ ವಿಷಯದ ಬಗ್ಗೆ ಪಾಕಿಸ್ತಾನದಲ್ಲಿ ದೊಡ್ಡ ಚರ್ಚೆ ನಡೆಯುತ್ತಿದೆ. ನಿನ್ನೆ ರಾತ್ರಿಯಿಂದ, ಪಾಕಿಸ್ತಾನಿ ಮಾಧ್ಯಮವಾಗಲಿ ಅಥವಾ ಮಾಜಿ ಪಾಕಿಸ್ತಾನಿ ಆಟಗಾರರಾಗಲಿ, ಭಾರತೀಯ ತಂಡವು ತಮ್ಮೊಂದಿಗೆ ಕೈಕುಲುಕಲಿಲ್ಲ ಎಂದು ಅವರು ಟೀಕಿಸುತ್ತಿದ್ದಾರೆ. ಸೂರ್ಯಕುಮಾರ್ ಯಾದವ್ ಮತ್ತು ಅವರ ತಂಡವು ಕ್ರೀಡಾ ಮನೋಭಾವವನ್ನು ಅವಮಾನಿಸಿದೆ ಎಂದು ಸಹ ಪಾಕಿಸ್ತಾನಿಗಳು ಉಲ್ಲೇಖಿಸುತ್ತಿದ್ದಾರೆ, ಆದರೆ ಸೂರ್ಯ ಅಂತಹ ಜನರಿಗೆ ಖಡಕ್ ಆಗಿ ಉತ್ತರ ನೀಡಿದ್ದಾರೆ. ಈ ಉತ್ತರ ಪಾಕಿಸ್ತಾನಿಗಳನ್ನು ಮೌನಗೊಳಿಸಿದೆ. ಪಂದ್ಯ ಮುಗಿದ ನಂತರ, ಪಾಕಿಸ್ತಾನ ನಾಯಕ ಸಲ್ಮಾನ್ ಅಲಿ ಆಘಾ ಬೇಸರದಲ್ಲಿ ಪೋಸ್ಟ್ ಮ್ಯಾಚ್ ಪ್ರೆಸೆಂಟೇಷನ್‌ಗೂ ಬಂದಿರಲಿಲ್ಲ. ಆದರೆ, ಟೀಮ್ ಇಂಡಿಯಾ ನಾಯಕ ಸೂರ್ಯಕುಮಾರ್ ಯಾದವ್ ಪಂದ್ಯದ ನಂತರವೂ ಪಾಕಿಸ್ತಾನಿಗಳಿಗೆ ಬುದ್ಧಿ ಕಲಿಸಲು ಹಿಂಜರಿಯಲಿಲ್ಲ.

ಯಾಕೆ ಕೈಕುಲುಕಲಿಲ್ಲ ಎಂದು ಪ್ರಶ್ನೆ

ಪಂದ್ಯದ ನಂತರ ಸೂರ್ಯ ಪತ್ರಿಕಾಗೋಷ್ಠಿಗೆ ಬಂದಾಗ, ಪತ್ರಕರ್ತರೊಬ್ಬರು ಅವರನ್ನು ಟೀಮ್ ಇಂಡಿಯಾ ಜೊತೆ ಕೈಕುಲುಕದಿರುವ ನಿರ್ಧಾರ ಅವರದ್ದೇ ಅಥವಾ ಬೇರೆಯವರದ್ದೇ ಎಂದು ಕೇಳಿದರು.

**ಕ್ರೀಡಾ ಮನೋಭಾವವನ್ನು ಮೀರಿ ಹಲವು ವಿಷಯಗಳಿವೆ:** ಸೂರ್ಯ ಈ ಪ್ರಶ್ನೆಗೆ ಉತ್ತರಿಸಿದ ಸೂರ್ಯ, ಜೀವನದಲ್ಲಿ ಕ್ರೀಡಾ ಮನೋಭಾವಕ್ಕಿಂತ ಕೆಲವು ವಿಷಯಗಳು ದೊಡ್ಡವು ಎಂದು ಹೇಳಿದರು. ''ನಾವು ಇಲ್ಲಿಗೆ ಕ್ರಿಕೆಟ್ ಆಡಲು ಮಾತ್ರ ಬಂದಿದ್ದೇವೆ ಮತ್ತು ಅದನ್ನೇ ನಾವು ಮಾಡಿದ್ದೇವೆ. ಪೆಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮರಣ ಹೊಂದಿದವರಿಗೆ ಮಾತ್ರ ಈ ಗೆಲುವು ಸಮರ್ಪಿತವಾಗಿದೆ ಎಂದು ಪಂದ್ಯದ ನಂತರದ ಪ್ರಸ್ತುತಿಯಲ್ಲಿ ತಾನು ಈಗಾಗಲೇ ಹೇಳಿದ್ದೇನೆ ಮತ್ತು ಭಾರತೀಯ ಸಶಸ್ತ್ರ ಪಡೆಗಳು ನಮ್ಮನ್ನು ಖುಷಿಯಾಗಿರುವಂತೆ ನೋಡಿಕೊಳ್ಳುತ್ತದೆ. ಕ್ರಿಕೆಟ್ ಮೈದಾನದಲ್ಲಿ ಉತ್ತಮ ಪ್ರದರ್ಶನ ನೀಡಲು ನಮಗೆ ಅವಕಾಶ ಸಿಕ್ಕಾಗಲೆಲ್ಲಾ ನಾವು ನಮ್ಮ ದೇಶಕ್ಕೆ ಸಂತೋಷವನ್ನು ನೀಡುತ್ತಲೇ ಇರಬೇಕು'' ಎಂದು ಸೂರ್ಯ ಹೇಳಿದರು.

# ಟೀಮ್ ಇಂಡಿಯಾ ವಿರುದ್ಧ ದೂರು ನೀಡಿದ ಪಾಕಿಸ್ತಾನ

ಸೂರ್ಯಕುಮಾರ್ ಯಾದವ್ ನೇತೃತ್ವದ ಭಾರತ ತಂಡ ಪಂದ್ಯದ ನಂತರ ಹಸ್ತಲಾಘವ ಮಾಡಲು ನಿರಾಕರಿಸಿದಕ್ಕಾಗಿ ಪಾಕಿಸ್ತಾನ ಅಧಿಕೃತ ದೂರು ದಾಖಲಿಸಿತು. ಪಿಸಿಬಿ ಇದು ಕ್ರೀಡಾ ಮನೋಭಾವಕ್ಕೆ ವಿರುದ್ಧವಾಗಿದೆ ಎಂದು ಹೇಳಿದೆ. ಟಾಸ್ ಸಮಯದಲ್ಲಿ ಮತ್ತು ಪಂದ್ಯ ಗೆದ್ದ ನಂತರವೂ ಭಾರತ ತಂಡವು ಪಾಕಿಸ್ತಾನ ತಂಡದೊಂದಿಗೆ ಕೈಕುಲುಕಲಿಲ್ಲ. ದುಬೈ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಏಷ್ಯಾ ಕಪ್ 2025 ರ ಗ್ರೂಪ್ ಎ ಪಂದ್ಯದಲ್ಲಿ ಏಳು ವಿಕೆಟ್‌ಗಳ ಅಮೋಘ ಜಯಗಳಿಸಿದ ನಂತರ ಟೀಮ್ ಇಂಡಿಯಾ ಎದುರಾಳಿ ಪಾಕಿಸ್ತಾನ ತಂಡದೊಂದಿಗೆ ಕೈಕುಲುಕಲು ನಿರಾಕರಿಸಿಯಿ. ಇದಾದ ನಂತರ ಪಾಕಿಸ್ತಾನ ತಂಡದ ವ್ಯವಸ್ಥಾಪಕ ನವೀದ್ ಅಕ್ರಮ್ ಚೀಮಾ ಅವರು ಮ್ಯಾಚ್ ರೆಫರಿ ಆಂಡಿ ಪೈಕ್ರಾಫ್ಟ್‌ಗೆ ಈ ಕುರಿತು ದೂರು ಸಲ್ಲಿಸಿದ್ದಾರೆ ಎಂದು ವರದಿ ಆಗಿದೆ. ವಾಸ್ತವವಾಗಿ, ಟಾಸ್ ಸಮಯದಲ್ಲಿ ಮತ್ತು ಪಂದ್ಯ ಗೆದ್ದ ನಂತರವೂ ಭಾರತ ತಂಡವು ಪಾಕಿಸ್ತಾನ ತಂಡದೊಂದಿಗೆ ಕೈಕುಲುಕಲಿಲ್ಲ. ಇದು ಸಲ್ಮಾನ್ ಅಲಿ ಅಘಾ ಅವರಿಗೆ ನೋವುಂಟು ಮಾಡಿತು. ಪೆಹಲ್ಗಾಮ್ ದಾಳಿಯನ್ನು ಪ್ರತಿಭಟಿಸಿ ಭಾರತ ತಂಡ ಈ ನಿರ್ಧಾರವನ್ನು ತೆಗೆದುಕೊಂಡಿತ್ತು. ಭಾರತೀಯ ಆಟಗಾರರು ಕೈಕುಲುಕದೇ ವರ್ತಿಸಿದ್ದಕ್ಕೆ ತಂಡದ ವ್ಯವಸ್ಥಾಪಕ ನವೀದ್ ಚೀಮಾ ತೀವ್ರ ವಿರೋಧ ವ್ಯಕ್ತಪಡಿಸಿದರು. ಇದನ್ನು ಅನುಚಿತ ಮತ್ತು ಆಟದ ಉತ್ಸಾಹಕ್ಕೆ ವಿರುದ್ಧವೆಂದು ಪರಿಗಣಿಸಲಾಗಿದೆ. ಇದನ್ನು ವಿರೋಧಿಸಿ, ನಾವು ನಮ್ಮ ನಾಯಕನನ್ನು ಪಂದ್ಯದ ನಂತರದ ಬಹುಮಾನ ವಿತರಣಾ ಸಮಾರಂಭಕ್ಕೆ ಕಳುಹಿಸಲಿಲ್ಲ ಎಂದಿದ್ದಾರೆ. ಟಾಸ್ ಸಮಯದಲ್ಲಿ ಸೂರ್ಯಕುಮಾರ್ ಯಾದವ್ ಅವರೊಂದಿಗೆ ಕೈಕುಲುಕದಂತೆ ಮ್ಯಾಚ್ ರೆಫರಿ ಪೈಕ್ರಾಫ್ಟ್ ಸಲ್ಮಾನ್ ಆಘಾ ಅವರಿಗೆ ತಿಳಿಸಿರುವುದಾಗಿ ದೃಢಪಡಿಸಿದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966